ಸಂಪುಟ: 05 ಸಂಚಿಕೆ: 309 ಪುಟಗಳು: 08 ಗುರುವಾರ 22 ಜನವರಿ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ರಕ್ತವಿಲ್ಲದೆ ದೇಹವು ಹೇಗೆ ಬದುಕಲು ಸಾಧ್ಯವಿಲ್ಲವೋ ಹಾಗೆಯೇ ಶ್ರದ್ಧೆ ಮತ್ತು ಪ್ರಾರ್ಥನೆಗಳಿಲ್ಲದೆ ಆತ್ಮವೂ ಕೂಡ ಬದುಕಲು ಸಾಧ್ಯವಿಲ್ಲ

## ಕೇಂದ್ರ ಸರ್ಕಾರದ ಕಾನೂನುಗಳು ನವೆಂಬರ್ 1ರ ಒಳಗೆ ಕನ್ನಡಕ್ಕೆ

• ಉದಯವಾಹಿನಿ,ಬೆಂಗಳೂರು

ಕೇಂದ್ರ ಸರ್ಕಾರದ ಎಲ್ಲಾ ಕಾನೂನುಗಳನ್ನು ನ. 1ರ ಒಳಗೆ ಕನ್ನಡಕ್ಕೆ ಸಂಪೂರ್ಣವಾಗಿ ಭಾಷಾಂತರಿಸಬೇಕು ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ ಅವರು ಅಧಿಕಾರಿಗಳಿಗೆ ಸೂಚಿಸಿದರು. ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಇಲಾಖೆ ಹಾಗೂ ಕರ್ನಾಟಕ ರಾಜಭಾಷಾ ಆಯೋಗ, ಭಾಷಾಂತರ ನಿರ್ದೇಶನಾಲಯ ಸಹಯೋಗದಲ್ಲಿ ವಿಕಾಸಸೌಧದಲ್ಲಿ ಭಾರತೀಯ ನ್ಯಾಯ ಸಂಹಿತೆ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ ಮತ್ತು ಭಾರತೀಯ ಸಾಕ್ಷ್ಯ ಕಾಯ್ದೆಯ ದ್ವಿಭಾಷಾ ಆವೃತ್ತಿಗಳನ್ನು ಬುಧವಾರ ಬಿಡುಗಡೆ ಮಾಡಿ ಅವರು ಮಾತನಾಡಿದರು. ಕೇಂದ್ರದ ಕಾನೂನುಗಳ ಪೈಕಿ ಶೇ 50ರಷ್ಟು ಮಾತ್ರ ಈವರೆಗೆ ಕನ್ನಡಕ್ಕೆ ಭಾಷಾಂತರ ಆಗಿದೆ.

ಇದು ಆರೋಗ್ಯಕರ ಬೆಳವಣಿಗೆಯಲ್ಲ. ಕಾನೂನು ರೂಪಿಸಿದ ನಂತರ ಅದನ್ನು ಜನಸಾಮಾನ್ಯರಿಗೆ ತಲುಪಿಸುವ ಬದಲು, ಅವರಿಗೆ ಗೊತ್ತು ಎಂದು ತಿಳಿದುಕೊಂಡು ಆಡಳಿತ ನಡೆಸುವ ಪರಿಸ್ಥಿತಿ ಬಂದಿದೆ ಹೊರಗುತ್ತಿಗೆ ಆಧಾರದಲ್ಲಿ ಭಾಷಾಂತರ ಪಂಡಿತರನ್ನು ಬಳಸಿಕೊಂಡು ಕೇಂದ್ರದ ಎಲ್ಲ ಕಾನೂನುಗಳನ್ನು ಕನ್ನಡಕ್ಕೆ ಅನುವಾದಿಸಬೇಕು ಎಂದು ಅಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

## ಉದ್ಯಮಿಗಳ ಜತೆ ಡಿಕೆಶಿ, ಎಂಬಿಪಿ ಮಾತುಕತೆ

• ಉದಯವಾಹಿನಿ,ಬೆಂಗಳೂರು

'ರಾಜ್ಯದ ಎರಡನೇ ಸ್ತರದ ನಗರಗಳಲ್ಲಿ ಸಿಫಿ ಟೆಕ್ನಾಲಜೀಸ್ ಮತ್ತು ಭಾರ್ತಿ ಎಂಟರ್‌ಪ್ರೈಸಸ್ ಡೇಟಾ ಕೇಂದ್ರಗಳನ್ನು ತೆರೆಯಲು ಆಸಕ್ತಿ ವ್ಯಕ್ತಪಡಿಸಿವೆ. ಪಾನೀಯ ತಯಾರಿಕೆ ವಲಯದಲ್ಲಿ ಕಾರ್ಲ್ಸ್‌ಬರ್ಗ್ ಗ್ರೂಪ್ 350 ಕೋಟಿ ಹೂಡಿಕೆಯೊಂದಿಗೆ ಬಾಟಲಿಂಗ್ ಘಟಕ ಸ್ಥಾಪಿಸುವ ಬದ್ಧತೆಯನ್ನು ಪುನರುಚ್ಚರಿಸಿದೆ' ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ ತಿಳಿಸಿದ್ದಾರೆ.

ಸ್ವಿಟ್ಜರ್ಲೆಂಡ್‌ನ ದಾವೋಸ್‌ನಲ್ಲಿ ನಡೆಯುತ್ತಿರುವ ವಿಶ್ವ ಆರ್ಥಿಕ ವೇದಿಕೆಯ (ಡಬ್ಲ್ಯುಇಎಫ್) ಸಮಾವೇಶದ ಮೂರನೆಯ ದಿನವಾದ ಬುಧವಾರ ಹಲವು ಕಂಪನಿಗಳ ಉನ್ನತ ಮಟ್ಟದ ಪ್ರತಿನಿಧಿಗಳ ಜೊತೆ ಬಂಡವಾಳ ಹೂಡಿಕೆ ಕುರಿತು ಅವರು ಮಾತುಕತೆ ನಡೆಸಿದರು. ಭಾರ್ತಿ ಎಂಟರ್‌ಪ್ರೈಸಸ್ ಉಪಾಧ್ಯಕ್ಷ ರಾಜನ್ ಭಾರ್ತಿ ಮಿತ್ತಲ್ ಜತೆ ನಡೆದ ಮಾತುಕತೆಯ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕೂಡ ಇದ್ದರು.

## ಕೇಂದ್ರ ಯೋಜನೆ ವಿರುದ್ಧ ಅಧಿವೇಶನ ವ್ಯರ್ಥ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ವಿಶೇಷ ಅಧಿವೇಶನ ಕರೆದು ಕೇಂದ್ರ ಸರ್ಕಾರ ಯೋಜನೆಗೆ ಅಡ್ಡಗಾಲು ಹಾಕಲು ಪ್ರಯತ್ನ ಮಾಡುತ್ತಿದೆ. ಯೋಜನೆ ವಿರುದ್ಧದ ನಿರ್ಣಯದಿಂದ ಯಾವುದೇ ಪ್ರಯೋಜನವಿಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಹೇಳಿದರು. ವಿಶೇಷ ಅಧಿವೇಶನದಲ್ಲಿ ವಿಬಿ-ಜಿ ರಾಮ್ ಜಿ ಯೋಜನೆಯ ವಿರುದ್ಧ ನಿರ್ಣಯ ಕೈಗೊಂಡು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗುತ್ತದೆ. ಸರ್ಕಾರದ ಇಂತಹ ಧೋರಣೆಯಿಂದ ರಾಜ್ಯಕ್ಕೆ ಏನು ಪ್ರಯೋಜನ ಸರ್ಕಾರಕ್ಕೆ ಅಧಿವೇಶನ ನಡೆಸುವ ಅಗತ್ಯ ಇರಲಿಲ್ಲ. ಸಚಿವರು, ಪ್ರಧಾನಮಂತ್ರಿ ಅವರನ್ನು ನೇರವಾಗಿ ಭೇಟಿ ಮಾಡಬಹುದಿತ್ತು. ಅಧಿವೇಶನದ ನಿರ್ಣಯಗಳಿಂದ ಆಡಳಿತಾತ್ಮಕ ಪ್ರಯೋಜನ ಆಗುವುದಿಲ್ಲ. ಇಂತಹ ವಿಷಯಗಳಲ್ಲಿ ರಾಜಕೀಯ ಮಾಡಬಾರದು ಎಂದರು.

## 60 ತುಂಬಿದ ಪತ್ರಕರ್ತರ ಚಿಕಿತ್ಸಾ ವೆಚ್ಚದಲ್ಲಿ ಶೇ 75 ರಿಯಾಯಿತಿ

• ಉದಯವಾಹಿನಿ, ಬೆಂಗಳೂರು

'60 ವರ್ಷ ಮೇಲ್ಪಟ್ಟ ಎಲ್ಲಾ ಪತ್ರಕರ್ತರಿಗೆ ವೈದ್ಯಕೀಯ ಶಿಕ್ಷಣ ಇಲಾಖೆಯಡಿಯ ಆಸ್ಪತ್ರೆಗಳಲ್ಲಿ ವೈದ್ಯಕೀಯ ಚಿಕಿತ್ಸಾ ವೆಚ್ಚದಲ್ಲಿ ಶೇಕಡ 75ರಷ್ಟು ರಿಯಾಯಿತಿ ನೀಡಲಾಗುವುದು' ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಆರ್. ಪಾಟೀಲ ಹೇಳಿದರು. ವೈದ್ಯಕೀಯ ಶಿಕ್ಷಣ ಇಲಾಖೆ, ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಹಿರಿಯ ಪತ್ರಕರ್ತರ ವೇದಿಕೆ ಸಂಯುಕ್ತಾಶ್ರಯದಲ್ಲಿ ಬುಧವಾರ ನಡೆದ ಕಾರ್ಯಕ್ರಮದಲ್ಲಿ ವೇದಿಕೆಯ ಸದಸ್ಯರಿಗೆ ಗುರುತಿನ ಚೀಟಿ ವಿತರಿಸಿ ಅವರು ಮಾತನಾಡಿದರು. 'ಸಮಾಜವನ್ನು ತಿದ್ದಿ ತೀಡುವ ಪತ್ರಕರ್ತರಾಗಿ ಸೇವೆ ಸಲ್ಲಿಸಿರುವರಿಗೆ ವಿಶೇಷ ಸೌಲಭ್ಯ ಒದಗಿಸಲು ನಮ್ಮ ಇಲಾಖೆ ಮುಂದಾಗಿದೆ. ಮುಖ್ಯಮಂತ್ರಿಯವರ ಜೊತೆ ಸಮಾಲೋಚಿಸಿ ಮುಂದಿನ ದಿನಗಳಲ್ಲಿ ಶೇ 25ರಷ್ಟು ಹಣಕ್ಕೂ ರಿಯಾಯಿತಿ ನೀಡುವ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು' ಎಂದು ಭರವಸೆ ನೀಡಿದರು. 'ನಿವೃತ್ತರಾದವರಿಗೆ ಗೌರವಯುತ ಜೀವನ ನಡೆಸಲು ಅನುವು ಮಾಡಿಕೊಡುವುದಕ್ಕೆ ನಾವು ಬದ್ಧರಾಗಿದ್ದೇವೆ. ಸಮಾಜಕ್ಕೆ ಕೊಡುಗೆ ನೀಡಿ ವೃತ್ತಿಯಿಂದ ನಿವೃತ್ತರಾಗಿರುವ ಪತ್ರಕರ್ತರಿಗೆ ಪಿಂಚಣಿ ಸೌಲಭ್ಯ ನೀಡುತ್ತಿದ್ದು, ಅದರ ನಿಯಮಗಳನ್ನು ಸರಳಗೊಳಿಸಲು ಕ್ರಮ ಕೈಗೊಳ್ಳಲಾಗುವುದು' ಎಂದರು.




**ನರೇಗಾ ಬಗ್ಗೆ ವಿಶೇಷ ಚರ್ಚೆ**


# ನರೇಗಾ ರಣರಂಗ

## ಜಂಟಿ ವಿಶೇಷ ಅಧಿವೇಶನ ಆರಂಭ



### ಜಂಟಿ ಅಧಿವೇಶನದಲ್ಲಿ ಕೇಂದ್ರಕ್ಕೆ ಠಕ್ಕರ್ ಕೊಡಲು ಕಾಂಗ್ರೇಸ್ ಪ್ಲ್ಯಾನ್, ಸರ್ಕಾರದ ವೈಫಲ್ಯಗಳೇ ಬಿಜೆಪಿಗೆ ಅಸ್ತ್ರ





**ಜ.31ರವರೆಗೆ ಜಂಟಿ ವಿಶೇಷ ಅಧಿವೇಶನ ನಡೆಯಲಿದೆ. ಉಭಯ ಸದನಗಳನ್ನ ಉದ್ದೇಶಿಸಿ ರಾಜ್ಯಪಾಲ ಥಾವರ್ ಚಂದ್ರ ಗೆಹ್ಲೋಟ್ ಭಾಷಣ ಮಾಡಲಿದ್ದಾರೆ. ಅಧಿವೇಶನಕ್ಕೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ವಿಧಾನಪರಿಷತ್‌ನ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.**

1 ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ರಾಜ್ಯಪಾಲರ ನಿರಾಕರಣೆ

2 ಮನರೇಗಾ ಕಾಯಿದೆ ಬದಲಾವಣೆ ವಿರೋಧಿಸಿ ಖಂಡನಾ ನಿರ್ಣಯ ಕೈಗೊಳ್ಳಲು ಅಧಿವೇಶನ

3 ರಾಜ್ಯಪಾಲರ ಮನವೊಲಿಕೆಗೆ ಲೋಕಭವನಕ್ಕೆ ಹೊರಟ ಸಚಿವರು, ಸ್ಪೀಕರ್

**ಜಿ ರಾಮ್ ಜಿಗೆ ಟಕ್ಕರ್**

ಜಂಟಿ ಅಧಿವೇಶನದಲ್ಲಿ ಜಿ ರಾಮ್ ಜಿಗೆ ಠಕ್ಕರ್ ನೀಡುವುದು ಸರ್ಕಾರದ ಉದ್ದೇಶ. ರಾಜ್ಯಪಾಲರ ಭಾಷಣದಲ್ಲಿ ನರೇಗಾ ಮತ್ತು ಜಿ ರಾಮ್ ಜಿ ತುಲನೆ ಮಾಡಿ ವಿಪಕ್ಷ ಮತ್ತು ಕೇಂದ್ರ ಸರ್ಕಾರಕ್ಕೆ ತಿರುಗೇಟು ನೀಡುವುದು ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದೆ. ವಿಶೇಷ ಅಧಿವೇಶನದ ಮಾದರಿಯಲ್ಲಿ ಜಂಟಿ ಅಧಿವೇಶನವನ್ನು ಬಳಸಿಕೊಳ್ಳುವುದು ಸರ್ಕಾರದ ಯೋಜನೆಯಾಗಿದೆ. ಈ ನಿಟ್ಟಿನಲ್ಲಿ ಆಡಳಿತ ಮತ್ತು ವಿಪಕ್ಷಗಳ ನಡುವೆ ನರೇಗಾ, ಜಿ ರಾಮ್ ಜಿ ದೊಡ್ಡ ಮಟ್ಟದ ಚರ್ಚೆಗೆ ಆಸ್ಪದ ಕೊಡಬಹುದು.

• ಉದಯವಾಹಿನಿ,ಬೆಂಗಳೂರು

ವಾಡಿಕೆಯಂತೆ ವರ್ಷದ ಮೊದಲ ಅಧಿವೇಶನ ರಾಜ್ಯಪಾಲರ ಭಾಷಣದ ಮೂಲಕ ಆರಂಭವಾಗಲಿದೆ. ನಾಳೆ ಬೆಳಗ್ಗೆ 11 ಗಂಟೆಗೆ ವಿಧಾನಸಭೆಯಲ್ಲಿ ಉಭಯ ಕಲಾಪಗಳನ್ನ ಉದ್ದೇಶಿಸಿ ರಾಜ್ಯಪಾಲರು ಭಾಷಣ ಮಾಡಲಿದ್ದಾರೆ. ಈ ಭಾಷಣ ಮೇರೆಗೆ ಅಧಿವೇಶನದಲ್ಲಿ ಚರ್ಚೆ ನಡೆಸಲಾಗುತ್ತದೆ. ಇದೇ ವೇಳೆ, ಪ್ರಶ್ನೋತ್ತರ ಕಲಾಪ, ಗಮನ ಸೆಳೆಯುವ ಸೂಚನೆ, ವಿಶೇಷ ಚರ್ಚೆ ಸೇರಿದಂತೆ ಎಲ್ಲಾ ರೀತಿಯ ಚರ್ಚೆಗಳು ಕಲಾಪದಲ್ಲಿ ನಡೆಯಲಿದೆ ಎಂದರು. ಬೆಳಗಾವಿಯಲ್ಲಿ ನಡೆದ ಚಳಿಗಾಲ ಅಧಿವೇಶನದ ಕೊನೆಯ ದಿನ ರಾತ್ರಿ 11.30ರವರೆಗೆ ಕಲಾಪ ನಡೆಸಿದ್ದೆ. ಈ ಬಾರಿಯೂ ಅಜೆಂಡಾ ಮುಗಿಯುವ ತನಕ ಕಲಾಪವನ್ನ ಮುಂದೂಡಿಕೆ ಮಾಡುವುದಿಲ್ಲ. ಸರ್ಕಾರ ಸಿದ್ಧಪಡಿಸಿದ ಅಂಶಗಳನ್ನ ರಾಜ್ಯಪಾಲರು ಮಂಡಿಸಬೇಕು. ಇದಾದ ಬಳಿಕ ಚರ್ಚೆ ನಡೆಸಲಾಗುವುದು. ಅಲ್ಲದೆ ಇನ್ನಿತರ ವಿಚಾರಗಳ ಬಗ್ಗೆ ಚರ್ಚೆ ನಡೆಯಲಿದೆ ಎಂದರು.

ಕೇರಳ ಹಾಗೂ ತಮಿಳುನಾಡಿನಲ್ಲಿ ರಾಜ್ಯಪಾಲರು ಹಾಗೂ ಸರ್ಕಾರಗಳ ನಡುವೆ ಘರ್ಷಣೆ ರೀತಿ ರಾಜ್ಯದಲ್ಲೂ ಅದೇ ರೀತಿ ಆಗುತ್ತಾ ಎಂಬ ಪ್ರಶ್ನೆಗೆ ಉತ್ತರಿಸಿದ ಹೊರಟ್ಟಿ, ನಮ್ಮ ರಾಜ್ಯಪಾಲರು ಆ ರೀತಿ ಮಾಡುವುದಿಲ್ಲ ಎಂಬ ವಿಶ್ವಾಸವಿದೆ. ಸರ್ಕಾರ ಏನು ಬರೆದುಕೊಡುತ್ತದೆಯೋ ಅದನ್ನೇ ಓದಬೇಕು. ಸಂವಿಧಾನದ ವಿರುದ್ಧ ಇದ್ದರೂ ಓದುವುದು ಅನಿವಾರ್ಯ ಎಂದರು

ರಾಜ್ಯಪಾಲರಿಗೆ ಸರ್ಕಾರವು ಸಹ ಸಂವಿಧಾನಾತ್ಮಕವಾಗಿರುವ ವಿಚಾರಗಳನ್ನು ಭಾಷಣದ ಅಂಶದಲ್ಲಿರುವಂತೆ ನೋಡಿಕೊಳ್ಳಬೇಕಿದೆ. ಇದು ಸರ್ಕಾರದ ಜವಾಬ್ದಾರಿ ಕೂಡಾ ಆಗಿದೆ ಎಂದರು.

**ಅಧಿವೇಶನದ ಬಗ್ಗೆ ಸಿಎಂ ಹೇಳಿದ್ದಿಷ್ಟು:** ಜ.22 ರಿಂದ ಜನವರಿ 31ರ ವರೆಗೆ ಜಂಟಿ ಅಧಿವೇಶನ ನಡೆಯಲಿದ್ದು, ಅಧಿವೇಶನದ ವೇಳೆ ನರೇಗಾ ಯೋಜನೆ ಬಗ್ಗೆ ವಿಶೇಷ ಚರ್ಚೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಂಗಳವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜಂಟಿ ಅಧಿವೇಶನ ನಡೆಯಲಿದ್ದು, ರಾಜ್ಯಪಾಲರ ಭಾಷಣ ಮತ್ತು ನರೇಗಾ ಯೋಜನೆ ಬದಲಾವಣೆಯ ಬಗ್ಗೆ ವಿಶೇಷ ಚರ್ಚೆ ನಡೆಯಲಿದೆ. ಅಧಿವೇಶನದ ನಂತರ ಆಯವ್ಯಯದ ಸಿದ್ಧತೆ ಪ್ರಾರಂಭ ಮಾಡಲಾಗುವುದು ಎಂದು ತಿಳಿಸಿದರು.

ಜಂಟಿ ಅಧಿವೇಶನದ ಕುರಿತು ಇತ್ತೀಚೆಗೆ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ್ದ ಕಾನೂನು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ''ಜ.22 ರಿಂದ 31ರ ವರೆಗೆ ನಡೆಯಲಿರುವ ಜಂಟಿ ಅಧಿವೇಶನವನ್ನ ಉದ್ದೇಶಿಸಿ ಮಾತನಾಡಲು ರಾಜ್ಯಪಾಲರಿಗೆ ಆಹ್ವಾನಿಸಲು ತೀರ್ಮಾನಿಸಲಾಗಿದೆ. ರಾಜ್ಯಪಾಲರು ಮಾಡಲಿರುವ ಭಾಷಣವನ್ನು ಅನುಮೋದಿಸಲು ಸಚಿವ ಸಂಪುಟವು ಮುಖ್ಯಮಂತ್ರಿಗಳಿಗೆ ಅಧಿಕಾರ ನೀಡಿದೆ ಎಂದಿದ್ದರು.



**ಸರ್ಕಾರದ ವೈಫಲ್ಯಗಳೇ ಅಸ್ತ್ರ**

ಕೇಂದ್ರದ ವಿರುದ್ಧ ಜಿ ರಾಮ್ ಜಿ ಅಸ್ತ್ರಕ್ಕೆ ಪ್ರತ್ಯುತ್ತರವಾಗಿ ಸರ್ಕಾರದ ವೈಫಲ್ಯಗಳನ್ನು ಸದನದ ಮುಂದಿಡಲು ಬಿಜೆಪಿ ಮತ್ತು ಜೆಡಿಎಸ್ ಮುಂದಾಗಿದೆ.ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ, ಪೊಲೀಸ್ ಇಲಾಖೆಯ ವಿರುದ್ಧದ ಆರೋಪಗಳು, ನಾಯಕತ್ವ ಬದಲಾವಣೆ , ಕಾಂಗ್ರೆಸ್ ಭಿನ್ನಮತ, ಬೆಂಗಳೂರಿನಲ್ಲಿ ಟ್ರಾಫಿಕ್ ಸಮಸ್ಯೆ, ರಸ್ತೆ ಗುಂಡಿಗಳ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಹೋರಾಟ ರೂಪಿಸಲು ಬಿಜೆಪಿ ಮತ್ತು ಜೆಡಿಎಸ್ ಮುಂದಾಗಿದೆ.

**ಕೋಗಿಲು ಅಸ್ತ್ರ**

ಕೋಗಿಲು ವಿಚಾರವಾಗಿ ಸರ್ಕಾರದ ವಿರುದ್ಧ ಬ್ರಹ್ಮಾಸ್ತ್ರವನ್ನು ಪ್ರಯೋಗ ಮಾಡಲು ಬಿಜೆಪಿ ಸಿದ್ಧತೆ ನಡೆಸುತ್ತಿದೆ. ಕೋಗಿಲು ಬಡಾವಣೆಯಲ್ಲಿ ಬಾಂಗ್ಲಾ ವಲಸಿಗರು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಬೆಂಗಳೂರು ನಗರದಲ್ಲೇ ಬಾಂಗ್ಲಾ ವಲಸಿಗರು ಸೇರಿಕೊಂಡಿದ್ದಾರೆ ಎಂಬ ಆರೋಪಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಲು ಬಿಜೆಪಿ ಮುಂದಾಗಿದೆ. ಈಗಾಗಲೇ ಕೋಗಿಲು ಬಡಾವಣೆ ವಿಚಾರವಾಗಿ ಬಿಜೆಪಿ ಸತ್ಯಶೋಧನಾ ವರದಿಯನ್ನು ಸಿದ್ಧಪಡಿಸಿಕೊಂಡಿದೆ. ಕೋಗಿಲುನಲ್ಲಿ ಬಾಂಗ್ಲಾ ವಲಸಿಗರು ಇದ್ದಾರೆ ಎಂದು ಆರೋಪ ಮಾಡಿದೆ. ಇದಕ್ಕೆ ಉತ್ತರ ನೀಡುವುದು ಕೂಡಾ ಸರ್ಕಾರಕ್ಕೆ ಸವಾಲಾಗಿದೆ.ಇದಷ್ಟೇ ಅಲ್ಲ, ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪವನ್ನು ಮುಂದಿಟ್ಟುಕೊಂಡು ಅಬಕಾರಿ ಸಚಿವ ಆರ್ ಬಿ ತಿಮ್ಮಾಪೂರ ಅವರ ರಾಜೀನಾಮೆಗೆ ವಿಪಕ್ಷ ಆಗ್ರಹಿಸಬಹುದು. ಈಗಾಗಲೇ ದಾಖಲೆಗಳನ್ನು ಸಿದ್ಧಪಡಿಸಿಕೊಂಡಿದೆ.

## ರಾಜ್ಯಪಾಲರ ಭೇಟಿ ಮಾಡಿದ ಸಚಿವ ಎಚ್‌ಕೆ ಪಾಟೀಲ್

### ಭಾಷಣದಲ್ಲಿ ಗೆಹ್ಲೋಟ್ ಉಲ್ಲೇಖಿಸಲು ಬಯಸದ 11ನೇ ಪ್ಯಾರಾ

• ಉದಯವಾಹಿನಿ, ಬೆಂಗಳೂರು

ವಿಧಾನಮಂಡಲ ಜಂಟಿ ಅಧಿವೇಶನ ನಡೆಯಲಿದ್ದು, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಅಧಿವೇಶನವನ್ನು ಉದ್ದೇಶಿಸಿ ಭಾಷಣ ಮಾಡುತ್ತಾರಾ ಎಂಬುದು ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ. ಗೊಂದಲ ಸೃಷ್ಟಿಯಾದ ಹಿನ್ನೆಲೆಯಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್ ಕೆ ಪಾಟೀಲ್ ಅವರು ರಾಜ್ಯಪಾಲರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಅಲ್ಲದೆ ಜಂಟಿ ಅಧಿವೇಶನಕ್ಕೆ ರಾಜ್ಯಪಾಲರು ಆಗಮಿಸುತ್ತಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಬೆಳಗ್ಗೆ ನಡೆದ ಬೆಳವಣಿಗೆಗಳನ್ನು ಗಮನಿಸಿದರೆ, ರಾಜ್ಯಪಾಲರು ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡುವುದು ಅನುಮಾನ ಎಂದು ಹೇಳಲಾಗಿತ್ತು.

ರಾಜ್ಯಪಾಲರು ಅಧಿವೇಶನಕ್ಕೆ ಬರುವುದಿಲ್ಲ ಎಂದು ನಮಗೆ ಇದುವರೆಗೂ ಹೇಳಿಲ್ಲ. ರಾಜ್ಯ ಸರ್ಕಾರ ಪ್ರಧಾನ ಕಾರ್ಯದರ್ಶಿಗೆ ಭಾಷಣದ ಕುರಿತಾಗಿ ಕೆಲವು ವಿಷಯಗಳನ್ನು ತಿಳಿಸಿದ್ದಾರೆ. ಜಂಟಿ ಅಧಿವೇಶನಕ್ಕೆ ಗುರುವಾರ ರಾಜ್ಯಪಾಲರು ಬರಬೇಕು. ಅವರಿಗೆ ನಾನು ವಿನಂತಿ ಮಾಡ್ತೇವೆ. ಸಂವಿಧಾನದ ಪ್ರಕಾರ ಅವರು ಅಧಿವೇಶನಕ್ಕೆ ಬರುವುದು ಕಡ್ಡಾಯ ಎಂದು ಎಚ್‌ಕೆ ಪಾಟೀಲ್ ಹೇಳಿದರು. ರಾಜ್ಯಪಾಲರು ಅಧಿವೇಶನಕ್ಕೆ ಬಾರದೆ ಇದ್ದರೆ ಕಾನೂನು ಹೋರಾಟ ಮಾಡುತ್ತೀರಾ ಎಂಬ ಪ್ರಶ್ನೆಗೆ ಕಾನೂನು ಹೋರಾಟ ಮಾಡುವ ಪರಿಸ್ಥಿತಿ ಇಲ್ಲ. ಆ ತರಹದ ಪರಿಸ್ಥಿತಿ ಇನ್ನು ಬಂದಿಲ್ಲ ಹಾಗೂ ಅದು



ಉದ್ಭವಿಸಲ್ಲ. ಆ ಪರಿಸ್ಥಿತಿ ಬಂದರೆ ನೋಡೋಣ ಎಂದು ಸೂಚ್ಯವಾಗಿ ಹೇಳಿದರು.

ಭಾರತೀಯ ಸಂವಿಧಾನದ 176(1)ವಿಧಿ ಪ್ರಕಾರ, ರಾಜ್ಯಪಾಲರ ಭಾಷಣವನ್ನು ಸರ್ಕಾರ ಸಿದ್ಧಮಾಡಬೇಕು. ಅದನ್ನು ರಾಜ್ಯಪಾಲರು ಓದಬೇಕು. ಸಂವಿಧಾನದ ನಿರ್ದೇಶನ ಇದು. ಸಂವಿಧಾನ ಎಲ್ಲರಿಗೂ ಒಂದೇ. ರಾಷ್ಟ್ರಪತಿ,ರಾಜ್ಯಪಾಲರಿಗೆ ಹಾಗೂ ರಾಜ್ಯ ಸರ್ಕಾರಕ್ಕೂ ಇದು ಅನ್ವಯಿಸುತ್ತದೆ ಎಂದು ಎಚ್‌ಕೆ ಪಾಟೀಲ್ ಸ್ಪಷ್ಟಪಡಿಸಿದರು.

> 11ಪ್ಯಾರದಲ್ಲಿ ವಿಬಿ ಜಿರಾಮ್ ಜಿ ಯೋಜನೆಬಗ್ಗೆ ಅಷ್ಟೇ ಅಲ್ಲ, ಕೇಂದ್ರದ ನಿಲುವು,ರಾಜ್ಯಕ್ಕಾದ ಅನ್ಯಾಯ ಹಾಗೂ ರಾಜ್ಯಕ್ಕೆ ಆಗಬೇಕಿರುವ ಕೆಲಸದ ಬಗ್ಗೆಯೂ ಇದೆ. ಈ ರೀತಿಯದ್ದು ನೂರು ಪ್ಯಾರ ಇರಬಹುದು
>
> -ಎಚ್‌ಕೆ ಪಾಟೀಲ್, ಸಚಿವ

**ಭಾಷಣದ ಬಗ್ಗೆ ಮುಂದುವರೆದ ಗೊಂದಲ**

ಬರಗಾಲದ ಪರಿಹಾರವನ್ನು ಸುಪ್ರೀಂಕೋರ್ಟ್‌ಗೆ ಹೋಗಿ ಪಡೆಯಬೇಕಾದ ಪರಿಸ್ಥಿತಿ ಇದೆ. 15ನೇ ಹಣಕಾಸು ಆಯೋಗದಲ್ಲಿ ಆಗಿರುವ ಅನ್ಯಾಯವನ್ನು ನಾವು ಭಾಷಣದಲ್ಲಿ ಬರೆದಿದ್ದೇವೆ. ಕೆಲವು ಮಾರ್ಪಾಡು ಮಾಡಲು ಸಹಜವಾಗಿ ಚರ್ಚೆ ಮಾಡ್ತೇವೆ. ಯಾವುದೇ ಪ್ಯಾರಾ ಕೈ ಬಿಡಬೇಕು ಎಂದಾದರೆ ಅದು ಸರ್ಕಾರದ ನಿರ್ಧಾರಕ್ಕೆ ತದ್ವಿರುದ್ಧವಾಗುತ್ತದೆ. ಅವರು ಕೆಲವು ವಾಕ್ಯಗಳನ್ನು ಕೈ ಬಿಡಬೇಕೆಂದಿದ್ದಾರೆ. ಆದರೆ ಅದು ಸಮಂಜಸವಲ್ಲ ಎನ್ನುವುದು ನಮ್ಮ ಅಭಿಪ್ರಾಯವಾಗಿದೆ. ವಿಬಿ ಜಿ ರಾಮ್ ಜಿ ತಂದು ಕೃಷಿ ಕಾರ್ಮಿಕರ ಹಕ್ಕು ಕಸಿದಿದ್ದಾರೆ. ಇದನ್ನ ನಾವು ವಿರೋಧಿಸಬಾರದೇ ಎಂದು ಎಚ್‌ಕೆ ಪಾಟೀಲ್ ಖಾರವಾಗಿ ಪ್ರಶ್ನಿಸಿದರು. ಪಂಚಾಯತ್‌ನ ಅಧಿಕಾರ ಕಿತ್ತ ಬಗ್ಗೆ ನಾವು ಧ್ವನಿ ಎತ್ತಬಾರದೆ ಇದನ್ನು ನಾವು ನಮ್ಮ ಅಧಿವೇಶನದಲ್ಲಿ ಹೇಳಿಸಬಾರದು ಎಂದರೆ ಹೇಗೆ ಎಂದು ಸಚಿವರು ಅಸಮಾಧಾನ ವ್ಯಕ್ತಪಡಿಸಿದರು.

**ರಾಜ್ಯಪಾಲರ ಆಗ್ರಹ:** ಜಂಟಿ ಅಧಿವೇಶನದಲ್ಲಿ ಓದಬೇಕಾದ ಭಾಷಣದ 11ನೇ ಪ್ಯಾರಾ ಕೈಬಿಡಬೇಕು ಎಂದು ರಾಜ್ಯಪಾಲರು ಒತ್ತಾಯಿಸಿದ್ದಾರೆ ಎಂದು ತಿಳಿದುಬಂದಿದೆ. ಈ ಕುರಿತಾಗಿ ಪ್ರತಿಕ್ರಿಯೆ ನೀಡಿದ ಎಚ್ ಕೆ ಪಾಟೀಲ್, ನಾವು ಸಹಜವಾಗಿ ವಿಬಿ ಜಿ ರಾಮ್ ಜಿ ಯೋಜನೆ ಟೀಕೆ ಮಾಡಿ, ಮನರೇಗಾ ಮರು ಸ್ಥಾಪನೆಗೆ ಒತ್ತಾಯಿಸಬೇಕಿದೆ. ಅವರಿಗೆ ಈ ಬಗ್ಗೆ ನಾವು ಸ್ಪಷ್ಟವಾಗಿ ಹೇಳಿದ್ದೇವೆ. 11ನೇ ಪ್ಯಾರಾ ಬಿಡಲು ಅವರು ಸಲಹೆಯನ್ನ ಕೊಟ್ಟಿದ್ದಾರೆ. ನಾವು ಸಿಎಂ ಬಳಿ ಮಾತಾಡಿ ನಮ್ಮ ನಿರ್ಧಾರವನ್ನು ರಾಜ್ಯಪಾಲರಿಗೆ ತಿಳಿಸುತ್ತೇವೆ ಎಂದರು.

## ಸದನದಲ್ಲಿ ತುರ್ತು ಚರ್ಚೆಗೆ ಅವಕಾಶ ಕೋರಿ ಸಭಾಪತಿಗೆ ಬಿಜೆಪಿ ಪತ್ರ!

### ■ ಸರ್ಕಾರದ ಜನವಿರೋಧಿ ನೀತಿ ಖಂಡಿಸಿ ಸದನದಲ್ಲಿ ಚರ್ಚೆಗೆ ಅವಕಾಶ ನೀಡುವಂತೆ ಬಿಜೆಪಿ ಒತ್ತಾಯ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಆಡಳಿತ ಯಂತ್ರದ ಸಂಪೂರ್ಣ ಕುಸಿತವಾಗಿದೆ. ಸರ್ಕಾರದ ಜನವಿರೋಧಿ ನೀತಿಗಳು ಹಾಗೂ ಧೋರಣೆಗಳನ್ನು ಖಂಡಿಸಿ ನಾಡಿನ ಜನರು ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳ ಕುರಿತು ಸದನದಲ್ಲಿ ತುರ್ತು ಚರ್ಚೆಗೆ ಅವಕಾಶ ನೀಡಿ ಎಂದು ಆಗ್ರಹಿಸಿ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಬಿಜೆಪಿ ಪತ್ರ ಬರೆದಿದೆ. ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರು ಈ ಕುರಿತಾಗಿ ಪತ್ರ ಬರೆದಿದ್ದು, ರಾಜ್ಯದ ಸದ್ಯದ ದುಸ್ಥಿತಿಯನ್ನು ನಿಮ್ಮ ಗಮನಕ್ಕೆ ತರುವುದು ನನ್ನ ಕರ್ತವ್ಯವಾಗಿದೆ ಎಂದಿದ್ದಾರೆ. ಜ.22ಯಿಂದ ವಿಧಾನ ಮಂಡಳ ಜಂಟಿ ಅಧಿವೇಶನ ಆರಂಭವಾಗಲಿದೆ.

ವಿಧಾನ ಪರಿಷತ್ತಿನ ಅಧಿವೇಶನವು ನಡೆಯುತ್ತಿರುವ ಈ ಸಂದರ್ಭದಲ್ಲಿ, ವಿರೋಧ ಪಕ್ಷದ ನಾಯಕನಾಗಿ ರಾಜ್ಯದ ಸದ್ಯದ ದುಸ್ಥಿತಿಯನ್ನು ನಿಮ್ಮ ಗಮನಕ್ಕೆ ತರುವುದು ನನ್ನ ಕರ್ತವ್ಯವೆಂದು ಭಾವಿಸುತ್ತೇನೆ. ರಾಜ್ಯ ಸರ್ಕಾರವು ಅಧಿಕಾರಕ್ಕೆ ಬಂದ ದಿನದಿಂದಲೂ ಕೇವಲ ರಾಜಕೀಯ ದ್ವೇಷ ಸಾಧನೆಯಲ್ಲೇ ಮಗ್ನವಾಗಿದ್ದು, ರಾಜ್ಯದ ಅಭಿವೃದ್ಧಿ ಮತ್ತು ಜನರ ಹಿತಾಸಕ್ತಿಯನ್ನು ಸಂಪೂರ್ಣವಾಗಿ ಬಲಿಕೊಟ್ಟಿದೆ. ಸರ್ಕಾರದ ಆಡಳಿತ ವ್ಯವಸ್ಥೆಯು ಸಂಪೂರ್ಣವಾಗಿ ಕುಸಿದುಬಿದ್ದಿದ್ದು, ಜನಸಾಮಾನ್ಯರು ಅಕ್ಷರಶಃ ಬೀದಿಗೆ ಬೀಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರೆ ತಪ್ಪಾಗಲಾರದು ಆದ್ದರಿಂದ




ಸದನದ ಈ ವಿಶೇಷ ಅಧಿವೇಶನವು ಕೇವಲ ಔಪಚಾರಿಕವಾಗದೆ, ರಾಜ್ಯದ ಸಂಕಷ್ಟಗಳ ಚರ್ಚೆಯ ವೇದಿಕೆಯಾಗಬೇಕಿದೆ ಎಂದಿದ್ದಾರೆ.

ಈ ಅತ್ಯುನ್ನತ ಸದನವು ಕೇವಲ ರಾಜಕೀಯ ಮೇಲಾಟಗಳಿಗೆ ಅಥವಾ ಪರಸ್ಪರ ದ್ವೇಷ ತೀರಿಸಿಕೊಳ್ಳುವ ವೇದಿಕೆಯಾಗಬಾರದು ಎನ್ನುವುದು ನಾಡಿನ ಜನರ ಆಶಯವಾಗಿದೆ. ಪ್ರಸ್ತುತ ರಾಜ್ಯದಲ್ಲಿ ಜನಸಾಮಾನ್ಯರು ಅನುಭವಿಸುತ್ತಿರುವ ಕಷ್ಟಕಾರ್ಪಣ್ಯಗಳು ಅಕ್ಷರಶಃ

**ಹದಗೆಟ್ಟ ಕಾನೂನು ಸುವ್ಯವಸ್ಥೆ ಮತ್ತು ಡ್ರಗ್ಸ್ ಮಾಫಿಯಾ**

ರಾಜ್ಯದಲ್ಲಿ ಕೊಲೆ, ಸುಲಿಗೆ, ಟಾರ್ಗೆಟ್ ರಾಜಕಾರಣ, ಸರ್ಕಾರಿ ನೌಕರರು ಮತ್ತು ಅಧಿಕಾರಿಗಳ ಮೇಲೆ ದೌರ್ಜನ್ಯ, ಸಮಾಜದಲ್ಲಿ ಅರಾಜಕತೆ ಸೃಷ್ಟಿಯಾಗಿರುವುದು ಮತ್ತು ಮಹಿಳೆಯರ ಮೇಲಿನ ದೌರ್ಜನ್ಯಗಳು ಮಿತಿಮೀರಿವೆ. ಪೊಲೀಸ್ ಇಲಾಖೆಯು ಆಡಳಿತ ಪಕ್ಷದ ಕೈಗೊಂಬೆಗಳಂತೆ ವರ್ತಿಸುವಂತೆ ಒತ್ತಡ ಹಾಕುತ್ತಿದ್ದಾರೆ. ಒಟ್ಟಿನಲ್ಲಿ ರಾಜ್ಯದಲ್ಲಿ ಅರಾಜಕತೆ ತಾಂಡವವಾಡುತ್ತಿದೆ. ರಾಜ್ಯದಲ್ಲಿ ಇಂದು ಜನಸಾಮಾನ್ಯರಿಗೆ ರಕ್ಷಣೆ ಇಲ್ಲದಂತಾಗಿದೆ. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಡ್ರಗ್ಸ್ ಜಾಲವು ಯುವಜನತೆಯನ್ನು ಬಲಿ ತೆಗೆದುಕೊಳ್ಳುತ್ತಿದೆ.

ಹೇಳತೀರದಾಗಿವೆ. ಆಡಳಿತ ವ್ಯವಸ್ಥೆಯು ಸಂಪೂರ್ಣವಾಗಿ ಸ್ಥಗಿತಗೊಂಡಿರುವ ಈ ಸಂದರ್ಭದಲ್ಲಿ, ಕೆಳಕಂಡ ವಿಷಯಗಳ ಕುರಿತು ಆದ್ಯತೆಯ ಮೇರೆಗೆ ಚರ್ಚೆ ನಡೆಸಲು ತಾವು ಅನುಮತಿ ನೀಡಬೇಕೆಂದು ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇನೆ.

**ರೈತರ ಆತ್ಮಹತ್ಯೆಗಳು:** ರಾಜ್ಯದಲ್ಲಿ ಅನ್ನದಾತರು ಅನಾಥರಾಗಿದ್ದಾರೆ. ಹವಾಮಾನ ವೈಪರೀತ್ಯ, ಬೆಳೆಹಾನಿ ಮತ್ತು ಬೆಲೆ ಕುಸಿತದಿಂದ ರೈತರು ಕಂಗಾಲಾಗಿದ್ದಾರೆ. ಸಾಲದ ಬಾಧೆ ತಾಳಲಾರದೆ ಪ್ರತಿ ಜಿಲ್ಲೆಯಲ್ಲೂ ರೈತರು ಆತ್ಮಹತ್ಯೆಯ ದಾರಿ ಹಿಡಿಯುತ್ತಿದ್ದಾರೆ. ಆದರೆ ರಾಜ್ಯ ಸರ್ಕಾರವು ಪರಿಹಾರ ವಿತರಿಸುವಲ್ಲಿ ತಾರತಮ್ಯ ಮಾಡುತ್ತಿದೆ. ಕೃಷಿ ಇಲಾಖೆಯು ಕೇವಲ ಕಾಗದದ ಮೇಲೆ ಮಾತ್ರ ಕಾರ್ಯನಿರ್ವಹಿಸುತ್ತಿದೆ. ರಾಜ್ಯ ಸರ್ಕಾರದ ಸ್ಪಂದನೆ ಈ ವಿಷಯದಲ್ಲಿ ಶೂನ್ಯವಾಗಿದೆ. ಸರ್ಕಾರಿ ವ್ಯವಸ್ಥೆಯಲ್ಲಿ ರೈತರ ಗೋಳು ಕೇಳುವವರೇ ಇಲ್ಲದಂತಾಗಿದೆ. ಅನ್ನದಾತರಿಗೆ ನೆರವಾಗಲು ರಾಜ್ಯ ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು ಎಂಬ ಬಗ್ಗೆ ಗಂಭೀರ ಚರ್ಚೆಯಾಗಬೇಕಿದೆ.


**ಅನುದಾನದ ಲೂಟಿ:** ಪರಿಶಿಷ್ಟ ವರ್ಗಗಳ ಏಳಿಗೆಗೆ ಮೀಸಲಿಟ್ಟಿದ್ದ SCSP/TSP ಯೋಜನೆಯ 39,000 ಸಾವಿರ ಕೋಟಿ ರೂಪಾಯಿಗಳ ಅನುದಾನವನ್ನು ರಾಜ್ಯ ಸರ್ಕಾರವು ಅಕ್ರಮವಾಗಿ ತನ್ನ 'ಗ್ಯಾರಂಟಿ' ಯೋಜನೆಗಳಿಗೆ ವರ್ಗಾಯಿಸಿದೆ.

ಇದು ಸಂವಿಧಾನಬದ್ಧವಾಗಿ ಪರಿಶಿಷ್ಟ ವರ್ಗಗಳಿಗೆ ಸಿಗಬೇಕಾದ ಹಕ್ಕನ್ನು ಕಿತ್ತುಕೊಂಡಂತಾಗಿದ್ದು, ಸಾಮಾಜಿಕ ನ್ಯಾಯದ ಕತ್ತು ಹಿಸುಕಿದಂತಾಗಿದೆ. ಈ ಅನುದಾನವು ಅವರ ಶಿಕ್ಷಣ ಮತ್ತು ಮೂಲಭೂತ ಸೌಕರ್ಯಕ್ಕೆ ಬಳಕೆಯಾಗಬೇಕಿತ್ತು. ಈ ಅಕ್ರಮ ವರ್ಗಾವಣೆಯ ಕುರಿತು ಶ್ವೇತಪತ್ರ ಹೊರಡಿಸಬೇಕು. ಇದು ಸಂವಿಧಾನ ವಿರೋಧಿ ನಡೆಯಾಗಿದೆ.

**ನಿಗಮ ಮಂಡಳಿಗಳ ನಿಷ್ಕ್ರಿಯತೆ:** ರಾಜ್ಯದ ವಿವಿಧ ಅಭಿವೃದ್ಧಿ ನಿಗಮಗಳಿಗೆ ರಾಜ್ಯ ಸರ್ಕಾರದಿಂದ ಅನುದಾನ ಸರಿಯಾಗಿ ಬಿಡುಗಡೆಯಾಗುತ್ತಿಲ್ಲ ಹಾಗೂ ಅನುದಾನ ಕಡಿತವಾಗಿದೆ. ಇದರಿಂದ ಜನಕಲ್ಯಾಣ ಕಾರ್ಯಕ್ರಮಗಳು ಸ್ಥಗಿತಗೊಂಡಿವೆ.

ಉದಯ ವಾಹಿನಿ | ಬೆಂಗಳೂರು | ಗುರುವಾರ 22 ಜನವರಿ 2026 | 02

## ಭರತನಾಟ್ಯ ಪ್ರದರ್ಶನ



ಜಯನಗರ 5ನೇ ಬಡಾವಣೆಯ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್ ಕೆ ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಜನವರಿ 22, ಗುರುವಾರ ಸಂಜೆ 5-15ಕ್ಕೆ ವಿದುಷಿ ಶ್ರೀಮತಿ ಗಾಯತ್ರಿ ಮಯ್ಯ ಅವರ ನಿರ್ದೇಶನದಲ್ಲಿ ತಮೋಹ ಆರ್ಟ್ಸ್ ಫೌಂಡೇಶನ್ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಏರ್ಪಡಿಸಿದೆ ಎಂದು ಶ್ರೀ ನಂದಕಿಶೋರ್ ಆಚಾರ್ಯರು ತಿಳಿಸಿದ್ದಾರೆ ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, 11ನೇ ಮುಖ್ಯರಸ್ತೆ, 45ನೇ ಅಡ್ಡರಸ್ತೆ, ಜಯನಗರ 5ನೇ ಬಡಾವಣೆ, ಬೆಂಗಳೂರು-41

## ಬೆಂಗಳೂರು-ಮುಂಬೈ ನಡುವೆ ಆರಂಭವಾಗದ ಎಕ್ಸ್‌ಪ್ರೆಸ್ ರೈಲು

• ಉದಯವಾಹಿನಿ, ಬೆಂಗಳೂರು

ಮುಂಬೈ ಎಸ್‌ಎಂವಿಟಿ ಬೆಂಗಳೂರು ನಡುವೆ ವಾರಕ್ಕೆ ಎರಡು ದಿನ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ರೈಲ್ವೆ ಮಂಡಳಿ ಅನುಮತಿ ನೀಡಿ ತಿಂಗಳು ಕಳೆದರೂ ಇನ್ನೂ ಸಂಚಾರ ಆರಂಭವಾಗಿಲ್ಲ. ಈ ನಡುವೆ ಹೊಸ ತುರಂತೊ ರೈಲು ಸಂಚರಿಸಲಿದೆ ಎಂಬ ಸುದ್ದಿ ಹರಡಿದೆ. ಅಂಥ ಯಾವುದೇ ನಿರ್ಧಾರವಾಗಿಲ್ಲ ಎಂದು ರೈಲ್ವೆ ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಬೆಂಗಳೂರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣದಿಂದ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್‌ಗೆ 'ಉದ್ಯಾನ್' ಎಕ್ಸ್‌ಪ್ರೆಸ್ ರೈಲು ಇದೆಯಾದರೂ ಅದು ಕಲಬುರಗಿ ಮಾರ್ಗವಾಗಿ ಸಂಚರಿಸುತ್ತಿದೆ. ಹುಬ್ಬಳ್ಳಿ ಮಾರ್ಗವಾಗಿ ಇರುವ ರೈಲು ಬೆಂಗಳೂರು ನಗರದ ಒಳಗೆ ಬಾರದೇ ಇರುವುದರಿಂದ ಹೊಸ ರೈಲಿಗಾಗಿ ಬೇಡಿಕೆ ಇತ್ತು. ಬೆಂಗಳೂರಿನಿಂದ ಹುಬ್ಬಳ್ಳಿ ಮಾರ್ಗವಾಗಿ ಮುಂಬೈನ ದಾದರ್‌ಗೆ ಚಾಲುಕ್ಯ ಎಕ್ಸ್‌ಪ್ರೆಸ್ ರೈಲು 1983ರಲ್ಲಿ ಆರಂಭವಾಗಿತ್ತು. 2014ರವರೆಗೆ ಈ ರೈಲು ಮೆಜೆಸ್ಟಿಕ್‌ನಲ್ಲಿರುವ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ನಿಲ್ದಾಣಕ್ಕೆ ಬರುತ್ತಿತ್ತು. ಆನಂತರ ಅದನ್ನು ಯಶವಂತಪುರ ನಿಲ್ದಾಣಕ್ಕೆ ಸೀಮಿತಗೊಳಿಸಲಾಯಿತು.

## ಜಮೀರ್ ಆಪ್ತ ಸರ್ಫರಾಜ್ ಖಾನ್ ಮನೆ ಮೇಲೆ ಲೋಕಾಯುಕ್ತ ದಾಳಿ

• ಉದಯವಾಹಿನಿ, ಬೆಂಗಳೂರು

ಸಹಕಾರ ಸಂಘಗಳ ಲೆಕ್ಕಪರಿಶೋಧನಾ ವಿಭಾಗದ ನಿರ್ದೇಶಕ ಸರ್ದಾರ್ ಸರ್ಫರಾಜ್ ಖಾನ್ ಅವರಿಗೆ ಸಂಬಂಧಿಸಿದ ಸ್ಥಳಗಳ ಮೇಲೆ ದಾಳಿ ನಡೆಸಿದಾಗ, ಅವರು 14.38 ಕೋಟಿ ಮೌಲ್ಯದ ಆಸ್ತಿಯನ್ನು ಹೊಂದಿರುವುದು ಪತ್ತೆಯಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ಬುಧವಾರ ತಿಳಿಸಿದೆ.

ಲೋಕಾಯುಕ್ತ ಅಧಿಕಾರಿಗಳು 2025ರ ಡಿಸೆಂಬರ್ 24 ರಂದು ಅಕ್ರಮ ಆಸ್ತಿ (ಡಿಎ) ಗಳಿಕೆ ಪ್ರಕರಣದಲ್ಲಿ ಖಾನ್ ಅವರ ನಿವಾಸಗಳು, ಕಚೇರಿಗಳು ಮತ್ತು ಅವರ ಸಂಬಂಧಿಕರ ನಿವಾಸಗಳು ಸೇರಿದಂತೆ ಅವರಿಗೆ ಸಂಬಂಧಿಸಿದ 13 ಸ್ಥಳಗಳಲ್ಲಿ ದಾಳಿ ನಡೆಸಿದ್ದರು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಖಾನ್ ಸದ್ಯ ವಸತಿ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಲ್ಲಿ ಸರ್ಕಾರದ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ವಸತಿ ಮತ್ತು ಅಲ್ಪಸಂಖ್ಯಾತ ಕಲ್ಯಾಣ ಸಚಿವ ಬಿ ಝಡ್ ಜಮೀರ್ ಅಹ್ಮದ್ ಖಾನ್ ಅವರ ಆಪ್ತರು. ಶೋಧದ ಸಮಯದಲ್ಲಿ, ಖಾನ್ ಅವರು ನಾಲ್ಕು ಮನೆಗಳು, 37 ಎಕರೆ ಕೃಷಿ ಭೂಮಿಯನ್ನು ಹೊಂದಿರುವುದು ಪತ್ತೆಯಾಗಿದ್ದು, ಇದು 8.44 ಕೋಟಿ ಮೌಲ್ಯದ್ದಾಗಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ಅಂದಾಜಿಸಿದ್ದಾರೆ. 3 ಕೋಟಿ ಮೌಲ್ಯದ ಆಭರಣಗಳು, 1.64 ಕೋಟಿ ಮೌಲ್ಯದ ವಾಹನಗಳು, ಸ್ಥಿರ ಠೇವಣಿಗಳು ಮತ್ತು 5.94 ಕೋಟಿ ಮೌಲ್ಯದ ಇತರ ಹೂಡಿಕೆಗಳನ್ನು ತಂಡವು ಪತ್ತೆಹಚ್ಚಿದೆ ಎಂದು ಪ್ರಕಟಣೆ ತಿಳಿಸಿದೆ.

## ಆರೂಢ ಶ್ರೀ ದಶಮಾನೋತ್ಸವ

• ಉದಯವಾಹಿನಿ, ಬೆಂಗಳೂರು



ಬೆಂಗಳೂರು ದಕ್ಷಿಣ ತಾಲ್ಲೂಕು ಕೆಂಗೇರಿ ಹೋಬಳಿ ರಾಮೋಹಳ್ಳಿಯ ಶ್ರೀ ಸಿದ್ಧಾರೂಢ ಮಿಷನ್ ಆಶ್ರಮದ ಅಧ್ಯಕ್ಷ ಡಾ ಆರೂಢಭಾರತೀ ಸ್ವಾಮೀಜಿಯವರ ಸಂನ್ಯಾಸದ ದಶಮಾನೋತ್ಸವವನ್ನು ಬರುವ ಭಾನುವಾರ ಬೆಳಿಗ್ಗೆ ರಾಮೋಹಳ್ಳಿಯ ಆಶ್ರಮದಲ್ಲಿ ಹಮ್ಮಿಕೊಳ್ಳಲಾಗಿದೆ. 6 ಘಂಟೆಗೆ ಪ್ರಣವಧ್ವಜಾರೋಹಣದ ಬಳಿಕ ಸಿದ್ಧಾರೂಢರಿಗೆ ಅಭಿಷೇಕ ಇಪ್ಪತ್ತೈದು ಜನ ಸಂತ ಮಠಾಧೀಶರ ಪಾದಪೂಜೆ ನಡೆಯುವುದು. 8.30 ರಿಂದ ವಚನಪಾರಾಯಣ ಸಾಮೂಹಿಕ ಭಗವದ್ಗೀತಾಪಾರಾಯಣ ಭಕ್ತಿ ಸಂಗೀತ ಕಾರ್ಯಕ್ರಮಗಳು ನಡೆಯಲಿವೆ. 10.40 ಕ್ಕೆ ಅಕ್ಕಮಹಾದೇವಿ ಪ್ರಸಾದ ನಿಲಯದ ಉದ್ಘಾಟನೆ ನೆರವೇರುವುದು. ನಂತರ ನಡೆಯುವ ಸಭಾ ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು, ಪುಸ್ತಕ ಬಿಡುಗಡೆ ಪ್ರಶಸ್ತಿ ಪ್ರದಾನ ಸತ್ಕಾರಗಳು ನಡೆಯುವವು. ಅನ್ನಸಂತರ್ಪಣೆಯೊಂದಿಗೆ ಕಾರ್ಯಕ್ರಮವು ಮುಕ್ತಾಯಗೊಳ್ಳುವುದು.

ಕಾವ್ಯ ಶ್ರೀ ಚಾರಿಟಬಲ್ ಟ್ರಸ್ಟ್‌ನ ಸಹಯೋಗದಲ್ಲಿ ನಡೆಯುವ ಈ ಕಾರ್ಯಕ್ರಮದಲ್ಲಿ ಮಠಾಧೀಶರು ಮಾಜಿ ಮಂತ್ರಿಗಳು ಶಾಸಕರು ಜನಪ್ರತಿನಿಧಿಗಳು ವಿದ್ವಾಂಸರು ಕಲಾವಿದರು ಸಾಧಕರು ಭಕ್ತಾದಿಗಳು ಭಾಗವಹಿಸುವರು. ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗಿದೆ.

# ಕರ್ನಾಟಕದ ರಾಜಕೀಯ ಸ್ಥಿತಿಗೆ ಕೈ ಮುಗಿದು ಸುಮ್ಮನಾದ ಹೈಕಮಾಂಡ್

### ರಾಜ್ಯ ಕಾಂಗ್ರೇಸ್‌ನಲ್ಲಿ ನಾಯಕತ್ವ ಬಿಕ್ಕಟ್ಟು ತೀವ್ರ ಸಾಕಷ್ಟು ಬೆಳವಣಿಗೆಗಳು ನಡೆಯುತ್ತಿದ್ದರೂ, ಹೈಕಮಾಂಡ್ ಮಾತ್ರ ಸೈಲೆಂಟ್

• ಉದಯವಾಹಿನಿ, ಬೆಂಗಳೂರು

**ಖರ್ಗೆ ನಿರಂತರ ಮೌನದ ಅರ್ಥ**

ರಾಜ್ಯದಲ್ಲಿ ನಾಯಕತ್ವ ಬಿಕ್ಕಟ್ಟು ಸದ್ಯಕ್ಕೆ ಪರಿಹಾರ ಆಗುವ ಲಕ್ಷಣಗಳು ಗೋಚರಿಸುತ್ತಿಲ್ಲ. ಬಹಿರಂಗವಾಗಿ ಎಲ್ಲವೂ ಸೈಲೆಂಟ್ ಎಂದು ಕಾಣಿಸುತ್ತಿದ್ದರೂ, ಆಂತರಿಕವಾಗಿ ಒಳಬೇಗುದಿ ತೀವ್ರಗೊಳ್ಳುತ್ತಿದೆ. ತೆರೆಮರೆಯೊಳಗೆ ಬೆಳವಣಿಗೆಗಳು ನಡೆಯುತ್ತಿದ್ದರೂ, ಹೈಕಮಾಂಡ್ ಮೌನ ಅಚ್ಚರಿ ಉಂಟು ಮಾಡಿದೆ. ನಾಯಕತ್ವ ಗೊಂದಲ ಯಾವಾಗ ಬಗೆಹರಿಯುತ್ತೆ ಎಂದು ಎಐಸಿಸಿ ಅಧ್ಯಕ್ಷ ಹಾಗೂ ಕಾಂಗ್ರೆಸ್ ಹೈಕಮಾಂಡ್ ಮಲ್ಲಿಕಾರ್ಜುನ ಖರ್ಗೆ ಅವರಲ್ಲಿ ಪ್ರಶ್ನಿಸಿದರೆ ಕೈಮುಗಿದು ಸುಮ್ಮನಾಗುತ್ತಾರೆ.

ಬೆಂಗಳೂರಿಗೆ ಆಗಮಿಸಿರುವ ಮಲ್ಲಿಕಾರ್ಜುನ ಖರ್ಗೆ ಅವರಲ್ಲಿ ಇದೇ ಪ್ರಶ್ನೆಯನ್ನು ಕೇಳಿದಾಗ ಕೈಮುಗಿದು ಸುಮ್ಮನಾದರು. ಹೈಕಮಾಂಡ್ ಮಧ್ಯಪ್ರವೇಶ ಮಾಡಬೇಕು ಎಂಬ ಒತ್ತಡ ಇದ್ಯಲ್ಲ ಎಂಬ ಪ್ರಶ್ನೆಗೆ ಯಾವುದೇ ರೀತಿಯಲ್ಲಿ ಉತ್ತರ ನೀಡದೆ ಕೈಮುಗಿದು ತೆರಳಿದರು.


ಖರ್ಗೆ ಅವರ ಈ ನಡೆ ಇದೇ ಮೊದಲೇನಲ್ಲ, ಉದ್ದೇಶ ಪೂರ್ವಕವಾಗಿಯೇ ಅವರು ಅಂತರ ಕಾಯ್ದುಕೊಳ್ಳುತ್ತಿದ್ದಾರೆ. ನಾಯಕತ್ವ ಬದಲಾವಣೆ ವಿಚಾರದಲ್ಲಿ ಮತ್ತೆ ಖರ್ಗೆ ಮೌನ ಸಾಕಷ್ಟು ಕುತೂಹಲಕ್ಕೆ ಕಾರಣವಾಗಿದೆ.

ರಾಜ್ಯ ಸರ್ಕಾರಕ್ಕೆ ಎರಡುವರೆ ವರ್ಷ ತುಂಬಿದ ಹಿನ್ನಲೆಯಲ್ಲಿ ನಾಯಕತ್ವ ಬದಲಾವಣೆ ಖಚಿತ ಎಂದೇ ನಂಬಲಾಗಿತ್ತು. ಆದರೆ, ಸಿದ್ದರಾಮಯ್ಯ ಬಣ ಉರುಳಿಸುತ್ತಿರುವ ದಾಳಗಳು ಯಶಸ್ವಿಯಾಗುತ್ತಿವೆ. ಡಿಕೆ ಶಿವಕುಮಾರ್ ಹಾಗೂ ಬಣ ಸಿಎಂ ಸ್ಥಾನಕ್ಕಾಗಿ ನಡೆಸುತ್ತಿರುವ ಹಲವು ಪ್ರಯತ್ನಗಳು ವಿಫಲವಾಗುತ್ತಿದೆ ಎಂಬುವುದಕ್ಕೆ ಸದ್ಯದ ಬೆಳವಣಿಗೆಯೇ ಸಾಕ್ಷಿಯಾಗಿದೆ.

ಡಿಕೆ ಸಹೋದರರ ನಡೆನುಡಿಯಲ್ಲೂ ಬದಲಾವಣೆ ನಾಯಕತ್ವ ವಿಚಾರವಾಗಿ ಎಚ್ಚರಿಕೆಯ ಹೆಜ್ಜೆಯನ್ನು ಇಡುತ್ತಿದ್ದ ಡಿಕೆ ಸಹೋದರಲ್ಲೂ ಕೆಲವು ಬದಲಾವಣೆಗಳು ಕಾಣಿಸುತ್ತಿದೆ. ರಾಹುಲ್ ಗಾಂಧಿ ಮೈಸೂರು ಭೇಟಿಯ ಬಳಿಕದ ಟ್ವೀಟ್ ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಇದಾದ ನಂತರದಲ್ಲಿ ಡಿಕೆ ಸುರೇಶ್ ನೀಡಿರುವ ತಾಳ್ಮೆಯ ಮಾತೂ ಇದೀಗ ನಾನಾ ಅರ್ಥಗಳಿಗೆ ಎಡೆಮಾಡಿಕೊಟ್ಟಿದೆ.

ಡಿಕೆ ಸುರೇಶ್ ''ರಾಜಕಾರಣದಲ್ಲಿ ಇದ್ದ ಮೇಲೆ, ಯಾವುದೂ ಶಾಶ್ವತವಲ್ಲ. ಅಧಿಕಾರ, ತಾಳ್ಮೆ ಎರಡೂ ಶಾಶ್ವತವಲ್ಲ'' ಎಂದಿದ್ದರು. ಅಲ್ಲದೆ, ನಮ್ಮ ಅಣ್ಣ ಹಣೆಯಲ್ಲಿ ಬರೆದಿದ್ದರೆ ಅವರು ಸಿಎಂ ಆಗುತ್ತಾರೆ ಎಂದು ಮಾರ್ಮಿಕವಾಗಿ ನುಡಿದಿದ್ದರು. ಮಾತು ಕೊಟ್ಟಿದ್ದೀರಿ, ಅಧಿಕಾರ ಬಿಟ್ಟುಕೊಡಿ ಎಂದು ಹೇಳುವುದು ಬಹಳ ಕಷ್ಟ. ಪಂಚಾಯಿತಿ ಚೇರ್ಮನ್ ಗಳೇ ಅಧಿಕಾರ ಬಿಡಲು ನೆಪ ಹುಡುಕುತ್ತಾರೆ. ಎಲ್ಲದಕ್ಕೂ ಅಂತ್ಯ ಎಂಬುದು ಇದ್ದೇ ಇರುತ್ತದೆ ಎಂಬ ಒಕ್ಕಣೆಯನ್ನು ಸೇರಿಸಿಕೊಂಡಿದ್ದರು.

ಡಿಕೆ ಸುರೇಶ್ ಆಡಿರುವ ಮಾತು ಸಿದ್ದರಾಮಯ್ಯ ಮತ್ತು ಡಿಕೆಶಿ ಬಣದಲ್ಲಿ ಚರ್ಚೆಗೆ ಗ್ರಾಸವಾಗುತ್ತಿದೆ. ಇದೇ ವಿಚಾರವಾಗಿ ಪ್ರತಿಕ್ರಿಯೆ ನೀಡಿರುವ ಸಚಿವ ಎಂಸಿ ಸುಧಾಕರ್ 'ಡಿ.ಕೆ ಸುರೇಶ್ ಅನುಭವಿ ರಾಜಕಾರಣಿ. ಅವರ ಹೇಳಿಕೆ ನಾನು ನೋಡಿಲ್ಲ, ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ. ಹೈಕಮಾಂಡ್ ಗೆ ಇಲ್ಲಿನ ಪರಿಸ್ಥಿತಿ ಎಲ್ಲಾ ಗೊತ್ತಿದೆ. ಸುಸ್ಥಿರವಾಗಿರುವ ಸರ್ಕಾರ ಇದೆ. ಸಿಎಂ, ಡಿಸಿಎಂ ನಾವೆಲ್ಲರೂ ಒಟ್ಟಿಗೆ ಕೆಲಸ ಮಾಡ್ತಿದ್ದೇವೆ. ಹೈಕಮಾಂಡ್ ಬೇಗ ಇತ್ಯರ್ಥ ಮಾಡುವ ವಿಶ್ವಾಸ ಇದೆ. ನಾಯಕತ್ವ ವಿಚಾರವಾಗಿ ಸ್ಪಷ್ಟ ತೀರ್ಮಾನವನ್ನು ಹೈಕಮಾಂಡ್ ಮಾಡಲಿದೆ' ಎಂದರು.



### ಖರ್ಗೆ ಸೈಲೆಂಟ್ ಯಾಕೆ

**ನಾಯಕತ್ವ ವಿಚಾರವಾಗಿ ಅಂತಿಮ ತೀರ್ಮಾನ ಕೈಗೊಳ್ಳುವವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ. ಅವರೇ ಹೈಕಮಾಂಡ್ ಸ್ಥಾನದಲ್ಲಿದ್ದಾರೆ. ಆದರೆ ಮಲ್ಲಿಕಾರ್ಜುನ ಖರ್ಗೆ ಅವರ ಸೈಲೆಂಟ್ ನಾನಾ ರೀತಿಯಲ್ಲಿ ವ್ಯಾಖ್ಯಾನಕ್ಕೊಳಪಡುತ್ತಿದೆ. ಈ ಹಿಂದೆ ಮಾಧ್ಯಮಗಳ ಪ್ರಶ್ನೆಗೆ ಅವರು ಪ್ರತಿಕ್ರಿಯೆ ನೀಡುತ್ತಿದ್ದರು. ಆದರೆ ಕೆಲ ದಿನಗಳ ಹಿಂದೆ ಅವರು ಈ ವಿಚಾರವಾಗಿ ಪ್ರತಿಕ್ರಿಯಿಸುತ್ತಿಲ್ಲ. ನಾಯಕತ್ವ ವಿಚಾರವಾಗಿ ಸಿದ್ದರಾಮಯ್ಯ ಬಣ ಪಟ್ಟು ಹಿಡಿದಿರುವುದೇ ಇದಕ್ಕೆ ಕಾರಣ ಎಂದೂ ಹೇಳಲಾಗುತ್ತಿದೆ. ಈ ಹಿಂದೆ ಖರ್ಗೆ ಅವರು ಸಿದ್ದರಾಮಯ್ಯ ಅವರನ್ನೂ ಭೇಟಿ ಮಾಡಿ ಮಾತುಕತೆ ನಡೆಸಿದ್ದರು. ಈ ಸಂದರ್ಭದಲ್ಲಿ ನಾಯಕತ್ವ ಬದಲಾವಣೆಯ ಬಗ್ಗೆ ಸಿದ್ದರಾಮಯ್ಯ ತಮ್ಮ ನಿಲುವು ಸ್ಪಷ್ಟಪಡಿಸಿದ್ದಾರೆ. ಇನ್ನು ರಾಹುಲ್ ಗಾಂಧಿ ಆದಿಯಾಗಿ ದೆಹಲಿ ನಾಯಕರು ಸಿದ್ದರಾಮಯ್ಯ ಪರವಾಗಿ ಇರುವುದರಿಂದ ಸದ್ಯ ಬದಲಾವಣೆ ಅಸಾಧ್ಯ ಎಂಬ ಸ್ಥಿತಿ ನಿರ್ಮಾಣ ಆಗಿದೆ. ಇದುವೇ ಖರ್ಗೆ ಮೌನಕ್ಕೂ ಕಾರಣ ಎಂದು ಹೇಳಲಾಗುತ್ತಿದೆ.**

## ಶ್ರೀ ಆದಿಶಕ್ತಿ ದೇವಾಲಯ ಜೀರ್ಣೋದ್ಧಾರ ಪೂಜಾ ಕಾರ್ಯಕ್ರಮಕ್ಕೆ ಅದ್ದೂರಿ ಚಾಲನೆ

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಸಹಾಯ, ಸಹಕಾರ ಮತ್ತು ಬೆಂಬಲಗಳಿಂದ ಜೀರ್ಣೋದ್ಧಾರ ಆಗಿರುವ ಏಳು ಸುತ್ತಿನಕೋಟೆ ಸಪ್ತಮಾತೃಕಾ ಸಹಿತ ಶ್ರೀ ಆದಿಶಕ್ತಿ ದೇವಾಲಯದ ಉದ್ಘಾಟನೆ ಮತ್ತು ದೇವತಾ ಪೂಜಾ ಕಾರ್ಯಕ್ರಮವು ಮೂರು ದಿನಗಳ ಕಾಲ ಜರುಗಲಿದೆ.

ನಾಡಿನ ಖ್ಯಾತ ಜ್ಯೋತಿಷಿಗಳು ಮತ್ತು ಆಗಮ ಶಾಸ್ತ್ರಜ್ಞರೂ ಆದ ಡಾ.ಭಾನು ಪ್ರಕಾಶ್ ಶರ್ಮಾ ಅವರ ನೇತೃತ್ವದಲ್ಲಿ ದೇವತಾ ಕಾರ್ಯಗಳು ಮತ್ತು ಪೂಜಾ ಕೈಂಕರ್ಯಗಳಾದ ಗಣಪತಿಪೂಜೆ, ವಾಸ್ತು ಹೋಮ, ಪೂಜೆ, ಪುಣ್ಯಾಹ, ಪಂಚಗವ್ಯ, ರಾಕ್ಷೋಘ್ನ ಹೋಮ, ಅಗಮ ಪಂಡಿತರಿಂದ ಪೂಜಾ ಕಾರ್ಯ ಆರಂಭವಾಯಿತು.

ಜಿಬಿಎ-ಪಾಲಿಕೆಗಳ ಅಧಿಕಾರಿ ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಎ.ಅಮೃತ್ ರಾಜ್ ರವರು, ನೌಕರರ ಸಂಘ, ಸಹಕಾರ ಸಂಘದ ಪದಾಧಿಕಾರಿಗಳು ನೌಕರರು ಪೂಜಾ ಕಾರ್ಯದಲ್ಲಿ ಭಾಗವಹಿಸಿದ್ದರು. ಸರಿ ಸಮಾರು 2ಕೋಟಿ ರೂಪಾಯಿ ವೆಚ್ಚದಲ್ಲಿ ನವೀಕರಣಗೊಂಡಿರುವ ದೇವಾಲಯವನ್ನು ಗುರುವಾರ ಬೆಳಗ್ಗೆ ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿರವರು ಉದ್ಘಾಟನೆ ಮಾಡಲಿದ್ದಾರೆ

ಈ ಒಂದು ಪೂಜಾ ಕಾರ್ಯಕ್ರಮದಲ್ಲಿ ಶಾಸಕರಾದ ರಿಜ್ವಾನ್ ಅರ್ಷದ್, ಮುಖ್ಯ ಆಯುಕ್ತರಾದ ಮಹೇಶ್ವರರಾವ್ ರವರು ಹಾಗೂ ಗಣ್ಯ ಮಹನೀಯರುಗಳು ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆ.



## ಪರವಾನಗಿ ನೀಡಲು ಲಂಚ: ಅಮಾನತು

• ಉದಯವಾಹಿನಿ, ಬೆಂಗಳೂರು

ಅಬಕಾರಿ ಪರವಾನಗಿ ನೀಡಲು ಲಂಚ ಪಡೆದ ಆರೋಪ ಪ್ರಕರಣದಲ್ಲಿ ಅಬಕಾರಿ ಉಪ ಆಯುಕ್ತ ಜಗದೀಶ್ ನಾಯ್ಕ ಹಾಗೂ ಸೂಪರಿಂಟೆಂಡೆಂಟ್ ಕೆ.ಎಂ.ತಮ್ಮಣ್ಣ ಅವರನ್ನು ಅಮಾನತು ಮಾಡಲಾಗಿದೆ.

ಜ. 17ರಂದು 25 ಲಕ್ಷ ಲಂಚ ಪಡೆಯುತ್ತಿದ್ದ ವೇಳೆ ದಾಳಿ ನಡೆಸಿದ್ದ ಲೋಕಾಯುಕ್ತ ಪೊಲೀಸರು, ಜಗದೀಶ್ ನಾಯ್ಕ, ತಮ್ಮಣ್ಣ ಮತ್ತು ಕಾನ್‌ಸ್ಟೆಬಲ್ ಲಕ್ಕಪ್ಪ ಗನಿಯನ್ನು ಬಂಧಿಸಿದ್ದರು. ಈ ಸಂಬಂಧ ಪ್ರಕರಣ ದಾಖಲಾಗಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ಅಬಕಾರಿ ಜಂಟಿ ಆಯುಕ್ತರು, ಆಯುಕ್ತರಿಗೆ ವರದಿ ಸಲ್ಲಿಸಿದ್ದರು. ಅದನ್ನು ಆಧರಿಸಿ ಕರ್ನಾಟಕ ನಾಗರಿಕ ಸೇವಾ ನಿಯಮದಡಿ ಅಮಾನತುಗೊಳಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ನಗರದ ಹುಳಿಮಾವು ನಿವಾಸಿ ಲಕ್ಷ್ಮೀನಾರಾಯಣ ಅವರು ಸೋಮವಾರ ಲೋಕಾಯುಕ್ತ ಎಸ್ಪಿ ಅವರನ್ನು ಭೇಟಿ ಮಾಡಿ, ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಮತ್ತು ಅಧಿಕಾರಿಗಳ ವಿರುದ್ಧ ದೂರು ನೀಡಿದ್ದರು. ಅಲ್ಲದೆ ದೂರಿನ ಜತೆ ಆಡಿಯೋ ರೆಕಾರ್ಡ್, ಪೆನ್ ಡ್ರೈವ್ ಸೇರಿ ಕೆಲ ದಾಖಲೆಗಳನ್ನು ನೀಡಿದ್ದರು.

## ಭಾಷಾ ಕೌಶಲ್ಯ ಬೆಳೆಸಿಕೊಳ್ಳಲು ಇಂಗ್ಲಿಷ್‌ನಲ್ಲಿ ಮಾತನಾಡಿ

• ಉದಯವಾಹಿನಿ, ಬೆಂಗಳೂರು

ಎಲ್ಲಾ ಪದವಿ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳ ಉಪನ್ಯಾಸಕರು ಮತ್ತು ಪ್ರಾಂಶುಪಾಲರು ಕನ್ನಡದ ಬದಲು ಇಂಗ್ಲಿಷ್‌ನಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಹನ ನಡೆಸುವ ಅಭ್ಯಾಸವನ್ನು ಬೆಳೆಸಿಕೊಳ್ಳಬೇಕು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಹೇಳಿದರು.

ಬ್ರಿಟಿಷ್ ಕೌನ್ಸಿಲ್ ಮತ್ತು ಮೈಕ್ರೋಸಾಫ್ಟ್ ಇಂಡಿಯಾ ಜೊತೆಗಿನ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಿದ ನಂತರ ಮಾತನಾಡಿದ ಸುಧಾಕರ್, ವಿದ್ಯಾರ್ಥಿಗಳು ಮನೆಗೆ ಹಿಂದಿರುಗಿದಾಗ ಅಥವಾ ಕ್ಯಾಂಪಸ್‌ನ ಹೊರಗೆ ಇದ್ದಾಗ ಕನ್ನಡದಲ್ಲಿ ಮಾತನಾಡಬಹುದು ಎಂದರು.

ಬ್ರಿಟಿಷ್ ಕೌನ್ಸಿಲ್, ಮೈಕ್ರೋಸಾಫ್ಟ್ ಸಹಯೋಗದಲ್ಲಿ 31 ಸರ್ಕಾರಿ ಪದವಿ, 29 ಪಾಲಿಟೆಕ್ನಿಕ್ ಕಾಲೇಜುಗಳ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಕೌಶಲ ಕಲಿಕೆ ಆರಂಭಿಸಲಾಗುತ್ತಿದ್ದು, 95,000 ವಿದ್ಯಾರ್ಥಿಗಳು ಪ್ರಯೋಜನ ಪಡೆಯಲಿದ್ದಾರೆ.



ಈಗಾಗಲೇ 16 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಈ ಯೋಜನೆ ಜಾರಿಯಲ್ಲಿದ್ದು, ವಿದ್ಯಾರ್ಥಿಗಳಿಗೆ ಉನ್ನತ ಗುಣಮಟ್ಟದ ಅಧ್ಯಯನ ಸಂಪನ್ಮೂಲಗಳು, ಡಿಜಿಟಲ್ ಸಾಧನಗಳು ಮತ್ತು 'ಇಂಗ್ಲಿಷ್ ತರಬೇತಿ ಕ್ಲಬ್‌ಗಳ' ಮೂಲಕ ಇಂಗ್ಲಿಷ್ ಅಭ್ಯಾಸದ ಅವಕಾಶಗಳು ಲಭ್ಯವಾಗಲಿವೆ. ದೇಶವಿದೇಶಗಳಲ್ಲಿ ಉದ್ಯೋಗ ಪಡೆಯುವ ಅರ್ಹತೆ ಹೆಚ್ಚಾಗಲಿದೆ ಎಂದರು.

ಈ 54 ಸಂಸ್ಥೆಗಳಲ್ಲಿ 29 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಮತ್ತು 25 ಸರ್ಕಾರಿ ಪಾಲಿಟೆಕ್ನಿಕ್ ಸೇರಿವೆ. ಈ ಕಾರ್ಯಕ್ರಮದ ಮೂಲಕ, ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಪ್ರಥಮ ದರ್ಜೆ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್‌ಗಳ ವಿದ್ಯಾರ್ಥಿಗಳು ತಾಂತ್ರಿಕ ಜ್ಞಾನವನ್ನು ಮಾತ್ರವಲ್ಲದೆ ಸಂವಹನ ಕೌಶಲ್ಯವನ್ನೂ ಪಡೆಯುವುದನ್ನು ಸರ್ಕಾರ ಸೂಚಿಸಿದೆ.

> **ಉನ್ನತ ಶಿಕ್ಷಣವನ್ನು ಪಡೆಯುತ್ತಿರುವ ವಿದ್ಯಾರ್ಥಿಗಳು ಕಾಲೇಜು ಆವರಣದಲ್ಲಿ ಇರುವಾಗ ಇಂಗ್ಲಿಷ್‌ನಲ್ಲಿ ಮಾತನಾಡಬೇಕು. ಅಧ್ಯಾಪಕರೂ ಪರಸ್ಪರ ಸಂವಹನ ನಡೆಸಬೇಕು. ಉನ್ನತ ಶಿಕ್ಷಣದಲ್ಲಿ ಬೋಧನೆಯ ಮಾಧ್ಯಮ ಇಂಗ್ಲಿಷ್ ಆಗಿದ್ದರೂ ಹೆಚ್ಚಿನವರು ಇಂಗ್ಲಿಷ್ ಮಾತನಾಡುವುದಿಲ್ಲ. ಕಾಲೇಜಿನ ಒಳಗೆ ಇದ್ದಾಗ ಇಂಗ್ಲಿಷ್ ಮಾತನಾಡಬೇಕು.**
>
> -ಡಾ. ಎಂ.ಸಿ. ಸುಧಾಕರ್, ಉನ್ನತ ಶಿಕ್ಷಣ ಸಚಿವ

## ಇಂಧನ ಇಲಾಖೆ ಸಚಿವರಾದ ಕೆ.ಜೆ. ಜಾರ್ಜ್‌ರವರ ಅಧ್ಯಕ್ಷತೆಯಲ್ಲಿ ಎಂಇಐ ಸಂಸ್ಥೆಯ ಪ್ರಗತಿ ಪರಿಶೀಲನಾ ಸಭೆ

• ಉದಯವಾಹಿನಿ, ಬೆಂಗಳೂರು

ತಮಿಳುನಾಡಿನಲ್ಲಿ ರಾಜ್ಯಪಾಲರು ಭಾಷಣ ಮಾಡಲು ನಿರಾಕರಿಸಿದ್ದು ವಿವಾದಕ್ಕೆ ಕಾರದಿನಾಂಕ 21.01.2026ರ ಬುಧವಾರದಂದು ಮಾನ್ಯ ಇಂಧನ ಇಲಾಖೆಯ ಸಚಿವರಾದ ಕೆ.ಜೆ.ಜಾರ್ಜ್ ರವರ ಅಧ್ಯಕ್ಷತೆಯಲ್ಲಿ ಎಂಇಐ ಕಂಪನಿಯ ಪ್ರಗತಿ ಪರಿಶೀಲನಾ ಸಭೆಯು ಬೆಳಕು ಭವನ ಬೆಸ್ಕಾಂ ಬೆಂಗಳೂರು ಇಲ್ಲಿ ಜರುಗಿತು.

ಈ ಸಂದರ್ಭದಲ್ಲಿ ಸಭೆಯಲ್ಲಿ ಮಾನ್ಯ ಸಚಿವರಿಗೆ ಹಾಗೂ ಇಂಧನ ಇಲಾಖೆ ಅಧಿಕಾರಿಗಳಿಗೆ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಅನಿತಾ ಸಿ ರವರು ಸ್ವಾಗತ ಬಯಸಿದರು ಹಾಗೂ ಪ್ರಸಕ್ತ ಸಾಲಿನ ಕಂಪನಿಯ ಉತ್ಪಾದನೆ ಮತ್ತು ರವಾನೆ ಬಗ್ಗೆ ಸಭೆಗೆ ವಿವರಿಸಿದರು. ಪ್ರಸ್ತುತ ಸರ್ಕಾರದಿಂದ ಕೆಪಿಟಿಸಿಎಲ್ ಸಂಸ್ಥೆಗೆ ಎಂಇಐ ಕಂಪನಿಯ ಉತ್ಪನ್ನಗಳನ್ನು ನೇರವಾಗಿ ಖರೀದಿಸಲು 189 ರೂ ಕೋಟಿ ಮೊತ್ತದ 4ರ ವಿನಾಯ್ತಿ ನೀಡಲಾಗಿರುತ್ತದೆ, ಕೆಪಿಟಿಸಿಎಲ್ ಸಂಸ್ಥೆಗೆ ಅವಶ್ಯಕವಿರುವ ಸ್ವಿಚ್ ಗೇರ್ ಗಳನ್ನು ನಿಗದಿತ ಸಮಯಕ್ಕೆ ಉತ್ಪಾದನೆ ಮಾಡಿ ಅತ್ಯುತ್ತಮ ಗುಣಮಟ್ಟ ಉತ್ಪನ್ನಗಳನ್ನು ರವಾನೆ ಮಾಡಲು ಕಂಪನಿಯ ಅಧಿಕಾರಿಗಳಿಗೆ ಮಾನ್ಯ ಇಂಧನ ಸಚಿವರು ನಿರ್ದೇಶನ ನೀಡಿದರು. ಪ್ರಸ್ತುತ ಎಂಇಐ ಕಂಪನಿಯಲ್ಲಿ ವಿದ್ಯುತ್ ವಿತರಣಾ ಪರಿವರ್ತಕಗಳ ದುರಸ್ತಿ ಘಟಕವನ್ನು ಪ್ರಾರಂಭಿಸಲಾಗಿದೆ ಎಂದು ಕಂಪನಿಯ ಅಧ್ಯಕ್ಷರಾದ ಶ್ರೀ ಎಸ್.ಮನೋಹರ್ ರವರು ಸಭೆಗೆ ತಿಳಿಸಿದರು.



ಬೆಸ್ಕಾಂ ವ್ಯಾಪ್ತಿಯಲ್ಲಿ ಬರುವ ಪರಿವರ್ತಕಗಳನ್ನು ದುರಸ್ತಿ ಕಾರ್ಯವನ್ನು ಎಂಇಐ ಸಂಸ್ಥೆಗೆ ನೀಡಲು ಮಾನ್ಯ ಇಂಧನ ಸಚಿವರು ಬೆಸ್ಕಾಂ ಅಧಿಕಾರಿಗಳಿಗೆ ಈಗಾಗಲೇ ಸೂಚನೆಯನ್ನು ನೀಡಿದ್ದು, ಅದರಂತೆ ಬೆಸ್ಕಾಂ ಸಂಸ್ಥೆ ವತಿಯಿಂದ ವಿದ್ಯುತ್ ಪರಿವರ್ತಗಳನ್ನು ದುರಸ್ತಿಗೆ ಹಂತ ಹಂತವಾಗಿ ಎಂಇಐ ಸಂಸ್ಥೆಗೆ ನೀಡಲು ಕ್ರಮ ಜರುಗಿಸಲಾಗಿದೆ.

ಈ ಸಂದರ್ಭದಲ್ಲಿ ಬೆಸ್ಕಾಂ ಸಂಸ್ಥೆಯ ಮಾನ್ಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಡಾ. ಶಿವಶಂಕರ್ ರವರು ಈಗಾಗಲೇ ವಿದ್ಯುತ್ ಪರಿವರ್ತಕಗಳ ದುರಸ್ತಿ ಕಾರ್ಯವನ್ನು ಎಂ ಇ ಐ ಸಂಸ್ಥೆಗೆ ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. ಎಂ ಇ ಐ ಕಂಪನಿಯಲ್ಲಿರುವ ವಿದ್ಯುತ್ ವಿತರಣಾ ಪರಿವರ್ತಕಗಳ ದುರಸ್ತಿ ಕೇಂದ್ರದ ಮಾದರಿಯಲ್ಲಿ ಕೆಐಎಡಿಬಿ ವ್ಯಾಪ್ತಿಯ ಚಿತ್ರದುರ್ಗ, ಮೈಸೂರು ಮತ್ತು ಕಲ್ಯಾಣ ಕರ್ನಾಟಕ ಭಾಗಗಳಲ್ಲಿ ದುರಸ್ತಿ ಘಟಕಗಳನ್ನು ಪ್ರಾರಂಭಿಸಲು ಪೂರ್ವಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಸಭೆಗೆ ಕಂಪನಿಯ ಅಧ್ಯಕ್ಷರಾದ ಶ್ರೀ ಎಸ್ ಮನೋಹರ್ ರವರು ತಿಳಿಸಿದರು.

ಈ ಸಂದರ್ಭದಲ್ಲಿ 2026 ನೇ ಸಾಲಿನ ಎಂಇಐ ಸಂಸ್ಥೆಯ ಕ್ಯಾಲೆಂಡರ್ ಹಾಗೂ ಡೈರಿಯನ್ನು ಮಾನ್ಯ ಇಂಧನ ಸಚಿವರು ಬಿಡುಗಡೆ ಮಾಡಿದರು. ಸರ್ಕಾರದ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಶ್ರೀ ಗೌರವ ಗುಪ್ತರವರು , ಬೆಸ್ಕಾಂ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀ ಡಾ.ಶಿವಶಂಕರ್ ರವರು, ಎಂಇಐ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾದ ಶ್ರೀಮತಿ ಅನಿತಾ.ಸಿ ರವರು ಹಾಗೂ ಇಂಧನ ಇಲಾಖೆಯ ಅಧಿಕಾರಿಗಳು, ಕೆಪಿಟಿಸಿಎಲ್ ಸಂಸ್ಥೆಯ ಅಧಿಕಾರಿಗಳು ಮತ್ತು ಎಂ.ಇ.ಐ ಕಂಪನಿಯ ಅಧಿಕಾರಿಗಳು ಉಪಸ್ಥಿತರಿದ್ದರು.

## ದಾಖಲೆ ಬಜೆಟ್ ಮಂಡನೆಗೆ ಸಿದ್ದರಾಮಯ್ಯ ಸಿದ್ಧತೆ

• ಉದಯವಾಹಿನಿ, ಬೆಂಗಳೂರು

**ಅಧಿಕಾರಿಗಳೊಂದಿಗೆ ಸರಣಿ ಸಭೆ**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾಖಲೆಯ ಬಜೆಟ್ ಮಂಡನೆಗೆ ಭರದ ಸಿದ್ಧತೆ ನಡೆಸಿದ್ದು, ಬುಧವಾರ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸರಣಿ ಸಭೆಗಳನ್ನು ನಡೆಸಿದ್ದಾರೆ. ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ದೆಹಲಿ ಭೇಟಿ ನಂತರ ವಿಶ್ವ ಆರ್ಥಿಕ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ದಾವೋಸ್‌ಗೆ ಭೇಟಿ ನೀಡಿದ್ದು, ಇತ್ತ ಸಿದ್ದರಾಮಯ್ಯ ಅವರು ರಾಜ್ಯ ಬಜೆಟ್ ಗಾಗಿ ಬೆಂಗಳೂರಿನಲ್ಲಿ ಸರಣಿ ಸಭೆಗಳನ್ನು ನಡೆಸುತ್ತಿದ್ದಾರೆ. ಹಣಕಾಸು ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಬಜೆಟ್ ಕರಡು ಮಸೂದೆ ಬಗ್ಗೆ ಸಮಾಲೋಚನೆ ನಡೆಸಿದ್ದಾರೆ.

ಮುಂದಿನ ದಿನಗಳಲ್ಲಿ, ಪ್ರತಿ ಇಲಾಖೆಯ ಸಂಬಂಧಿತ ಸಚಿವರು ಮತ್ತು ಅಧಿಕಾರಿಗಳೊಂದಿಗೆ ಸಭೆಗಳನ್ನು ನಡೆಸುವ ಸಾಧ್ಯತೆಗಳಿವೆ. ಮಾರ್ಚ್ ಮೊದಲ ವಾರದಲ್ಲಿ ಬಜೆಟ್ ಮಂಡನೆ ಮಾಡಲು ತಯಾರಾಗಿರುವುದಾಗಿ ಭರವಸೆ ವ್ಯಕ್ತಪಡಿಸಿದ್ದಾರೆ. ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರ ಭಾಷಣ ಮತ್ತು ನರೇಗಾಯೋಜನೆ ಬದಲಾವಣೆಯ ಬಗ್ಗೆ ವಿಶೇಷ ಚರ್ಚೆ ನಡೆಯಲಿದೆ. ಅಧಿವೇಶನದ ನಂತರ ಆಯವ್ಯಯದ ಸಿದ್ಧತೆ ಪ್ರಾರಂಭಿಸಲಾಗುವುದು ಎಂದರು. ಜನವರಿ 22ರಿಂದ 31ರವರೆಗೆ ಬೆಂಗಳೂರಿನಲ್ಲಿ 'ಜಂಟಿ ಅಧಿವೇಶನ' ನಡೆಯಲಿದೆ. ಈ ಅಧಿವೇಶನದಲ್ಲಿ ಎಂಎನ್‌ಆರ್‌ಇಜಿಎ ಕುರಿತ ವಿಶೇಷ ಚರ್ಚೆ ನಡೆಯಲಿದೆ. ಅದೇ ಸಮಯದಲ್ಲಿ ರಾಜ್ಯಪಾಲರ ಭಾಷಣದ ಕುರಿತು ಚರ್ಚೆ ನಡೆಸಿ, ಅಧಿವೇಶನದ ನಂತರ ಆಯವ್ಯಯದ ಸಿದ್ಧತೆ ಪ್ರಾರಂಭಿಸಲಾಗುವುದು ಎಂದು ಹೇಳಿದರು.

# ಸಂಘಟನಾ ಚತುರ ರಾಮ್ ಮಾಧವ್‌ಗೆ ಉಸ್ತುವಾರಿ

### ಜೂನ್ 30ರೊಳಗೆ ಜಿಬಿಎ ಚುನಾವಣೆ ನಡೆಸಲು ಸುಪ್ರೀಂ ಕೋರ್ಟ್ ಆದೇಶ

• ಉದಯವಾಹಿನಿ, ಬೆಂಗಳೂರು

**ಚುನಾವಣೆಗೆ ಬಿಜೆಪಿ ಕಾರ್ಯತಂತ್ರ**

ಗ್ರೇಟರ್ ಬೆಂಗಳೂರು ಪಾಲಿಕೆ ಚುನಾವಣೆಗೆ ಬಿಜೆಪಿ ಸಜ್ಜಾಗುತ್ತಿದೆ. ಐದು ಪಾಲಿಕೆಗಳನ್ನು ಗೆದ್ದುಕೊಳ್ಳುವ ನಿಟ್ಟಿನಲ್ಲಿ ಬಿಜೆಪಿ ಪಾಳಯ ಈಗಾಗಲೇ ಸಕಲ ಸಿದ್ದತೆ ಕೈಗೊಂಡಿದೆ. ಈ ನಿಟ್ಟಿನಲ್ಲಿ ಸಂಘಟನಾ ಚತುರತೆ ಹೊಂದಿರುವ ರಾಮ್ ಮಾಧವ್ ಅವರನ್ನು ಉಸ್ತುವಾರಿ ಆಗಿ ನೇಮಕ ಮಾಡಿದೆ. ರಾಮ್ ಮಾಧವ್ ಅವರು ಆರ್‌ಎಸ್‌ಎಸ್ ಹಿನ್ನೆಲೆಯಿಂದ ಬಂದವರು. ಬಿಜೆಪಿಯ ಸಂಘಟನೆಯಲ್ಲೂ ಹಿಡಿತ ಹೊಂದಿದವರು. ಗ್ರೇಟರ್ ಬೆಂಗಳೂರು ಚುನಾವಣೆಯನ್ನು ಗಂಭೀರವಾಗಿ ಬಿಜೆಪಿ ಪಕ್ಷದ ರಾಷ್ಟ್ರೀಯ ನಾಯಕರು ಪರಿಗಣಿಸಿದ್ದರಿಂದ ರಾಮ್ ಮಾಧವ್ ಅವರಿಗೆ ಉಸ್ತುವಾರಿ ನೀಡಲಾಗಿದೆ.

ರಾಮ್ ಮಾಧವ್ ಬಿಜೆಪಿ ಪಕ್ಷದ ಚುನಾವಣಾ ಕಾರ್ಯತಂತ್ರದಲ್ಲಿ ಪ್ರಮುಖ ಪಾತ್ರ ನಿರ್ವಹಣೆ ಮಾಡುತ್ತಾ ಬಂದಿದ್ದಾರೆ. ಈ ಹಿಂದೆ ಜಮ್ಮು ಕಾಶ್ಮೀರ ಚುನಾವಣೆಯ ಜವಾಬ್ದಾರಿ ಅವರಿಗೆ ನೀಡಲಾಗಿತ್ತು. ಇದನ್ನು ಸೂಕ್ತ ರೀತಿಯಲ್ಲಿ ನಿಭಾಯಿಸಿದ್ದರು. ಇನ್ನು 2018 ರ ಕರ್ನಾಟಕ ವಿಧಾನಸಭೆ ಚುನಾವಣೆಯ ಜವಾಬ್ದಾರಿಯನ್ನು ರಾಮ್ ಮಾಧವ್ ನಿರ್ವಹಣೆ ಮಾಡಿದ್ದರು. ಸದ್ಯ ರಾಜ್ಯ ಸರ್ಕಾರದ ವೈಫಲ್ಯ, ಬೆಂಗಳೂರು ಅಭಿವೃದ್ಧಿಯಲ್ಲಿ ಆಗಿರುವ ಹಿನ್ನಡೆ ಮುಂತಾದ ವಿಚಾರಗಳನ್ನು ಮುಂದಿಟ್ಟುಕೊಂಡು ಚುನಾವಣೆ ಎದುರಿಸಲು ಬಿಜೆಪಿ ಮುಂದಾಗಿದೆ. ಈ ನಿಟ್ಟಿನಲ್ಲಿ ರಾಮ್ ಮಾಧವ್ ಸಂಘಟನಾ ಚತುರತೆ ಎಷ್ಟರ ಮಟ್ಟಿಗೆ ಲಾಭ ಆಗಲಿದೆ ಕಾದು ನೋಡಬೇಕಾಗಿದೆ.


### ಇಬ್ಬರಿಗೆ ಸಹ ಉಸ್ತುವಾರಿ

**ಬಿಜೆಪಿ ಚುನಾವಣೆಗೆ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ರಾಮ್ ಮಾಧವ್ ಅವರಿಗೆ ಉಸ್ತುವಾರಿ ಜವಾಬ್ದಾರಿ ನೀಡಿದರೆ ಸಹ-ಉಸ್ತುವಾರಿಗಳಾಗಿ ರಾಜಸ್ಥಾನ ಬಿಜೆಪಿಯ ಸತೀಶ್ ಪೂನಿಯಾ ಹಾಗೂ ಮಹಾರಾಷ್ಟ್ರದ ಬಿಜೆಪಿ ಶಾಸಕ ಸಂಜಯ್ ಉಪಾಧ್ಯಾಯ ಅವರನ್ನು ನೇಮಕ ಮಾಡಲಾಗಿದೆ.**

### ಕಾರ್ಯತಂತ್ರ ಶುರು!

**ಗ್ರೇಟರ್ ಬೆಂಗಳೂರು ಚುನಾವಣೆ ನಡೆಸುವಂತೆ ಸುಪ್ರೀಂಕೋರ್ಟ್ ನಿರ್ದೇಶನ ನೀಡಿತ್ತು. ಹೀಗಾಗಿ ಕಾಲ ಮಿತಿಯಲ್ಲಿ ಚುನಾವಣೆ ನಡೆಸುವುದಾಗಿ ಸರ್ಕಾರ ತಿಳಿಸಿದೆ. ಹೀಗಾಗಿ ಸಿದ್ದತೆ ಶುರುವಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಐದು ಪಾಲಿಕೆಗಳನ್ನು ಗೆಲ್ಲಲು ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಸಾಧ್ಯತೆ ದಟ್ಟವಾಗಿದೆ. ಇನ್ನು ಕಾಂಗ್ರೇಸ್ ಪಾಲಿಗೂ ಇದು ಸವಾಲಿನ ಸಂಗತಿಯಾಗಿದೆ.**

**ಸಿಟಿ ರವಿ ಟ್ವೀಟ್:** ಬೆಂಗಳೂರಿನ ನಾಗರಿಕರು ಶಿಕ್ಷಿತರು, ಪ್ರಜ್ಞಾವಂತರು ಎನ್ನುವುದು ಸುಸ್ಪಷ್ಟ. ಕರ್ನಾಟಕ ಕಾಂಗ್ರೆಸ್ ಸರ್ಕಾರದ ಅಕ್ರಮ, ಭ್ರಷ್ಟಾಚಾರಗಳನ್ನು ಕಳೆದ ಎರಡೂವರೆ ವರ್ಷಗಳಿಂದ ಜನರು ನೋಡಿ, ರೋಸಿಹೋಗಿದ್ದಾರೆ. ಈಗ ಜಿಬಿಎ ಚುನಾವಣೆಯಲ್ಲಿ ಅಕ್ರಮ ನಡೆಸುವ ಸಲುವಾಗಿ ರಾಜ್ಯ ಸರ್ಕಾರ ಇವಿಎಂ ಬದಲು ಬ್ಯಾಲೆಟ್ ಪೇಪರ್ ಬಳಕೆಗೆ ಮುಂದಾಗಿದ್ದು, ಪ್ರಜ್ಞಾವಂತ ನಾಗರಿಕರು ಇದನ್ನು ಸ್ಪಷ್ಟವಾಗಿ ನಿರಾಕರಿಸಿದ್ದಾರೆ. ರಾಜ್ಯವನ್ನು ದಶಕಗಳ ಕಾಲ ಹಿಂದೆ ತಳ್ಳುವ ಕಾಂಗ್ರೆಸ್ ಯೋಜನೆಯನ್ನು ಜನರು ಒಪ್ಪಿಲ್ಲ. ಇವಿಎಂನಲ್ಲಿ ಮತ ಕಳವು ಮಾಡಲಾಗದು ಎನ್ನುವ ಕಾರಣಕ್ಕೆ ಕಾಂಗ್ರೆಸ್ ಬ್ಯಾಲೆಟ್ ಪೇಪರ್‌ಗೆ ಮಣೆ ಹಾಕಿರುವುದು ಎಲ್ಲರಿಗೂ ತಿಳಿದ ವಿಚಾರ ಎಂದು ಸಿಟಿ ರವಿ ಟ್ವೀಟ್ ಹಂಚಿಕೊಂಡಿದ್ದಾರೆ.



## ಎಸ್‌ಸಿ ಮೀಸಲು ಶೇ 18ಕ್ಕೆ ಏರಿಸಿ: ಕರ್ನಾಟಕ ಮೀಸಲಾತಿ ಸಂರಕ್ಷಣಾ ಒಕ್ಕೂಟ ಆಗ್ರಹ

• ಉದಯವಾಹಿನಿ, ಬೆಂಗಳೂರು

ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವರ್ಗೀಕರಣದಲ್ಲಿ ಬಂಜಾರ, ಭೋವಿ, ಕೊರಮ, ಕೊರಚ ಮತ್ತು ಅಲೆಮಾರಿ ಸಮುದಾಯಗಳಿಗೆ ಆಗಿರುವ ಅನ್ಯಾಯ ಸರಿಪಡಿಸಲು ಮೀಸಲಾತಿ ಪ್ರಮಾಣವನ್ನು ಶೇ 18ಕ್ಕೆ ಏರಿಸಬೇಕು ಎಂದು ಕರ್ನಾಟಕ ಮೀಸಲಾತಿ ಸಂರಕ್ಷಣಾ ಒಕ್ಕೂಟ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅವರಿಗೆ ಮನವಿ ಸಲ್ಲಿಸಿದೆ.

ಎಚ್.ಎನ್.ನಾಗಮೋಹನ್ ದಾಸ್ ಆಯೋಗ ನೀಡಿರುವ ವರದಿಯಂತೆ ರಾಜ್ಯ ಸರ್ಕಾರವು ಪರಿಶಿಷ್ಟ ಜಾತಿಗಳಲ್ಲಿ ಪ್ರವರ್ಗಗಳನ್ನು ಮಾಡಿ ಮೀಸಲಾತಿ ಹಂಚಲು ಮಾನದಂಡ ಅನುಸರಿಸಿಲ್ಲ. ಸುಪ್ರೀಂ ಕೋರ್ಟ್‌ನ ಮಾರ್ಗಸೂಚಿಗೆ ವ್ಯತಿರಿಕ್ತವಾಗಿ ಸರ್ಕಾರಿ ಆದೇಶದ ಮೂಲಕ ಕಾನೂನಿನ ರೂಪ ನೀಡಲು ಹೊರಟಿರುವುದಕ್ಕೆ ನಮ್ಮ ವಿರೋಧವಿದೆ ಎಂದು ರಾಜ್ಯಪಾಲರಿಗೆ ಸಲ್ಲಿಸಿರುವ ಮನವಿಯಲ್ಲಿ ತಿಳಿಸಲಾಗಿದೆ.


ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ನೇತೃತ್ವದಲ್ಲಿ ವಿಧಾನಸಭೆ ಉಪ ಸಭಾಪತಿ ರುದ್ರಪ್ಪ ಲಮಾಣಿ, ಮಾಜಿ ಸಚಿವರಾದ ಅರವಿಂದ ಲಿಂಬಾವಳಿ, ಬಿ. ಟಿ. ಲಲಿತಾ ನಾಯಕ್, ಮಾಜಿ ಸಂಸದ ಜನಾರ್ದನ ಸ್ವಾಮಿ, ಮಾಜಿ ಶಾಸಕರಾದ ಭೀಮಾ ನಾಯ್ಕ, ಬಸವರಾಜ್ ನಾಯ್ಕ, ಜಲಜಾ ನಾಯ್ಕ, ನಿವೃತ್ತ ಐಎಎಸ್ ಅಧಿಕಾರಿ ಮಂಜುನಾಥ ಪ್ರಸಾದ್, ವಕೀಲರಾದ ಶಂಕರಪ್ಪ, ಎನ್.ಅನಂತನಾಯ್ಕ ಉಪಸ್ಥಿತರಿದ್ದರು.

# ಅಕ್ರಮ ರೆಸಾರ್ಟ್, ಹೋಟೆಲ್ ತೆರವುಗೊಳಿಸಿ: ಹೊನ್ನಹಳ್ಳಿ ಪ್ರಕಾಶ್

• ಉದಯವಾಹಿನಿ, ಎಚ್.ಡಿ.ಕೋಟೆ

ರೈತರು, ದಲಿತ ಮತ್ತು ಕನ್ನಡಪರ ಸಂಘಟನೆಗಳು ಪರಿಸರವಾದಿಗಳು ಅರಣ್ಯ ಸಂರಕ್ಷಣೆಗಾಗಿ ಕಬಿನಿ ಉಳಿಸಿ ಹೆಸರಿನಲ್ಲಿ ತಾಲ್ಲೂಕು ಕಚೇರಿ ಮುಂದೆ ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸಿದರು.ರೈತ ಮುಖಂಡ ಹೊನ್ನಹಳ್ಳಿ ಪ್ರಕಾಶ್ ಮಾತನಾಡಿ, ಕಬಿನಿ ಹಿನ್ನೀರು, ನಾಗರಹೊಳೆ-ಬಂಡೀಪುರ ಅರಣ್ಯ ಬಫರ್ ವಲಯ ಮತ್ತು ಪರಿಸರ ಸೂಕ್ಷ್ಮ ವಲಯದ ವ್ಯಾಪ್ತಿಯಲ್ಲಿ ಬರುವ ಸ್ಥಳಗಳಲ್ಲಿ ಅಕ್ರಮ ರೆಸಾರ್ಟ್‌ಗಳು, ಹೋಟೆಲ್‌ಗಳು ಮತ್ತು ವಾಣಿಜ್ಯ ಕಟ್ಟಡಗಳು ತಲೆ ಎತ್ತಿವೆ ಎಂದು ಆರೋಪಿಸಿದರು.

ಅರಣ್ಯ ವ್ಯಾಪ್ತಿಯಲ್ಲಿ ಅಕ್ರಮವಾಗಿ ನಿರ್ಮಾಣಗೊಂಡಿರುವ ಎಲ್ಲಾ ರೆಸಾರ್ಟ್‌ಗಳು, ಬಾರ್, ಕ್ಲಬ್, ಹೋಟೆಲ್ ಹಾಗೂ ಇತರೆ ವಾಣಿಜ್ಯ ಚಟುವಟಿಕೆ ಕೇಂದ್ರಗಳನ್ನು ತಕ್ಷಣ ತೆರವುಗೊಳಿಸಬೇಕು.


ಉದಯವಾಹಿನಿ ಚಿತ್ರ

ಕೈಗೊಳ್ಳಲಾದ ಕ್ರಮಗಳ ಬಗ್ಗೆ ಪಾರದರ್ಶಕವಾಗಿ ಸಾರ್ವಜನಿಕರಿಗೆ ಮಾಹಿತಿ ನೀಡಬೇಕು' ಎಂದು ಒತ್ತಾಯಿಸಿದರು.

'ಅಕ್ರಮ ಕಟ್ಟಡಗಳು ಅರಣ್ಯ ಕಾಯ್ದೆ ಮತ್ತು ವನ್ಯಜೀವಿ ಸಂರಕ್ಷಣಾ ಕಾಯ್ದೆಯನ್ನು ಉಲ್ಲಂಘಿಸುತ್ತಿದ್ದು, ವನ್ಯಜೀವಿಗಳ ಮೇಲೆ ಪರಿಣಾಮ ಬೀರುತ್ತಿವೆ. ಸಾರ್ವಜನಿಕರು ಮತ್ತು ಸಂಘಟನೆಗಳು ತಾಲ್ಲೂಕು ಮತ್ತು ಜಿಲ್ಲಾಡಳಿತಕ್ಕೆ ಹಲವಾರು ಬಾರಿ ಮನವಿ ಸಲ್ಲಿಸಿವೆ. ಆದರೆ ಇಲ್ಲಿಯವರೆಗೆ ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಆದ್ದರಿಂದ, ಕಬಿನಿ ಹಿನ್ನೀರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿನ ಅಕ್ರಮ ಕಟ್ಟಡಗಳು ಮತ್ತು ರೆಸಾರ್ಟ್‌ಗಳನ್ನು ತೆರವುಗೊಳಿಸಬೇಕು' ಎಂದರು. 'ಪರಿಸರ ಸೂಕ್ಷ್ಮ ವಲಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಅರಣ್ಯ, ವನ್ಯಜೀವಿಗಳು ಮತ್ತು ಪರಿಸರವನ್ನು ರಕ್ಷಿಸಲು ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಅನಿರ್ದಿಷ್ಟಾವಧಿ ಪ್ರತಿಭಟನೆ ಆರಂಭಿಸಲಾಗಿದೆ' ಎಂದರು. 'ನಮ್ಮ ಹೋರಾಟ ಅಕ್ರಮ ರೆಸಾರ್ಟ್‌ಗಳ ವಿರುದ್ಧ ಮಾತ್ರ. ಈ ಹೋರಾಟ ಸಂವಿಧಾನಬದ್ಧ, ಶಾಂತಿಯುತ ಹಾಗೂ ಕಾನೂನು ಬದ್ಧವಾಗಿದ್ದು, ಸಾರ್ವಜನಿರಿಗೆ, ಸರ್ಕಾರಿ ಆಸ್ತಿಗೆ ಯಾವುದೇ ರೀತಿ ಧಕ್ಕೆ ಉಂಟಾಗದಂತೆ ಸಂಪೂರ್ಣ ಸಹಕಾರ ನೀಡುತ್ತೇವೆ' ಎಂದರು.

**ಅಕ್ರಮವಾಗಿ ನಿರ್ಮಾಣಗೊಂಡಿರುವ ಹೋಟೆಲ್‌ಗಳು, ಕ್ಲಬ್‌ಗಳು ಮತ್ತು ಇತರೆ ವಾಣಿಜ್ಯ ಕಟ್ಟಡಗಳು ಕಬಿನಿ ಪರಿಸರ ವ್ಯವಸ್ಥೆಗೆ ಬಾರಿ ಅಪಾಯವನ್ನುಂಟು ಮಾಡುತ್ತಿವೆ. ಈ ಅಕ್ರಮ ಚಟುವಟಿಕೆಗಳಿಂದ ವನ್ಯಜೀವಿಗಳ ಸಂಚಾರಕ್ಕೆ ತೀವ್ರ ಅಡ್ಡಿ ಉಂಟಾಗುತ್ತಿದೆ' ಎಂದರು. ರೈತ ಮುಖಂಡ ಮಂಜುಕಿರಣ್, ಕುಮಾರಸ್ವಾಮಿ, ದೇವೆಗೌಡ ಹಾಗೂ ಮುಖಂಡರು ಭಾಗವಹಿಸಿದ್ದರು.**

**-ವಕೀಲ ರವಿ ಕುಮಾರ್**

# ಗ್ರಾಮೀಣಾಭಿವೃದ್ಧಿಗೆ ವಿಶೇಷ ಅನುದಾನ: ಪರಂ

## ಗ್ರಾಮ ಪಂ. ನೂತನ ಕಟ್ಟಡ ನಿರ್ಮಾಣಕ್ಕೆ ಜಿ.ಪರಮೇಶ್ವರ ಭೂಮಿ ಪೂಜೆ ನರವೇರಿಸಿದರು

• ಉದಯವಾಹಿನಿ, ಕೊರಟಗೆರೆ

ತಾಲ್ಲೂಕಿನ ಗ್ರಾಮೀಣ ಅಭಿವೃದ್ಧಿ, ಮೂಲ ಸೌಕರ್ಯಗಳಿಗಾಗಿ ರೂ.50 ಕೋಟಿ ಮುಖ್ಯಮಂತ್ರಿ ವಿಶೇಷ ಅನುದಾನ ಬಳಸಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ ತಿಳಿಸಿದರು.ಹೊಳವನಹಳ್ಳಿ ಹೋಬಳಿ ಶಾಂತಲಿಂಗಯ್ಯನಪಾಳ್ಯ ರಸ್ತೆ ಉದ್ಘಾಟನೆ ಮತ್ತು ಬೊಮ್ಮಲದೇವಿಪುರ ಗ್ರಾಮ ಪಂಚಾಯಿತಿ ಕಟ್ಟಡ ಸೇರಿದಂತೆ ರೂ.1ಕೋಟಿ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ ಸಂದರ್ಭದಲ್ಲಿ ಮಾತನಾಡಿದರು.

ತಾಲ್ಲೂಕಿನ ಬಹುದಿನದ ಬೇಡಿಕೆಯಾಗಿದ್ದ ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಿ ನಿರ್ಮಾಣಕ್ಕೆ ಈಗಾಗಲೇ ಅಗತ್ಯ ಕ್ರಮ ತೆಗೆದುಕೊಳ್ಳಲಾಗಿದೆ. ರೂ. 32ಕೋಟಿ ವೆಚ್ಚದ ತಾಯಿ-ಮಕ್ಕಳ ಆಸ್ಪತ್ರೆ ನಿರ್ಮಾಣಕ್ಕೆ ಕ್ರಮ ತೆಗೆದುಕೊಳ್ಳಲಾಗಿದೆ. ತೋವಿನಕೆರೆ ಹೋಬಳಿ ಕೇಂದ್ರದಲ್ಲಿ ರೂ.36 ಕೋಟಿ ವೆಚ್ಚದ ಹೊಸ ಆಸ್ಪತ್ರೆ ನಿರ್ಮಾಣಕ್ಕೆ ಕ್ರಮ ತೆಗೆದುಕೊಳ್ಳಲಾಗಿದೆ. ಕೋಳಾಲ ಆಸ್ಪತ್ರೆಯನ್ನು ಮುಂದಿನ ದಿನಗಳಲ್ಲಿ ಮೇಲ್ದರ್ಜೆಗೆ ತಂದು ಅಭಿವೃದ್ಧಿಪಡಿಸಲಾಗುವುದು. ಮುಂದಿನ ದಿನಗಳಲ್ಲಿ ಮತ್ತಷ್ಟು ವಿಶೇಷ ಅನುದಾನ ತಂದು ಹೆಚ್ಚಿನ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುವುದು ಎಂದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೆಡಿಕಲ್ ಅಶ್ವತ್, ಅರಕೆರೆ ಶಂಕರ್, ಮಹಿಳಾ ಅಧ್ಯಕ್ಷೆ ಜಯಮ್ಮ, ಬಿ.ಡಿ.ಡಿಪುರ ಗ್ರಾ.ಪಂ.ಅಧ್ಯಕ್ಷ ಈಶ್ವರ್, ಕ್ಯಾಮೇನಹಳ್ಳಿ ಗ್ರಾ.ಪಂ. ಅಧ್ಯಕ್ಷೆ ಸೌಮ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ.ಅಶೋಕ್, ಮಧುಗಿರಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಶೀಲ್ದಾರ್ ಕೆ.ಮಂಜುನಾಥ್, ಇ.ಓ ಅಪೂರ್ವ, ಹಾಗೂ ಮುಖಂಡರಾದ ಎಲ್.ರಾಜಣ್ಣ, ಎಚ್. ಕೆ.ಮಹಾಲಿಂಗಪ್ಪ, ಕವಿತ, ಕೆ.ಆರ್.ಓಬಳರಾಜು, ಸುರೇಶ್, ನರಸರಾಜು, ವೆಂಕಟಾಚಲಯ್ಯ, ಮಂಜುನಾಥ್, ಸಿ.ರಾಮಯ್ಯ, ದೇವರಾಜು, ಜಯರಾಮು, ರವಿಕುಮಾರ್, ಹನುಮಂತರಾಜು ಇತರರು ಇದ್ದರು.


ಉದಯವಾಹಿನಿ ಚಿತ್ರ

**ಪುರಸಭೆಗೆ ಹೆಚ್ಚಿನ ಅನುದಾನ**

**ಕೊರಟಗೆರೆ ಪಟ್ಟಣ ಪಂಚಾಯಿತಿಯನ್ನು ಪುರಸಭೆ'ಗೆ ಮೇಲ್ದರ್ಜೆಗೆ ಏರಿಸಲಾಗಿದ್ದು, ಪಟ್ಟಣದ ಬೆಳವಣಿಗೆಗೆ ಸುತ್ತಮುತ್ತಲಿನ ಪ್ರದೇಶವನ್ನು ಸೇರಿಸಿಕೊಳ್ಳಲಾಗಿದೆ. ಪುರಸಭೆಗೆ ಹೆಚ್ಚಿನ ಅನುದಾನ ನೀಡಿ ಅಭಿವೃದ್ಧಿಗಾಗಿ ಶ್ರಮಿಸಲಾಗುವುದು. ಪಟ್ಟಣದ ಸುತ್ತಮುತ್ತಲಿನ ಪ್ರದೇಶದಲ್ಲಿ ವಾಸಯೋಗ್ಯ ನಿವೇಶನಗಳು ಮತ್ತು ಮೂಲ ಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.**

**ಕೊರಟಗೆರೆ:** ಕ್ಷೇತ್ರದ ಗ್ರಾಮೀಣ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯಕ್ಕಾಗಿ ರೂ. 50 ಕೋಟಿ ಮುಖ್ಯಮಂತ್ರಿಗಳ ವಿಶೇಷ ಅನುದಾನ ಬಳಸಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ ತಿಳಿಸಿದರು.

ತಾಲ್ಲೂಕಿನ ಹೊಳವನಹಳ್ಳಿ ಹೋಬಳಿ ಶಾಂತಲಿಂಗಯ್ಯನಪಾಳ್ಯ ರಸ್ತೆ ಉದ್ಘಾಟನೆ ಹಾಗೂ ಬೊಮ್ಮಲದೇವಿಪುರ ಗ್ರಾಮ ಪಂಚಾಯಿತಿ ಕಟ್ಟಡ ಸೇರಿದಂತೆ ರೂ. 1 ಕೋಟಿ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿ, ತಾಲ್ಲೂಕಿನ ಬಹುದಿಗಳ ಬೇಡಿಕೆಯಾಗಿದ್ದ ಸಾರ್ವಜನಿಕ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಿ ನಿರ್ಮಾಣಕ್ಕೆ ಈಗಾಗಲೇ ಅಗತ್ಯ ಕ್ರಮ ವಹಿಸಲಾಗಿದೆ. ಅದರ ಜೊತೆಯಲ್ಲಿ ರೂ. 32 ಕೋಟಿ ವೆಚ್ಚದಲ್ಲಿ ತಾಯಿ, ಮಕ್ಕಳ ಆಸ್ಪತ್ರೆ, ತೋವಿನಕೆರೆ ಹೋಬಳಿ ಕೇಂದ್ರದಲ್ಲಿ ರೂ. 36 ಕೋಟಿ ವೆಚ್ಚದ ನೂತನ ಆಸ್ಪತ್ರೆ ನಿರ್ಮಾಣಕ್ಕೆ ಕ್ರಮ ವಹಿಸಲಾಗಿದೆ. ಕೋಳಾಲ ಆಸ್ಪತ್ರೆಯನ್ನು ಮುಂದಿನ ದಿನಗಳಲ್ಲಿ ಮೇಲ್ದರ್ಜೆಗೆ ತಂದು ಅಭಿವೃದ್ಧಿ ಪಡಿಸಲಾಗುವುದು. ಮುಂದಿನ ದಿನದಲ್ಲಿ ಮತ್ತೆ ವಿಶೇಷ ಅನುದಾನ ತಂದು ಇನ್ನಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು. ಕೊರಟಗೆರೆ ಪಟ್ಟಣ ಪಂಚಾಯಿತಿಯನ್ನು 'ಪುರಸಭೆ'ಯನ್ನಾಗಿ ಮೇಲ್ದರ್ಜೆಗೆ ಏರಿಸಲಾಗಿದ್ದು, ಪಟ್ಟಣದ ಬೆಳವಣಿಗೆಗೆ ಸುತ್ತಮುತ್ತಲ ಒಳಪಡಿಲಾಗಿದೆ. ಪುರಸಭೆಗೆ ಹೆಚ್ಚಿನ ಅನುಧಾನ ತಮದು ಅಭಿವೃದ್ಧಿಗೆ ಶ್ರಮಿಸಲಾಗುವುದು. ಪಟ್ಟಣದ ಸುತ್ತಮುತ್ತಲಿನ ಪ್ರದೇಶದಲ್ಲಿ ವಾಸ ಸ್ಥಳಕ್ಕೆ ಅನುಕೂಲಕರವಾಗುವಂತೆ ಮೂಲಭೂತ ಸೌಲಭ್ಯಗಳಿಗೆ ಹೆಚ್ಚಿನ ಆದ್ಯತೆ ನೀಡಿ ಅಭಿವೃದ್ಧಿ ಪಡಿಸಲಾಗುವುದು ಎಂದರು.

## ವಿದ್ಯಾರ್ಥಿಗಳ ಮನೆಗೆ ಅಧಿಕಾರಿಗಳು ಭೇಟಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಾಸ್ತಿ

ವಾರ್ಷಿಕ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ತಯಾರಿ ನಡೆಸುತ್ತಿರುವ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪೂರ್ವ ಸಿದ್ಧತೆ ಕುರಿತು ತಾಲ್ಲೂಕು ಆಡಳಿತ ಅಧಿಕಾರಿಗಳು ಮಾಸ್ತಿ ಗ್ರಾಮದ ಮನೆ ಮನೆಗೆ ಭೇಟಿ ನೀಡಿ ಪರಿಶೀಲಿಸಿದರು.ಈ ವೇಳೆ ತಹಶೀಲ್ದಾರ್ ಎಂ.ವಿ.ರೂಪ ಮಾತನಾಡಿ, ಮಾಸ್ತಿ ಗ್ರಾಮದ ಕೆಪಿಎಸ್ ಶಾಲೆಯಲ್ಲಿ ಓದುತ್ತಿರುವ ಎಸ್‌ಎಸ್‌ಎಲ್‌ಸಿ ಮಕ್ಕಳ ಮನೆಗಳಿಗೆ ಭೇಟಿ ನೀಡಿ ಮಕ್ಕಳೊಂದಿಗೆ ಸಂವಾದ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ವಿದ್ಯಾರ್ಥಿಗಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸಿದರೆ ಮುಂದಿನ ಭವಿಷ್ಯ ಉಜ್ವಲವಾಗಿರುತ್ತದೆ ಎಂದು ಪೋಷಕರಿಗೆ ಕಿವಿಮಾತನ್ನು ಹೇಳಿದರು. ಕಾರ್ಯನಿರ್ವಾಹಕ ಅಧಿಕಾರಿ ವಿ.ಕೃಷ್ಣಪ್ಪ ಮಾತನಾಡಿ, ಮಕ್ಕಳಿಗೆ ಆಸ್ತಿ ಮಾಡಬೇಡಿ. ಮಕ್ಕಳನ್ನು ಆಸ್ತಿವಂತರನ್ನಾಗಿ ಮಾಡಿ ಎಂದು ಪೋಷಕರಿಗೆ ಹೇಳುವುದರ ಮೂಲಕ ಮಕ್ಕಳನ್ನು ಪರೀಕ್ಷೆಗೆ ತಯಾರಿ ನಡೆಸಿ ಎಂದು ಸೂಚನೆ ನೀಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಪಿ.ಕೆಂಪಯ್ಯ ಮಾತನಾಡಿ, ಶಿಕ್ಷಕರು ಕೊಟ್ಟಿರುವಂತಹ ಪಠ್ಯ ವಿಷಯವನ್ನು, ಮಾದರಿ ಪ್ರಶ್ನೆ ಪತ್ರಿಕೆಗಳನ್ನು ಕ್ರಮಬದ್ಧವಾಗಿ ಅಭ್ಯಾಸ ಮಾಡಿ. ಪ್ರತಿ ದಿನ ನಡೆಯುವ ವಿಶೇಷ ತರಗತಿಗಳಿಗೆ ಹಾಜರಾಗಿ ಶಿಕ್ಷಕರು ನೀಡುವಂತಹ ಅಭ್ಯಾಸ ಮಾಡುವಂತೆ ಸಲಹೆ ನೀಡಿದರು. ವಾರ್ಷಿಕ ಪರೀಕ್ಷೆಗೆ ಕೇವಲ 59 ದಿನಗಳು ಬಾಕಿ ಇದ್ದು, ಈ ದಿನಗಳನ್ನು ಸದ್ಬಳಕೆ ಮಾಡಿಕೊಳ್ಳಿ ಎಂದು ಮಕ್ಕಳಿಗೆ ತಿಳಿಸಿದರು. ಶಿಕ್ಷಣ ಇಲಾಖೆ ಸಮನ್ವಯಾಧಿಕಾರಿ ಟಿ.ವೆಂಕಟಸ್ವಾಮಿ, ಕೆಪಿಎಸ್ ಶಾಲೆಯ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ ಅಧ್ಯಕ್ಷ ಅಕ್ರಂಪಾಷ, ಎಸ್.ಎ.ವೆಂಕಟಪ್ಪ ಮತ್ತು ಶಿಕ್ಷಕರು ಹಾಜರಿದ್ದರು.

# ಶೆಟ್ಟಿಕೆರೆ ಗೇಟ್ ಬಳಿ ಅಡ್ಡಾದಿಡ್ಡಿ ಸಂಚಾರ

• ಉದಯವಾಹಿನಿ, ಚಿಕ್ಕನಾಯಕನಹಳ್ಳಿ

ಪಟ್ಟಣದ ಪ್ರಮುಖ ಸಾರಿಗೆ ಕೇಂದ್ರವಾದ ಶೆಟ್ಟಿಕೆರೆ ಗೇಟ್ ಬಳಿ ಸಂಚಾರ ಅಸ್ತವ್ಯಸ್ತದಿಂದ ಕೂಡಿದೆ.

ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ಸುರಕ್ಷತೆಗೆ ತೀವ್ರ ಅಪಾಯ ಎದುರಾಗಿದೆ. ಹುಳಿಯಾರು, ಕೆ.ಬಿ.ಕ್ರಾಸ್ ಮತ್ತು ತಿಪಟೂರು ದಿಕ್ಕು ಸಂಪರ್ಕಿಸುವ ಈ ವೃತ್ತದಲ್ಲಿ ದಿನನಿತ್ಯ ಸಾವಿರಾರು ವಾಹನಗಳು ಸಂಚರಿಸುತ್ತವೆ. ರಸ್ತೆ ಬದಿಯಲ್ಲಿರುವ ಸರ್ಕಾರಿ ಬಸ್ ನಿಲ್ದಾಣ ಮತ್ತು ಹತ್ತಿರದಲ್ಲಿರುವ ಶಾಲಾ-ಕಾಲೇಜುಗಳ ಸಾವಿರಾರು ವಿದ್ಯಾರ್ಥಿಗಳು ಈ ಮಾರ್ಗವನ್ನು ಅವಲಂಬಿಸಿದ್ದಾರೆ. ಆದರೆ, ವೈಜ್ಞಾನಿಕ ವೇಗ ನಿಯಂತ್ರಕ ಅಭಾವದಿಂದಾಗಿ ರಸ್ತೆ ದಾಟುವುದು ಪಾದಚಾರಿಗಳಿಗೆ ಜೀವಘಾತಕ ಸವಾಲಾಗಿದೆ. ಸಂಚಾರ ದಟ್ಟಣೆ ಮತ್ತು ಸಣ್ಣಪುಟ್ಟ ಅಪಘಾತಗಳಿಂದ ಬೇಸತ್ತ ನಿವಾಸಿಗಳು, ತಾವೇ ಹಳೆ ಟೈರ್ ತಂದು ವೃತ್ತಾಕಾರದಲ್ಲಿ ಜೋಡಿಸಿ ತಾತ್ಕಾಲಿಕ ವೇಗ ನಿಯಂತ್ರಣದ ವ್ಯವಸ್ಥೆ ಮಾಡಿದ್ದರು. ಆದರೆ, ಈ ವ್ಯವಸ್ಥೆಯನ್ನು ಅಧಿಕಾರಿಗಳು ತೆರವುಗೊಳಿಸಿದ್ದಾರೆ. ಟೈರ್‌ಗಳನ್ನು ತೆರವುಗೊಳಿಸಿದ ಅಧಿಕಾರಿಗಳು ವೈಜ್ಞಾನಿಕವಾಗಿ ಸ್ಪೀಡ್ ಬ್ರೇಕರ್ (ಹಂಪ್‌ಗಳನ್ನು) ಹಾಕದಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಎಸ್‌ಬಿಐ ಬ್ಯಾಂಕ್, ಸುತ್ತಲಿನ ಅಂಗಡಿಗಳಿಗೆ ಬರುವವರು ತಮ್ಮ ವಾಹನಗಳನ್ನು ರಸ್ತೆ ಮೇಲೆ ನಿಲ್ಲಿಸುವುದರಿಂದ ರಸ್ತೆ ಇನ್ನೂ ಕಿರಿದಾಗಿದೆ. ಇದು ದ್ವಿಚಕ್ರ ವಾಹನ ಸವಾರರು ತಿರುವು ತೆಗೆಯುವಾಗ ವೇಗವಾಗಿ ಬರುವ ಬಸ್ ಮತ್ತು ಲಾರಿಗಳಿಗೆ ಡಿಕ್ಕಿ ಹೊಡೆಯುವ ಅಪಾಯ ಹೆಚ್ಚಿಸಿದೆ. ರಾಷ್ಟ್ರೀಯ ಹೆದ್ದಾರಿ 150-ಎ ರಸ್ತೆ ಪಾದಚಾರಿ ಮಾರ್ಗ ವ್ಯಾಪಕವಾಗಿ ಒತ್ತುವರಿಗೆ ಒಳಗಾಗಿದೆ. ಸಾರ್ವಜನಿಕರು ಅನಿವಾರ್ಯವಾಗಿ ಪ್ರಾಣಾಪಾಯದ ನಡುವೆ ಮುಖ್ಯ ರಸ್ತೆಯಲ್ಲಿ ನಡೆಯಬೇಕಾಗಿದೆ. ಪಟ್ಟಣದಲ್ಲಿ ಈ ಹಿಂದೆ ಇದ್ದ ಜೀಬ್ರಾ ಕ್ರಾಸಿಂಗ್ ಈಗ ಅದೃಶ್ಯವಾಗಿದೆ. ರಸ್ತೆ ದಾಟಲು ಪಾದಚಾರಿಗಳಿಗೆ ಯಾವುದೇ ಸುರಕ್ಷಿತ ಮಾರ್ಗಗಳಿಲ್ಲ. ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಿ, ಇಲ್ಲಿನ ಅಸ್ತವ್ಯಸ್ತ ಸಂಚಾರ ನಿಯಂತ್ರಿಸಿ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳ ಜೀವ ರಕ್ಷಿಸಬೇಕು ಎಂದು ನಿವಾಸಿ ರಾಜೇಂದ್ರ, ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

# ನೂತನ ಸರ್ಕಾರಿ ಹೆಚ್ಚುವರಿ ಕೊಠಡಿಗಳ ಲೋಕಾರ್ಪಣೆ

• ಉದಯವಾಹಿನಿ, ಗುಂಡ್ಲುಪೇಟೆ

ಶಿಕ್ಷಣದ ಗುಣಮಟ್ಟದ ಸುಧಾರಣೆಗೆ ಹೆಚ್ಚಿನ ಒತ್ತು ನೀಡಲಾಗಿದ್ದು ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ಅಗತ್ಯ ಮೂಲ ಸೌಕರ್ಯಗಳನ್ನ ಒದಗಿಸುವ ನಿಟ್ಟಿನಲ್ಲಿ ಹೆಚ್ಚುವರಿ ಕೊಠಡಿಗಳನ್ನ ನಿರ್ಮಿಸಲಾಗಿದೆ ಎಂದು ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಹೇಳಿದರು. ತಾಲ್ಲೂಕಿನ ದೊಡ್ಡ ಹುಂಡಿ, ಹೊಸೂರು, ಕಗ್ಗಳ ಗ್ರಾಮದಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಗಳ ಹೆಚ್ಚುವರಿ ನೂತನ ಕಟ್ಟಡಗಳನ್ನ ಉದ್ಘಾಟಿಸಿ ಅವರು ಮಾತನಾಡಿದರು.

ಸಾಮಾಜಿಕ ಬದಲಾವಣೆಗೆ ಶಿಕ್ಷಣವಂತರಾಗುವ ಅಗತ್ಯತೆ ಇರುವುದರಿಂದ ಸರ್ಕಾರ ಶಿಕ್ಷಣಕ್ಕೆ ಹೆಚ್ಚು ಪ್ರಾಶಸ್ತ್ಯ ನೀಡುತ್ತಿದ್ದು ವಿದ್ಯಾರ್ಥಿಗಳು ಇದನ್ನ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಇತ್ತೀಚೆಗೆ ತಂದಿರುವ ಶೈಕ್ಷಣಿಕ ಬದಲಾವಣೆ ಹಾಗೂ ಶಾಲಾಭಿವೃದ್ಧಿ ಸಮಿತಿ ರಚನೆ, ಅಧಿಕಾರ ನಿರ್ವಹಣೆಯಿಂದ ಕೆಲಸಗಳು ನಿಗದಿತ ಅವಧಿಯಲ್ಲಿಯೇ ಗುಣಮಟ್ಟದಿಂದ ಪೂರ್ಣಗೊಳ್ಳುತ್ತಿವೆ. ಇದಕ್ಕೆ ಶಾಲಾಭಿವೃದ್ಧಿ ಸಮಿತಿ ಸದಸ್ಯರು ಮತ್ತು ಶಿಕ್ಷಕರ ಭಾಗವಹಿಸುವಿಕೆಯು ಪ್ರಮುಖವಾಗಿದೆ ಎಂದು ನುಡಿದರು.

**ಶಿಕ್ಷಣ ಗುಣಮಟ್ಟ ಸುಧಾರಣೆಗೆ ಒತ್ತು: ಎಚ್.ಎಂ.ಜಿ**


ಉದಯವಾಹಿನಿ ಚಿತ್ರ

## ನಿಮ್ಮ ಜೀವನವನ್ನು ಶುದ್ಧವಾಗಿ ಇಟ್ಟುಕೊಳ್ಳಿ: ಅಮೃತಾನಂದ ಮಹಾಸ್ವಾಮಿಗಳು

• ಉದಯವಾಹಿನಿ, ಕೊಲ್ಹಾರ

ವ್ಯಸನಗಳು ಕ್ಷಣಿಕ ಸುಖ ನೀಡಬಹುದು, ಆದರೆ ಜೀವನದ ಶಾಂತಿ, ಆರೋಗ್ಯ ಮತ್ತು ಗೌರವವನ್ನು ಕಸಿದುಕೊಳ್ಳುತ್ತವೆ. ದೇವರಲ್ಲಿ ಒಂದು ಸಂಕಲ್ಪ ಮಾಡಿ ಇಂದಿನಿಂದ ಮದ್ಯಪಾನ, ಧೂಮಪಾನ, ತಂಬಾಕು, ಗುಟ್ಕಾ, ಸಿಗರೇಟ ಸೇವನೆಯಂತಹ ದುಶ್ಚಟಗಳ ವ್ಯಸನವನ್ನು ತ್ಯಜಿಸಿ ಎಂದು ಬಾಲಗಾವ ಗುರುದೇವ ಆಶ್ರಮದ ಪರಮ ಪೂಜ್ಯ ಅಮೃತಾನಂದ ಮಹಾಸ್ವಾಮಿಗಳು ಹೇಳಿದರು.

ತಾಲ್ಲೂಕಿನ ಹಳ್ಳದಗೆಣ್ಣೂರ ಗ್ರಾಮದಲ್ಲಿ ನಡೆದ ಬೀರಲಿಂಗೇಶ್ವರ ಹಾಗೂ ಜಟ್ಟಿಂಗೇಶ್ವರ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದವರು, ನಿಮ್ಮ ಜೀವನವನ್ನು ಶುದ್ಧವಾಗಿ ಇಟ್ಟುಕೊಳ್ಳಿ ಹಾಗೆ ನಿಮ್ಮ ಗ್ರಾಮವನ್ನು ಸ್ವಚ್ಛವಾಗಿ ಇಡಿ ಎಂದರು.

ಕಸಾಪ ಗೌರವ ಕಾರ್ಯದರ್ಶಿಗಳಾದ ಮಾಧವ ಗುಡಿ, ಬನಹಟ್ಟಿಯ ನಿವೃತ್ತ ಉಪನ್ಯಾಸಕರಾದ ಎಸ್.ಎಂ. ಶೇಖ ಉಪನ್ಯಾಸ ನೀಡಿದರು.

ಸಾನಿಧ್ಯವನ್ನು ಗೂಳಪ್ಪ ಮುತ್ಯಾ ಪೂಜಾರಿ, ಕೊಲ್ಹಾರ ಪೊಲೀಸ ಠಾಣೆ ಪಿಎಸ್‌ಐ ಅಶೋಕ ನಾಯಕ್, ಸಿದ್ದೇಶ್ವರ ಕೋಚಿಂಗ್ ಕ್ಲಾಸಿಸ್ ಸುರೇಶ ಜತ್ತಿ, ಶಿಕ್ಷಕರಾದ ಮೆಹತಾಬ ಕಾಗವಾಡ, ಸಿದ್ದು ಪೂಜಾರಿ ಹಾಗೂ ಅಮೋಗಿ ಚೌಡಕಿ ಮತ್ತು ಸುತ್ತ ಮುತ್ತಲಿನ ಭಕ್ತಾದಿಗಳು ಪಾಲ್ಗೊಂಡಿದ್ದರು. ಮಹ್ಮದಗೌಸ್ ಹವಾಲ್ದಾರ ಸ್ವಾಗತಿಸಿದರು. ಶ್ರೀಕಾಂತ ಪಾರಗೊಂಡ ಕಾರ್ಯಕ್ರಮ ನಿರ್ವಹಿಸಿದರು.

**ಜಟ್ಟಿಂಗೇಶ್ವರ ಜಾತ್ರಾ ಮಹೋತ್ಸವ**


ಉದಯವಾಹಿನಿ ಚಿತ್ರ

**ನಮ್ಮ ಬದುಕಿನಲ್ಲಿ ನಾವು ಯಾರಿಗೂ ಕೆಟ್ಟದನ್ನು ಮಾಡದೆ ಸಮಾಜದಲ್ಲಿ ನೆರೆಹೊರೆಯವರ ಜೊತೆ ಚೆನ್ನಾಗಿ ಇರಬೇಕು ಅಂದಾಗ ಮಾತ್ರ ನಮ್ಮ ಬದುಕು ಸುಂದರವಾಗುತ್ತದೆ. ಮದ್ಯಪಾನ ಧೂಮಪಾನ ದುಶ್ಚಟಗಳಿಗೆ ಬಲಿಯಾಗಿ ಸಾಕಷ್ಟು ಕುಟುಂಬಗಳು ಬೀದಿಗೆ ಬಂದಿರುವುದನ್ನು ನಾವು ನೋಡಿದ್ದೇವೆ ಪ್ರತಿಯೊಬ್ಬರು ದುಶ್ಚಟಗಳಿಂದ ದೂರವಿದ್ದು ಪ್ರತಿಯೊಬ್ಬ ವ್ಯಕ್ತಿಯೂ ಕುಟುಂಬದಲ್ಲಿ ದುಡಿಯಬೇಕು ಅಂದಾಗ ಮಾತ್ರ ಕುಟುಂಬ ಆರ್ಥಿಕವಾಗಿ ಬಲಿಷ್ಠವಾಗಲು ಸಾಧ್ಯ ದುಡಿಯದೆ ಸೋಮಾರಿಗಳಾದರೆ ಬಡತನ ಪ್ರಾರಂಭವಾಗುತ್ತದೆ ಎಂದರು.**

**ಅಕಾಡೆಮಿಯ ಸಂಸ್ಥಾಪಕ ಅಧ್ಯಕ್ಷರಾದ ಎನ್.ಎಂ. ಬಿರಾದಾರ**

# ಗ್ರಾಮೀಣ ಮಕ್ಕಳಿಗೆ ಪ್ರೋತ್ಸಾಹ ಅಗತ್ಯ

• ಉದಯವಾಹಿನಿ, ಪಾಂಡವಪುರ

ಪ್ರತಿಭಾವಂತರಾಗಿರುವ ಗ್ರಾಮೀಣ ಮಕ್ಕಳಿಗೆ ಪ್ರೋತ್ಸಾಹ ನೀಡಿದರೆ ಏನನ್ನಾದರೂ ಸಾಧಿಸುತ್ತಾರೆ ಎಂದು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಹೇಳಿದರು.

ಪಟ್ಟಣದ ಆದಿಚುಂಚನಗಿರಿ ಟ್ರಸ್ಟ್‌ನ ಬಿಜಿಎಸ್ ಶಾಲೆಯಲ್ಲಿ ಬಾಲಗಂಗಾಧರನಾಥ ಸ್ವಾಮಿಗಳ 82ನೇ ಜಯಂತ್ಯುತ್ಸವ ಹಾಗೂ 13ನೇ ಪುಣ್ಯ ಸಂಸ್ಮರಣೋತ್ಸವ ಮತ್ತು ಬಿಜಿಎಸ್ ಶಾಲಾ ಕಾಲೇಜುಗಳ ವಾರ್ಷಿಕೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮಕ್ಕಳ ಆಸಕ್ತಿಕ್ಕನುಗುಣವಾಗಿ ಕಲಿಕೆಯನ್ನು ಪ್ರೋತ್ಸಾಹಿಸಿ ಬೆಳೆಸಬೇಕಿದೆ. ಮಕ್ಕಳಿಗೆ ಯಾವುದೇ ಒತ್ತಡ ಹೇರಬೇಡಿ' ಎಂದರು.

ಶಾಲೆಯ ಜ್ಞಾನಸಿರಿ ಸಂಚಿಕೆ ಬಿಡುಗಡೆಗೊಳಿಸಿದ ಚಲನಚಿತ್ರ ನಿರ್ದೇಶಕ ಟಿ.ಎಸ್.ನಾಗಭರಣ ಮಾತನಾಡಿ, ಮನುಷ್ಯನ ಭಾವನಾತ್ಮಕ ಸಂಬಂಧಗಳು ಕೆಟ್ಟು ಹೋಗುತ್ತಿವೆ. ಈ ಸಂಬಂಧಗಳನ್ನು ಮೊಬೈಲ್ ಫೋನ್ ಕಿತ್ತು ಹಾಕುತ್ತಿದೆ. ದೊಡ್ಡವರ ಹಾದಿ ಹಿಡಿದಿರುವ ಮಕ್ಕಳು ಕೂಡ ಮೊಬೈಲ್ ಫೋನಿಗೆ ಬಲಿಯಾಗುತ್ತಿದ್ದಾರೆ. ಪುಸ್ತಕ ಓದುವುದನ್ನು ಬಿಟ್ಟು ಮೊಬೈಲ್ ಫೋನ್ ಹಿಡಿದು ಓದುವ ಸಂಸ್ಕೃತಿಗೆ ದಾಸರಾಗುತ್ತಿರುವುದು ಬೇಸರದ ಸಂಗತಿ ಎಂದರು.


ಉದಯವಾಹಿನಿ ಚಿತ್ರ

## ಮಿನಿ ನ್ಯೂಸ್

### ಗುರುವನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯ: ಪುಟ್ಟಸ್ವಾಮಿಗೌಡ

• ಉದಯವಾಹಿನಿ, ಚನ್ನಪಟ್ಟಣ

ಶಿಕ್ಷಕರ ವೃತ್ತಿ ಅತ್ಯಂತ ಪವಿತ್ರವಾದದ್ದು. ಸ್ವಸ್ಥ ಸಮಾಜ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ನಿರ್ಣಾಯಕ. ಕತ್ತಲೆ ಕಳೆದು ಸುಜ್ಞಾನದ ಬೆಳಕು ಮೂಡಿಸುವ ಗುರುಗಳನ್ನು ಸದಾ ಸ್ಮರಿಸಿ, ಗೌರವಿಸುವುದು ಎಲ್ಲರ ಕರ್ತವ್ಯ ಎಂದು ಭಾರತ ವಿಕಾಸ್ ಪರಿಷತ್ ಅಧ್ಯಕ್ಷ ಪುಟ್ಟಸ್ವಾಮಿಗೌಡ ಅಭಿಪ್ರಾಯಪಟ್ಟರು.ತಾಲ್ಲೂಕಿನ ಮಂಕುಂದ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಭಾರತ ವಿಕಾಸ್ ಪರಿಷತ್ ಕಣ್ವ ಶಾಖೆ ವತಿಯಿಂದ ಹಮ್ಮಿಕೊಂಡಿದ್ದ ಗುರುವಂದನೆ ಹಾಗೂ ವಿದ್ಯಾರ್ಥಿಗಳ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದರು. ಶಿಕ್ಷಕ ಆನಂದ್ ಅವರನ್ನು ಸತ್ಕರಿಸಲಾಯಿತು. ಭಾವಿಪ ಕಣ್ವ ಶಾಖೆಯ ಮಾಜಿ ಅಧ್ಯಕ್ಷ ವಸಂತಕುಮಾರ್ ಮಾತನಾಡಿದರು. ಭಾವಿಪ ಪ್ರಾಂತ ಉಪಾಧ್ಯಕ್ಷ ಗುರುಮಾದಯ್ಯ, ಭಾವಿಪ ಕಾರ್ಯದರ್ಶಿ ಯೋಗೇಶ್ ಚಕ್ಕೆರೆ, ದಕ್ಷಿಣ ಪ್ರಾಂತ್ಯ ಗುರುವಂದನಾ ಕಾರ್ಯಕ್ರಮದ ಸಂಚಾಲಕ ಬೆಸ್ಕಾಂ ಶಿವಲಿಂಗಯ್ಯ, ಖಜಾಂಚಿ ವಿ.ಟಿ.ರಮೇಶ್, ಉಪಾಧ್ಯಕ್ಷ ಕರಿಯಪ್ಪ, ಪದಾಧಿಕಾರಿಗಳಾದ ಕೃಷ್ಣಕುಮಾರ್, ಟಿ.ಎನ್.ದೇವರಾಜು, ಮಂಕುಂದ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕಿ ಶೋಭಾ, ಎಸ್ ಡಿಎಂಸಿ ಅಧ್ಯಕ್ಷ ಬೀರಯ್ಯ, ಉಪಾಧ್ಯಕ್ಷೆ ಹರ್ಷಿತಾ ಭಾಗವಹಿಸಿದ್ದರು.

### ಎಲ್ಲಾ ಮಕ್ಕಳಿಗೂ ಶಿಕ್ಷಣ, ಸಂಸ್ಕಾರ ನೀಡಿ: ಎಂ.ಬಿ. ಶಿವಾನಂದ್

• ಉದಯವಾಹಿನಿ, ಮಾಗಡಿ


ಪಟ್ಟಣದ ಅರಳೆಪೇಟೆಯ ಬಸವೇಶ್ವರ ದೇವಸ್ಥಾನದಲ್ಲಿ ನಡೆದ ಸಮಾರಂಭದಲ್ಲಿ ಮಾಗಡಿ ಟೌನ್ ವೀರಶೈವ ಮಂಡಳಿ ನೂತನ ಅಧ್ಯಕ್ಷರಾಗಿ ಎಂ.ಬಿ. ಶಿವಾನಂದ್ ಅವರನ್ನು ಆಯ್ಕೆ ಮಾಡಲಾಯಿತು. ಜಗದೇವರ ಮಠದ ಇಮ್ಮಡಿ ಬಸವರಾಜ ಸ್ವಾಮೀಜಿ ನೂತನ ಅಧ್ಯಕ್ಷ ಶಿವಾನಂದ್ ಅವರನ್ನು ಸನ್ಮಾನಿಸಿ, ಬಸವಣ್ಣನವರ ತತ್ವ ಆದರ್ಶಗಳನ್ನು ಪಾಲನೆ ಮಾಡುವಂತೆ ಸಲಹೆ ಮಾಡಿದರು. ಸಮಾಜದ ಪ್ರತಿಯೊಬ್ಬರನ್ನೂ ಮುಖ್ಯವಾಹಿನಿಗೆ ತರುವ ಕೆಲಸವನ್ನು ಮಾಡಬೇಕು. ಸಮಾಜದ ಎಲ್ಲಾ ಮಕ್ಕಳಿಗೂ ಶಿಕ್ಷಣ, ಸಂಸ್ಕಾರ ನೀಡಿ, ಉನ್ನತ ಉದ್ಯೋಗ ಕೊಡಿಸಬೇಕು ಎಂದು ಸಲಹೆ ಮಾಡಿದರು.

ಉಮಾ ಮಹೇಶ್, ಪ್ರಕಾಶ್, ನಟರಾಜ್, ಜಗದೀಶ್, ರೇಣುಕಾರಾಧ್ಯ, ರವಿ, ಮಹಾಂತೇಶ್, ಮಧು, ಪೊಲೀಸ್ ವಿಜಯ್ ಕುಮಾರ್ ಮತ್ತು ಅಕ್ಕನ ಬಳಗದ ಸದಸ್ಯರು ಹಾಗೂ ವಿನಾಯಕ ಬಳಗದ ಸದಸ್ಯರು ಭಾಗವಹಿಸಿದ್ದರು.

### ಸುಂದರಪಾಳ್ಯದಲ್ಲಿ ಹಿಂದೂ ಸಮಾಜೋತ್ಸವ ಕಾರ್ಯಕ್ರಮ

• ಉದಯವಾಹಿನಿ, ಬೇತಮಂಗಲ

ಸಮೀಪದ ಸುಂದರಪಾಳ್ಯ ಗ್ರಾಮದಲ್ಲಿ ಆರ್‌ಎಸ್‌ಎಸ್ ವತಿಯಿಂದ ಆಯೋಜಿಸಿದ್ದ ಹಿಂದೂ ಸಮಾಜೋತ್ಸವ ಕಾರ್ಯಕ್ರಮ ನಡೆಯಿತು. ಈ ವೇಳೆ ಮಾಜಿ ಸಂಸದ ಎಸ್.ಮುನಿಸ್ವಾಮಿ ಮಾತನಾಡಿ, ಸನಾತನ ಹಿಂದೂ ಧರ್ಮ ಯಾವುದೇ ಮತ ಮತ್ತು ಪಂಗಡಗಳಿಗೆ ಸೀಮಿತವಲ್ಲ. ಆರ್‌ಎಸ್‌ಎಸ್ ಜಾತಿ ಹೆಸರಿನಲ್ಲಿ ಸಮಾಜವನ್ನು ಒಡೆಯುತ್ತಿಲ್ಲ ಎಂದರು. ಪ್ರಸ್ತುತ ಜಾತ್ಯತೀತ ಹೆಸರಿನಲ್ಲಿ ಧರ್ಮ ಬೇಡ ಎಂಬ ಅಭಿಪ್ರಾಯಗಳು ಕೇಳಿ ಬರುತ್ತಿವೆ. ಆದರೆ, ಅವು ಶಾಶ್ವತವಲ್ಲ. ಧರ್ಮ ಆಧಾರದ ಮೇಲೆ ನಡೆಯುವ ಸಂಘಟನೆಗೆ ಸಾರ್ವಜನಿಕರ ಬೆಂಬಲ ಸದಾ ಇರುತ್ತದೆ ಎಂದು ಹೇಳಿದರು. ಮಾಜಿ ಶಾಸಕ ವೈ.ಸಂಪಂಗಿ ಮಾತನಾಡಿ, ಸಂಘಟನೆ ಹೆಸರಿನಲ್ಲಿ ಧರ್ಮದ ರಕ್ಷಣೆ ಮಾಡುವುದು ಇಂದಿನ ತುರ್ತು. ಇದಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು. ಹಿಂದೂ ಸಮಾಜೋತ್ಸವದ ಅಂಗವಾಗಿ ನಗರ ಕೇಸರಿಮಯವಾಗಿತ್ತು. ವೆಂಕಟಾಚಲಪತಿ, ಆಂಧ್ರಪ್ರದೇಶ ಭರತ್, ಜಯ ಪ್ರಕಾಶನಾಯ್ಡು, ಮೋಹನ್ ಕೃಷ್ಣ, ಲಕ್ಷ್ಮಿನಾರಾಯಣ, ನವೀನ್ ರಾಮ್, ಚಂದ್ರಕುಮಾರ್, ಸುನೀಲ್ ಕುಮಾರ್, ಹನುಮಂತಪ್ಪ, ಮಲ್ಲಹಳ್ಳಿ ವೆಂಕಟಾಚಲಪತಿ, ಮಂಜುನಾಥ್, ಉದಯಕುಮಾರ್ ಹಾಗೂ ಇತರರು ಇದ್ದರು.



# ಡಾ.ಶಿವಕುಮಾರ ಸ್ವಾಮೀಜಿಯವರ ಪ್ರಸ್ತುತತೆ ಮತ್ತಷ್ಟು ಗಟ್ಟಿಯಾಗಿದೆ

## ಪರಮಪೂಜ್ಯ ಡಾ ಶ್ರೀ ಶ್ರೀ ಶಿವಕುಮಾರಮಹಾಶಿವಯೋಗಿಗಳವರ 7ನೇ ವರ್ಷದ ಪುಣ್ಯ ಸಂಸ್ಮರಣೋತ್ಸವ

• ಉದಯವಾಹಿನಿ, ತುಮಕೂರು

ಸಿದ್ಧಗಂಗಾ ಮಠದ ಲಿಂಗೈಕ್ಯ ಡಾ. ಶ್ರೀ ಶಿವಕುಮಾರ ಸ್ವಾಮೀಜಿಯವರ 7ನೇ ವರ್ಷದ ಪುಣ್ಯ ಸಂಸ್ಮರಣೋತ್ಸವ ಸಿದ್ಧಗಂಗಾ ಮಠದಲ್ಲಿ ನಡೆಯಿತು. ಉಪ ರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕಾರ್ಯಕ್ರಮ ಉದ್ಘಾಟಿಸಿದರು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಧ್ಯಕ್ಷತೆ ವಹಿಸಿದ್ದರು. ಸಿದ್ಧಗಂಗಾ ಮಠಾಧ್ಯಕ್ಷರಾದ ಸಿದ್ಧಲಿಂಗ ಸ್ವಾಮೀಜಿಯವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಧುಸೂದನ ಸಾಯಿ ಗ್ಲೋಬಲ್ ಹ್ಯುಮಾನಿಟೇರಿಯನ್ ಮಿಷನ್ ಸಂಸ್ಥಾಪಕ, ಸತ್ಯಸಾಯಿ ಲೋಕ ಸೇವಾ ಗುರುಕುಲಂನ ಮುಖ್ಯ ಮಾರ್ಗದರ್ಶಕ ಸದ್ಗುರು ಶ್ರೀ ಮಧುಸೂದನ ಸಾಯಿ ಹಾಗೂ ಸಿದ್ಧಗಂಗಾಮಠದ ಉತ್ತರಾಧಿಕಾರಿ ಶಿವಸಿದ್ಧೇಶ್ವರ ಸ್ವಾಮೀಜಿ, ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಇಲಾಖೆ ಸಹಾಯಕ ಸಚಿವ ವಿ.ಸೋಮಣ್ಣ ಉಪಸ್ಥಿತರಿದ್ದರು.

ಸಿದ್ದಗಂಗಾ ಸ್ವಾಮೀಜಿಗಳ ಆದರ್ಶ ಪ್ರಜ್ವಲಿಸುವ ನಂದಾದೀಪ ಉಪರಾಷ್ಟ್ರಪತಿ ಸಿ.ಪಿ.ರಾಮಕೃಷ್ಣನ್ ಮಾತನಾಡಿ, ಇಂದಿನ ದಿನ ಸಮೂಹ ಸ್ಮರಣೆಯ ಪವಿತ್ರ ಕ್ಷಣವಾಗಿದೆ. ನಾವು ಇಲ್ಲಿ ಶಿವಕುಮಾರ ಸ್ವಾಮಿಗಳ ಪುಣ್ಯಸ್ಮರಣೆ ಆಚರಿಸಲು ಸೇರಿದ್ದೇವೆ. ಅವರ ಜೀವನ ದಯೆ, ತ್ಯಾಗದ ಸಂದೇಶವಾಗಿದೆ. ಸ್ವಾಮೀಜಿಯವರು ಅಗಲಿ 7 ವರ್ಷ ಆಗಿದೆ ಆದರೆ ಅವರ ಸಾನಿಧ್ಯ ಕಡಿಮೆಯಾಗಿಲ್ಲ, ಪ್ರಸ್ತುತತೆ ಮತ್ತಷ್ಟು ಗಟ್ಟಿಯಾಗಿದೆ. ಅನಿಶ್ಚಿತತೆ, ಪ್ರಶಾಂತ ಆಸೆಗಳ ಯುಗದಲ್ಲಿ ಸ್ವಾಮೀಜಿಗಳ ಆದರ್ಶ ಪ್ರಜ್ವಲಿಸುವ ನಂದಾದೀಪವಾಗಿದೆ. ಸಿದ್ದೇಶ್ವರ ಸ್ವಾಮೀಜಿಯವರಿಂದ ಸ್ಥಾಪಿಸಲ್ಪಟ್ಟ ಮಠವು ಆಧ್ಯಾತ್ಮಿಕಪರಂಪರೆಯ ದೀರ್ಘ ಇತಿಹಾಸ ಹೊಂದಿದೆ ಎಂದರು.

19ನೇ ಶತಮಾನದಲ್ಲಿ ಅಟವಿ ಸ್ವಾಮಿಗಳ ಉತ್ತರಾಧಿಕಾರಿಗಳು ದೇಶದಲ್ಲಿ ಅನ್ನದ ಹಸಿವು ಇದ್ದಾಗ ತ್ರಿವಿಧದಾಸೋಹ ನಡೆಸಿದರು. ಅವರು ಕೇವಲ ವಿಧಿ ವಿಧಾನಗಳಿಗೆ ಸೀಮಿತವಾಗಿರಲಿಲ್ಲ. ಅವರು ಕ್ರಿಯಾಶೀಲ ಸಂತರು. ಶತಮಾನದಷ್ಟು ಕಾಲ ಅಸಮಾನ್ಯ ಸರಳತೆ, ಅಪೂರ್ವ ಶಿಸ್ತಿನ ಜೀವನ ನಡೆಸಿದರು. ವಯಸ್ಸಾದರೂ ಅವರ ಮನಸ್ಸು ಯುವಕರಂತೆ ಚುರುಕಾಗಿತ್ತು. ಬಹುತೇಕರು ಆರಾಮವನ್ನು ಹುಡುಕುವ ವಯಸ್ಸಲ್ಲಿ ಅವರು ಬದ್ಧತೆ ಆರಿಸಿಕೊಂಡರು. ಅವರ ಮಾರ್ಗದರ್ಶನದಲ್ಲಿ ಸಿದ್ದಲಿಂಗ ಸ್ವಾಮೀಜಿ ನೇತೃತ್ವದಲ್ಲಿ ಮಠ ಆಧ್ಯಾತ್ಮಿಕ ಕೇಂದ್ರವಲ್ಲ ಶಿಕ್ಷಣ ಚಳುವಳಿಯಾಗಿದೆ. ಶಿಕ್ಷಣ , ಅನ್ನ ಆಶ್ರಯವನ್ನಯ ದಾನವಾಗಿ ಅಲ್ಲ ಹಕ್ಕಿನಂತೆ ಗೌರವ, ಪ್ರೀತಿಯಿಂದ ನೀಡುತ್ತಿದೆ. ಲಕ್ಷಾಂತರ ಬಡ ಕುಟುಂಬಗಳ ಮಕ್ಕಳು ಇಲ್ಲಿ ಮನೆ ಕಟ್ಟಿಕೊಂಡಿದ್ದಾರೆ. ಮಠವು ಭಾರತದ ಸಮಗ್ರ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದರು. ಆದರ್ಶಗಳನ್ನು ಅನುಸರಿಸಬೇಕು

ಮಾನ್ಯ ಪ್ರಧಾನಿ ಮೋದಿ ನುಡಿಯಂತೆ ವಿಕಸಿತ ಭಾರತದತ್ತ ಸಾಗುತ್ತಿದ್ದೇವೆ. ಮಠವು ನಾಗರಿಕರ ಆಧ್ಯಾತ್ಮಿಕ ಅಭಿವೃದ್ಧಿ ಜತೆಗೆ ಶಿಕ್ಷಣ, ಆರೋಗ್ಯ ಸಾಮಾಜಿಕ ಏಕೀಕರಣದಲ್ಲಿ ಮಹತ್ವದ ಪಾತ್ರ ವಹಿಸಿದೆ. ಆಧುನಿಕ ಜಗತ್ತಿನಲ್ಲಿ ಎತ್ತರವಾಗಿ ನಿಂತಿದೆ ಸಾರಾಂಶವಾಗಿ ಒಟ್ಟಾರೆಯಾಗಿ ಹೇಳುವುದಾದರೆ ನಾವು ಭೌತಿಕವಾಗಿ ಮುನ್ನಡೆಯುತ್ತಾ ಆಚಾರಾತ್ಮಕವಾಗಿ ನೆಲೆಯೂರಿದ್ದೇವೆ. ಮಠದಂತಹ ಸಂಸ್ಥೆಗಳು ಆಧ್ಯಾತ್ಮಿಕವಾಗಿ ನೆಲೆಯೂರಲು ಪ್ರೇರೇಪಿಸುವೆ. ಅವರ ಆದರ್ಶಗಳನ್ನು ಅನುಸರಿಸಬೇಕು ಸ್ವಾಮೀಜಿಗೆ ಗೌರವ ನೀಡುವುದು ನಮ್ಮ ಸೇವೆಯಲ್ಲಿದೆ ಎಂದರು.

**ಸಮಾಜದ ಆಧ್ಯಾತ್ಮಿಕ ಮಾನಸಿಕ ಉನ್ನತಿ**



ಉದಯವಾಹಿನಿ ಚಿತ್ರ

**ಎಲ್ಲರೂ ಚೆನ್ನಾಗಿರಬೇಕು**

**ಪರಮಪೂಜ್ಯರು 111 ವರ್ಷಗಳ ತಪಸ್ಸಿನ ಜೀವನ ನಡೆಸಿದರು. 89 ವರ್ಷಗಳ ಕಾಲ ವಿದ್ಯಾರ್ಥಿಗಳ ಬದುಕಿಗೆ ಆದರ್ಶ, ಜ್ಞಾನ ಸುವಿದ ತುಂಬಿದರು. ಬಹುದೊಡ್ಡ ಸೇವೆ ಮಾಡಿದವರು. ಲಕ್ಷಾಂತರ ಮಕ್ಕಳನ್ನು ಭೂಮಿಯಿಂದ ಮೇಲಕ್ಕೆ ಕರೆದುಕೊಂಡು ಹೋದವರು. ಸ್ವರ್ಗ ಬೇಡ ದುಃಖಿತರ ದುಃಖ ದೂರ ಮಾಡುವ ಶಕ್ತಿ ಮಾತ್ರ ಬೇಕೆಂದಿದ್ದವರು. ಎಲ್ಲರೂ ಚೆನ್ನಾಗಿರಬೇಕು, ನಿಮ್ಮ ನಿಮ್ಮ ಕಾಯಕ ನೀವು ಮಾಡಬೇಕು, ನಿಷ್ಠೆ, ಕಾಯಕ ಭಾವನೆ ಜಾಗೃತವಾಗಿರಬೇಕೆಂದು ಸಂದೇಶವನ್ನು ನೀಡುತ್ತಿದ್ದರು. ನಿರಂತರ ದಾಸೋಹ ನಡೆಯಬೇಕು, ಮಕ್ಕಳಿಗೆ ಶಿಕ್ಷಣ ಸಿಗಬೇಕೆಂಬ ಆದೇಶ ಕೊಟ್ಟಿದ್ದಾರೆ ಅದನ್ನು ಮಾಡುತ್ತಾ ಬಂದಿದ್ದೇವೆ. ಉಪರಾಷ್ಟ್ರಪತಿಗಳು, ರಾಜ್ಯಪಾಲರು ಬಂದಿರುವುದು ಖುಷಿ ಮಧುಸೂದನ್ ಸಾಯಿ ಅವರು ವಿಶ್ವಸಂತರಾಗಿ ಬೆಳೆದಿದ್ದಾರೆನ್ನಲು ಹೆಮ್ಮೆ , ಸಂತೋಷ ಆಗುತ್ತದೆ ಎಂದರು.**

**ಎಲ್ಲರಿಗೂ ನಮಸ್ಕಾರ ನಾನು ನಿಮ್ಮನ್ನು ಹಾರ್ದಿಕವಾಗಿ ಸ್ವಾಗತಿಸುತ್ತೇನೆ ಎಂದು ಕನ್ನಡದಲ್ಲಿ ಹೇಳಿದರು. 111 ವರ್ಷಗಳ ಕಾಲ ಸಮಾಜದ ಸೇವೆ ಮಾಡಿದ ಶಿವಕುಮಾರ ಶ್ರೀಗಳ ಗದ್ದಿಗೆ ದರ್ಶನ ಮಾಡಿದ್ದು ನನ್ನ ಭಾಗ್ಯ. ಸಂತ ಶ್ರೇಷ್ಠ ಶಿವಕುಮಾರ್ ಶ್ರೀಗಳು. ಸಿದ್ದಗಂಗಾ ಮಠದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸೇವೆ ಅನನ್ಯ. ಸಿದ್ದಗಂಗಾ ಮಠ ಒಂದು ಪುಣ್ಯ ಭೂಮಿಯಾಗಿದೆ. ಶಿವಕುಮಾರ ಶ್ರೀಗಳ ತಮ್ಮ ಸಂಪೂರ್ಣ ಜೀವನನ್ನು ಅನ್ನ ಅಕ್ಷರ ವಸತಿ ದಾಸೋಹಕ್ಕೆ ಮುಡಿಪಾಗಿಟ್ಟಿದ್ದಾರೆ. ಅವರಿಗೆ ಅನೇಕ ರಾಷ್ಟ್ರೀಯ, ಅಂತರಾಷ್ಟ್ರೀಯ ಪ್ರಶಸ್ತಿಗಳು ಸಂದಿವೆ. ಈಗಿನ ಸಿದ್ದಲಿಂಗ ಮಹಾಸ್ವಾಮಿಗಳು ಶಿವಕುಮಾರ ಶ್ರೀಗಳು ಹಾಕಿ ಕೊಟ್ಟ ದಾರಿಯಲ್ಲಿ ಮಠವನ್ನು ಮುಂದುವರಿಸುತಿದ್ದಾರೆ. ಸಮಾಜದ ಆಧ್ಯಾತ್ಮಿಕ ಹಾಗೂ ಮಾನಸಿಕ ಉನ್ನತಿಗೆ ಸಿದ್ದಗಂಗಾ ಮಠ ಕಾರಣವಾಗಿದೆ ಎಂದರು.**

**ರಾಜ್ಯಪಾಲ ಥಾವರ್ ಚಂದ್ ಗೆಲ್ಹೋಟ್**

# ಅಂತರಾಳದಿಂದ... EDITORIAL

## ಅನುದಾನ ನೀಡಿಕೆ ಕೇಂದ್ರದಿಂದ ಪಕ್ಷಪಾತ ಧೋರಣೆ




ರಾಜ್ಯದ ಅಭಿವೃದ್ಧಿ ಯೋಜನೆಗಳಿಗೆ ಅನುದಾನ ನೀಡುವಲ್ಲಿ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ಅನುಸರಿಸುತ್ತಿರುವುದು ಒಕ್ಕೂಟ ತತ್ತ್ವಕ್ಕೆ ಎಸಗುತ್ತಿರುವ ಅಪಚಾರವಾಗಿದೆ. ದೇಶದ ಆರ್ಥಿಕತೆಗೆ ಮಹತ್ವದ ಕೊಡುಗೆ ನೀಡುತ್ತಿರುವ ರಾಜ್ಯಕ್ಕೆ ಕೇಂದ್ರದಿಂದ ನ್ಯಾಯಬದ್ಧವಾಗಿ ದೊರೆಯಬೇಕಾದ ಪಾಲನ್ನು ನೀಡದೆ ವಂಚಿಸಲಾಗುತ್ತಿದೆ. ಎಲ್ಲಾ ರಾಜ್ಯಗಳನ್ನು ಸಮಾನ ದೃಷ್ಟಿಯಿಂದ ನೋಡಬೇಕಾದ ಕೇಂದ್ರ ಸರ್ಕಾರ, ತನ್ನ ಮಿತ್ರಪಕ್ಷಗಳು ಅಧಿಕಾರದಲ್ಲಿರುವ ರಾಜ್ಯಗಳಿಗೆ ಭರಪೂರ ಅನುದಾನ ನೀಡುತ್ತಿದ್ದು, ಕಾಂಗ್ರೆಸ್ ಪಕ್ಷ ಆಡಳಿತ ನಡೆಸುತ್ತಿರುವ ಕರ್ನಾಟಕಕ್ಕೆ ದೊರಕಬೇಕಾದ ಪಾಲು ನೀಡುವಲ್ಲಿ ಪಕ್ಷಪಾತ ಧೋರಣೆ ಅನುಸರಿಸುತ್ತಿದೆ. ಕರ್ನಾಟಕದ 24 ಇಲಾಖೆಗಳ ಪ್ರಸ್ತಾವಗಳು ಅನುದಾನಕ್ಕಾಗಿ ಹಾಗೂ ಅನುಮೋದನೆಗಾಗಿ ವರ್ಷಗಳಿಂದ ಕೇಂದ್ರದ ವಿವಿಧ ಸಚಿವಾಲಯಗಳ ಮುಂದಿವೆ. ಇವುಗಳಲ್ಲಿ ಒಂದೇ ಒಂದು ಪ್ರಸ್ತಾವಕ್ಕೂ ಇತ್ತೀಚೆಗೆ ಅನುಮೋದನೆ ಸಿಕ್ಕಿಲ್ಲ. ಕಳೆದ 17 ತಿಂಗಳುಗಳಲ್ಲಿ ರಾಜ್ಯದ ಎರಡು ಯೋಜನೆಗಳಿಗಷ್ಟೇ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ. 3.432 ಕೋಟಿ ಮೊತ್ತದ ಬಳ್ಳಾರಿ ಚಿಕ್ಕಜಾಜೂರು ರೈಲು ಮಾರ್ಗ ಹಾಗೂ ಬೆಂಗಳೂರಿನ ನಮ್ಮ ಮೆಟ್ರೊ ಮೂರನೇ ಹಂತದ ಯೋಜನೆಗೆ ಕೇಂದ್ರದಿಂದ ಹಸಿರುನಿಶಾನೆ ಸಿಕ್ಕಿದೆ. ಅದರಲ್ಲೂ, ರಾಜ್ಯ ಸರ್ಕಾರ ಪ್ರಸ್ತಾವ ಸಲ್ಲಿಸಿದ 19 ತಿಂಗಳು ಕಳೆದ ಬಳಿಕ ಮೆಟ್ರೋ ಯೋಜನೆಗೆ ಅನುಮತಿ ದೊರೆತಿದೆ.


**ಮತದಾರರಿಗೂ ಮಾಡುತ್ತಿರುವ ವಿಶ್ವಾಸದ್ರೋಹ**

ಇದಕ್ಕೆ ತದ್ವಿರುದ್ಧವಾಗಿ, ಆಂಧ್ರಪ್ರದೇಶ ಹಾಗೂ ಬಿಹಾರದ ಅಭಿವೃದ್ಧಿ ಯೋಜನೆಗಳಿಗೆ ತಲಾ 1 ಲಕ್ಷ ಕೋಟಿಗೂ ಹೆಚ್ಚಿನ ಹಣ ಕೇಂದ್ರದಿಂದ ದೊರಕಿದೆ. '2024ರ ಜೂನ್‌ನಿಂದ ಇಲ್ಲಿಯವರೆಗೆ ಆಂಧ್ರಪ್ರದೇಶಕ್ಕೆ ಕೇಂದ್ರ ಸರ್ಕಾರ 3 ಲಕ್ಷ ಕೋಟಿ ಆರ್ಥಿಕ ಸಹಾಯ ನೀಡಿದೆ' ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇತ್ತೀಚೆಗಷ್ಟೇ ಹೇಳಿಕೆ ನೀಡಿದ್ದರು.

ಕೇಂದ್ರದ ಎನ್‌ಡಿಎ ಮೈತ್ರಿಕೂಟದ ಸರ್ಕಾರದಲ್ಲಿ ಕರ್ನಾಟಕದ ಜೆಡಿಎಸ್ ಕೂಡ ಪಾಲುದಾರ ಪಕ್ಷವಾಗಿದೆ ಹಾಗೂ ಆ ಪಕ್ಷದ ಎಚ್.ಡಿ. ಕುಮಾರಸ್ವಾಮಿ ಸಂಪುಟ ದರ್ಜೆ ಸಚಿವರಾಗಿದ್ದಾರೆ. ಅವರು ಸ್ವಯಂ ಆಸಕ್ತಿ ವಹಿಸಿ, ಭದ್ರಾವತಿಯ ವಿಶ್ವೇಶ್ವರಾಯ ಉಕ್ಕಿನ ಕಾರ್ಖಾನೆಯ ಪುನಶ್ಚೇತನಕ್ಕೆ 4,000 ಕೋಟಿ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿ ಹಲವು ತಿಂಗಳು ಕಳೆದಿದ್ದರೂ ಇದುವರೆಗೆ ಅದಕ್ಕೆ ಫಲ ಸಿಕ್ಕಿಲ್ಲ. ಆದರೆ, ವಿಶಾಖಪಟ್ಟಣದ ರಾಷ್ಟ್ರೀಯ ಉಕ್ಕು ಕಾರ್ಖಾನೆಯ ಪುನರುಜ್ಜೀವನಕ್ಕೆ ಕೇಂದ್ರ ಸರ್ಕಾರ ಕಳೆದ ವರ್ಷವೇ ದೊಡ್ಡ ಪ್ಯಾಕೇಜ್ ಪ್ರಕಟಿಸಿದೆ. ಕರ್ನಾಟಕ ರಾಜ್ಯಕ್ಕೆ 15ನೇ ಹಣಕಾಸು ಆಯೋಗ ಶಿಫಾರಸು ಮಾಡಿರುವ ಆರೋಗ್ಯ ಅನುದಾನವನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಎರಡು ವರ್ಷಗಳಿಂದ ಬಿಡುಗಡೆ ಮಾಡಿಲ್ಲ. ಜಲಜೀವನ್ ಮಿಷನ್ ಯೋಜನೆಯಲ್ಲೂ ಕೇಂದ್ರದ ಪಾಲು 4,574 ಕೋಟಿ ಬರಬೇಕಿದೆ. ವಿಪತ್ತು ಪರಿಹಾರ ಅನುದಾನ, ಕೇಂದ್ರ ಪ್ರಾಯೋಜಿತ ಯೋಜನೆಗಳ ಪಾಲು, ಮೂಲಸೌಕರ್ಯ ಯೋಜನೆಗಳಿಗೆ ಒದಗಿಸಬೇಕಾದ ನೆರವಿಗೆ ಸಂಬಂಧಿಸಿದಂತೆಯೂ ಕರ್ನಾಟಕ ಕಡೆಗಣನೆಗೆ ಒಳಗಾಗಿರುವ ನಿದರ್ಶನಗಳೇ ಹೆಚ್ಚು. ಈ ನಿರ್ಲಕ್ಷ್ಯ ಹಾಗೂ ರಾಜ್ಯದ ಅಭಿವೃದ್ಧಿ ಯೋಜನೆಗಳ ಕಡೆಗಣನೆಗೆ ಕೇಂದ್ರ ಸರ್ಕಾರದ ರಾಜಕೀಯ ಧೋರಣೆ ಕಾರಣವಾಗಿರುವಂತೆಯೇ, ರಾಜ್ಯವನ್ನು ಪ್ರತಿನಿಧಿಸುವ ಜನಪ್ರತಿನಿಧಿಗಳ ಲೋಪವೂ ಕಾರಣವಾಗಿದೆ. ಸರ್ಕಾರದ ಪ್ರಸ್ತಾವಗಳ ಬಗ್ಗೆ ಕೇಂದ್ರ ಸರ್ಕಾರದೊಂದಿಗೆ ನಿರಂತರ ಸಂವಹನ ನಡೆಸುವುದರಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ. ತಮ್ಮ ಪಕ್ಷದ ನಾಯಕರ ಮನವೊಲಿಸಿ ಹಣ ತರಬೇಕಾದ, ರಾಜ್ಯವನ್ನು ಪ್ರತಿನಿಧಿಸುವ ಬಿಜೆಪಿ ಸಂಸದರು, ಸಚಿವರು ಕೂಡ ಹೊಣೆಗೇಡಿತನದಿಂದ ವರ್ತಿಸುತ್ತಿದ್ದಾರೆ. ಕರ್ನಾಟಕಕ್ಕೆ ಅನ್ಯಾಯವಾದರೂ ಪಕ್ಷವನ್ನು ಪ್ರಶ್ನಿಸದಿರುವ ಜನಪ್ರತಿನಿಧಿಗಳ ಧೋರಣೆ ರಾಜ್ಯಕ್ಕೂ, ಮತದಾರರಿಗೂ ಮಾಡುತ್ತಿರುವ ವಿಶ್ವಾಸದ್ರೋಹ.

ಜಿಎಸ್‌ಟಿ ಸಂಗ್ರಹದಲ್ಲಿ ಕರ್ನಾಟಕ ದೇಶದ ಮುಂಚೂಣಿ ರಾಜ್ಯಗಳಲ್ಲೊಂದಾಗಿದೆ. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಉತ್ಪಾದನಾ ವಲಯಗಳ ಮೂಲಕ ಕರ್ನಾಟಕದಿಂದ ಗಣನೀಯ ವರಮಾನ ಕೇಂದ್ರ ಸರ್ಕಾರಕ್ಕೆ ದೊರೆಯುತ್ತಿದೆ. ಆದರೆ, ಇದಕ್ಕೆ ಪ್ರತಿಯಾಗಿ ರಾಜ್ಯದ ಮೂಲಸೌಕರ್ಯ, ನೀರಾವರಿ, ಶಿಕ್ಷಣ, ಆರೋಗ್ಯ ಮತ್ತು ಗ್ರಾಮೀಣ ಅಭಿವೃದ್ಧಿ ಯೋಜನೆಗಳಿಗೆ ನೆರವು ನೀಡಲು ಕೇಂದ್ರ ಚೌಕಾಸಿ ನಡೆಸುತ್ತಿದೆ. ಈ ಧೋರಣೆ, ತೆರಿಗೆ ಸಂಗ್ರಹದಲ್ಲಿ ದೊಡ್ಡ ಸಾಧನೆ ತೋರಿದ ರಾಜ್ಯಗಳನ್ನು ಉತ್ತೇಜಿಸುವ ಬದಲು ಶಿಕ್ಷಿಸುವಂತಿದೆ. ಕೇಂದ್ರ ಸರ್ಕಾರ ನೀಡುವ ಅನುದಾನ ಕರುಣೆ ಆಗಿರದೆ, ರಾಜ್ಯಕ್ಕೆ ಸಂವಿಧಾನಬದ್ಧವಾಗಿ ದೊರೆಯಬೇಕಾದ ಪಾಲಾಗಿದೆ. ಈ ಪಾಲನ್ನು ವಂಚಿಸುವುದು ರಾಜ್ಯವನ್ನು ಆರ್ಥಿಕ ಬಿಕ್ಕಟ್ಟಿಗೆ ದೂಡುವ ಪ್ರಯತ್ನವಾಗಿರುವಂತೆಯೇ, ಒಕ್ಕೂಟ ವ್ಯವಸ್ಥೆಯ ಅಡಿಪಾಯವನ್ನು ಶಿಥಿಲಗೊಳಿಸುವ ಪ್ರಯತ್ನವೂ ಆಗಿದೆ. ಗಣತಂತ್ರ ವ್ಯವಸ್ಥೆಯಲ್ಲಿ ಅಪನಂಬಿಕೆ ಉಂಟಾಗುವಂತೆ ಕೇಂದ್ರ ಸರ್ಕಾರ ನಡೆದುಕೊಳ್ಳಬಾರದು.

# ರಾಮಾಯಣ



## ವಾಲಿಯನ್ನು ವಧಿಸುತ್ತೇನೆಂದು ಶ್ರೀ ರಾಮನ ಪ್ರತಿಜ್ಞೆ

### 120 ನೆಯ ಅಧ್ಯಾಯ

• ಹಿಂದಿನ ಸಂಚಿಕೆಯಿಂದ

ಆಗ ಶ್ರೀರಾಮನು, ಜ್ವಾಲೆಯಿಲ್ಲದ ಯಜ್ಞಪುರುಷ ನಂತೆಯೂ ಋಷಿಗಳ ಶಾಪದಿಂದ ಸ್ವರ್ಗದಿಂದ ಬಿದ್ದ ಯಯಾತಿಯ ತಂದೆಯಾದ ನಹುಷನಂತೆಯೂ ಮಹಾಪ್ರಳಯದಲ್ಲಿ ಅಂತರಿಕ್ಷಲೋಕದಿಂದ ಬಿದ್ದ ಸೂರ್ಯನಂತೆಯೂ ದೇವೇಂದ್ರನಂತೆಯೂ ನೋಡುವುದಕ್ಕೆ ಅಶಕ್ಯವಾದ ಕಾಂತಿಯುಳ್ಳ ವಿಶಾಲವಾದ ಎದೆಕಟ್ಟುಳ್ಳ ನಿಡಿದಾದ ತೋಳುಗಳುಳ್ಳ ಪ್ರಕಾಶಮಾನವಾದ ಮುಖವುಳ್ಳ ಪಚ್ಚೆಯ ಕಾಂತಿಯಂತೆ ಕಣ್ಣುಗಳುಳ್ಳ ವಾಲಿಯ ಶರೀರವನ್ನು ಕಂಡು ಅತ್ಯಂತ ಆಶ್ಚರ್ಯಪಟ್ಟು ವಾಲಿಯ ಸಮೀಪಕ್ಕೆ ಹೋದನು. ತನ್ನನ್ನೂ ಲಕ್ಷ್ಮಣನನ್ನೂ ನೋಡುತ್ತಿದ್ದ ವಾಲಿಯನ್ನು ಗೌರವದೃಷ್ಟಿಯಿಂದ ಕಂಡನು. ವಾಲಿಯು ಶ್ರೀರಾಮನನ್ನೂ ಲಕ್ಷ್ಮಣನನ್ನೂ ನೋಡಿ ಶ್ರೀರಾಮನನ್ನು ಕುರಿತು ಧರ್ಮಶಾಸ್ತ್ರಾನುಸಾರವಾಗಿಯೂ ವಿನಯ ವಾಗಿಯೂ ನಿಷ್ಠುರವಾಗಿಯೂ ಇರುವ ಮಾತುಗಳಿಂದ ಹೀಗೆ ಹಂಗಿಸಿದನು:

ಶ್ರೀರಾಮ, ಬೇರೆ ಕಡೆಗೆ ಮುಖವನ್ನು ತಿರುಗಿಸಿ ಯುದ್ಧ ಮಾಡುತ್ತಿದ್ದ ನನ್ನನ್ನು ಕೊಂದು ಯಾವ ಸದ್ಗುಣವನ್ನು ಪಡೆದೆ ನಾನು ಮತ್ತೊಬ್ಬನೊಡನೆ ಯುದ್ಧವನ್ನು ಮಾಡುತ್ತಿದ್ದಾಗ ವ್ಯರ್ಥವಾಗಿ ನಿನ್ನ ಬಾಣಗಳಿಂದ ಹತನಾಗಿದ್ದೇನೆ. ನೀನು ಮಹಾಸತ್ಕುಲಪ್ರಸೂತನೂ ಸಾತ್ವಿಕಗುಣಸಂಪನ್ನನೂ ಅತಿತೇಜಸ್ವಿಯೂ ವ್ರತಾಚಾರಗಳನ್ನು ಮಾಡುವವನೂ ಕಾರುಣ್ಯಗುಣವುಳ್ಳವನೂ ಪ್ರಜಾಪಾಲಕನೂ ಸಮಸ್ತ ಪ್ರಾಣಿಗಳಲ್ಲಿಯೂ ದಯೆಯುಳ್ಳವನೂ ಉತ್ಸಾಹಶಕ್ತಿಯುಳ್ಳವನೂ ಕಾಲೋಚಿತವನ್ನು ಬಲ್ಲವನೂ ದೃಢವ್ರತನೂ ಎಂದು ಸಮಸ್ತ ಪ್ರಾಣಿಗಳೂ ಸಾರುತ್ತಿವೆ. ಲೋಕದಲ್ಲಿ ಅರಸರ ಲಕ್ಷಣಗಳಾದ ಕ್ಷಮೆ ಇಂದ್ರಿಯನಿಗ್ರಹ, ಮನೋನಿಗ್ರಹ, ಧೈರ್ಯ, ಸತ್ಯ, ಪರಾಕ್ರಮ, ಅಪರಾಧ ಮಾಡಿದವರನ್ನು ದಂಡಿಸುವುದೇ ಮೊದಲಾದವು ನಿನ್ನಲ್ಲಿರುವುವೆಂದು ಮನಸ್ಸಿನಲ್ಲಿ ನಿಶ್ಚಯಿಸಿ ನೀನು ಚಂಚಲಚಿತ್ರನಲ್ಲವೆಂಬ ವಿಶ್ವಾಸದಿಂದ ಇಲ್ಲಿಗೆ ಬಂದನು.

ನೀನು ಇಲ್ಲಿಗೆ ಬಂದದ್ದನ್ನು ನಾನು ಮೊದಲೇ ತಿಳಿದಿದ್ದೆನು. ನಾನು ಕಿಷ್ಕಿಂಧಾಪಟ್ಟಣದಿಂದ ಹೊರಟು ಬರುವಾಗ ನನ್ನ ಪತ್ನಿಯಾದ ತಾರಾದೇವಿಯು ನನ್ನನ್ನು ತಡೆದು ನೀನು ಸುಗ್ರೀವನಿಗೆ ಸಹಾಯವಾಗಿ ಬಂದಿರುವುದನ್ನು ಹೇಳಿದಳು. ಈಗ ನನ್ನ ಪ್ರಾರಬ್ಧ ಕರ್ಮವು ತಟ್ಟಿತು. ಅದು ಹಾಗಿರಲಿ, ಮತ್ತೊಬ್ಬನೊಡನೆ ಯುದ್ಧವನ್ನು ಮಾಡುತ್ತಿದ್ದವನನ್ನು ಮೋಸದಿಂದ ಹೊಡೆದು ಕೆಡಹುವುದು ನಿನಗುಚಿತವೆ ನೀನು ಮೋಸದಿಂದ ಕೊಲ್ಲುವೆಯೆಂಬುದನ್ನರಿಯದೆ ನೀನಿದ್ದ ದಿಕ್ಕನ್ನು ನೋಡದಿದ್ದೆನು. ಆತ್ಮಘಾತಕನಾಗಿ ಧರ್ಮ ದ್ರೋಹಿಯಾಗಿ ಮೋಸಗಾರನಾಗಿ ಹುಲ್ಲುಕೌಚಿದ ಹಾಳುಭಾವಿಯಂತಿರುವ ನಿನ್ನನ್ನು ಅರಿಯದೆ ಹೋದೆನು, ಬೂದಿಮುಚ್ಚಿದ ಕೆಂಡದಂತೆ ಕಪಟದಿಂದ ನಿನ್ನ ಪಾಪಸ್ವರೂಪವನ್ನು ಮರೆಸಿಕೊಂಡು ತಪಸ್ವಿವೇಷವನ್ನು ಧರಿಸಿ ಧರ್ಮಿಷ್ಟನಂತೆ ಸಂಚರಿಸುತ್ತಿರುವ ನಿನ್ನನ್ನು ಅರಿಯದೆ ಹೋದೆನು. ನಾನು ನಿನ್ನ ದೇಶಕ್ಕಾದರೂ ನಿನ್ನ ಪಟ್ಟಣಕ್ಕಾದರೂ ಯಾವ ಉಪದ್ರವವನ್ನೂ ಮಾಡಿದವನಲ್ಲ. ಇಂಥ ನನಗೆ ಲೋಕದಲ್ಲಿ ನಗೆಗೀಡಾದ ದ್ರೋಹವನ್ನು ಮಾಡಿದೆ. ವನದಲ್ಲಿ ಕಂದಮೂಲ.

ಮುಂದುವರಿಯುವುದು...

# ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯಕ್ಕೆ 25 ವರ್ಷ

## ಬೆಳ್ಳಿ ಮಹೋತ್ಸವ ಆಚರಣೆ; ನೂತನ ಇನ್‌ಕ್ಯುಬೇಷನ್ ಸೆಂಟರ್ ಲೋಕಾರ್ಪಣೆ

• ಉದಯವಾಹಿನಿ, ಬೆಂಗಳೂರು

ಭಾರತೀಯ ನವೋದ್ಯಮಗಳು ಪ್ರಸ್ತುತ ಜಾಗತಿಕ ಸವಾಲುಗಳನ್ನು ಪರಿಹರಿಸುವ ಶಕ್ತಿಯನ್ನು ಹೊಂದಿವೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದರು.

ನಗರದ ಐಟಿ ಪಾರ್ಕ್ ರಸ್ತೆಯಲ್ಲಿರುವ ಪ್ರತಿಷ್ಠಿತ ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾದ ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯವು 25 ವರ್ಷಗಳನ್ನು ಪೂರೈಸಿರುವ ಹಿನ್ನಲೆಯಲ್ಲಿ ದಿನಾಂಕ: 21.01.2026,ಬುಧವಾರ ಸಿಎಂಆರ್ ಸಭಾಂಗಣದಲ್ಲಿ ಆಯೋಜಿಸಿದ್ದ 'ಬೆಳ್ಳಿ ಮಹೋತ್ಸವ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಘನತೆವೆತ್ತ ಉಪರಾಷ್ಟ್ರಪತಿ ಶ್ರೀ ಸಿ.ಪಿ.ರಾಧಾಕೃಷ್ಣನ್, ಗೌರವ ಅತಿಥಿಗಳಾಗಿ ಘನತೆವೆತ್ತ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಪಾಲ್ಗೊಂಡು ಸಿಎಂಆರ್ ಐಟಿಯಲ್ಲಿ ನೂತನವಾಗಿ ನಿರ್ಮಾಣವಾಗಿರುವ ಸುಸಜ್ಜಿತ ಇನ್‌ಕ್ಯುಬೇಷನ್ ಸೆಂಟರ್ ಮತ್ತು ಸಿಲ್ವರ್ ಜುಬಿಲಿ ಆಡಿಟೋರಿಯಂ ಅನ್ನು ಲೋಕಾರ್ಪಣೆ ಮಾಡಿದರು. ಇದೇ ಸಂದರ್ಭದಲ್ಲಿ ಸಿಎಂಆರ್‌ಐಟಿಯ 25 ವರ್ಷಗಳ ಸುಧೀರ್ಘ ಪಯಣವನ್ನು ಸ್ಮರಣಿಸುವ 'ವೊವೆನ್ ಇನ್ ಸಿಲ್ವರ್ 25 ಇಯರ್ಸ್ ನರ್ಚರಿಂಗ್ ಮೈಂಡ್ಸ್' ವಿಶೇಷ ಪುಸ್ತಕವನ್ನು ಬಿಡುಗಡೆ ಮಾಡಿದರು.

ಬೆಳ್ಳಿ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಮಾತನಾಡಿದರು. ಭಾರತೀಯ ನವೋದ್ಯಮಗಳು ಪ್ರಸ್ತುತ ಜಾಗತಿಕ ಸವಾಲುಗಳನ್ನು ಪರಿಹರಿಸುವ ಶಕ್ತಿಯನ್ನು ಹೊಂದಿವೆ. ಕಾಲೇಜುಗಳು ಕೇವಲ ಕಲಿಕಾ ಕೇಂದ್ರಗಳಲ್ಲ, ಅವು ನಾವೀನ್ಯತೆಗಳ ಪ್ರಯೋಗಾಲಯಗಳಾಗಬೇಕು. ವಿದ್ಯಾರ್ಥಿಗಳಲ್ಲಿ ರೂಪುಗೊಳ್ಳುವ ಜವಾಬ್ದಾರಿಯುತ ನಾಯಕತ್ವ ಅವರ ಯಶಸ್ಸಿನ ಗುಟ್ಟು ಎಂದು ಹೇಳಿದರು.

ಹವಾಮಾನ ಬದಲಾವಣೆ ಮತ್ತು ಎಐ ನೈತಿಕ ಬಳಕೆಯಂತಹ ಸವಾಲುಗಳನ್ನು ಎದುರಿಸುವಲ್ಲಿ ಭಾರತೀಯ ಸ್ಟಾರ್ಟ್‌ಅಪ್‌ಗಳು ಜಾಗತಿಕ ನಾಯಕರಾಗಿ ಹೊರಹೊಮ್ಮಲಿವೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

2047ರ ವೇಳೆಗೆ ಭಾರತವು ವಿಕಸಿತ ಭಾರತವಾಗುವ ಗುರಿ ಹೊಂದಿದೆ. ಭಾರತದ ಯುವಶಕ್ತಿಯು ಈ ಕನಸನ್ನು ನನಸಾಗಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ, ಎಂದು ಅವರು ಆಶಯ ವ್ಯಕ್ತಪಡಿಸಿದರು.

ಗೌರವ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಶಿಕ್ಷಣ ಕ್ಷೇತ್ರದಲ್ಲಿ ಕರ್ನಾಟಕದ ಮುಂಚೂಣಿಯಲ್ಲಿದೆ. ಈ ನಿಟ್ಟಿನಲ್ಲಿ ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳ ಪಾತ್ರವನ್ನು ಶ್ಲಾಘಿಸಿದರು. ಬೆಂಗಳೂರು ಕೇವಲ ಐಟಿ ಕೇಂದ್ರವಲ್ಲ, ಅದು ನವೋದ್ಯಮಗಳ ರಾಜಧಾನಿ. ಇಂದಿನ ಜಗತ್ತನ್ನು ಕೃತಕ ಬುದ್ಧಿಮತ್ತೆ, ಡೇಟಾ ಸೈನ್ಸ್ ಮತ್ತು ರೊಬೊಟಿಕ್ಸ್ ಪರಿವರ್ತಿಸುತ್ತಿವೆ, ಎಂದು ಅವರು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಗಣ್ಯ ಅತಿಥಿಗಳಾಗಿ ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಮತ್ತು ಸಿಎಂಆರ್ ವಿಶ್ವವಿದ್ಯಾಲಯದ ಅಧ್ಯಕ್ಷರು ಹಾಗೂ ಮಾಜಿ ರಾಜ್ಯಸಭಾ ಸದಸ್ಯರಾದ ಡಾ. ಕೆ. ಸಿ. ರಾಮಮೂರ್ತಿ, ಐಪಿಎಸ್ (ನಿವೃತ್ತ) ಮತ್ತು ಎನ್‌ಪಿಎಸ್ ಸಮೂಹ ಸಂಸ್ಥೆಗಳು, ಎನ್‌ಎಫ್ ಎಲ್ ಮತ್ತು ಟಿಐಎಸ್‌ಬಿ ಅಧ್ಯಕ್ಷರಾದ ಡಾ. ಕೆ. ಪಿ. ಗೋಪಾಲಕೃಷ್ಣ ಅವರು ಪಾಲ್ಗೊಂಡಿದ್ದರು.

'ಬೆಳ್ಳಿ ಮಹೋತ್ಸವ' ಕುರಿತು ಮಾತನಾಡಿದ ಡಾ.ಕೆ.ಸಿ.ರಾಮಮೂರ್ತಿ, ಸಿಎಂಆರ್ ತಾಂತ್ರಿಕ ಮಹಾವಿದ್ಯಾಲಯದ 25 ವರ್ಷಗಳ ಗುಣಮಟ್ಟದ ಶೈಕ್ಷಣಿಕ ಸೇವೆಯ ಪಯಣವು ನಮಗೆ ಸಾರ್ಥಕತೆಯ ಹೆಮ್ಮೆ ತಂದಿದೆ.

ರಾಷ್ಟ್ರೀಯ ಶಿಕ್ಷಣ ಪರಿಸರ ವ್ಯವಸ್ಥೆಗೆ ಪೂರಕವಾದ ಗುಣಮಟ್ಟದ ಶಿಕ್ಷಣ ನೀಡಲು ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಬದ್ಧವಾಗಿವೆ. ಸಿಎಂಆರ್ ಐಟಿಯಲ್ಲಿ ಕಲಿತ ವಿದ್ಯಾರ್ಥಿಗಳು ಇಂದು ದೇಶ-ವಿದೇಶಗಳಲ್ಲಿ ಯಶಸ್ವಿ ನವೋದ್ಯಮಿಗಳಾಗಿ ಬೆಳೆದು ಸಾಧನೆ ಮಾಡಿದ್ದಾರೆ ಇದು ನಮ್ಮ ಸಂಸ್ಥೆಯ ಹಿರಿಮೆ ಎಂದು ಹರ್ಷವ್ಯಕ್ತಪಡಿಸಿದರು.

ಬೆಳ್ಳಿ ಮಹೋತ್ಸವ ಕಾರ್ಯಕ್ರಮದಲ್ಲಿ ಸಿಎಂಆರ್ ಐಟಿಯಲ್ಲಿ ವ್ಯಾಸಂಗ ಮಾಡಿ ದೇಶ-ವಿದೇಶಗಳಲ್ಲಿ ನವೋದ್ಯಮಿಗಳಾಗಿ ಸಾಧನೆ ಮಾಡಿರುವ ಹಳೆಯ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಸಿಎಂಆರ್ ಜ್ಞಾನಧಾರ ಟ್ರಸ್ಟ್ ಅಧ್ಯಕ್ಷರು, ಸಿಎಂಆರ್ ವಿಶ್ವವಿದ್ಯಾಲಯ ಕುಲಾಧಿಪತಿ ಡಾ. ಸಬಿತಾ ರಾಮಮೂರ್ತಿ ಅವರು ಬೆಳ್ಳಿ ಮಹೋತ್ಸವ ಕಾರ್ಯಕ್ರಮದಲ್ಲಿ ಮಾದಕ ದ್ರವ್ಯ ವ್ಯಸನ ಸೇವನೆ ತ್ಯಜಿಸುವ ಜಾಗೃತಿ ಅಭಿಯಾನ ಪ್ರಮಾಣ ವಚನ ಬೋಧಿಸಿದರು.

ಬೆಳ್ಳಿ ಮಹೋತ್ಸವ ಅದ್ದೂರಿ ಕಾರ್ಯಕ್ರಮದಲ್ಲಿ ಸಿಎಂಆರ್ ಜ್ಞಾನಧಾರ ಟ್ರಸ್ಟ್ ಅಧ್ಯಕ್ಷರು, ಸಿಎಂಆರ್ ವಿಶ್ವವಿದ್ಯಾಲಯ ಕುಲಾಧಿಪತಿ ಡಾ. ಸಬಿತಾ ರಾಮಮೂರ್ತಿ, ಸಿಎಂಆರ್ ಜ್ಞಾನಧಾರ ಟ್ರಸ್ಟ್ ಕಾರ್ಯದರ್ಶಿ ಶ್ರೀ ಕೆ. ಸಿ. ಜಗನ್ನಾಥ್ ರೆಡ್ಡಿ, ಸಿಇಒ ಹಾಗೂ ಸಹಕುಲಪತಿ ಶ್ರೀ ಜಯದೀಪ್ ಕೆ. ಆರ್. ರೆಡ್ಡಿ, ಏಕ್ಯಾ ಸಮೂಹ ಶಾಲೆಗಳ ಸಂಸ್ಥಾಪಕಿ ಡಾ. ತ್ರಿಸ್ತಾ ರಾಮಮೂರ್ತಿ, ಪ್ರಾಂಶುಪಾಲರಾದ ಡಾ. ಸಂಜಯ್ ಜೈನ್ ಹಾಗೂ ಉಪ ಪ್ರಾಂಶುಪಾಲರಾದ ಡಾ. ಬಿ. ನರಸಿಂಹ ಮೂರ್ತಿ, ಅಕಾಡೆಮಿಕ್ ಡೀನ್ ಗಳು, ವಿಭಾಗದ ಮುಖ್ಯಸ್ಥರು, ಪ್ರಾಧ್ಯಾಪಕರುಗಳು, ಹಳೆಯ ವಿದ್ಯಾರ್ಥಿಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.




### ನಾವೀನ್ಯತೆಗೆ ಹೊಸ ವೇದಿಕೆ

**'ಬೆಳ್ಳಿ ಮಹೋತ್ಸವದ' ಸ್ಮರಣಾರ್ಥವಾಗಿ ಉದ್ಘಾಟನೆಗೊಂಡ ಸಿಎಂಅರ್ ಐಟಿ ಇನ್‌ಕ್ಯುಬೇಷನ್ ಸೆಂಟರ್' ವಿಶ್ವದರ್ಜೆಯ ನಾವೀನ್ಯತೆಯ ಪರಿಸರ ವ್ಯವಸ್ಥೆಯನ್ನು ಹೊಂದಿದೆ. ಇದು ಅತ್ಯಾಧುನಿಕ ಮೂಲಸೌಕರ್ಯ, ತಜ್ಞ ಮಾರ್ಗದರ್ಶಕರ ತಂಡ ಮತ್ತು ಉದ್ಯಮ-ಸಮನ್ವಯ ಬೆಂಬಲದ ಮೂಲಕ ಉದಯೋನ್ಮುಖ ನವೋದ್ಯಮಗಳನ್ನು ಮತ್ತು ಯುವ ಉದ್ಯಮಿಗಳನ್ನು ಪೋಷಿಸುವ ಗುರಿ ಹೊಂದಿದೆ. ನವ ಪರಿಕಲ್ಪನೆಗಳಿಗೆ ರೆಕ್ಕೆ ನೀಡಿ ಪೋಷಿಸುವ ಸಂಶೋಧನಾ ಕೇಂದ್ರವಾಗಿ ಕಾರ್ಯನಿರ್ವಹಿಸಲಿದೆ.**

### ಅತ್ಯಾಧುನಿಕ ಸಿಲ್ವರ್ ಜುಬಿಲಿ ಆಡಿಟೋರಿಯಂ

**ಬೆಳ್ಳಿ ಮಹೋತ್ಸವ ಸ್ಮರಣಾರ್ಥವಾಗಿ ಉದ್ಘಾಟನೆಗೊಂಡ ನೂತನ ಸಿಎಂಅರ್ ಐಟಿ ಸಿಲ್ವರ್ ಜುಬಿಲಿ ಆಡಿಟೋರಿಯಂ 350 ಆಸನಗಳ ಸಾಮರ್ಥ್ಯ ಹೊಂದಿರುವ ಹವಾನಿಯಂತ್ರಿತ ಸಭಾಂಗಣವು ಅತ್ಯಾಧುನಿಕ ಧ್ವನಿ ಮತ್ತು ಬೆಳಕಿನ ವ್ಯವಸ್ಥೆಯನ್ನು ಹೊಂದಿದ್ದು, ಎಲ್ಲಾ ರೀತಿಯ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಸುಸಜ್ಜಿತ ಸಭಾಂಗಣವಾಗಿ ರೂಪುಗೊಂಡಿದೆ.**

**ಕರ್ನಾಟಕದ ಧಾರ್ಮಿಕ, ಸಾಮಾಜಿಕ ಮತ್ತು ಶೈಕ್ಷಣಿಕ ಇತಿಹಾಸದಲ್ಲಿ ದಾಸೋಹ ಎಂಬ ಪದಕ್ಕೆ ಜೀವಂತ ಅರ್ಥ ನೀಡಿದ ಮಹಾನ್ ಯೋಗಿ ಎಂದರೆ ಶಿವಕುಮಾರ ಮಹಾಸ್ವಾಮೀಜಿ. ತ್ರಿವಿಧ ದಾಸೋಹ ಅನ್ನದಾಸೋಹ, ವಿದ್ಯಾದಾಸೋಹ ಮತ್ತು ಆಶ್ರಯ ದಾಸೋಹ ಇವನ್ನೆಲ್ಲಾ ತಮ್ಮ ಜೀವನದ ಉಸಿರಾಗಿ ರೂಪಿಸಿಕೊಂಡು, ನುಡಿದಂತೆ ನಡೆದು ತೋರಿದ ಕಾಯಕ ಯೋಗಿ ಅವರು. ಅವರ ಪುಣ್ಯಸ್ಮರಣೆಯ ದಿನವನ್ನು ನಾವು ''ದಾಸೋಹ ದಿನ''ವೆಂದು ಆಚರಿಸುವುದು ಅವರ ಬದುಕಿನ ಮೌಲ್ಯಗಳಿಗೆ ಸಲ್ಲಿಸುವ ಅರ್ಥಪೂರ್ಣ ನಮನವಾಗಿದೆ.**

# ತ್ರಿವಿಧ ದಾಸೋಹಿ ಡಾ॥ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಶಿವಯೋಗಿಗಳವರ ಪುಣ್ಯಸ್ಮರಣೆ



☛ ವಿಶ್ವಾಸ್.ಡಿ.ಗೌಡ

ಡಾ॥ ಶ್ರೀ ಶ್ರೀ ಶ್ರೀ ಶಿವಕುಮಾರ ಮಹಾಶಿವಯೋಗಿಗಳು ಕಲ್ಪತರು ನಾಡಿನ ದೈವವೆಂದೇ ಕರೆಯಲ್ಪಟ್ಟರು. ಏಕೆಂದರೆ ಅವರ ಬದುಕು ಕೇವಲ ಮಠದೊಳಗೆ ಸೀಮಿತವಾಗಿರಲಿಲ್ಲ; ಅದು ಸಮಾಜದ ಪ್ರತಿಯೊಂದು ಪದರವನ್ನು ಸ್ಪರ್ಶಿಸಿತು. ಜಾತಿ, ಧರ್ಮ, ಭಾಷೆ, ಪ್ರಾಂತಗಳ ಭೇದವಿಲ್ಲದೆ ಎಲ್ಲರಿಗೂ ಅನ್ನ, ವಿದ್ಯೆ ಮತ್ತು ಆಶ್ರಯ ದೊರೆಯಬೇಕು ಎಂಬುದೇ ಅವರ ಧ್ಯೇಯವಾಗಿತ್ತು.


ಬಸವಣ್ಣನವರ ಕಾಯಕದಾಸೋಹ ತತ್ತ್ವವನ್ನು ಆಧುನಿಕ ಕಾಲಘಟ್ಟಕ್ಕೆ ತಂದು, ಅದನ್ನು ಕಾರ್ಯರೂಪದಲ್ಲಿ ಜಾರಿಗೆ ತಂದ ಕಾರಣದಿಂದಲೇ ಅವರು ''ಆಧುನಿಕ ಬಸವಣ್ಣ'' ಎಂದು ಗೌರವಿಸಲ್ಪಟ್ಟರು.

ಅನ್ನದಾಸೋಹವು ಅವರ ಸೇವೆಯ ಮೊದಲ ಮುಖ. ಸಿದ್ಧಗಂಗಾ ಮಠದಲ್ಲಿ ಪ್ರತಿದಿನ ಸಾವಿರಾರು ಮಕ್ಕಳಿಗೂ, ನಿರ್ಗತಿಕರಿಗೂ, ಯಾತ್ರಿಕರಿಗೂ ಅನ್ನ ದೊರೆಯುತ್ತಿತ್ತು. ಅನ್ನವು ಕೇವಲ ಆಹಾರವಲ್ಲ; ಅದು ಬದುಕಿನ ಆಶಾವಾದ ಎಂದು ಅವರು ನಂಬಿದ್ದರು. ಹಸಿದ ಹೊಟ್ಟೆಗೆ ಅನ್ನ ನೀಡುವುದೇ ಅತಿ ದೊಡ್ಡ ಪೂಜೆ ಎಂಬ ತತ್ತ್ವವನ್ನು ತಮ್ಮ ನಡೆನುಡಿಗಳ ಮೂಲಕ ಅವರು ಸಮಾಜಕ್ಕೆ ತಿಳಿಸಿದರು. ಹಸಿವಿನ ನೋವನ್ನು ತಿಳಿದವನೇ ಮಾನವೀಯತೆಯ ಮೌಲ್ಯವನ್ನು ಅರಿಯಬಲ್ಲನು ಎಂಬ ಸಂದೇಶವು ಅವರ ದಾಸೋಹದ ಹೃದಯಭಾಗವಾಗಿತ್ತು.

ವಿದ್ಯಾದಾಸೋಹವು ಅವರ ಸೇವೆಯ ಎರಡನೇ ಮಹತ್ವದ ಅಂಗ. ಗ್ರಾಮೀಣ ಹಾಗೂ ಹಿಂದುಳಿದ ಮಕ್ಕಳಿಗೆ ಶಿಕ್ಷಣವೇ ಬೆಳಕಿನ ದಾರಿ ಎಂಬ ನಂಬಿಕೆಯಿಂದ, ಅವರು ಸಾವಿರಾರು ಶಿಕ್ಷಣ ಸಂಸ್ಥೆಗಳ ಬೆಳವಣಿಗೆಗೆ ಕಾರಣರಾದರು. ಶಾಲೆ, ಕಾಲೇಜು, ತಾಂತ್ರಿಕ ಸಂಸ್ಥೆಗಳು ಇವೆಲ್ಲವೂ ಅವರ ದೃಷ್ಟಿಕೋನದ ಫಲ. ''ವಿದ್ಯೆ ಇಲ್ಲದೆ ವ್ಯಕ್ತಿತ್ವ ಬೆಳೆಯದು; ವ್ಯಕ್ತಿತ್ವ ಇಲ್ಲದೆ ಸಮಾಜ ಬೆಳೆಯದು'' ಎಂಬ ಅವರ ನಂಬಿಕೆ ಇಂದು ಅನೇಕ ವಿದ್ಯಾಲಯಗಳ ರೂಪದಲ್ಲಿ ಜೀವಂತವಾಗಿದೆ. ಶಿಕ್ಷಣವನ್ನು ವ್ಯಾಪಾರವಲ್ಲ, ಸೇವೆ ಎಂದು ಕಂಡು ಬೆಳೆಸಿದ ಮಹಾನ್ ದೃಷ್ಟಿಕೋನವು ಅವರನ್ನು ಯುಗಪುರುಷನನ್ನಾಗಿಸಿದೆ. ಆಶ್ರಯದಾಸೋಹವು ಅವರ ತ್ರಿವಿಧ ಸೇವೆಯ ಮೂರನೇ ಆಯಾಮ.

ಅನಾಥರು, ನಿರಾಶ್ರಿತರು, ಸಮಾಜದಿಂದ ಕಡೆಗಣಿಸಲ್ಪಟ್ಟವರು ಇವರೆಲ್ಲರಿಗೂ ಸಿದ್ಧಗಂಗಾ ಮಠ ಒಂದು ತಾಯಿಯ ಮಡಿಲಿನಂತಿತ್ತು. ''ಮಠವು ಗೋಡೆಗಳೊಳಗಿನ ಕಟ್ಟಡವಲ್ಲ; ಅದು ಮಾನವೀಯತೆಯ ಆಲಯ'' ಎಂಬ ಅವರ ಮಾತು ಆಶ್ರಯ ದಾಸೋಹದ ಸಾರವನ್ನು ಹೇಳುತ್ತದೆ. ಮಠದ ಬಾಗಿಲು ಯಾವತ್ತೂ ಯಾರಿಗೂ ಮುಚ್ಚಿರಲಿಲ್ಲ; ಅದು ಕಷ್ಟದಲ್ಲಿರುವವರಿಗೆ ಸದಾ ತೆರೆದಿತ್ತು. ನುಡಿದಂತೆ ನಡೆದ ಕಾಯಕ ಯೋಗಿಯಾಗಿದ್ದ ಅವರು, ವೈಭವವಿಲ್ಲದ ಸರಳ ಜೀವನವನ್ನು ಆಯ್ಕೆ ಮಾಡಿಕೊಂಡರು. ತಮ್ಮ ವೈಯಕ್ತಿಕ ಅವಶ್ಯಕತೆಗಳಿಗಿಂತ ಸಮಾಜದ ಅವಶ್ಯಕತೆಗಳನ್ನು ಮೊದಲಿಗೆಯಾಗಿ ಕಂಡವರು. ಪದ್ಮಭೂಷಣ ಪ್ರಶಸ್ತಿಯಂತಹ ರಾಷ್ಟ್ರಮಟ್ಟದ ಗೌರವಗಳು ಅವರಿಗೆ ದೊರಕಿದರೂ, ಅವುಗಳಿಂದ ಅವರು ಅಹಂಕಾರಿಯಾಗಲಿಲ್ಲ. ಪ್ರಶಸ್ತಿಗಳಿಗಿಂತ ಸೇವೆಯೇ ಶಾಶ್ವತ ಎಂಬ ಭಾವನೆ ಅವರ ಜೀವನದ ದೀಪವಾಗಿತ್ತು. ''ದಾಸೋಹ ದಿನ''ದಂದು ಅವರನ್ನು ಸ್ಮರಿಸುವುದು ಕೇವಲ ಒಂದು ವಿಧಿವಿಧಾನವಲ್ಲ; ಅದು ಅವರ ಮೌಲ್ಯಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವ ಸಂಕಲ್ಪ. ಹಸಿದವರಿಗೆ ಅನ್ನ, ನಿರ್ಗತಿಕರಿಗೆ ಆಶ್ರಯ, ಅಶಿಕ್ಷಿತರಿಗೆ ವಿದ್ಯೆ ಇವೇ ನಿಜವಾದ ನಮನ. ಅವರ ಜೀವನ ನಮಗೆ ಕಲಿಸುವ ಪಾಠ ಏನೆಂದರೆ, ಸೇವೆಯೇ ಸತ್ಯಸಾಧನೆ; ಮಾನವೀಯತೆಯೇ ಧರ್ಮ.

ಇಂದು ಅವರು ದೈಹಿಕವಾಗಿ ನಮ್ಮ ನಡುವೆ ಇಲ್ಲದಿದ್ದರೂ, ಅವರ ದಾಸೋಹದ ಪರಂಪರೆ ಜೀವಂತವಾಗಿದೆ. ಅನೇಕ ಮಕ್ಕಳ ನಗು, ಸಾವಿರಾರು ಕುಟುಂಬಗಳ ನೆಮ್ಮದಿ, ಸಮಾಜದ ಅನೇಕ ಮುಖಗಳಲ್ಲಿ ಮೂಡಿದ ಆಶೆಯ ಕಿರಣಗಳಲ್ಲೇ ಅವರು ಸದಾ ಜೀವಂತರು. ಅವರ ಪುಣ್ಯಸ್ಮರಣೆಯ ಈ ''ದಾಸೋಹ ದಿನ''ದಂದು, ಅವರ ತತ್ತ್ವಗಳನ್ನು ನಮ್ಮ ನಡೆನುಡಿಗಳಲ್ಲಿ ಅಳವಡಿಸಿಕೊಂಡು, ಸಮಾಜಮುಖಿ ಬದುಕಿಗೆ ನಾವೆಲ್ಲರೂ ಕೈಜೋಡಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಶ್ರದ್ಧಾಂಜಲಿ.




# ನಿಮ್ಮ ಆರೋಗ್ಯಕ್ಕೆ ಹಣ್ಣಿನ ಜ್ಯೂಸ್..



ಹಣ್ಣುಗಳನ್ನು ತಿನ್ನುವ ಬದಲು ಜ್ಯೂಸ್ ಕುಡಿಯಲು ನೀವೂ ಇಷ್ಟಪಡುತ್ತೀರಾ ಹಾಗಿದ್ದರೆ, ಎಚ್ಚರ.. ಹಣ್ಣಿನ ರಸವು ನಿಮ್ಮ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಧಿಡೀರ್ ಎಂದು ಹೆಚ್ಚಿಸಬಹುದು.

ನೀವು ಹಣ್ಣನ್ನು ಜ್ಯೂಸ್ ಮಾಡಿದಾಗ, ಅದರಲ್ಲಿರುವ ಅತ್ಯಂತ ಪ್ರಮುಖ ಅಂಶವಾದ ನಾರಿನಂಶ (ಫೈಬರ್) ನಾಶವಾಗುತ್ತದೆ. ನಾರಿನಂಶ ನಮ್ಮ ಜೀರ್ಣಕ್ರಿಯೆಯನ್ನು ಸುಧಾರಿಸುವುದರ ಜೊತೆಗೆ, ರಕ್ತದಲ್ಲಿನ ಸಕ್ಕರೆ ಮಟ್ಟವು ಏಕಾಏಕಿ ಏರದಂತೆ ತಡೆಯಲೂ ಸಹಕಾರಿಯಾಗಿದೆ. ನಾರಿನಂಶವಿಲ್ಲದ ಜ್ಯೂಸ್‌ನಲ್ಲಿರುವ ಸಕ್ಕರೆ ನೇರವಾಗಿ ರಕ್ತಕ್ಕೆ ಸೇರುತ್ತದೆ, ಇದು ಆತಂಕಕಾರಿ. ರಕ್ತದ ಸಕ್ಕರೆ ಮಟ್ಟ ಇಡೀ ಹಣ್ಣುಗಳನ್ನು ತಿಂದಾಗ, ಅದರಲ್ಲಿರುವ ನೈಸರ್ಗಿಕ ಸಕ್ಕರೆ (ಫ್ರಕ್ಟೋಸ್) ನಾರಿನಂಶದ ಸಹಾಯದಿಂದ ರಕ್ತಕ್ಕೆ ನಿಧಾನವಾಗಿ ಬಿಡುಗಡೆಯಾಗುತ್ತದೆ. ಆದರೆ, ಜ್ಯೂಸ್ ಕುಡಿದಾಗ, ನಾರಿನಂಶವಿಲ್ಲದ ಕಾರಣ, ರಕ್ತದಲ್ಲಿನ ಸಕ್ಕರೆ ಮಟ್ಟವು ಕ್ಷಣಾರ್ಧದಲ್ಲಿ ಏರಿಕೆಯಾಗುತ್ತದೆ. ಇದು ಮಧುಮೇಹಿಗಳಿಗೆ ಅತ್ಯಂತ ಅಪಾಯಕಾರಿ.

ಪ್ಯಾಕ್ ಮಾಡಿದ ಅಥವಾ ಸಕ್ಕರೆ ಬೆರೆಸಿದ ಜ್ಯೂಸ್ ಸೇವನೆ ಆರೋಗ್ಯಕ್ಕೆ ಮತ್ತಷ್ಟು ಹಾನಿಕರ.ಹೆಚ್ಚುವರಿ ಕ್ಯಾಲೋರಿಗಳು ಒಂದು ಲೋಟ ಕಿತ್ತಳೆ ರಸ ತಯಾರಿಸಲು ಕನಿಷ್ಠ 3-4 ಕಿತ್ತಳೆ ಹಣ್ಣುಗಳು ಬೇಕಾಗುತ್ತವೆ. ಹೀಗೆ ಜ್ಯೂಸ್ ಕುಡಿಯುವುದರಿಂದ ನಾವು ಅರಿಯದೆ ಅತಿಯಾದ ಸಕ್ಕರೆ ಮತ್ತು ಕ್ಯಾಲೋರಿಗಳನ್ನು ದೇಹಕ್ಕೆ ಸೇರಿಸುತ್ತೇವೆ. ಬದಲಾಗಿ, ಒಂದೇ ಹಣ್ಣನ್ನು ತಿಂದರೆ ನಿಮ್ಮ ಹೊಟ್ಟೆಯೂ ತುಂಬುತ್ತದೆ ಮತ್ತು ಕ್ಯಾಲೋರಿಗಳ ನಿಯಂತ್ರಣವೂ ಸಾಧ್ಯವಾಗುತ್ತದೆ.

ಪ್ಯಾಕ್ ಮಾಡಿದ ಜ್ಯೂಸ್‌ಗಳು ಮಾರುಕಟ್ಟೆಯಲ್ಲಿ ದೊರೆಯುವ ಡಬ್ಬಿ ಜ್ಯೂಸ್‌ಗಳಲ್ಲಿ ಹಣ್ಣಿನ ಅಂಶಕ್ಕಿಂತ ಹೆಚ್ಚಾಗಿ ಸಂರಕ್ಷಕಗಳು (ಪ್ರಿಸರ್ವೇಟಿವ್ಸ್) ಮತ್ತು ಕೃತಕ ಸಕ್ಕರೆ ಇರುತ್ತದೆ. ಇವುಗಳ ಸೇವನೆಯು ಸ್ಥೂಲಕಾಯ (ಬೊಜ್ಜು) ಮತ್ತು ಹೃದಯ ಸಂಬಂಧಿ ಕಾಯಿಲೆಗಳಿಗೆ ಕಾರಣವಾಗಬಹುದು. ಪೌಷ್ಟಿಕಾಂಶದ ಕೊರತೆ ಹಣ್ಣನ್ನು ಜ್ಯೂಸ್ ಮಾಡುವ ಪ್ರಕ್ರಿಯೆಯಲ್ಲಿ ಅದು ಗಾಳಿ ಮತ್ತು ಶಾಖದ ಸಂಪರ್ಕಕ್ಕೆ ಬರುತ್ತದೆ. ಇದರಿಂದ ವಿಟಮಿನ್ ಸಿ ಮತ್ತು ಇತರ ಪ್ರಮುಖ ಪೋಷಕಾಂಶಗಳು ಆಕ್ಸಿಡೀಕರಣಗೊಳ್ಳುವುದರಿಂದ ಅವುಗಳ ಗುಣಮಟ್ಟ ಕುಸಿಯುತ್ತದೆ ಮತ್ತು ಪೌಷ್ಟಿಕಾಂಶಗಳು ನಶಿಸಿ ಹೋಗಬಹುದು.




# ಉದ್ದ ಕೂದಲಿಗೆ ಸಾವಿರ ಖರ್ಚು ಬೇಡ!

ಕೇವಲ 10 ರೂಪಾಯಿ ಬೆಲೆಯ ಟೊಮ್ಯಾಟೋ ಬಳಸಿ ಕೂದಲು ಉದುರುವಿಕೆ ತಡೆಯಿರಿ. ಜೊತೆಗೆ ನೆತ್ತಿಯನ್ನು ಆರೋಗ್ಯಕರ ಹಾಗೂ ಬಲವಾಗಿಸಿ. ಇದು ಹೇಗೆ ಸಾಧ್ಯ ಎಂದು ತಿಳಿಯಲು ಮುಂದೆ ಓದಿ ಕೂದಲು ಉದುರುವಿಕೆ, ಅಕಾಲಿಕ ಬಿಳಿ ಕೂದಲು ಅಥವಾ ಸೀಳು ತುದಿಗಳಂತಹ (ಕವಲೊಡೆಯುವುದು) ಸಮಸ್ಯೆಗಳು ಇತ್ತೀಚೆಗೆ ಸಾಮಾನ್ಯವಾಗಿದೆ. ಅನೇಕ ಜನರು ಬೋಳುತನದ ಸಮಸ್ಯೆಯಿಂದ ಬಳಲುತ್ತಿದ್ದು, ದುಬಾರಿ ಶಾಂಪೂ, ಕಂಡಿಷನರ್ ಅಥವಾ ಕ್ಲಿನಿಕ್ ಚಿಕಿತ್ಸೆಗಳಿಗಾಗಿ ಸಾವಿರಾರು ರೂಪಾಯಿಗಳನ್ನು ಖರ್ಚು ಮಾಡುತ್ತಿದ್ದಾರೆ. ಆದರೂ, ಅವರಿಗೆ ಪರಿಹಾರ ಸಿಕ್ಕಿಲ್ಲ.

**ಬೋಳು ತಲೆಗೆ ವಿದಾಯ**

ಆದರೆ, ನಿಮ್ಮ ಅಡುಗೆಮನೆಯಲ್ಲಿರುವ ಕೇವಲ 10 ರೂಪಾಯಿ ಬೆಲೆಯ ಒಂದು ಸಾಮಾನ್ಯ ಟೊಮ್ಯಾಟೋ ಈ ಸಮಸ್ಯೆಗೆ ಪರಿಣಾಮಕಾರಿ ಮತ್ತು ಅಗ್ಗದ ಪರಿಹಾರವಾಗಿದೆ. ಇದು ನಿಮಗೆ ತಿಳಿದಿದೆಯೇ ಟೊಮ್ಯಾಟೋದಲ್ಲಿರುವ ಉತ್ಕರ್ಷಣ ನಿರೋಧಕಗಳು (ಆಂಟಿಆಕ್ಸಿಡೆಂಟ್ ಗಳು), ವಿಟಮಿನ್ ಎ ಮತ್ತು ಸಿ ಅಂಶಗಳು ಕೂದಲಿನ ಬುಡವನ್ನು ಬಲಪಡಿಸಿ, ಹೊಸ ಕೂದಲಿನ ಬೆಳವಣಿಗೆಗೆ ಸಹಾಯ ಮಾಡುತ್ತವೆ.



**ಬೇಕಾಗುವ ಸಾಮಗ್ರಿಗಳು**

- **ಚೆನ್ನಾಗಿ ಹಣ್ಣಾದ ಟೊಮೆಟೊಗಳು - 2**
- **ಅಲೋವೆರಾ ಜೆಲ್ - 1 ಚಮಚ**
- **ತೆಂಗಿನ ಎಣ್ಣೆ - 1 ಚಮಚ**
- **ಜೇನುತುಪ್ಪ - 1 ಚಮಚ**

**ಬಳಸುವ ವಿಧಾನ:** ಮೇಲೆ ತಿಳಿಸಿದ ಎಲ್ಲಾ ಸಾಮಗ್ರಿಗಳನ್ನು ಒಂದು ಪಾತ್ರೆಯಲ್ಲಿ ತೆಗೆದುಕೊಂಡು ನುಣ್ಣಗೆ ಪೇಸ್ಟ್ ಮಾಡಿ, ಬಳಿಕ ಮಿಕ್ಸ್ ಮಾಡಿ. ಈ ಪೇಸ್ಟ್ ಅನ್ನು ನಿಮ್ಮ ನೆತ್ತಿ ಮತ್ತು ಕೂದಲಿಗೆ ಹಚ್ಚಿ. ಇದನ್ನು 30-40 ನಿಮಿಷಗಳ ಕಾಲ ಹಾಗೆಯೇ ಬಿಟ್ಟು ನಂತರ ತೊಳೆಯಿರಿ. ಈ ಹೇರ್ ಮಾಸ್ಕ್ ಕೂದಲಿಗೆ ಪೋಷಣೆ ನೀಡಿ, ಮೃದುಗೊಳಿಸುತ್ತದೆ ಮತ್ತು ಹೊಸ ಕೂದಲಿನ ಬೆಳವಣಿಗೆಗೆ ಸಹಾಯ ಮಾಡುತ್ತದೆ.

ಉತ್ತಮ ಫಲಿತಾಂಶಕ್ಕಾಗಿ, ವಾರಕ್ಕೆ 2 ರಿಂದ 3 ಬಾರಿ ಹೀಗೆ ಮಾಡುವುದರಿಂದ ಕೂದಲು ಉದುರುವುದು ಕ್ರಮೇಣ ಕಡಿಮೆಯಾಗುತ್ತದೆ.

**ಹೇಗೆ ಉಪಯೋಗಿಸಬೇಕು:** ನೀವು ಟೊಮ್ಯಾಟೋ ರಸವನ್ನು ತೆಂಗಿನ ಎಣ್ಣೆ, ಹರಳೆಣ್ಣೆ ಅಥವಾ ಆಲಿವ್ ಎಣ್ಣೆಯೊಂದಿಗೆ ಬೆರೆಸಿ ಬಳಸಬಹುದು. ಟೊಮ್ಯಾಟೋ ರಸಕ್ಕೆ ಅಲೋವೆರಾ ಜೆಲ್ ಸೇರಿಸಿ ಹಚ್ಚುವುದರಿಂದ ತುರಿಕೆ ಅಥವಾ ಉರಿ ಕಡಿಮೆಯಾಗಿ ಕೂದಲಿನ ಬೆಳವಣಿಗೆ ಹೆಚ್ಚುತ್ತದೆ.

**ಏಕೆ ಪ್ರಯೋಜನಕಾರಿ:** ಬೇರುಗಳನ್ನು ಬಲಪಡಿಸುತ್ತದೆ: ಟೊಮ್ಯಾಟೋದಲ್ಲಿರುವ ವಿಟಮಿನ್ ಎ ಮತ್ತು ಸಿ ಕೂದಲಿನ ಬೇರುಗಳಿಗೆ ಪೋಷಣೆ ನೀಡಿ ಅವು ಮುರಿಯದಂತೆ ತಡೆಯುತ್ತವೆ.

**ಬೋಳುತನ ಕಡಿಮೆ ಮಾಡುತ್ತದೆ:** ಟೊಮ್ಯಾಟೋ ರಸ ನೆತ್ತಿಯಲ್ಲಿ ರಕ್ತ ಪರಿಚಲನೆಯನ್ನು ಹೆಚ್ಚಿಸುತ್ತದೆ, ಇದು ಹೊಸ ಕೂದಲು ಬೆಳೆಯಲು ಸಹಾಯ ಮಾಡುತ್ತದೆ.

**ತಲೆಹೊಟ್ಟು ಮತ್ತು ತುರಿಕೆ ನಿವಾರಣೆ:** ಆಂಟಿಬ್ಯಾಕ್ಟೀರಿಯಲ್ ಗುಣಗಳು ತಲೆಹೊಟ್ಟು ಮತ್ತು ನೆತ್ತಿಯ ಸೋಂಕಿನಿಂದ ಮುಕ್ತಿ ನೀಡುತ್ತವೆ.

**ಮೃದುಗೊಳಿಸುತ್ತದೆ:** ರಸ ಕೂದಲಿನ ಶುಷ್ಕತೆಯನ್ನು ಕಡಿಮೆ ಮಾಡಿ, ನೈಸರ್ಗಿಕ ಹೊಳಪನ್ನು ನೀಡುತ್ತದೆ. ಒಟ್ಟಾರೆಯಾಗಿ, ದುಬಾರಿ ಚಿಕಿತ್ಸೆಗಳ ಬದಲಿಗೆ, ನಿಮ್ಮ ಅಡುಗೆಮನೆಯ ಈ ಸರಳ ಟೊಮೆಟೊವನ್ನು ಬಳಸಿ ನಿಮ್ಮ ಕೂದಲಿನ ಎಲ್ಲಾ ಸಮಸ್ಯೆಗಳಿಗೆ ಸುಲಭ ಮತ್ತು ಶಾಶ್ವತ ಪರಿಹಾರವನ್ನು ಕಂಡುಕೊಳ್ಳಿ.



# ಜಿಲ್ಲಾ ಪಂಚಾಯಿತಿ ಸಿಇಓ ಡಾ.ಆಕಾಶ್ ಅಭಿಮತ

## ಜಿಲ್ಲೆಯ ಸುಸ್ಥಿರ ಅಭಿವೃದ್ಧಿಗೆ ನಿಖರ ಹಾಗೂ ವಾಸ್ತವ ಅಂಕಿ ಅಂಶಗಳ ಕ್ರೋಢೀಕರಣ ಅಗತ್ಯ

• ಉದಯವಾಹಿನಿ, ಚಿತ್ರದುರ್ಗ


ಉದಯವಾಹಿನಿ ಚಿತ್ರ

ಸಿಇಓ ಡಾ.ಆಕಾಶ್ ಹೇಳಿಕೆ

ಜಿಲ್ಲೆಯ ಸುಸ್ಥಿರ ಅಭಿವೃದ್ಧಿಗೆ ನಿಖರ ಹಾಗೂ ವಾಸ್ತವ ಅಂಕಿ ಅಂಶಗಳ ಕ್ರೋಢೀಕರಣ ಅಗತ್ಯವಾಗಿದೆ ಎಂದು ಜಿಲ್ಲಾ ಪಂಚಾಯಿತಿ ಸಿಇಓ ಡಾ.ಆಕಾಶ್ ಅಭಿಪ್ರಾಯ ವ್ಯಕ್ತಪಡಿಸಿದರು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲ ಮಾನವ ಅಭಿವೃದ್ಧಿ ವರದಿ-2025 ಹಾಗೂ ಸಮಗ್ರ ಮತ್ತು ಸುಸ್ಥಿರ ಜಿಲ್ಲಾ ಅಭಿವೃದ್ಧಿ ದೂರದೃಷ್ಟಿ ಯೋಜನೆ-2031 ರ ಕುರಿತಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗಾಗಿ ಆಯೋಜಿಸಿದ್ದ ಕಾರ್ಯಾಗಾರ ಉದ್ಘಾಟಿಸಿ ಪ್ರಾಸ್ತಾವಿಕವಾಗಿ ಅವರು ಮಾತನಾಡಿದರು.

ಭಾರತ 4 ನೇ ಅತಿದೊಡ್ಡ ಆರ್ಥಿಕ ವ್ಯವಸ್ಥೆ ಹೊಂದಿರುವ ದೇಶವಾಗಿದೆ. ಆದರೆ ವಿಶ್ವದಲ್ಲಿಯೇ ಅತಿ ಕಡಿಮೆ ತಲಾದಾಯ ಹೊಂದಿರುವ ದೇಶಗಳಲ್ಲಿ ಭಾರತವು ಒಂದಾಗಿರುವುದು ವೈರುಧ್ಯ ಎನಿಸುತ್ತದೆ. ಸ್ಥಳೀಯವಾಗಿ ಜನರಿಗೆ ಉದ್ಯೋಗ ದೊರೆತು ಆದಾಯ ಮಟ್ಟ ಹೆಚ್ಚಿದಾಗ ಮಾತ್ರ ಸುಸ್ಥಿರ ಅಭಿವೃದ್ಧಿ ಸಾಧ್ಯ. ಈ ನಿಟ್ಟಿನಲ್ಲಿ ಸರ್ಕಾರಿ ಅಧಿಕಾರಿಗಳು ಸಂಗ್ರಹಿಸುವ ದತ್ತಾಂಶಗಳು ಅತಿ ಮುಖ್ಯವಾಗುತ್ತವೆ. ದಕ್ಷಿಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿಯೇ ಚಿತ್ರದುರ್ಗ ಅತ್ಯಂತ ಕಡಿಮೆ ತಲಾ ಆದಾಯ ಹೊಂದಿರುವ ಜಿಲ್ಲೆಯಾಗಿದೆ. ರಾಜ್ಯದ ಸರಾಸರಿ ತಲಾ ಆದಾಯ ರೂ.03 ಲಕ್ಷವಿದ್ದರೆ, ಜಿಲ್ಲೆಯ ತಲಾ ಆದಾಯ ರೂ. 1.77 ಲಕ್ಷವಿದೆ.


ಜಿಲ್ಲೆಯಲ್ಲಿ ಶೇ.56.67 ರಷ್ಟು ಪರಿಶಿಷ್ಟ ಜಾತಿ ಹಾಗೂ ಪಂಗಡದ ವಿದ್ಯಾರ್ಥಿಗಳು ಸರ್ಕಾರಿ ಶಾಲೆಗಳಲ್ಲಿ ವ್ಯಾಸಾಂಗ ಮಾಡುತ್ತಿದ್ದಾರೆ. ಬೇರೆ ಜಿಲ್ಲೆಗಳಿಗೆ ಹೋಲಿಸಿದರೆ ಈ ಪ್ರಮಾಣ ಅತಿ ಹೆಚ್ಚಾಗಿದೆ. ಜಿಲ್ಲೆಯು ಶೈಕ್ಷಣಿಕವಾಗಿ ತುಂಬಾ ಹಿಂದುಳಿದಿದ್ದು, ಈ ವರ್ಷದ ಪಿಯು ಫಲಿತಾಂಶದಲ್ಲಿ ರಾಜ್ಯಕ್ಕೆ 28 ಸ್ಥಾನ ಹಾಗೂ ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ 23ನೇ ಸ್ಥಾನದಲ್ಲಿದೆ. ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳ ಶೈಕ್ಷಣಿಕ ಸಾಧನೆ ತೀರಾ ಕಳಪೆ ಮಟ್ಟದಲ್ಲಿದ್ದು, ಇತ್ತೀಚಿನ ಶೈಕ್ಷಣಿಕ ವರದಿಯೊಂದರಲ್ಲಿ 6 ರಿಂದ 8ನೇ ತರಗತಿಯಲ್ಲಿ ವ್ಯಾಸಾಂಗ ಮಾಡುತ್ತಿರುವ ಶೇ.48 ರಷ್ಟು ವಿದ್ಯಾರ್ಥಿಗಳಿಗೆ 2 ತರಗತಿಯ ಪಠ್ಯ ಪುಸ್ತಕ ಓದಲು ಬರುವುದಿಲ್ಲ. ಶೇ.36ರಷ್ಟು ವಿದ್ಯಾರ್ಥಿಗಳಿಗೆ 2 ಅಂಕಿಯ ಕೂಡುವಿಕೆ, ಕಳೆಯುವಿಕೆ, ಗುಣಕಾರ ಹಾಗೂ ಭಾಗಕಾರ ಲೆಕ್ಕಗಳನ್ನು ಮಾಡಲು ಬರದಂತಹ ಸ್ಥಿತಿ ಇದೆ. ಇಂತಹ ವಿದ್ಯಾರ್ಥಿಗಳು ಮುಂದೆ ಎಸ್.ಎಸ್.ಎಲ್.ಸಿ ಹಾಗೂ ಪಿ.ಯು.ಸಿಯಲ್ಲಿ ಉತ್ತಮ ಫಲಿತಾಂಶ ತರಲು ಹೇಗೆ ಸಾಧ್ಯ. ಇದೇ ಮಾದರಿಯಲ್ಲಿ ಜಿಲ್ಲೆ ಸಮುದಾಯ ಆರೋಗ್ಯ, ಪೌಷ್ಠಿಕಾಂಶ, ಅನಿಮೀಯತೆ, ವಾಣಿಜ್ಯ, ವ್ಯಾಪಾರ, ಕೈಗಾರಿಕೆ ಹಾಗೂ ಕೃಷಿ ಕ್ಷೇತ್ರದಲ್ಲಿ ಅತ್ಯಂತ ಹಿಂದಿಳಿದೆ. ಇವುಗಳನ್ನು ಹೋಗಲಾಡಿಸಿ, ಸಾಮಾಜಿಕ ಬದಲಾವಣೆ ತಂದು, ಜಿಲ್ಲೆಯ ಜನರ ಆದಾಯ ಹಾಗೂ ಜೀವನ ಮಟ್ಟ ಸುಧಾರಿಸಲು ಅಗತ್ಯ ಇರುವ ಅಂಕಿ ಅಂಶಗಳನ್ನು ಅಧಿಕಾರಿಗಳು ಕ್ರೋಢಿಕರಿಸಿದರೆ, ಮುಂಬರುವ ವರ್ಷಗಳಲ್ಲಿ ಇವುಗಳ ನಿವಾರಣೆಗೆ ಸರ್ಕಾರ ಯೋಜನೆ ರೂಪಿಸಲು ಸಹಕಾರಿಯಾಗುತ್ತದೆ. ಯಾವುದೇ ಕಾರಣಕ್ಕೂ ಕಲ್ಪಿತ ಹಾಗೂ ಸುಳ್ಳು ಅಂಕಿ ಅಂಶಗಳನ್ನು ಅಧಿಕಾರಿಗಳು ನೀಡಬಾರದು. ಈ ಹಿನ್ನಲೆಯಲ್ಲಿಯೇ ಕಾರ್ಯಾಗಾರ ಏರ್ಪಡಿಸಲಾಗಿದೆ. ಪ್ರತಿ ತಿಂಗಳು ಅಧಿಕಾರಿಗಳು ನೀಡುವ ಅಂಕಿ ಅಂಶಗಳ ಪರಿಶೀಲನೆಗಾಗಿ ಸಭೆ ನಡೆಸುವುದಾಗಿ ಸಿಇಓ ಡಾ.ಆಕಾಶ್ ತಿಳಿಸಿದರು.

ಉದ್ಘಾಟನೆ ಕಾರ್ಯಕ್ರಮದಲ್ಲಿ ಜಿ.ಪಂ. ಉಪಕಾರ್ಯದರ್ಶಿ ಡಾ.ರಂಗಸ್ವಾಮಿ, ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯಿತ್ರಿ, ದಾವಣಗೆರೆ ವಿಶ್ವ ವಿದ್ಯಾಲಯದ ಅರ್ಥಶಾಸ್ತ್ರ ಪ್ರಾಧ್ಯಪಕ ಡಾ.ಹುಚ್ಚೇಗೌಡ, ತುಮಕೂರು ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಪ್ರಾಧ್ಯಾಪಕ ಡಾ.ಮುನಿರಾಜು ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

> ಕಾರ್ಯಾಗಾರದ ಪ್ರಮುಖ ಉದ್ದೇಶವೆಂದರೆ, ಮಾನವ ಅಭಿವೃದ್ಧಿ ಸೂಚ್ಯಂಕ-2025 ರಲ್ಲಿ ಜಿಲ್ಲೆಯ ಜನರ ಜೀವನ ಶೈಲಿ, ಜೀವನ ಮಟ್ಟ ಹಾಗೂ ವಸ್ತುಸ್ಥಿತಿ ಹೇಗಿದೆ ಎಂಬುದನ್ನು ತಿಳಿಯುವುದಾಗಿದೆ. ಇದಕ್ಕಾಗಿ ಹಲವಾರು ಇಲಾಖೆ ಅಧಿಕಾರಿಗಳು ವಿವಿಧ ರೀತಿಯ ಅಂಕಿ ಅಂಶಗಳನ್ನು ವಾಸ್ತವ ನೆಲೆಗಟ್ಟಿನಲ್ಲಿ ನೀಡಬೇಕು. ಇದನ್ನು ಆಧಾರಿಸಿ ಮಾನವ ಅಭಿವೃದ್ಧಿಗಾಗಿ ವಿವಿಧ ಇಲಾಖೆಗಳು ಅನುಷ್ಠಾನಗೊಳಿಸುತ್ತಿರುವ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಹಾಗೂ ಜಿಲ್ಲೆಗೆ ಅಗತ್ಯ ಇರುವ ಹೊಸ ಯೋಜನೆಗಳನ್ನು ರೂಪಿಸಲು ಸಹಾಯಕವಾಗುತ್ತಿದೆ. ಇದರೊಂದಿಗೆ ಸುಸ್ಥರ ಅಭಿವೃದ್ಧಿ ಗುರಿಗಳನ್ನು ಸಾಧಿಸಲು ಮಾರ್ಗೋಪಾಯಗಳನ್ನು ಕಂಡುಕೊಳ್ಳಬಹುದು ಎಂದರು.
> -ಜಂಟಿ ಕಾರ್ಯದರ್ಶಿ ಬಸವರಾಜ್.ಎಸ್

# ಚಂದ್ರಂಪಳ್ಳಿ ತೋಟಗಾರಿಕೆ ಇಲಾಖೆ ತರಬೇತಿ ಕೇಂದ್ರ, ಅಧಿಕಾರಿಗಳ ನಿರ್ಲಕ್ಷ್ಯದಿಂದ 122ಎಕರೆ ಜಮೀನು ಬಳಕೆ ಇಲ್ಲದೆ ಹಾಳುಬಿದ್ದಿದೆ

• ಉದಯವಾಹಿನಿ, ಚಿಂಚೋಳಿ


ಉದಯವಾಹಿನಿ ಚಿತ್ರ

20ಲಕ್ಷ ರೂ. ಅನುದಾನ ಬಿಡುಗಡೆ

ತಾಲ್ಲೂಕಿನ ಚಂದ್ರಂಪಳ್ಳಿ ತೋಟಗಾರಿಕೆ ಇಲಾಖೆ ಒಟ್ಟಾರೆ ಜಮೀನು 150 ಎಕರೆ ಪ್ರದೇಶದವಿದ್ದು ಅದರಲ್ಲಿ ಕೇವಲ 28ಎಕರೆ ಜಮೀನು ಮಾತ್ರ ಬಳಕೆಯಲ್ಲಿದೆ ಉಳಿದ 122ಎಕರೆ ಪ್ರದೇಶದ ಜಮೀನು ತರಬೇತಿ ಅಧಿಕಾರಿಗಳ ನಿರ್ಲಕ್ಷ್ಯ ಧೋರಣೆಯಿಂದ ಹಾಳುಬಿದ್ದಿದೆ ಎಂದು ಹಿರಿಯ ಮುಖಂಡ ಕೆ.ಎಂ.ಬಾರಿ ಶ್ರೀಮಂತ ಕಟ್ಟಿಮನಿ ಆರೋಪಿಸಿದ್ದಾರೆ.

ತೋಟಗಾರಿಕೆ ಇಲಾಖೆಯ ಜಮೀನು ಪ್ರದೇಶಕ್ಕೆ ಭೇಟಿನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ತೋಟಗಾರಿಕೆ ತರಬೇತಿ ಇಲಾಖೆಯ ಅಧಿಕಾರಿಗಳು ಮತ್ತು ರಾಜ್ಯ ಸರ್ಕಾರದ ನಿರ್ಲಕ್ಷ್ಯದಿಂದ ಸಂಪೂರ್ಣವಾಗಿ ಚಂದ್ರಂಪಳ್ಳಿ ತೋಟಗಾರಿಕೆ ಪ್ರದೇಶ ಹಾಳುಬಿದ್ದಿದೆ,ಆದರೆ ಅಧಿಕಾರಿಗಳ ಇಚ್ಛಾಶಕ್ತಿ ಕೊರತೆ ಮತ್ತು ರಾಜ್ಯ ಸರ್ಕಾರದ ನಿರ್ಲಕ್ಷ್ಯವೇ ಇದಕ್ಕೆ ನೇರಕಾರಣವಾಗಿದೆ.

ಪ್ರತಿವರ್ಷ ಚಂದ್ರಂಪಳ್ಳಿ ತೋಟಗಾರಿಕೆ ಇಲಾಖೆ ತರಬೇತಿ ಮತ್ತು ಜಮೀನು ಪ್ರದೇಶ ನಿರ್ವಹಣೆಗೆ 20ಲಕ್ಷ ರೂ.ಅನುದಾನ ಬಿಡುಗಡೆಯಾಗುತ್ತದೆ,ಆದರೆ ಅನುದಾನ ಸದ್ಬಳಕೆ ಮಾಡದೆ ಸಂಪೂರ್ಣವಾಗಿ ತೋಟಗಾರಿಕೆ ಜಮೀನು ಅಧಿಕಾರಿಗಳು 122 ಎಕರೆ ಜಮೀನು ಹಾಳು ಹಾಕಿದ್ದಾರೆ.

ಚಂದ್ರಂಪಳ್ಳಿ ತೋಟಗಾರಿಕೆ ಇಲಾಖೆ ಜಮೀನು ಒಟ್ಟಾರೆ 150.1ಎಕರೆ ಪ್ರದೇಶವಿದ್ದು ಆದರೆ ಅಧಿಕಾರಿಗಳು ರಾಜ್ಯ ಸರ್ಕಾರ ಜಮೀನು ಸದುಪಯೋಗ ಪಡೆದುಕೊಳ್ಳಲಾಗದೆ ಕೊಟ್ಯಾಂತರ ರೂ.ಆದಾಯ ಬರುವ ಜಮೀನೀಗೆ 122ಎಕರೆ ಪ್ರದೇಶ ಹಾಳು ಹಾಕಿದ್ದಾರೆ,150ಎಕರೆ ಸಂಪೂರ್ಣ ಜಮೀನು ಪ್ರದೇಶ ಸದ್ಬಳಕೆ ಮಾಡಿಕೊಂಡರೆ ವರ್ಷಕ್ಕೆ ಕನಿಷ್ಠ 1ಕೋಟಿ ರೂ.ಸರ್ಕಾರಕ್ಕೆ ಇಲಾಖೆಗೆ ಆದಾಯ ಬರುವ ನಿರೀಕ್ಷೆಯಿದೆ ಆದರೆ ಅಧಿಕಾರಿಗಳು ಜಮೀನು ಪ್ರದೇಶ ಹಾಳುಹಾಕಿದ್ದು ಇದರಿಂದ ಅಧಿಕಾರಿಗಳ ಮತ್ತು ಸರ್ಕಾರದ ನಿರ್ಲಕ್ಷ್ಯವೇ ಕಾರಣವೆಂದು ಹೇಳಲಾಗುವುದು.

ಚಂದ್ರಂಪಳ್ಳಿ ತೋಟಗಾರಿಕೆ ತರಬೇತಿ ಕೇಂದ್ರವು 1971-72ರಲ್ಲಿ ಮೊಟ್ಟಮೊದಲು ದಿ.ಮಾಜಿ ಮುಖ್ಯಮಂತ್ರಿ ವೀರೇಂದ್ರ ಪಾಟೀಲರು ಶಾಸಕರು ಇದ್ದಾಗ ನಿರ್ಮಾಣವಾದ ತರಬೇತಿ ಕೇಂದ್ರ, ಆದರೆ ಈಗ ಏಕಾಏಕಿ ಒಂದು ಹುದ್ದೆ ಇಲ್ಲಿಂದ ಹುಬ್ಬಳ್ಳಿಗೆ ಶಾಶ್ವತವಾಗಿ ತೆಗೆದುಕೊಂಡು ಹೋಗುತ್ತಿರುವುದು ಸರಿಯಿಲ್ಲ,ಎಲ್ಲಾ ಹುದ್ದೆಗಳು ಇಲ್ಲಿಯೇ ಮುಂದುವರೆಸಿ ಖಾಲಿ ಇರುವ ಕನಿಷ್ಠ 15 ಹುದ್ದೆಗಳು ಭರ್ತಿಗೊಳಿಸಿ ಚಂದ್ರಂಪಳ್ಳಿ ತೋಟಗಾರಿಕೆ ತರಬೇತಿ ಕೇಂದ್ರ ಮತ್ತು ಜಮೀನು ಅಭಿವೃದ್ಧಿಗೊಳಿಸಬೇಕು,ಜಮೀನು ಸದ್ಬಳಕೆ ಮಾಡದೆ ಇರುವ ತಪ್ಪಿಸ್ಥ ಅಧಿಕಾರಿಗಳ ವಿರುದ್ಧ ಕ್ರಮಕ್ಕೆಗೊಳ್ಳಬೇಕು ಇಲ್ಲಾದಿದ್ದರೆ ಬರುವ ದಿನಗಳಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದರು.

# ಸಮಾಜದ ಅಭಿವೃದ್ಧಿಗೆ ಶ್ರಮಿಸೋಣ: ಪಾಟೀಲ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಾಗಲಕೋಟೆ

ಎಲ್ಲಾ ಸಮುದಾಯದವರೊಂದಿಗೆ ಹೊಂದಿಕೊಂಡು ಹೋಗುವ ಸಮಾಜವೆಂದರೆ, ಅದು ರಡ್ಡಿ ಸಮುದಾಯ. ಸಮುದಾಯದ ಅಭಿವೃದ್ಧಿ ಜೊತೆಗೆ ಸಮಾಜದ ಅಭಿವೃದ್ಧಿಗೂ ಶ್ರಮಿಸಬೇಕು ಎಂದು ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ನವನಗರದ ಕೆಐಎಡಿಬಿ ನಿವೇಶನದಲ್ಲಿ ಹೇಮ ವೇಮ ಸಂಸ್ಥೆಯಿಂದ ನಿರ್ಮಿಸಿರುವ ಹೇಮರಡ್ಡಿ ಮಲ್ಲಮ್ಮ ಸಭಾಭವನ ಲೋಕಾರ್ಪಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು. ವೇಮನ ಜಯಂತಿ, ಮಲ್ಲಮ್ಮನ ಜಯಂತಿ ಮಾಡುವಲ್ಲಿ ನಮ್ಮ ಸರ್ಕಾರದ ಕೊಡುಗೆ ಇದೆ. ದಾನಿಗಳು ಸಹಾಯ ಮಾಡಿದ್ದರಿಂದ ಸಮುದಾಯ ಭವನ ತಲೆ ಎತ್ತಿದೆ ಎಂದರು.

ಮಾಜಿ ಸಚಿವ ಎಸ್.ಆರ್. ಪಾಟೀಲ ಮಾತನಾಡಿ, ಸಾಂಸ್ಕೃತಿಕ, ಶೈಕ್ಷಣಿಕ ಸಾಮಾಜಿಕ ಹಾಗೂ ಧಾರ್ಮಿಕ ಕಾರ್ಯಕ್ರಮಗಳಿಗೆ ಈ ಸಭಾಭವನ ವೇದಿಕೆಯಾಗಲಿ. ಸಮಾಜಮುಖಿ ಕಾರ್ಯಕ್ರಮಗಳಿಗೂ ವೇದಿಕೆಯಾಗಬೇಕು ಎಂದರು. ಸಚಿವ ರಾಮಲಿಂಗಾ ರಡ್ಡಿ, ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪುರ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯ ಪಿ.ಎಚ್.ಪೂಜಾರ, ಮಾಜಿ ಶಾಸಕ ದೊಡ್ಡನಗೌಡ ಪಾಟೀಲ, ರಾಜ್ಯಸಭಾ ಸದಸ್ಯ ನಾರಾಯಣ ಭಾಂಡಗೆ ಮಾತನಾಡಿದರು. ಶಾಸಕ ಜೆ.ಟಿ.ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ವಿಧಾನ ಪರಿಷತ್ ಸುನೀಲಗೌಡ ಪಾಟೀಲ, ಮಾಜಿ ಸಚಿವ ಅಜಯಕುಮಾರ ಸರನಾಯಕ, ಸಿ.ಆರ್. ಸೋರಗಾಂವಿ ಇದ್ದರು.

# ಆಟೋರಿಕ್ಷಾ ಪ್ರಯಾಣ ಬಾಡಿಗೆ ದರ ಪರಿಷ್ಕರಣೆಗೆ ಆಗ್ರಹ

• ಉದಯವಾಹಿನಿ, ಬೆಳಗಾವಿ


ಉದಯವಾಹಿನಿ ಚಿತ್ರ

ನಮ್ಮ ಹಿತದೃಷ್ಟಿಯಿಂದ ಪ್ರಯಾಣ ಬಾಡಿಗೆ ದರ ಪರಿಷ್ಕರಿಸಬೇಕು ಎಂದು ಆಗ್ರಹಿಸಿ ಆಟೋರಿಕ್ಷಾ ಓನರ್ಸ್ ಮತ್ತು ಡ್ರೈವರ್ಸ್ ಅಸೋಸಿಯೇಷನ್‌ನವರು ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು. ಇಲ್ಲಿನ ರಾಣಿ ಚನ್ನಮ್ಮನ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಮೆರವಣಿಗೆ ನಡೆಸಿದ ಪ್ರತಿಭಟನಕಾರರು, ತಮ್ಮ ಬೇಡಿಕೆ ಈಡೇರಿಸಬೇಕು ಎಂದು ಆಗ್ರಹಿಸಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರಿಗೆ ಮನವಿ ಸಲ್ಲಿಸಿದರು.

ಇಲ್ಲದಿದ್ದರೆ ಅನಿರ್ದಿಷ್ಟ ಅವಧಿಗೆ ಮುಷ್ಕರ ನಡೆಸಲಾಗುವುದು ಎಂದು ಎಚ್ಚರಿಕೆ ಕೊಟ್ಟರು. ಕನಿಷ್ಠ ಬಾಡಿಗೆ ದರವನ್ನು (1.5 ಕಿ.ಮಿನೊಳಗೆ) ರೂ.50 ದರ ನಿಗದಿಪಡಿಸಬೇಕು. ನಂತರ ಪ್ರತಿ ಕಿ.ಮೀ ಪ್ರಯಾಣಕ್ಕೆ ರೂ.30 ನಿಗದಿಪಡಿಸಬೇಕು. ಇದು ದುಬಾರಿ ಯುಗ. ಡೀಸೆಲ್ ಸೇರಿ ಅಗತ್ಯವಸ್ತುಗಳ ದರ ಹೆಚ್ಚಿದ್ದು, ಜೀವನ ನಿರ್ವಹಣೆ ಕಷ್ಟಕರವಾಗಿದೆ. ಹಾಗಾಗಿ ನಮ್ಮ ಬೇಡಿಕೆಯಂತೆ ಪ್ರಯಾಣ ಬಾಡಿಗೆ ದರ ನಿಗದಿಪಡಿಸಬೇಕು. ನಮ್ಮನ್ನೂ ವಿಶ್ವಾಸಕ್ಕೆ ತೆಗೆದುಕೊಂಡೇ ಯಾವುದೇ ನಿರ್ಣಯ ಕೈಗೊಳ್ಳಬೇಕು ಎಂದು ಅಸೋಸಿಯೇಷನ್ ಅಧ್ಯಕ್ಷ ಮನ್ಸೂರ್ ಒತ್ತಾಯಿಸಿದರು.

ಬೆಳಗಾವಿ ನಗರದಲ್ಲಿ ಅನಧಿಕೃತವಾಗಿ ಸಂಚರಿಸುತ್ತಿರುವ ಎಲೆಕ್ಟ್ರಿಕ್ ಆಟೋಗಳ ಸಂಚಾರ ಸ್ಥಗಿತಗೊಳಿಸಬೇಕು. ಬೆಳಗಾವಿ ನಗರದಿಂದ 16 ಕಿ.ಮೀ ವ್ಯಾಪ್ತಿಯಲ್ಲಿ ಆಟೋರಿಕ್ಷಾಗಳ ಓಡಾಟಕ್ಕೆ ಅವಕಾಶ ಕಲ್ಪಿಸಲಾಗಿದೆ. ಆ ಮಿತಿಯನ್ನು 30 ಕಿ.ಮೀಗೆ ಹೆಚ್ಚಿಸಬೇಕು' ಎಂದು ಆಗ್ರಹಿಸಿದರು. ಬಿ.ಕೆ.ಅವರೊಳ್ಳಿ ಇತರರಿದ್ದರು.

# ಹಿಂದೂ ಸಂಸ್ಕೃತಿ ಉಳಿಸುತ್ತಿದ್ದೇನೆ: ಲಕ್ಷ್ಮೀ ಹೆಬ್ಬಾಳಕರ್

• ಉದಯವಾಹಿನಿ, ಬೆಳಗಾವಿ


ಉದಯವಾಹಿನಿ ಚಿತ್ರ

ಬಿಜೆಪಿಯವರು ಕೇವಲ ಭಾಷಣದಲ್ಲಿ ಹಿಂದೂ ಎನ್ನುತ್ತಿರುತ್ತಾರೆ. ಆದರೆ ಹಿಂದೂಗಳಿಗೆ ಏನೂ ಮಾಡುವುದಿಲ್ಲ. ನಾನು ಕೇವಲ ಭಾಷಣ ಮಾಡದೇ ಹಿಂದೂ ಸಂಸ್ಕೃತಿ ಉಳಿಸುತ್ತಿದ್ದೇನೆ. ಕ್ಷೇತ್ರದಲ್ಲಿ 152 ದೇವಸ್ಥಾನ ಕಟ್ಟಿಸಿದ್ದೇನೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಹೇಳಿದರು. ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಿಂದೊಳ್ಳಿ ಗ್ರಾಮದಲ್ಲಿ ರೂ.7 ಕೋಟಿ ವೆಚ್ಚದ ಕಾಂಕ್ರೀಟ್ ರಸ್ತೆ, ಚರಂಡಿ ನಿರ್ಮಾಣ, ಪೇವರ್ಸ್ ಅಳವಡಿಕೆ ಮುಂತಾದ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಒಮ್ಮೆ ಅವಕಾಶ ಕೊಡಿ ಅಭಿವೃದ್ಧಿ ಮಾಡಿ ತೋರಿಸುತ್ತೇನೆ ಎಂದು ಏಳು ವರ್ಷದ ಹಿಂದೆ ಹೇಳಿದ್ದೆ. ಅದರಂತೆ ಅಭಿವೃದ್ಧಿ ಮಾಡಿ ತೋರಿಸಿದೆ. ಹಾಗಾಗಿ ಮತ್ತೊಮ್ಮೆ ಆಯ್ಕೆ ಮಾಡಿ ಮಂತ್ರಿಯಾಗಲು ಅವಕಾಶ ಮಾಡಿಕೊಟ್ಟಿದ್ದೀರಿ. ಗ್ರಾಮೀಣ ಕ್ಷೇತ್ರ ಬೆಳೆಸುತ್ತಿದ್ದೇನೆ. ಕ್ಷೇತ್ರ ಅಭಿವೃದ್ಧಿ ಪಥದಲ್ಲಿ ಹೋಗುತ್ತಿದೆ. ಈ ಸ್ಪೀಡ್ ಕಟ್ ಮಾಡಬೇಡಿ.

ನನಗೆ ಸುಧಾರಣೆ ಮಾಡುವ ಅವಕಾಶ ಸಿಕ್ಕಿದೆ. ನಿಮಗೆ ಸುಧಾರಣೆ ಮಾಡಿಸಿಕೊಳ್ಳುವ ಅವಕಾಶ ಸಿಕ್ಕಿದೆ. ನೀವು ಮಗಳೆಂದು ಸ್ವೀಕಾರ ಮಾಡಿದ್ದೀರಿ. ನಾನು ನಿಮ್ಮ ಸೇವೆ ಮಾಡುತ್ತಿದ್ದೇನೆ ಎಂದರು.

ನಾನು ಆಗುವುದಿಲ್ಲ ಎಂದು ಕೈ ಕಟ್ಟಿ ಕುಳಿತುಕೊಳ್ಳುವ ಹೆಣ್ಣುಮಗಳಲ್ಲ. ಮನಸ್ಸಿದ್ದರೆ ಮಾರ್ಗ ಎನ್ನುವಂತೆ ಬೇರೆ ಬೇರೆ ಮಂತ್ರಿಗಳು, ಅಧಿಕಾರಿಗಳ ಬಳಿ ಹೋಗಿ ಕೆಲಸ ತರುತ್ತಿದ್ದೇನೆ. ಈ ಮೊದಲು ಬೆಳಗಾವಿ ಗ್ರಾಮೀಣ ಕ್ಷೇತ್ರದ ಹೆಸರು ರಾಜ್ಯಕ್ಕೆ ಗೊತ್ತಿರಲಿಲ್ಲ. ಈಗ ಅಭಿವೃದ್ಧಿಯ ಮೂಲಕ ಎಲ್ಲೆಡೆ ಕ್ಷೇತ್ರ ಚಿರಪರಿಚಿತವಾಗುವಂತೆ ಮಾಡಿದ್ದೇನೆ ಎಂದರು. ಈ ಹಿಂದೆ ಯಾರೂ ಇಷ್ಟು ಹಣ ಕೊಟ್ಟಿರಲಿಲ್ಲ. ನಾನಾಗಲಿ, ಸಹೋದರ ಚನ್ನರಾಜ ಆಗಲಿ, ಮಗ ಮೃಣಾಲ ಆಗಲಿ ರಾಜಕಾರಣ ಮಾಡಲು ಬಂದಿಲ್ಲ. ಜನ ಸೇವೆ ಮಾಡಬೇಕು, ಜನರ ಪ್ರೀತಿಗಳಿಸಬೇಕೆಂದು ಬಂದವರು. ಒಳ್ಳೆಯ ಹೆಸರು ಮಾಡಬೇಕೆಂದು ನಾವು ಬಂದವರು.

ನಮ್ಮ ಕೈಲಾದಷ್ಟು ಜನರ ಸೇವೆ ಮಾಡಿ ನಿಮ್ಮ ಪ್ರೀತಿ ಗಳಿಸುತ್ತಿದ್ದೇವೆ. ಸನ್ಮಾನದ ಮೂಲಕ ನನ್ನ ಜವಾಬ್ದಾರಿಯನ್ನು ಹೆಚ್ಚಿಸಿದ್ದೀರಿ ಎಂದು ಲಕ್ಷ್ಮೀ ಹೇಳಿದರು.

> ಗ್ರಾಮೀಣ ಕ್ಷೇತ್ರದ ಪ್ರತಿ ಊರಲ್ಲಿ ಜಾತ್ರೆಯಾದರೆ ಇಡೀ ಊರನ್ನು ಸುಧಾರಿಸುವ ಜವಾಬ್ದಾರಿ ನಿರ್ವಹಿಸುತ್ತಿದ್ದೇನೆ. ಪ್ರತಿ ಗ್ರಾಮಕ್ಕೆ ರೂ.5 ಕೋಟಿಯಿಂದ ರೂ.10 ಕೋಟಿಯ ಕೆಲಸ ತರುತ್ತಿದ್ದೇನೆ
> -ಲಕ್ಷ್ಮೀ ಹೆಬ್ಬಾಳಕರ ಸಚಿವೆ ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆ

# ಕಾರ್ಮಿಕರಿಂದ ಮಲ ಗುಂಡಿ ಸ್ವಚ್ಛತೆ; ಪ್ರಕರಣ ದಾಖಲು

• ಉದಯವಾಹಿನಿ, ಹಾನಗಲ್


ಉದಯವಾಹಿನಿ ಚಿತ್ರ

ತಾಲ್ಲೂಕಿನ ಕೂಸನೂರ ಗ್ರಾಮದಲ್ಲಿ ಖಾಸಗಿ ಶೌಚಾಲಯ ಮಲಗುಂಡಿ ಸ್ವಚ್ಛಗೊಳಿಸುವ ಕಾರ್ಯದಲ್ಲಿ ತೊಡಗಿದವರನ್ನು ಅಧಿಕಾರಿಗಳು ತಡೆದ ಘಟನೆ ನಡೆದಿದೆ.

ಗ್ರಾಮದ ಸುರೇಶ ಪೂಜಾರ ಮತ್ತು ಬಸವರಾಜ ಪೂಜಾರ ಅವರಿಗೆ ಸೇರಿದ ಶೌಚಾಲಯ ಮಲಗುಂಡಿಯನ್ನು ಇಬ್ಬರು ಕೆಲಸಗಾರರು ಯಾವುದೇ ಸುರಕ್ಷತಾ ಸಲಕರಣೆ ಬಳಸದೆ ಪಕ್ಕದ ತಿಪ್ಪೆಯಲ್ಲಿ ಸಂಗ್ರಹಿಸುವ ಕಾರ್ಯ ಮಾಡುತ್ತಿರುವ ವಿಷಯ ತಿಳಿದು ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿದ್ದರು. ಮಲ ತೆಗೆಯುವ ಕೆಲಸ ತೊಡಗಿದ ಇಬ್ಬರೂ ಕಾರ್ಮಿಕರನ್ನು ಆಡೂರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಕೀಯ ತಪಾಸಣೆ ನಡೆಸಿ ಪ್ರಥಮ ಚಿಕಿತ್ಸೆ ನೀಡಲಾಗಿದೆ.

ಇಬ್ಬರ ಆರೋಗ್ಯ ಸ್ಥಿತಿ ಉತ್ತಮವಾಗಿದೆ ಎಂದು ತಿಳಿದು ಬಂದಿದೆ ಎಂದು ತಹಶೀಲ್ದಾರ್ ರೇಣುಕಾ ಎಸ್ ತಿಳಿಸಿದ್ದಾರೆ. ಮಲಗುಂಡಿ ಸ್ವಚ್ಛಗೊಳಿಸುವ ಅನಿಷ್ಟ ಪದ್ಧತಿ ನಿಷೇಧವಿದೆ. ಘಟನೆ ಕುರಿತು ಆಡೂರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ರೇಣುಕಾ ಎಸ್ ತಿಳಿಸಿದ್ದಾರೆ.

ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕಿ ಗಂಗಾ ಹಿರೇಮಠ, ಆಡೂರ ಪೊಲೀಸ್ ಠಾಣೆ ಪಿಎಸ್ಐ ಶರಣಪ್ಪ ಹಂಡ್ರಗಲ್, ಪಿಡಿಒ ಎಸ್.ಸಿ. ಮದ್ದೇರ ಇದ್ದರು.

# ತುಂಗಾ ಮೇಲ್ದಂಡೆ ಕಾಲುವೆ ದುರಸ್ತಿಗೊಳಿಸಲು ಒತ್ತಾಯಿಸಿ ಕರವೇ ಪ್ರತಿಭಟನೆ

• ಉದಯವಾಹಿನಿ, ರಾಣೆಬೆನ್ನೂರು



ಉದಯವಾಹಿನಿ ಚಿತ್ರ

ತುಂಗಾ ಮೇಲ್ದಂಡೆ ಯೋಜನೆ ಕಾಲುವೆ ದುರಸ್ತಿ, ನಗರದ ಹೊಸ ಕೇಂದ್ರ ಬಸ್ ನಿಲ್ದಾಣ, ದೊಡ್ಡಪೇಟೆ ಮಾರುಕಟ್ಟೆ ಅಭಿವೃದ್ಧಿ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಕರವೇ ಸ್ವಾಭಿಮಾನಿ ಸೇನೆಯ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಆರ್.ಎಸ್. ಭಗವಾನ ಅವರಿಗೆ ಮನವಿ ಸಲ್ಲಿಸಿದರು.


ಸಂಘಟನೆಯ ಜಿಲ್ಲಾ ಘಟಕದ ಅಧ್ಯಕ್ಷ ರಾಮು ತಳವಾರ ಮಾತನಾಡಿ, 'ತಾಲ್ಲೂಕಿನ ಗುಡ್ಡದ ಆನ್ವೇರಿ ಗ್ರಾಮದ ಶಾಲಾ ವಿದ್ಯಾರ್ಥಿ ಹಾಗೂ ಸಾರ್ವಜನಿಕರಿಗೆ ಬಸ್ ಸೌಕರ್ಯ ಕಲ್ಪಿಸುವುದು. ಹಲತ್ತಿ ತಾಂಡಾ ಹಾಗೂ ಗಂಗಾಪುರ ಗ್ರಾಮಗಳಿಗೆ ಸಾರ್ವಜನಿಕ ಬಸ್ ನಿಲ್ದಾಣ ನಿರ್ಮಾಣ, ಹನುಮಾಪುರ ಗ್ರಾಮಕ್ಕೆ ಸಮರ್ಪಕ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸಬೇಕು' ಎಂದು ಆಗ್ರಹಿಸಿದರು. ನಗರದ ಪ್ರಮುಖ ರಸ್ತೆ ದುರಸ್ತಿ, ಹೊಸ ಬಸ್ ನಿಲ್ದಾಣ ನಿರ್ಮಾಣ, ಸಾರ್ವಜನಿಕ ಶೌಚಾಲಯ, ಕುಡಿಯುವ ನೀರು ಸೇರಿದಂತೆ ಅಗತ್ಯ ಸೇವೆಗಳ ಕುರಿತು ಮಾರ್ಗ ಸೂಚಿ ರಚಿಸಿ ಕಾಮಗಾರಿ ಆರಂಭಿಸಬೇಕು ಎಂದು ಒತ್ತಾಯಿಸಿದರು.

ತಾಲ್ಲೂಕು ಘಟಕದ ಅಧ್ಯಕ್ಷ ನಾಗರಾಜ ಯರಬಾಳ ಮಾತನಾಡಿ, ತುಂಗಾ ಮೇಲ್ದಂಡೆ ಯೋಜನೆ ಕಾಲುವೆಗಳು ಬಿರುಕು ಬಿಟ್ಟಿದ್ದು, ಪಕ್ಕದ ಜಮೀನುಗಳಲ್ಲಿ ನೀರು ನುಗ್ಗಿ ಬೆಳೆ ಹಾಳಾಗುತ್ತಿವೆ. ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದರು.

# ಮಿನಿ ನ್ಯೂಸ್

## ಶಾಂತಿನಾಥ ಮಹಿಳಾ ಮಂಡಳದ ವಾರ್ಷಿಕೋತ್ಸವ

• ಉದಯವಾಹಿನಿ, ಹುಬ್ಬಳ್ಳಿ




ಹುಬ್ಬಳ್ಳಿಯ ಪ್ರಸಿದ್ಧ ಜೈನ ಮಹಿಳಾ ಮಂಡಲಗಳಲ್ಲಿ ಒಂದಾದ ಶಾಂತಿನಾಥ ಮಹಿಳಾ ಸಮಾಜ 50 ವರ್ಷ ತುಂಬಿದೆ. 50ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಇದೇ 25 -1-2026 ರಂದು ಮಹಾವೀರ ಗಲ್ಲಿಯ ಶಾಂತಿನಾಥ ಸಾಂಸ್ಕೃತಿಕ ಭವನದಲ್ಲಿ ವಸ್ತು ಪ್ರದರ್ಶನ ಮತ್ತು ವಿವಿಧ ಬಗೆಯ ತಿಂಡಿ ತಿನಿಸುಗಳ ಮಾರಾಟವನ್ನು ಆಯೋಜಿಸಲಾಗಿದೆ. ಇದ್ರ ಜೊತೆಗೆ ಮನೋರಂಜನೆಗಾಗಿ ವಿವಿಧ ಆಟೋಟಗಳನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಬರಬೇಕಾಗಿ ವಿನಂತಿಸಿಕೊಳ್ಳುತ್ತಿದ್ದೇವೆ. ಅಧ್ಯಕ್ಷರು ಮತ್ತು ಕಾರ್ಯದರ್ಶಿ ಕಾರ್ಯಕಾರಿ ಮಂಡಳಿ ಸದಸ್ಯರು,ಶಾಂತಿನಾಥ ಮಹಿಳಾ ಮಂಡಳ

## ಸಿಎಂ ಬದಲಾವಣೆ; ಹತ್ತೇ ಶಾಸಕರ ಮಾತು: ಸಚಿವ ರಾಮಲಿಂಗಾರೆಡ್ಡಿ

• ಉದಯವಾಹಿನಿ, ಬಾಗಲಕೋಟೆ

ಮುಖ್ಯಮಂತ್ರಿ ಬದಲಾವಣೆ ಕುರಿತು ಮಾಧ್ಯಮಗಳ ಎದುರು ಕೇವಲ ಹತ್ತು ಶಾಸಕರು ಮಾತನಾಡುತ್ತಾರೆ. ಅವರಲ್ಲಿ ಐವರು ಮುಖ್ಯಮಂತ್ರಿ ಪರ ಇದ್ದರೆ, ಇನ್ನೂ ಐವರು ಉಪ ಮುಖ್ಯಮಂತ್ರಿ ಪರ ಇದ್ದಾರೆ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಮೈಕ್ ಸಿಕ್ಕ ತಕ್ಷಣ ಹೇಳಿಕೆ ನೀಡುತ್ತಾರೆ. ಇದರಿಂದ ಗೊಂದಲ ಸೃಷ್ಟಿಯಾಗಿದೆ. ಮುಖ್ಯಮಂತ್ರಿ ಬದಲಾವಣೆ ಹೈಕಮಾಂಡ್‌ಗೆ ಬಿಟ್ಟಿದ್ದು. ಅದಕ್ಕೆ ನಾವೆಲ್ಲರೂ ಬದ್ಧರಾಗಿದ್ದೇವೆ ಎಂದರು.

ಗುಜರಾತ್ ರಾಜ್ಯದಲ್ಲಿದ್ದ ವಾಹನಗಳಿಗೆ ಆರ್‌ಟಿಒ ಕಚೇರಿಯಿಂದ ಸ್ಥಳ ಪರಿಶೀಲಿಸದೇ ಫಿಟ್ನೆಸ್ ಪ್ರಮಾಣಪತ್ರ ನೀಡಿರುವ ಆರೋಪಕ್ಕೆ ಸಂಬಂಧಿಸಿದಂತೆ ತಪ್ಪು ಮಾಡಿದ್ದರೆ, ಅಂತಹ ಅಧಿಕಾರಿಗಳನ್ನು ಅಮಾನತು ಮಾಡಲಾಗುವುದು ಎಂದರು. ಈ ಸಂಬಂಧ ಗುಜರಾತ್ ಆಯುಕ್ತರಿಗೆ ನಮ್ಮ ಆಯುಕ್ತರು ಪತ್ರ ಬರೆದಿದ್ದಾರೆ. ಬಗ್ಗೆ ತನಿಖೆ ಮಾಡಿ ವರದಿ ಕೊಡುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ' ಎಂದರು.

## ಅರಸೀಕೆರೆ ಕ್ಷೇತ್ರದ ಅಭಿವೃದ್ಧಿಯೇ ನನ್ನ ಗುರಿ: ಶಾಸಕ ಶಿವಲಿಂಗೇಗೌಡ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಅರಸೀಕೆರೆ


18 ವರ್ಷಗಳಿಂದ ಸತತವಾಗಿ ಜನರ ಸೇವೆಗಾಗಿ ಹಗಲು ರಾತ್ರಿ ಶ್ರಮಿಸುತ್ತಿರುವ ನನಗೆ ಕ್ಷೇತ್ರದ ಅಭಿವೃದ್ಧಿಯೇ ಗುರಿ. ಒಣ ಭಾಷಣ ಮಾಡುವವರ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ ಎಂದು ಶಾಸಕ ಕೆ.ಎಂ. ಶಿವಲಿಂಗೇಗೌಡ ಹೇಳಿದರು. ತಾಲ್ಲೂಕಿನ ಬಾಣಾವಾರ ಹೋಬಳಿಯ ಪುರ್ಲೆಹಳ್ಳಿ ಗ್ರಾಮದಲ್ಲಿ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. 80 ವರ್ಷಗಳಿಂದ ಆಗದೇ ಇರುವ ಕೆಲಸಗಳನ್ನು ಕ್ಷೇತ್ರದಲ್ಲಿ ಮಾಡಿರುವ ಆತ್ಮತೃಪ್ತಿ ಇದೆ. ಅರಸೀಕೆರೆ ವ್ಯಾಪ್ತಿಯಲ್ಲಿ ಸಂಪೂರ್ಣ ಕಾಂಕ್ರಿಟೀಕರಣ, ಸಾವಿರಾರು ದೇವಸ್ಥಾನಗಳ ಜೀರ್ಣೋದ್ಧಾರ, ಪ್ರತಿ ಸಮಾಜಕ್ಕೂ ಒಂದೊಂದು ಸಮುದಾಯ ಭವನ ನಿರ್ಮಾಣ ಸೇರಿ ಮೂಲಸೌಕರ್ಯಗಳಿಗೆ ಆದ್ಯತೆ ನೀಡಲಾಗಿದೆ. ರಾಜ್ಯದಲ್ಲಿ ಮಾದರಿ ಕ್ಷೇತ್ರವನ್ನಾಗಿಸುವಲ್ಲಿ ಶ್ರಮಿಸುತ್ತಿದ್ದು, ಟೀಕೆ, ಟಿಪ್ಪಣಿಗಳಿಗೆ ಎದೆಗುಂದದೇ ಜನರ ಸೇವೆಗೆ ಮತ್ತಷ್ಟು ಯೋಜನೆಗಳನ್ನು ಒದಗಿಸುತ್ತೇನೆ ಎಂದರು. ಇತಿಹಾಸದಲ್ಲಿ ಅರಸೀಕೆರೆಯ ಕೆರೆಗೆ ನೀರು ಹರಿಯುವುದಿಲ್ಲ ಎಂದು ಮಹಾನಾಯಕರು ಭಾಷಣ ಮಾಡಿದ್ದರು. ಆದರೆ ಹೋರಾಟ ಮಾಡಿ ಬೆಳಗಾವಿ ಅಧಿವೇಶನದಲ್ಲಿ ಕಣ್ಣೀರು ಹಾಕಿ ನೀರು ತಂದಿದ್ದೇನೆ. ಸತ್ಯಾಸತ್ಯತೆ ಜನರಿಗೆ ಗೊತ್ತಿದೆ. ಕಣಕಟ್ಟೆ ಹೋಬಳಿಯ 8 ಕೆರೆಗಳಿಗೆ ನೀರು ತುಂಬಿಸಿದ್ದು, ಬಾಗಿನ ಅರ್ಪಿಸಿದ್ದೇವೆ. ಬಾಣಾವಾರ ಹೋಬಳಿಯ ಕೆರೆಗಳಿಗೆ ಭದ್ರಾ ಮೇಲ್ದಂಡೆ ಯೋಜನೆ ಮೂಲಕ ನೀರು ಹರಿಸಲಾಗುವುದು. ಪುರ್ಲೇಹಳ್ಳಿ ಕೆರೆಗೂ ನೀರು ತುಂಬಿಸಲಾಗುವುದು ಎಂದರು.

ದುಡಿಯೋ ಎತ್ತಿಗೆ ಹುಲ್ಲು ಹಾಕಬೇಕು. ಅದು ಬಿಟ್ಟು ಸುಮ್ಮನೆ ಕೂತು ಎದ್ದು ಹೋಗೋ ಎತ್ತಿಗೆ ಹುಲ್ಲು ಹಾಕಬಾರದು. ನಿಮ್ಮ ಕೆಲಸ ಮಾಡುವಂಥವರ ಜೊತೆ ಇರಬೇಕು. ಅದು ಬಿಟ್ಟು ವೃತ್ತಗಳಲ್ಲಿ ಪುಗಸಟ್ಟೆ ಭಾಷಣ ಮಾಡವವರ ಜೊತೆ ಇದ್ದು ಪ್ರಯೋಜನವಿಲ್ಲ. ಅರಸೀಕೆರೆ ಜನತೆ ಜಾಗೃತರಾಗಿದ್ದಾರೆ. ಬುರುಡೆ ಮಾತುಗಳನ್ನು ನಂಬುವುದಿಲ್ಲ ಎಂದರು.

# ಅತ್ಯಾಚಾರ ಸಂತ್ರಸ್ತೆಯ ಹೆಸರು ಪ್ರಸ್ತಾಪಿಸಬಾರದಿತ್ತು, ಕ್ಷಮೆಯಾಚಿಸುತ್ತೇನೆ: ಶ್ರೀರಾಮುಲು

## ಮಾಜಿ ಸಚಿವ ಬಿ.ಶ್ರೀರಾಮುಲು ಬ್ಯಾನರ್ ಗಲಭೆ ಪ್ರಕರಣವನ್ನು ಸಿಐಡಿ ವರದಿ ನೀಡಿದರೂ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ ಎಂದು ಆರೋಪ

• ಉದಯವಾಹಿನಿ, ಬಳ್ಳಾರಿ



ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಎಲ್ಲಾ ಕಡೆ ದಾಂಧಲೆ, ಗಾಂಜಾ ಎಗ್ಗಿಲ್ಲದೆ ನಡೆಯುತ್ತಿವೆ ಎಂದು ಬಾಲಕಿಯ ಮೇಲಿನ ಅತ್ಯಾಚಾರ ಬಗ್ಗೆ ಸಮಾವೇಶದ ವೇದಿಕೆಯಲ್ಲಿ ಪ್ರಸ್ತಾಪಿಸಿದ್ದೆ. ಬಾಲಕಿಯ ಹೆಸರು ಪ್ರಸ್ತಾಪ ಮಾಡಬಾರದಿತ್ತು. ನನ್ನ ಮಾತಿನಿಂದ ಬಾಲಕಿಯ ಕುಟುಂಬಕ್ಕೆ ನೋವು ಆಗಿದ್ದರೆ ಕ್ಷಮೆಯಾಚಿಸುತ್ತೇನೆ. ಕುಟುಂಬದ ಜತೆಗೆ ಬಿಜೆಪಿ ನಿಂತು ನ್ಯಾಯ ಒದಗಿಸುವ ಕೆಲಸ ಮಾಡಲಾಗುವುದು ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಹೇಳಿದರು.

ಮಾಜಿ ಸಚಿವ ಬಿ.ಶ್ರೀರಾಮುಲು ಅವರು ಮಾತನಾಡಿ, ಬ್ಯಾನರ್ ಗಲಭೆ ಪ್ರಕರಣ ಸಿಐಡಿ ಕೊಟ್ಟ ಬಳಿಕ ಸರಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಕೊಂಡಿದ್ದೆ. ಆದರೆ, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿಲ್ಲ. ಸರಕಾರ ಕೈ ಕಟ್ಟಿ ಕುಳಿತುಕೊಂಡಿದೆ. ನ್ಯಾಯ ಸಿಗುವವರೆಗೆ ಹೋರಾಟ ನಡೆಸಲಾಗುವುದು.

ಅಬಕಾರಿ ಇಲಾಖೆಯಲ್ಲಿ ಭ್ರಷ್ಟಾಚಾರ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಪಂಚಪಾಲಿಕೆ ಚುನಾವಣೆ ದೃಷ್ಟಿಯಲ್ಲಿಟ್ಟುಕೊಂಡು ಭ್ರಷ್ಟಾಚಾರ ನಡೆಸುತ್ತಿದ್ದಾರೆ. ಎಲ್ಲಾ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದ್ದು, ಯಾರು ಹೇಳುವವರು, ಕೇಳುವವರು ಇಲ್ಲದಂತಾಗಿದೆ. ಅಬಕಾರಿ ಇಲಾಖೆಯಲ್ಲಿನ ಭ್ರಷ್ಟಾಚಾರದಲ್ಲಿ ಭಾಗಿಯಾದ ಸಚಿವ ಆರ್.ಬಿ.ತಿಮ್ಮಾಪುರ ಅವರನ್ನು ಮಂತ್ರಿಮಂಡಲದಿಂದ ಕೈಬಿಡಬೇಕು. ಇಲ್ಲವಾದಲ್ಲಿ ಬಿಜೆಪಿಯಿಂದ ರಾಜ್ಯಾದ್ಯಂತ ಹೋರಾಟ ನಡೆಸಲಾಗುವುದು. ಬ್ಯಾನರ್ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಂದಿನ ದಿನಗಳಲ್ಲಿ ಪಕ್ಷದಲ್ಲಿ ಚರ್ಚೆನಡೆಸಿ ಪಾದಯಾತ್ರೆ ನಡೆಸಲಾಗುವುದು. ಪ್ರಕರಣದ ಕುರಿತು ಸಿಐಡಿ, ಪೊಲೀಸ್ ಇಲಾಖೆಯಿಂದ ಈವರೆಗೆ ಯಾವುದೇ ನೋಟಿಸ್ ಕೊಟ್ಟಿಲ್ಲ, ವಿಡಿಯೋಗಳನ್ನು ಕೇಳಿಲ್ಲ ಎಂದರು. ಇವಿಎಂ ಜಾರಿಗೆ ತಂದಿರುವುದೇ ಕಾಂಗ್ರೆಸ್. ಈಗ ಪುನಃ ಅವರೇ ಗ್ರೇಟರ್ ಬೆಂಗಳೂರು ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್ ಮೂಲಕ ಚುನಾವಣೆ ನಡೆಸಲು ಮುಂದಾಗಿದೆ.

**ಪೋಕ್ಸೊ ಸಂತ್ರಸ್ತೆಯ ಹೆಸರು ಬಹಿರಂಗ :** ಶ್ರೀರಾಮುಲು ವಿರುದ್ಧ ಕೇಸ್ ಪೋಕ್ಸೊ ಸಂತ್ರಸ್ತ ಬಾಲಕಿಯ ಹೆಸರು ಬಹಿರಂಗಪಡಿಸಿದ ಆರೋಪ ಆಧರಿಸಿ, ಮಾಜಿ ಸಚಿವ ಬಿ.ಶ್ರೀರಾಮುಲು ಅವರ ವಿರುದ್ಧ ನಗರದ ಮಹಿಳಾ ಪೊಲೀಸ್ ಠಾಣೆಯಲ್ಲಿ ಪೋಕ್ಸೊ, ಬಾಲ ನ್ಯಾಯ ಕಾಯಿದೆಯಡಿ ಜ.18ರಂದು ಪ್ರಕರಣ ದಾಖಲಾಗಿದೆ.

### ಹಿಂದಿನ ಪೋಕ್ಸೊ ಪ್ರಕರಣ

**ನಗರ ಠಾಣೆ ವ್ಯಾಪ್ತಿಯ ಬಾಲಕಿಯೊಬ್ಬಳಿಗೆ ಸಿಗರೇಟು, ಗಾಂಜಾ ಸೇದಿಸಿದ ಮೂವರು ಯುವಕರು ಲೈಂಗಿಕ ಕಿರುಕುಳ ನೀಡಿ ಮಾನಸಿಕ ತೊಂದರೆ ನೀಡಿದ್ದಾರೆ ಎಂದು ಸಂತ್ರಸ್ತೆಯ ತಾಯಿ ನೀಡಿದ ದೂರು ಆಧರಿಸಿ, ಮೂವರು ಯುವಕರ ವಿರುದ್ಧ ಕಲಂ 8, 12 ಪೋಕ್ಸೊ ಕಾಯಿದೆ 2012 ಮತ್ತು ಕಲಂ 351(2) ಬಿಎನ್‌ಎಸ್ ಅಡಿ 2025ರ ಸೆ.19ರಂದು ನಗರದ ಮಹಿಳಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.**

ನಗರದಲ್ಲಿ ಜ.1 ರಂದು ನಡೆದ ಬ್ಯಾನರ್ ಗಲಭೆ ಖಂಡಿಸಿ ನಗರದ ಎಪಿಎಂಸಿ ಪ್ರಾಂಗಣದಲ್ಲಿ ಬಿಜೆಪಿ ಜ.17 ರಂದು ಪ್ರತಿಭಟನಾ ಸಮಾವೇಶ ಹಮ್ಮಿಕೊಂಡಿತ್ತು. ಈ ಸಮಾವೇಶದಲ್ಲಿ ಭಾಷಣ ಮಾಡುವ ವೇಳೆ ಬಿ.ಶ್ರೀರಾಮುಲು ಅವರು ಪೋಕ್ಸೊ ಸಂತ್ರಸ್ತೆಯೊಬ್ಬರ ಗುರುತು ಬಹಿರಂಗಪಡಿಸಿದ್ದರು. ಎಪಿಎಂಸಿ ಠಾಣೆಯ ಸಿಪಿಐ ನೀಡಿದ ದೂರು ಆಧರಿಸಿ, ಮಾಜಿ ಸಚಿವ ಬಿ.ಶ್ರೀರಾಮುಲು ವಿರುದ್ಧ ಪೋಕ್ಸೊ ಕಾಯಿದೆಯ ಕಲಂ 23(1) (2) ಮತ್ತು ಬಾಲ ನ್ಯಾಯ (ಮಕ್ಕಳ ಆರೈಕೆ ಮತ್ತು ರಕ್ಷಣೆ) ಕಾಯಿದೆಯ ಸೆಕ್ಷನ್ 74ರ ಅಡಿ ಮಹಿಳಾ ಠಾಣೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಶಾಸಕ ನಾರಾ ಭರತ್ ರೆಡ್ಡಿ ಅವರನ್ನು ತೆಗಳುವ ಭರದಲ್ಲಿ ಗಾಂಜಾ ಸೇವಿಸಿದ ನಶೆಯಲ್ಲಿಯುವಕರ ಗುಂಪು ಬಾಲಕಿಯ ಮೇಲೆ ಅತ್ಯಾಚಾರ ನಡೆಸಿದೆ ಎನ್ನುತ್ತ ಸಂತ್ರಸ್ತ ಬಾಲಕಿಯ ಹೆಸರು, ಓದುತ್ತಿರುವ ವಿದ್ಯಾಸಂಸ್ಥೆ, ಸಮುದಾಯದ ವಿವರವನ್ನು ಅವರು ಸಾರ್ವಜನಿಕವಾಗಿ ಬಹಿರಂಗಪಡಿಸಿದರು. ಪೋಕ್ಸೊ ಪ್ರಕರಣದಲ್ಲಿ ನೊಂದ ಬಾಲಕಿಯ ಹೆಸರು, ಮಾಹಿತಿಯನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಬಾರದು ಎಂಬ ನಿಯಮವಿದೆ. ಹೀಗಿದ್ದರೂ ಬಿ.ಶ್ರೀರಾಮುಲು ಅವರು ಸಾರ್ವಜನಿಕ ಸಮಾವೇಶದಲ್ಲಿಮೈಕ್ ಮೂಲಕ ಸಂತ್ರಸ್ತ ಬಾಲಕಿಯ ಸ್ವವಿವರ ಹಂಚಿಕೊಂಡಿರುವುದು ತೀವ್ರ ಚರ್ಚೆಗೆ ಗ್ರಾಸವಾಗಿದೆ.

### ಶ್ರೀರಾಮುಲು ಹೇಳಿದ್ದೇನು?

**ಬ್ಯಾನರ್ ಗಲಭೆ ಪ್ರಕರಣದಲ್ಲಿ ಶಾಸಕ ನಾರಾ ಭರತ್ ರೆಡ್ಡಿ ಅವರನ್ನು ಬಂಧಿಸುವಂತೆ, ಪ್ರಕರಣವನ್ನು ಸಿಬಿಐಗೆ ವಹಿಸುವಂತೆ ಒತ್ತಾಯಿಸಿ ಬಿಜೆಪಿ ಜ.17 ರಂದು ನಗರದಲ್ಲಿ ಬೃಹತ್ ಪ್ರತಿಭಟನಾ ಸಮಾವೇಶ ಹಮ್ಮಿಕೊಂಡಿತ್ತು. ಈ ಸಮಾವೇಶಕ್ಕೆ ಜಿಲ್ಲೆ ಸೇರಿ ಹೊರ ಜಿಲ್ಲೆಗಳ ಸಾವಿರಾರು ಜನ ಪಾಲ್ಗೊಂಡಿದ್ದರು. ಈ ವೇಳೆ ವೇದಿಕೆಯಲ್ಲಿ ಮಾಜಿ ಸಚಿವ ಬಿ.ಶ್ರೀರಾಮುಲು ಅವರು ಭಾಷಣದ ಆರಂಭದಲ್ಲೇ ಬಳ್ಳಾರಿ ನಗರದಲ್ಲಿ ಅಕ್ರಮವಾಗಿ ನಡೆಯುತ್ತಿರುವ ಗಾಂಜಾ ಮಾರಾಟದ ಬಗ್ಗೆ ವಿಷಯ ಪ್ರಸ್ತಾಪಿಸಿದರು.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ.

**ವೃಷಭ** ಇಂದು ನಿಮ್ಮನ್ನು ಆವರಿಸುವ ಭಾವನಾತ್ಮಕ ಮನಸ್ಥಿತಿಯಿಂದ ನೀವು ಹೊರಬರಲು ಬಯಸಿದರೆ ಹಿಂದಿನದ್ದೆಲ್ಲವನ್ನೂ ಮರೆತುಬಿಡಬೇಕು. ಇಂದು ನಿಮ್ಮ ಹಣವನ್ನು ಅನೇಕ ವಿಷಯಗಳಿಗೆ ಖರ್ಚು ಮಾಡಬಹುದು

**ಮಿಥುನ** ಇಂದು ನಿಮಗೆ ತುಂಬ ಉನ್ನತ ಶಕ್ತಿಯಿರುವ ದಿನ ನೀವು ಸಣ್ಣ ವಿಷಯಗಳಿಗೂ ಕಿರಿಕಿರಿಗೊಳ್ಳುತ್ತೀರಿ. ಊಹೆಗಳು ಲಾಭತರುತ್ತವೆ. ಕುಟುಂಬದ ಸದಸ್ಯರೊಂದಿಗೆ 1ಶಾಂತಿಯುತ ಶಾಂತ ದಿನವನ್ನು ಆನಂದಿಸಿ ಜನರು ಸಮಸ್ಯೆಗಳೊಡನೆ ನಿಮ್ಮನ್ನು ಸಮೀಪಿಸಿದರೆ

**ಕರ್ಕಾಟಕ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ.

**ಸಿಂಹ** ಸ್ನೇಹಿತರ ಮೂಲಕ ದೊರಕುವ ಜ್ಯೋತಿಶ್ಯಾಸ್ತ್ರದ ಮಾರ್ಗದರ್ಶನ ನಿಮ್ಮ ಆರೋಗ್ಯವನ್ನು ಸುಧಾರಿಸಲು ನಿಮ್ಮನ್ನು ಉತ್ತೇಜಿಸುತ್ತದೆ. ನಿಮಗೆ ತಿಳಿದ ಜನರ ಮೂಲಕ ಆದಾಯದ ಹೊಸ ಮೂಲಗಳು ಕಂಡುಬರುತ್ತವೆ.

**ಕನ್ಯಾ** ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು.

**ತುಲಾ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

**ವೃಶ್ಚಿಕ** ಆಕರ್ಷಕವಾದ ಮತ್ತು ನಿಮ್ಮನ್ನು ಶಾಂತವಾಗಿರಿಸುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಿ. ತೀರಾ ಖರ್ಚು ಮಾಡುವ ಮತ್ತು ಮನರಂಜನೆಗೆ ತುಂಬಾ ಖರ್ಚ ಮಾಡುವ ನಿಮ್ಮ ಪ್ರವೃತ್ತಿಗೆ ಕಡಿವಾಣ ಹಾಕಿ

**ಧನಸ್ಸು** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ಹೆಚ್ಚುವರಿ ಹಣವನ್ನು ಒಂದು ಸುರಕ್ಷಿತ ಸ್ಥಳದಲ್ಲಿರಿಸಿ ಇದು ಮುಂದಿನ ಕಾಲದಲ್ಲಿ ನಿಮಗೆ ಒಳ್ಳೆಯ ಆದಾಯ ತರುತ್ತದೆ.

**ಮಕರ** ಕುಟುಂಬದ ವೈದ್ಯಕೀಯ ವೆಚ್ಚದಲ್ಲಿ ಹೆಚ್ಚಳವನ್ನು ತಳ್ಳಿಹಾಕಲು ಸಾಧ್ಯವಿಲ್ಲ. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು

**ಕುಂಭ** ನಿಮ್ಮನ್ನು ನೀವೇ ನೋಡಿಕೊಳ್ಳುವ ಬಯಕೆಗೆ ಇತರರ ಅಗತ್ಯಗಳು ಕಡಿವಾಣ ಹಾಕುತ್ತವೆ. ನಿಮ್ಮ ಭಾವನೆಗಳನ್ನು ತಡೆಹಿಡಿಯಬೇಡಿ ವಿಶ್ರಾಂತಿ ಪಡೆಯುವ ಸಲುವಾಗಿ ನೀವು ಇಷ್ಟಪಡುವುದನ್ನೇನಾದರೂ ಮಾಡಿ.

**ಮೀನ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ.

# ಸಚಿವ ಈಶ್ವರ ಖಂಡ್ರೆಗೆ ಒಲಿದ ಪ್ರಭಾವಿ ಹುದ್ದೆ

## ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷರಾಗಿ ಆಯ್ಕೆ

• ಉದಯವಾಹಿನಿ, ಬೀದರ್

ಪರಿಸರ, ಅರಣ್ಯ ಮತ್ತು ಜೀವಿಶಾಸ್ತ್ರ ಸಚಿವ ಈಶ್ವರ ಬಿ. ಖಂಡ್ರೆ ಅವರಿಗೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆ ರಾಷ್ಟ್ರೀಯ ಅಧ್ಯಕ್ಷ ಸ್ಥಾನ ಒಲಿದು ಬಂದಿದೆ. ಇತ್ತೀಚೆಗೆ ನಿಧನರಾಗಿದ್ದ ಶಾಮನೂರು ಶಿವಶಂಕರಪ್ಪ ಅವರಿಂದ ತೆರವಾಗಿದ್ದ ಹುದ್ದೆಗೆ ಬೆಂಗಳೂರಿನಲ್ಲಿ ನಡೆದ ಕಾರ್ಯಕಾರಿಣಿ ಸಭೆಯಲ್ಲಿ ಈಶ್ವರ ಖಂಡ್ರೆ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು. ಇದರೊಂದಿಗೆ ಈಶ್ವರ ಅವರಿಗೆ ಇನ್ನೊಂದು ಪ್ರಭಾವಿ ಹುದ್ದೆ ದೊರೆತಿದೆ.

ವೀರಶೈವ ಲಿಂಗಾಯತರನ್ನು ಪ್ರತಿನಿಧಿಸುವ ಮಹಾಸಭಾಕ್ಕೆ ಈ ಹಿಂದೆ 1999 ಹಾಗೂ 2005ರಲ್ಲಿ ಈಶ್ವರ ಅವರ ತಂದೆ ದಿವಂಗತ ಭೀಮಣ್ಣ ಖಂಡ್ರೆ ಅವರು ಅಧ್ಯಕ್ಷರಾಗಿದ್ದರು. ಇವರ ತಂದೆಯ ಅವಧಿಯಲ್ಲೇ ವೀರಶೈವ ಮಹಾಸಭಾ ಹೆಚ್ಚು ಕ್ರಿಯಾಶೀಲವಾಗಿತ್ತು ಎನ್ನುತ್ತಾರೆ ಮಹಾಸಭಾದ ಪದಾಧಿಕಾರಿಗಳು.

ಬೆಂಗಳೂರಿನ ಅರಮನೆ ರಸ್ತೆಯಲ್ಲಿರುವ ವೀರಶೈವ ಲಿಂಗಾಯತ ಮಹಾಸಭಾ ಕಟ್ಟಡ ಹಾಗೂ ರಾಜ್ಯದಾದ್ಯಂತ ಹೆಚ್ಚು ಸದಸ್ಯತ್ವ ಮಾಡಿದ ಹಿರಿಮೆ ಕೂಡ ಭೀಮಣ್ಣ ಖಂಡ್ರೆ ಅವರಿಗಿದೆ. ಜೊತೆಗೆ ವೀರಶೈವ ಲಿಂಗಾಯತಕ್ಕೆ ಪ್ರತ್ಯೇಕ ಧರ್ಮದ ಸ್ಥಾನಮಾನಕ್ಕೂ ಅವರು ಶ್ರಮಿಸಿದ್ದರು. ಈಗ ಅದರ ಚುಕ್ಕಾಣಿ ಹಿಡಿಯುವ ಸರತಿ ಈಶ್ವರ ಬಿ. ಖಂಡ್ರೆ ಅವರದ್ದು.



### ಬಸವತತ್ವದ ಬಗ್ಗೆ ಅಪಾರ ಅಭಿಮಾನ

**ಜಿಲ್ಲೆಯಲ್ಲಿ ಸಣ್ಣಪುಟ್ಟ ಜಾತಿಗಳಿಗೆ ಸೇರಿದ ಭವನಗಳು, ಸ್ಥಳಗಳು ಇವೆ. ಆದರೆ, ಬಲಾಢ್ಯ ಸಮಾಜವೆಂದು ಗುರುತಿಸಿಕೊಂಡಿರುವ ವೀರಶೈವ ಲಿಂಗಾಯತ ಸಮಾಜದ ಭವನಗಳಿಲ್ಲ. ಈಶ್ವರ ಖಂಡ್ರೆ ಅವರ ಅವಧಿಯಲ್ಲಿ ಈ ಕೆಲಸಗಳು ಆಗುತ್ತವೆ ಎಂಬ ಭರವಸೆ ಇದೆ. ಕನ್ನಡ, ಬಸವತತ್ವದ ಬಗ್ಗೆ ಅಪಾರ ಅಭಿಮಾನ ಇದೆ. ಮಹಾಸಭಾ ಚುರುಕುಗೊಳ್ಳುವ ನಿಟ್ಟಿನಲ್ಲಿ ಕೆಲಸಗಳಾಗುವ ನಂಬಿಕೆ ಇದೆ ತಿಳಿಸಿದ್ದಾರೆ.**

ಜನವರಿ 16ರಂದು ಭೀಮಣ್ಣ ಖಂಡ್ರೆ ನಿಧನರಾಗಿದ್ದರು. ಅವರ ನಿಧನದ ನಾಲ್ಕು ದಿನಗಳ ನಂತರ ಈಶ್ವರ ಅವರಿಗೆ ದೊಡ್ಡ ಜವಾಬ್ದಾರಿ ವಹಿಸಲಾಗಿದೆ. ಇದುವರೆಗೆ ರಾಷ್ಟ್ರೀಯ ಉಪಾಧ್ಯಕ್ಷರಾಗಿದ್ದ ಅವರಿಗೆ ಈಗ ರಾಷ್ಟ್ರೀಯ ಮಟ್ಟದ ಅಧ್ಯಕ್ಷರಾಗಿ ಅದನ್ನು ಮುನ್ನಡೆಸುವ ಜವಾಬ್ದಾರಿ ಹೆಗಲೇರಿದೆ. ಇವರ ತಂದೆಯ ಕಾಲದಿಂದಲೂ ವೀರಶೈವ ಮಹಾಸಭಾದಲ್ಲಿ ಈಶ್ವರ ಖಂಡ್ರೆ ಸಕ್ರಿಯರಾಗಿದ್ದಾರೆ. ಮಹಾಸಭಾದ ಆಳ-ಅಗಲವನ್ನು ಚೆನ್ನಾಗಿ ಅರಿತಿದ್ದಾರೆ.

ಜೊತೆಗೆ ಪಂಚಾಚಾರ್ಯರು ವಿರಕ್ತರೊಂದಿಗೆ ಉತ್ತಮ ಒಡನಾಟ ಹೊಂದಿದ್ದಾರೆ. ಎರಡೂ ಕಡೆಯವರನ್ನು ಸರಿದೂಗಿಸಿಕೊಂಡು ಹೋಗುವ ಸಾಮರ್ಥ್ಯ ಇವರಿಗಿದೆ. ಪ್ರತ್ಯೇಕ ಲಿಂಗಾಯತ ಧರ್ಮಕ್ಕಾಗಿ ನಡೆಯುತ್ತಿರುವ ಹೋರಾಟವನ್ನು ಇನ್ನಷ್ಟು ಸಕ್ರಿಯಗೊಳಿಸಿ. ಅದಕ್ಕೆ ಹೊಸ ದಿಕ್ಕು ಕೊಡುತ್ತಾರೆ ಎನ್ನುವ ಅಚಲ ವಿಶ್ವಾಸ ವೀರಶೈವ ಲಿಂಗಾಯತ ಸಮಾಜದ ಮುಖಂಡರದ್ದಾಗಿದೆ. ಈಶ್ವರ ಅವರಿಗೆ ಹೊಸ ಜವಾಬ್ದಾರಿ ವಹಿಸಿರುವುದಕ್ಕೆ ಅವರ ಬೆಂಬಲಿಗರು, ಜಿಲ್ಲೆಯ ವೀರಶೈವ ಲಿಂಗಾಯತ ಸಮಾಜದ ಮುಖಂಡರಲ್ಲಿ ಹರ್ಷ ಮನೆ ಮಾಡಿದೆ.

'ಈಶ್ವರ ಖಂಡ್ರೆ ದೂರದೃಷ್ಟಿಯ ನಾಯಕರು. ಅಪಾರ ಜ್ಞಾನ ಹೊಂದಿದ್ದಾರೆ. ಹೆಚ್ಚು ಕ್ರಿಯಾಶೀಲರಾಗಿದ್ದಾರೆ. ಮಹಾಸಭೆ ಇವರ ಅವಧಿಯಲ್ಲಿ ಹೆಚ್ಚು ಚಲನಶೀಲವಾಗಿರುತ್ತದೆ. ಜೊತೆಗೆ ಮಹಾಸಭೆಗೆ ಉತ್ತರ ಕರ್ನಾಟಕದಲ್ಲೇ ಹೆಚ್ಚಿನ ಸದಸ್ಯರಿದ್ದಾರೆ. ಈ ಭಾಗದ ನಾಯಕರಾಗಿರುವ ಈಶ್ವರ ಅವರಿಗೆ ಅಧ್ಯಕ್ಷ ಸ್ಥಾನ ಒಲಿದಿರುವುದು ಸೂಕ್ತವಾಗಿದೆ' ಎಂದು ಮಹಾಸಭಾದ ಹಿರಿಯ ಕಾರ್ಯಕಾರಿಣಿ ಸದಸ್ಯ ವಿಜಯಕುಮಾರ ಶರಣಪ್ಪ ಗೌರೆ ಅಭಿಪ್ರಾಯ ಪಟ್ಟಿದ್ದಾರೆ.

> **ಸಾಮಾಜಿಕ ನ್ಯಾಯ ಬಸವತತ್ವಕ್ಕೆ ನಿಷ್ಠರಾಗಿರುವ ಈಶ್ವರ ಬಿ. ಖಂಡ್ರೆ ಅವರನ್ನು ಮಹಾಸಭಾದ ಜವಾಬ್ದಾರಿ ವಹಿಸಿರುವುದು ಸಂತಸದ ವಿಷಯ. ಅವರನ್ನು ಅವಿರೋಧವಾಗಿ ಆಯ್ಕೆ ಮಾಡಿರುವುದು ಅವರ ನಾಯಕತ್ವದ ಮೇಲಿರುವ ವಿಶ್ವಾಸವೇ ಸಾಕ್ಷಿ**
> **ಬಸವರಾಜ ಜಾಬಶೆಟ್ಟಿ ಮಾಜಿ ಜಿಲ್ಲಾ ಉಪಾಧ್ಯಕ್ಷ**

# ಗಾಂಧಿ ಟೋಪಿ ಧರಿಸಿ, ಕ್ರಾಂತಿಗೀತೆ ಹಾಡಿ ಪ್ರತಿಭಟನೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಶಿವಮೊಗ್ಗ

ನರೇಗಾ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ) ಬದಲಿಗೆ ವಿಬಿ ಜಿರಾಮ್‌ಜಿ ಜಾರಿಗೆ ತರಲು ಹೊರಟಿರುವ ಕೇಂದ್ರ ಸರ್ಕಾರದ ನಡೆ ವಿರೋಧಿಸಿ ಇಲ್ಲಿನ ಜಿಲ್ಲಾ ಕಾಂಗ್ರೆಸ್ ಮುಖಂಡರು ಗಾಂಧಿ ಮಾರ್ಗದಲ್ಲಿಯೇ ನಿರಶನ ನಡೆಸಿ ಗಮನ ಸೆಳೆದರು.

ಇಲ್ಲಿನ ಗಾಂಧಿ ಪಾರ್ಕ್‌ನ ಮಹಾತ್ಮ ಗಾಂಧಿ ಪ್ರತಿಮೆ ಎದುರು ಇಡೀ ದಿನ ಉಪವಾಸ ಕುಳಿತು ಕೇಂದ್ರದ ನಿರ್ಧಾರದ ವಿರುದ್ಧ ಪ್ರತಿಭಟನೆ ದಾಖಲಿಸಿದರು. ಎಐಸಿಸಿ ಆದೇಶದಂತೆ ಬಣಗಳು, ಭಿನ್ನ ಹಾದಿಗಳು, ಗುಂಪುಗಳನ್ನು ಮರೆತು ಎಲ್ಲರೂ ಒಟ್ಟಾಗಿ ಕಾಣಿಸಿಕೊಂಡರು. ಗಾಂಧಿ ಟೋಪಿ ಧರಿಸಿ. ಕೂಲಿಂಗ್ ಗ್ಲಾಸ್ ಹಾಕಿ ಮಿಂಚಿದರು. ಶಾಂತಿಯ ಹಾದಿಯಲ್ಲಿ ನಡೆದು ಬಂದಿದ್ದ ಗಾಂಧಿ ಪ್ರತಿಮೆ ಎದುರು ದಿನವಿಡೀ ಹೋರಾಟ, ಕ್ರಾಂತಿಯ ಹಾಡುಗಳನ್ನು ಹಾಡುತ್ತಾ ಸತ್ಯಾಗ್ರಹದಲ್ಲಿ ಪಾಲ್ಗೊಂಡರು. ಮುಖಂಡರ ಹಾಡುಗಾರಿಕೆಗೆ ಕಲಾವಿದರು ಸಾಥ್ ನೀಡಿದರು. ಗ್ರಾಮೀಣರ ಭಾವನೆ ಅಲಿಸದೇ ಕಾಯ್ದೆಯನ್ನು ಬಲವಂತವಾಗಿ ಹೇರಲು ಕೇಂದ್ರ ಸರ್ಕಾರ ಹೊರಟಿದೆ. ಅತಿವೃಷ್ಟಿ-ಅನಾವೃಷ್ಟಿ ಅನ್ನದೇ ಗ್ರಾಮೀಣರಿಗೆ ಕೆಲಸ ನೀಡಿ, ಅವರ ಸಂಕಷ್ಟಗಳನ್ನು ಪರಿಹರಿಸಲು ಪಾಲುದಾರನಾಗಿದ್ದ ನರೇಗಾ ಯೋಜನೆಯನ್ನು ಮಹಾತ್ಮ ಗಾಂಧಿ ಮೇಲಿನ ದ್ವೇಷಕ್ಕೆ ಬಿಜೆಪಿಯವರು ಮೊಟಕುಗೊಳಿಸಿದ್ದಾರೆ' ಎಂದು ಕಿಡಿಕಾರಿದರು.

# ಮುಖ್ಯಶಿಕ್ಷಕಿಯ ವಿರುದ್ಧ ಅನುದಾನ ದುರ್ಬಳಕೆ ಆರೋಪ

• ಉದಯವಾಹಿನಿ, ಕಕ್ಕೇರಾ

ಪಟ್ಟಣದ ಸಮೀಪದ ಬಂಡೊಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕಿ ವಿಜಯಲಕ್ಷ್ಮಿ ಅವರು ಸರ್ಕಾರದ ಅನುದಾನವನ್ನು ದುರ್ಬಳಕೆ ಮಾಡಿಕೊಂಡಿದ್ದಾರೆ ಎಂದು ಶಾಲಾ ಎಸ್‌ಡಿಎಂಸಿ ಉಪಾಧ್ಯಕ್ಷ ಸಾಬಯ್ಯ ಗೋನಾಲ ಆರೋಪಿಸಿದ್ದಾರೆ. ಸರ್ಕಾರಿ ಶಾಲೆ ಕಟ್ಟಡ ಶಿಥಿಲಗೊಂಡಿರುತ್ತದೆ. ಕಟ್ಟಡಕ್ಕೆ ಸುಣ್ಣ ಬಣ್ಣವಿಲ್ಲ, ಸಮರ್ಪಕ ಕಲಿಕೆಯಿಲ್ಲ, ಕಲಿಕಾ ಸಾಮಗ್ರಿ, ಕುಡಿಯುವ ನೀರಿನ ವ್ಯವಸ್ಥೆಯಿಲ್ಲ. ಹೀಗೆ ಹಲವಾರು ವರ್ಷಗಳಿಂದ ಬಂದಂತಹ ಹಣದ ಖರ್ಚು ವೆಚ್ಚಗಳ ಮಾಹಿತಿಯಿಲ್ಲ ಎಂದು ದೂರಿದ್ದಾರೆ.

ವಿದ್ಯಾರ್ಥಿಗಳ ದಾಖಲಾತಿ 86 ಇದ್ದು, ಹಾಜರಾತಿ 35 ಮಾತ್ರ. ಉಳಿದ ಮಕ್ಕಳ ಪೌಷ್ಠಿಕ ಆಹಾರ ದುರ್ಬಳಕೆ ಮಾಡುತ್ತಿದ್ದು, ಇದರ ಸೂಕ್ತ ದಾಖಲಾತಿಗಳೊಂದಿಗೆ ಬಿಇಓ ಅವರಿಗೆ ಮನವಿ ಮಾಡಿ ವಾರ ಕಳೆದರೂ, ಪ್ರಯೋಜನವಾಗಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಒಂದು ವಾರದೊಳಗೆ ಸೂಕ್ತ ದಾಖಲಾತಿಗಳನ್ನು ಅಧಿಕಾರಿಗಳು ಪರೀಶಿಲನೆ ಮಾಡಿ, ಮುಖ್ಯಶಿಕ್ಷಕಿಯ ಮೇಲೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.



ಉದಯವಾಹಿನಿ ಚಿತ್ರ

> **ನಮ್ಮ ಶಾಲೆಯಲ್ಲಿ ಯಾವುದೇ ಹಣ ದುರ್ಬಳಕೆಯಾಗಿಲ್ಲ. ಪ್ರತಿಯೊಂದಕ್ಕೂ ದಾಖಲೆಯಿದೆ. ನಾನು ಯಾವುದೇ ತಪ್ಪು ಮಾಡಿಲ್ಲ**
> **ವಿಜಯಲಕ್ಷ್ಮಿ ಮುಖ್ಯಶಿಕ್ಷಕಿ**

# ಬಿಸಿಯೂಟ ಸೇವಿಸಿ 55 ಮಕ್ಕಳು ಅಸ್ವಸ್ಥ; ಸ್ವಚ್ಛತೆಗೆ ಹೆಚ್ಚಿನ ಗಮನ ನೀಡಿ

• ಉದಯವಾಹಿನಿ, ಬೆಳಗುಂದಿ

ಸಮೀಪದ ಬೆಳಗುಂದಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಧ್ಯಾಹ್ನದ ಬಿಸಿಯೂಟ ಸೇವಿಸಿ 55 ಮಕ್ಕಳು ಅಸ್ವಸ್ಥಗೊಂಡ ಹಿನ್ನೆಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ವೀರಪ್ಪ ಕನ್ನೆಳ್ಳಿ ಭೇಟಿ ನೀಡಿ ಪರಿಶೀಲನೆ ಮಾಡಿ, ಸ್ವಚ್ಛತೆಗೆ ಹೆಚ್ಚಿನ ಗಮನ ನೀಡಿ ಎಂದು ಅಡುಗೆ ಸಿಬ್ಬಂದಿಯವರಿಗೆ ಸೂಚಿಸಿದರು. ಮಾಡಿದ ಬಿಸಿಬೇಳೆಬಾತ್ ಸರಿಯಾಗಿ ಬೆಂದಿರದ ಕಾರಣ ಅದನ್ನು ಸೇವಿಸಿದ ಮಕ್ಕಳಲ್ಲಿ ನಾಲ್ಕೈದು ಮಕ್ಕಳಿಗೆ ವಾಂತಿ ಆಗಿದೆ. ಘಟನೆ ಸಂಭವಿಸಿದ ತಕ್ಷಣದಿಂದ ವೈದ್ಯರ ಜೊತೆಗೆ ನಿರಂತರವಾಗಿ ಚರ್ಚಿಸುತ್ತ ಮಕ್ಕಳ ಆರೋಗ್ಯದ ಬಗ್ಗೆ ಮಾಹಿತಿ ಪಡೆದುಕೊಂಡಿದ್ದೇನೆ. ಎಲ್ಲಾ ಮಕ್ಕಳಿಗೆ ಅಗತ್ಯ ಚಿಕಿತ್ಸೆಯನ್ನು ನೀಡಲಾಗಿದ್ದು, ಇದೀಗ ಎಲ್ಲರು ಆರೋಗ್ಯವಾಗಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ. ಅದ್ದರಿಂದ ಪಾಲಕರು ಮತ್ತು ವಿದ್ಯಾರ್ಥಿಗಳು ಯಾವುದೇ ಭಯಪಡುವಂತ ಅಗತ್ಯವಿಲ್ಲ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೀರಪ್ಪ ಕನ್ನಳ್ಳಿ ತಿಳಿಸಿದರು.



ಉದಯವಾಹಿನಿ ಚಿತ್ರ

ಬಿಸಿ ಬೇಳೆ ಬಾತ್ ಸೇವಿಸಿ ಶಾಲಾವಧಿ ನಂತರ ಒಂದರಿಂದ ಎಂಟನೇ ತರಗತಿ ಮಕ್ಕಳಲ್ಲಿ ಏಕಾಏಕಿ ವಾಂತಿ, ಭೇದಿ, ಹೊಟ್ಟೆ ನೋವು, ತಲೆಸುತ್ತು ಕಾಣಿಸಿಕೊಂಡಿದೆ. ಸಂಜೆ ಪಾಲಕರು ಬಂದ ನಂತರ ಮಕ್ಕಳಿಗೆ ಹೊಟ್ಟೆ ನೋವು ಮತ್ತು ವಾಂತಿ ಹೆಚ್ಚಾಗುತ್ತಿದ್ದಂತೆ ಪಟ್ಟಣದ ಖಾಸಗಿ ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಚಿಕಿತ್ಸೆ ನೀಡಲಾಗಿತ್ತು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರ ಜೊತೆ ಮಕ್ಕಳ ಆರೋಗ್ಯದ ಬಗ್ಗೆ ಚರ್ಚಿಸಿದರು. ಪಾಲಕರು ಭಯಪಡುವ ಅಗತ್ಯವಿಲ್ಲ ಎಂದು ಸಮುದಾಯ ಆರೋಗ್ಯ ಕೇಂದ್ರದ ವೈದ್ಯರು ತಿಳಿಸಿದ ನಂತರ ಪಾಲಕರು ತಮ್ಮ ಮಕ್ಕಳನ್ನು ರಾತ್ರಿಯೇ ಮನೆಗೆ ಕರೆದುಕೊಂಡು ಹೋಗಿದ್ದರು.

**ಆರೋಗ್ಯ ಶಿಕ್ಷಣ ಇಲಾಖೆಯ ಅಧಿಕಾರಿಗಳ ತಂಡ ಭೇಟಿ:** ಅಸ್ವಸ್ಥಗೊಂಡ ಮಕ್ಕಳ ಆರೋಗ್ಯ ಪರಿಶೀಲನೆಗೆ ಮಂಗಳವಾರ ಬೆಳಿಗ್ಗೆ ಜಿಲ್ಲಾ ಆರೋಗ್ಯ ಕೇಂದ್ರದ ಐಡಿಎಸ್‌ಪಿ ಇಲಾಖೆಯ ತಂಡ, ಮಲ್ಲಾರ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯ ಡಾ. ಯಶವಂತ ರಾಠೋಡ, ಬೆಳಗುಂದಿ ಉಪಕೇಂದ್ರದ ಸಮುದಾಯ ಆರೋಗ್ಯ ಅಧಿಕಾರಿ ಪ್ರಕೃತಿ ಹಾಗೂ ಶಿಕ್ಷಣ ಇಲಾಖೆಯ ಬಿಇಒ, ಇಸಿಒ, ಸಿಆರ್‌ಪಿ ಸೇರಿದಂತೆ ಇತರರು ಶಾಲೆಗೆ ತೆರಳಿ ಅಡುಗೆ ಕೋಣೆ, ಸಾಮಗ್ರಿ, ದವಸ ಧಾನ್ಯ ಪರಿಶೀಲಿಸಿ ಅಡುಗೆ ಸಿಬ್ಬಂದಿಯವರಿಗೆ ಸ್ವಚ್ಛತೆ ಸೇರಿದಂತೆ ಕೆಲ ಸಲಹೆ ಸೂಚನೆಗಳು ಹಾಗೂ ಎಚ್ಚರಿಕೆಯನ್ನು ನೀಡಿದರು.

# ಸಂತೆ ಮೈದಾನಕ್ಕೆ ಚಾವಣಿ ಹಾಕುವ ಕಾಮಗಾರಿ ಆರಂಭ

• ಉದಯವಾಹಿನಿ, ಶಿಕಾರಿಪುರ

ಪಟ್ಟಣದಲ್ಲಿ ಪ್ರತಿ ಶನಿವಾರ ನಡೆಯುವ ಸಂತೆಯು ಜಿಲ್ಲೆಯಲ್ಲೇ ಹೆಚ್ಚು ಜನದಟ್ಟಣೆಯದ್ದು ಎಂದು ಪ್ರಸಿದ್ಧಿಯಾಗಿದೆ. ಇಷ್ಟು ದಿನ ಬಯಲಲ್ಲೇ ನಡೆಯುತ್ತಿದ್ದ ಕಾರಣ ಮಳೆ ಬಂದರೆ ವಸ್ತುಗಳನ್ನು ರಕ್ಷಿಸಿಕೊಳ್ಳಲು ವ್ಯಾಪಾರಸ್ಥರು ಪರದಾಡಬೇಕಿತ್ತು.

ಗ್ರಾಹಕರು ಯಾವುದಾದರೂ ಗುಡಾರದ ಆಶ್ರಯ ಪಡೆಯುವ ಅನಿವಾರ್ಯತೆ ಇತ್ತು. ಈಗ ಇಡೀ ಸಂತೆ ಮೈದಾನಕ್ಕೆ ಚಾವಣಿ ಹಾಕುವ ಕಾಮಗಾರಿ ಆರಂಭಗೊಂಡಿದ್ದು, ವ್ಯಾಪಾರಿಗಳು ಹಾಗೂ ಗ್ರಾಹಕರ ಖುಷಿಗೆ ಕಾರಣವಾಗಿದೆ.ವ್ಯಾಪಾರಸ್ಥರು, ಗ್ರಾಹಕರು ಬಿಸಿಲು, ಮಳೆಯ ಚಿಂತೆ ಇಲ್ಲದೆ ಸಂತೆ ಮಾಡಬೇಕು ಎಂಬ ಉದ್ದೇಶದಿಂದ ಮೂರು ವರ್ಷಗಳ ಹಿಂದೆ ಸಂತೆ ಮೈದಾನಕ್ಕೆ ಚಾವಣಿ ಹಾಕಿಸಲು ತೀರ್ಮಾನಿಸಲಾಗಿತ್ತು. ಈ ಕುರಿತ ಪ್ರಸ್ತಾವವನ್ನೂ ಸಿದ್ಧಪಡಿಸಲಾಗಿತ್ತು. ಸಂಸದ ಬಿ.ವೈ.ರಾಘವೇಂದ್ರ ಅವರ ಪರಿಶ್ರಮದ ಪರಿಣಾಮ ಕಾಮಗಾರಿಗೆ ನಬಾರ್ಡ್ ರೂ.9 ಕೋಟಿ ಅನುದಾನ ನೀಡಿದೆ. ಎರಡು ವರ್ಷದ ಹಿಂದೆ ಕಾಮಗಾರಿಗೆ ಚಾಲನೆ ದೊರೆತಿತ್ತು. ಆದರೆ ಜಾಗದ ವಿವಾದದ ಕಾರಣಕ್ಕೆ ಸ್ಥಗಿತಗೊಂಡಿತ್ತು. ಇದೀಗ ಕಾಮಗಾರಿ ಭರದಿಂದ ಸಾಗಿದೆ. 29 ಮೀಟರ್ ಅಗಲ, 370 ಮೀಟರ್ ಉದ್ದದ ಬೃಹತ್ ಚಾವಣಿ ಅಳವಡಿಸುವ ಕೆಲಸ ಭರದಿಂದ ಸಾಗಿದ್ದು, ಈಗಾಗಲೇ ಎರಡೂ ಬದಿಯಲ್ಲಿ ಕಬ್ಬಿಣದ ಪಿಲ್ಲರ್ ಹಾಕಲಾಗಿದೆ. ಬೀಮ್ ಮತ್ತು ಪರ್ಲಿನ್ ಹಾಕುವ ಕೆಲಸ ನಡೆಯುತ್ತಿದೆ. ಕಾಮಗಾರಿಯನ್ನು ಜನರು ಕುತೂಹಲದಿಂದ ವೀಕ್ಷಿಸುತ್ತಿರುವ ದೃಶ್ಯ ಸಾಮಾನ್ಯವಾಗಿದೆ.

# ಭದ್ರಾ ಮೇಲ್ದಂಡೆ; ಜನರ ದಿಕ್ಕು ತಪ್ಪಿಸಬೇಡಿ: ಈಚಘಟ್ಟ ಸಿದ್ದವೀರಪ್ಪ

• ಉದಯವಾಹಿನಿ, ಹಿರಿಯೂರು

ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ 2008 ರಿಂದ ಜನಪ್ರತಿನಿಧಿಗಳ ಹೇಳಿಕೆಗಳನ್ನು ಕೇಳಿ ಬೇಸತ್ತು ಹೋಗಿದ್ದೇವೆ. ಇನ್ನಾದರೂ ಜನರ ದಿಕ್ಕು ತಪ್ಪಿಸುವ ಹೇಳಿಕೆಗಳನ್ನು ನೀಡಬಾರದು ಎಂದು ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ರಾಜ್ಯ ಘಟಕದ ಕಾರ್ಯಾಧ್ಯಕ್ಷ ಈಚಘಟ್ಟ ಸಿದ್ಧವೀರಪ್ಪ ತಾಕೀತು ಮಾಡಿದರು.ತಾಲ್ಲೂಕಿನ ವಾಣಿವಿಲಾಸಪುರದಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಂದ ಆಗಮಿಸಿದ್ದ ನೂರಾರು ಸಂಖ್ಯೆಯ ರೈತ ಮುಖಂಡರು ಕಣಿವೆ ಮಾರಮ್ಮ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ನಂತರ ವಾಣಿವಿಲಾಸ ಜಲಾಶಯಕ್ಕೆ ಬಾಗಿನ ಅರ್ಪಿಸಿದ ಬಳಿಕ ದೇವಸ್ಥಾನದ ಸಮುದಾಯ ಭವನದಲ್ಲಿ ಏರ್ಪಡಿಸಿದ್ದ ಸಭೆಯಲ್ಲಿ ಮಾತನಾಡಿದರು. ನಮ್ಮ ಈ ಬಾರಿಯ ಚಳವಳಿಯು ಜಿಲ್ಲೆಗೆ ಸಮಗ್ರ ನೀರಾವರಿ ಕಲ್ಪಿಸಬೇಕು ಎಂಬುದಕ್ಕೆ ಸೀಮಿತವಾಗಿರಬೇಕು. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಮೇಲೆ ಒತ್ತಡ ತಂದು ನಮ್ಮ ನೀರಿನ ಹಕ್ಕು ಪಡೆಯಬೇಕು' ಎಂದು ಸಲಹೆ ನೀಡಿದರು.

# ಕೊಪ್ಪಳ ಕಾರ್ಖಾನೆಗಳ ವಿಷಾನಿಲದಿಂದ ಬದುಕು ನರಕ: ಸಾಹಿತಿ ಬಿ. ಪೀರಬಾಷ

• ಉದಯವಾಹಿನಿ, ಕೊಪ್ಪಳ

ಬಂಕಿಮ್ ಚಂದ್ರ ಚಟರ್ಜಿ ಅವರ ಸುಜಲಾಂ ಸುಫಲಾಂ ಮಲಯಜ ಶೀತಲಾಂ ಸಸ್ಯ ಶ್ಯಾಮಲಾಂ ಮಾತರಂ ವಂದೇ ಮಾತರಂ ಗೀತೆಯ ಮಹತ್ವವನ್ನು ಸಾಹಿತಿ ಬಿ. ಪೀರಬಾಷ ಉಲ್ಲೇಖಿಸಿ ಮಾತನಾಡಿ, ಇಲ್ಲಿ ಶುದ್ಧವಾದ ತಿಳಿಯಾದ ಜಲ, ಹಣ್ಣು ಹಂಪಲು ಇದ್ದರೂ ಕಾರ್ಖಾನೆಗಳ ಮಾಲಿನ್ಯದಿಂದ ಇಲ್ಲಿನ ನೆಲ ವಿಷಾನಿಲವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಜಿಲ್ಲಾ ಬಚಾವೊ ಆಂದೋಲನ ಸಮಿತಿ ಹಾಗೂ ಪರಿಸರ ಹಿತರಕ್ಷಣಾ ವೇದಿಕೆ ಇದರ ಜಂಟಿ ವೇದಿಕೆ ನೇತೃತ್ವದಲ್ಲಿ ನಡೆಯುತ್ತಿರುವ ಧರಣಿಯ 82ನೇ ದಿನದ ಹೋರಾಟದಲ್ಲಿ ಅವರು ಮಾತನಾಡಿದರು. ಬಲ್ಡೋಟ, ಕಿರ್ಲೋಸ್ಕರ್, ಕಲ್ಯಾಣಿ ಸ್ಟೀಲ್, ಮುಕುಂದ ಸುಮಿ, ಎಕ್ಸ್ ಇಂಡಿಯಾ ಸೇರಿದಂತೆ ವಿವಿಧ ಕಾರ್ಖಾನೆಗಳ ವಿಸ್ತರಣೆ ವಿರೋಧಿಸಿ ಧರಣಿ ನಡೆಯುತ್ತಿದೆ.

# ಬಾಳಿನ ಸುಂದರತೆಗೆ ಗುರು ಕಾರುಣ್ಯವೇ ಮೂಲ

• ಉದಯವಾಹಿನಿ, ಹುಲಸೂರ

ಮನುಷ್ಯನ ಜೀವನಕ್ಕೆ ಧರ್ಮವೇ ಶಾಶ್ವತ ನಂದಾದೀಪವಾಗಿದ್ದು, ಬದುಕನ್ನು ಶುದ್ಧ ಹಾಗೂ ಸುಂದರಗೊಳಿಸುವಲ್ಲಿ ಗುರು ಕಾರುಣ್ಯ ಮಹತ್ವದ ಪಾತ್ರ ವಹಿಸುತ್ತದೆ ಎಂದು ಬಾಳೆಹೊನ್ನೂರು ರಂಭಾಪುರಿಯ ವೀರಸೋಮೇಶ್ವರ ಸ್ವಾಮೀಜಿ ಹೇಳಿದರು. ಮಂಗಳವಾರ ಭಾಲ್ಕಿ ತಾಲ್ಲೂಕಿನ ಮೇಹಕರ ಹಿರೇಮಠದಲ್ಲಿ ವಿರೂಪಾಕ್ಷೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಇಷ್ಟಲಿಂಗ ಮಹಾಪೂಜಾ ಹಾಗೂ ಧರ್ಮಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಭೌತಿಕ ಬದುಕಿಗೆ ಆಧ್ಯಾತ್ಮದ ಅರಿವು ಅಗತ್ಯವಾಗಿದ್ದು, ಮೌಲ್ಯಾಧಾರಿತ ಜೀವನಕ್ಕೆ ಧರ್ಮಾಚರಣೆ ಅನಿವಾರ್ಯ ಎಂದು ಹೇಳಿದರು. ಮಾನವನನ್ನು ಪರಿಪೂರ್ಣತೆಯತ್ತ ಕರೆದೊಯ್ಯುವುದೇ ನಿಜವಾದ ಧರ್ಮ. ಹಣ ಮಾನವೀಯತೆಯನ್ನು ಮರೆಸಿದರೆ, ಹಸಿವು ಬದುಕಿನ ಪಾಠ ಕಲಿಸುತ್ತದೆ' ಎಂದರು.



ಉದಯವಾಹಿನಿ ಚಿತ್ರ

ಮೆಹಕರ ಕಟ್ಟಿಮನಿ ಸಂಸ್ಥಾನದ ರಾಜೇಶ್ವರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ದೇಶದಲ್ಲಿನ ಮಠ ಪೀಠಗಳು ಸಮಾಜದಲ್ಲಿ ಸಾಮರಸ್ಯ ಮತ್ತು ಸೌಹಾರ್ದ ಬೆಳೆಸುವ ಕಾರ್ಯ ಮಾಡುತ್ತಿವೆ. ದೇವರನ್ನು ಮಾನವ ಬುದ್ಧಿ ಅಥವಾ ವಿಜ್ಞಾನದಿಂದ ಅಳೆಯಲು ಸಾಧ್ಯವಿಲ್ಲ. ಭಕ್ತಿ, ಶ್ರದ್ದೆ ಹಾಗೂ ಕಾಯಕದಲ್ಲಿ ಶ್ರಮವಿಲ್ಲದೆ ಜೀವನ ಸಾರ್ಥಕವಾಗದು' ಎಂದು ಹೇಳಿದರು.

ಈ ಸಂದರ್ಭದಲ್ಲಿ ಹುಡಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮೀಜಿ ಸೇರಿದಂತೆ ವಿವಿಧ ಮಠಗಳ ಸ್ವಾಮೀಜಿಗಳು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ರಂಭಾಪುರಿ ಸ್ವಾಮೀಜಿ ಇಷ್ಟಲಿಂಗ ಮಹಾಪೂಜೆಯನ್ನು ವಿಧಿವಿಧಾನಗಳೊಂದಿಗೆ ನೆರವೇರಿಸಿದರು. ಸಮಾರಂಭದಲ್ಲಿ ಆಗಮಿಸಿದ್ದ ಸಕಲ ಭಕ್ತರಿಗೆ ಅನ್ನದಾಸೋಹ ಜರುಗಿತು.

# ಜಿಲ್ಲಾ ಕ್ರೀಡಾಂಗಣ ಅವ್ಯವಹಾರದ ತನಿಖೆಗೆ ಆಗ್ರಹ

• ಉದಯವಾಹಿನಿ, ಯಾದಗಿರಿ

ಅಂತರರಾಷ್ಟ್ರೀಯ ಮಟ್ಟದಲ್ಲಿ ಪ್ರಶಸ್ತಿ ಪಡೆದ ಜಿಲ್ಲೆಯ ಪ್ರತಿಭಾವಂತ ಕ್ರೀಡಾಪಟುವಿನ ವಿರುದ್ಧ ಪ್ರಕರಣ ದಾಖಲಿಸಿದ್ದು ಖಂಡನೀಯ. ಕಳೆದ ಐದು ವರ್ಷಗಳಿಂದ ಜಿಲ್ಲಾ ಕ್ರೀಡಾಂಗಣದ ಅಭಿವೃದ್ಧಿಗೆ ಆಗ್ರಹಿಸಿದರೂ ಸ್ಪಂದಿಸದವರು ಪ್ರಕರಣ ದಾಖಲಿಸಿದ್ದು, ಕೂಡಲೇ ಪ್ರಕರಣ ಹಿಂಪಡೆಯಬೇಕು ಮತ್ತು ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದೆ ಎನ್ನಲಾದ ಅವ್ಯವಹಾರ ಕುರಿತು ತನಿಖೆ ನಡೆಸಬೇಕು ಎಂದು ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ, ದೇವರಾಜ ನಾಯಕ್ ಆಗ್ರಹಿಸಿದರು.ನಗರದ ಸುಭಾಷ್ ವೃತ್ತದಲ್ಲಿ ಮಂಗಳವಾರ ಕರ್ನಾಟಕ ಪ್ರದೇಶ ಬಂಜಾರ (ಲಂಬಾಣಿ) ಸೇವಾ ಸಂಘ ವತಿಯಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಅವ್ಯವಹಾರದ ತನಿಖೆ ಮತ್ತು ಅಭಿವೃದ್ಧಿ ಹಾಗೂ ಕ್ರೀಡಾಪಟು ಲೋಕೇಶ ರಾಠೋಡ್ ಮತ್ತು ಆತನೊಡನೆ ಹೋರಾಟದಲ್ಲಿ ಭಾಗಿಯಾದವರ ವಿರುದ್ಧ ದಾಖಲಿಸಿದ ಪ್ರಕರಣ ಹಿಂಪಡೆಯಲು ಆಗ್ರಹಿಸಿ ನಡೆಸಿದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಶೀಘ್ರ ಕ್ರಮವಹಿಸದಿದ್ದರೆ ಯಾದಗಿರಿ ಬಂದ್‌ಗೆ ಕರೆ ನೀಡುವುದಾಗಿ ಎಚ್ಚರಿಸಿದರು.

ಮುಖಂಡ ಜನಾರ್ಧನ ರಾಠೋಡ್ ಹಾಗೂ ಜಿಲ್ಲಾ ಬಿಜೆಪಿ ಯುವ ಘಟಕದ ಅಧ್ಯಕ್ಷ ಶ್ರೀಧರ ಸಾಹುಕಾರ ಮಾತನಾಡಿ, ಜಿಲ್ಲೆಯ ಕ್ರೀಡಾಂಗಣವು ಸಕಲ ಸೌಲಭ್ಯಗಳೊಂದಿಗೆ ಎಲ್ಲಾ ಕ್ರೀಡಾಪಟುಗಳಿಗೆ ಅನುಕೂಲವಾಗಲೆಂಬ ಕಾರಣ ಕಳೆದ ಐದು ವರ್ಷಗಳಿಂದ ಸ್ವಾರ್ಥವಿಲ್ಲದೆ ಲೋಕೇಶ ಹೋರಾಡುತ್ತಿದ್ದಾರೆ.

ಅಂತಹಾ ಕ್ರೀಡಾಪಟು ವಿರುದ್ಧ ಹಾಕಿದ ಕೇಸ್ ಇಡೀ ಜಿಲ್ಲೆಯ ಕ್ರೀಡಾಪಟುಗಳ ಮೇಲೆ ದೌರ್ಜನ್ಯ ನಡೆಸಿದಂತಿದೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.



ಉದಯವಾಹಿನಿ ಚಿತ್ರ

### ಶೀಘ್ರ ಸ್ಪಂದಿಸದಿದ್ದರೆ ಜಿಲ್ಲೆಯೆಲ್ಲೆಡೆ ಹೋರಾಟ

**ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿಗೆ ಆಗ್ರಹಿಸಿ ಶಾಂತಿಯುತ ಹೋರಾಡಿದ ಕ್ರೀಡಾಪಟುಗಳ ವಿರುದ್ಧ ಪ್ರಕರಣ ದಾಖಲಿಸಿದ್ದು ತಪ್ಪು. ಕೂಡಲೇ ಸಂಬಂಧಿತರು ಸ್ಪಂದಿಸಬೇಕು. ಹೋರಾಟದಲ್ಲಿ ನೀಡಿದ ಬೇಡಿಕೆಗಳನ್ನು ತಕ್ಷಣ ಈಡೇರಿಸಿ. ಇಲ್ಲವಾದರೆ ಜಿಲ್ಲೆಯಾದ್ಯಂತ ಹೋರಾಟ ನಡೆಸಲಾಗುವುದು ಎಂದು ಬಿಜೆಪಿ ಮುಖಂಡ ಮಹೇಶರೆಡ್ಡಿ ಮುದಗನಾಳ ಆಗ್ರಹಿಸಿದರು. ರಾಜ್ಯದ ಅತಿದೊಡ್ಡ ಕ್ರೀಡಾಂಗಣಗಳಲ್ಲಿ ನಮ್ಮದೂ ಒಂದು. ಆದರೆ ಇಲ್ಲಿ ಸಂಪೂರ್ಣ ಅವ್ಯವಸ್ಥೆಯಿದೆ. ಅದನ್ನು ಸರಿಪಡಿಸಿ ಕ್ರೀಡಾಪಟುಗಳಿಗೆ ಸೌಲಭ್ಯ ಕಲ್ಪಿಸಲು ಹೋರಾಡಿದವರ ವಿರುದ್ಧ ಜಿಲ್ಲಾ ಕ್ರೀಡಾಧಿಕಾರಿ ಪ್ರಕರಣ ದಾಖಲಿಸಿದ್ದಾರೆ. ಹೀಗಾದರೆ ಸೌಲಭ್ಯಗಳ ಕುರಿತು ಯಾರಿಗೆ ಕೇಳಬೇಕಿತ್ತು' ಎಂದು ಪ್ರಶ್ನಿಸಿದರು.**

# ಸಿದ್ದರಾಮಯ್ಯ ಸರ್ಕಾರ ಬಡವರ ಪರ: ಬಸವರಾಜ ರಾಯರಡ್ಡಿ

• ಉದಯವಾಹಿನಿ, ಕುಕನೂರು

ಸಿದ್ದರಾಮಯ್ಯನವರು ಮಹಿಳೆಯರಿಗೆ ಉಚಿತ ಬಸ್ಸಿನ ವ್ಯವಸ್ಥೆ ಮಾಡಿದಂತೆ ಮೋದಿಯವರಿಗೆ ಉಚಿತ ರೈಲ್ವೆ ಮಾಡಿ ಎಂದು ಪತ್ರ ಬರೆಯಿರಿ ಎಂದು ಮಹಿಳೆಯರನ್ನ ಉದ್ದೇಶಿಸಿ ಮುಖ್ಯಮಂತ್ರಿ ಆರ್ಥಿಕ ಸಲಹೆಗಾರ ಬಸವರಾಜ ರಾಯರಡ್ಡಿ ಹೇಳಿದರು.

ತಾಲ್ಲೂಕಿನ ರಾಜೂರು, ಆಡೂರು, ದ್ಯಾಂಪೂರು, ಮಸಬಹಂಚಿನಾಳ ಗ್ರಾಮಗಳಲ್ಲಿ ಹಮ್ಮಿಕೊಂಡ ಜನಸಂಪರ್ಕ ಸಭೆಯಲ್ಲಿ ಅವರು ಮಾತನಾಡಿದರು. ಪಟ್ಟಣಕ್ಕೆ ಬಡ ರೋಗಿಗಳಿಗೆ ಅನುಕೂಲವಾಗಲೆಂದು ಡಯಾಲೀಸಿಸ್ ಕೇಂದ್ರವನ್ನು ಸ್ಥಾಪನೆ ಮಾಡುತ್ತಿದ್ದು ಇದರಿಂದ ನಮ್ಮ ತಾಲ್ಲೂಕಿನ ಜನತೆಗೆ ದೂರದ ನಗರಗಳಿಗೆ ತೆರಳುವುದು ತಪ್ಪುತ್ತದೆ. ಪಟ್ಟಣದ ಕಲ್ಯಾಣ ಮಂಟಪವನ್ನು ರೂ 4 ಕೋಟಿ ವೆಚ್ಚದಲ್ಲಿ ದುರಸ್ತಿ ಮಾಡುತ್ತಿದ್ದು ಬಡವರಿಗೆ ಮದುವೆ ಮಾಡಲು ಕಡಿಮೆ ದರದಲ್ಲಿ ದೊರೆಯುವುದರಿಂದ ತುಂಬಾ ಅನುಕೂಲವಾಗಲಿದೆ' ಎಂದರು.

# ಶಾಸಕಿ ಕರೆಮ್ಮಗೆ ಮರಳು ದಂಧೆಕೋರರ ವಾರ್ನಿಂಗ್: ಡಿಸಿ,ಎಸ್ಪಿಗೆ ದೂರು


## ಅಕ್ರಮ ಮರಳುಗಾರಿಕೆ ತಡೆಗೆ ಯತ್ನಿಸಿದ್ದಕ್ಕೆ ಮನೆಗೆ ಬಂದು ಬೆದರಿಕೆ: ಶಾಸಕಿ ಕರೆಮ್ಮ

• ಉದಯವಾಹಿನಿ, ರಾಯಚೂರು

ದೇವದುರ್ಗ ತಾಲ್ಲೂಕಿನಲ್ಲಿ ಪ್ರತಿ ನಿತ್ಯ ಅಕ್ರಮ ಮರಳು ಗಣಿಗಾರಿಕೆ ನಡೆಯುತ್ತಿದ್ದರು ಕೂಡ ಕಂಡು ಕಾಣದಂತೆ ಸಂಬಂಧ ಪಟ್ಟ ಅಧಿಕಾರಿಗಳು ವರ್ತಿಸುತ್ತಿದ್ದಾರೆ. ಇದರ ಭಾಗವಾಗಿ ಇತ್ತೀಚೆಗೆ ಅಕ್ರಮ ಮರಳು ದಂಧೆಕೋರರು ಅಕ್ರಮ ಮರಳುಗಾರಿಕೆ ತಡೆಯದಂತೆ ನನ್ನ ಮನೆಗೆ ಬಂದು ಬೆದರಿಕೆ ಹಾಕಿದ್ದಾರೆ ಅಂತ ದೇವದುರ್ಗ ಶಾಸಕಿ ಕರೆಮ್ಮ ಜಿ. ನಾಯಕ್, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗೆ ದಂಧೆಕೊರರ ವಿರುದ್ಧ ದೂರು ನೀಡಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರನ್ನು ಶಾಸಕಿ ಜಿ.ಕರೆಮ್ಮ ನಾಯಕ್ ಅವರು ಬೇಟಿ ಮಾಡಿ ಅಕ್ರಮ ಮರಳು ದಂಧೆಕೋರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಆಗ್ರಹಿಸಿದ್ದಾರೆ. ಎಸ್.ಪಿ ಗೆ ದೂರು ನೀಡಿದ ಬಳಿಕ ಮಾತನಾಡಿದ ಕರೆಮ್ಮ ನಾಯಕ್ ದೇವದುರ್ಗ ತಾಲ್ಲೂಕಿನಲ್ಲಿ ಯಾವುದೇ ಟೆಂಡರ್ ಇಲ್ಲದೇ ಲಾರಿಗಳಲ್ಲಿ ಅಕ್ರಮ ಮರಳು ಸಾಗಣೆ ನಡೆದಿದೆ. ನಾನು ಟ್ರ್ಯಾಕ್ಟರ್‌ನಲ್ಲಿ ಸಾಗಿಸುವವರ ಪರ ಇದ್ದೇನೆ, ಲಾರಿಯವರು ಟ್ರ್ಯಾಕ್ಟರ್‌ನವರನ್ನ ಎತ್ತಿಕಟ್ಟುತ್ತಿದ್ದಾರೆ ಎಂದರು.

ಲಾರಿ ಇಟ್ಟು ಮರಳುಗಾರಿಕೆ ಮಾಡುವ ಶ್ರೀನಿವಾಸ ನಾಯಕ್ ಇತರರು ಬೆದರಿಸಲು ಬಂದಿದ್ದರು. ಪೊಲೀಸ್ ಕ್ವಾಟ್ರಸ್‌ನಲ್ಲಿರೋ ನನ್ನ ಮನೆಗೆ ಬಂದು ಬೆದರಿಸುತ್ತಾರೆ ಎಂದರೆ ಕಾನೂನು ಸುವ್ಯವಸ್ಥೆ ಎಲ್ಲಿದೆ ಸರ್ಕಾರ ಕ್ರಮ ಯಾಕೆ ತೆಗೆದುಕೊಳ್ಳುತ್ತಿಲ್ಲ.



ಉದಯವಾಹಿನಿ ಚಿತ್ರ

**ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ದೂರು**

ಶ್ರೀನಿವಾಸ ನಾಯಕ್, ರವಿ, ವಿರೇಶ್ ಗೌಡ, ಅಮರೇಶ್, ವಾಸು, ಹನುಮಂತ ಸೇರಿ ಅನೇಕರ ವಿರುದ್ಧ ಪ್ರಕರಣ ದಾಖಲಾಗಿದೆ. ಅಧಿಕಾರಿಗಳಿಗೆ ಇವರನ್ನ ಹೆದರಿಸುವ ಧೈರ್ಯ ಇಲ್ಲದಂತಾಗಿದೆ ಹಾಗೂ ತಹಶಿಲ್ದಾರರನ್ನೂ ಕೂಡ ಹೆದರಿಸುತ್ತಾರೆ. ಶಾಸಕಿಯಾಗಿ ನಾನು ಕೆಲಸ ಮಾಡುವುದು ಹೇಗೆ ಸರ್ಕಾರ ಇದನ್ನ ಗಮನಿಸಬೇಕು. ಮುಖ್ಯಮಂತ್ರಿಗಳು, ಗೃಹ ಸಚಿವರು ಸಹ ಇದರಕಡೆ ಗಮನ ಹರಿಸಬೇಕು ಅಂತ ಒತ್ತಾಯಿಸಿದರು. ಅಧಿವೇಶನದಲ್ಲಿ ಅಕ್ರಮ ಮರಳುಸಾಗಣೆ ಬಗ್ಗೆ ನಿರಂತರವಾಗಿ ಧ್ವನಿ ಎತ್ತುತ್ತೇನೆ. ಯಾವುದಕ್ಕೂ ನಾನು ಹೆದರುವುದಿಲ್ಲ, ಇವತ್ತೆ ಇದು ನಿಲ್ಲಬೇಕು ಅಂತ ಅಕ್ರಮ ಮರಳು ದಂಧೆ ಕೋರರಿಗೆ ಕರೆಮ್ಮ ನಾಯಕ್ ಎಚ್ಚರಿಕೆ ನೀಡಿದ್ದಾರೆ.

**ಜೆಡಿಎಸ್ ಶಾಸಕಿಯ ಪುತ್ರನ ಬಂಧನಕ್ಕೆ ವಾರೆಂಟ್ ಹೊರಡಿಸಿದ ಕೋರ್ಟ್:** ದೇವದುರ್ಗದಲ್ಲಿ ಪೊಲೀಸ್ ಪೇದೆಯ ಮೇಲೆ ಹಲ್ಲೆ ನಡೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕಿ ಕರೆಮ್ಮ ಜಿ ನಾಯಕ್ ಅವರ ಪುತ್ರ ಸಂತೋಷ್ ವಿರುದ್ಧ ಬಂಧನ ವಾರೆಂಟ್ ಜಾರಿಯಾಗಿದೆ. ನ್ಯಾಯಾಲಯಕ್ಕೆ ಹಾಜರಾಗದ ಹಿನ್ನೆಲೆಯಲ್ಲಿ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಈ ಕಟ್ಟುನಿಟ್ಟಿನ ಆದೇಶ ನೀಡಿದೆ. ಆರೋಪಿಯನ್ನು ಬಂಧಿಸಿ ಜುಲೈ 5 ರಂದು ನಡೆಯಲಿರುವ ವಿಚಾರಣೆಗೆ ಹಾಜರುಪಡಿಸುವಂತೆ ಪೊಲೀಸರಿಗೆ ಸೂಚಿಸಲಾಗಿದೆ. ಈ ಬೆಳವಣಿಗೆಯು ಸ್ಥಳೀಯ ರಾಜಕೀಯ ವಲಯದಲ್ಲಿ ತೀವ್ರ ಸಂಚಲನ ಮೂಡಿಸಿದೆ.

**ದೇವದುರ್ಗದಲ್ಲಿ ನ.7ರಿಂದ ಸದ್ದಿಲ್ಲದೆ ಎರಡು ಟೋಲ್ ಗೇಟ್ ಪುನಾರಂಭ!:** ದೇವದುರ್ಗದಲ್ಲಿ ಸಾರ್ವಜನಿಕರ ತೀವ್ರ ವಿರೋಧದ ನಡುವೆಯೂ ಮೂರು ತಿಂಗಳ ಕಾಲ ಸ್ಥಗಿತಗೊಂಡಿದ್ದ ಟೋಲ್‌ಗೇಟ್‌ಗಳು ಮತ್ತೆ ಕಾರ್ಯಾರಂಭ ಮಾಡಲಿವೆ.

ಇದರ ಮೇಲ್ವಿಚಾರಣೆಗಾಗಿ ಸಹಾಯಕ ಆಯುಕ್ತರು ನಾಲ್ವರು ಅಧಿಕಾರಿಗಳನ್ನು ನೇಮಿಸಿ ಅಧಿಕೃತ ಆದೇಶ ಹೊರಡಿಸಿದ್ದಾರೆ. ಈ ಹಿಂದೆ ಟೋಲ್ ವಿರುದ್ಧ ಭಾರಿ ಪ್ರತಿಭಟನೆಗಳು ನಡೆದಿದ್ದವು ಶಾಸಕರು ಮತ್ತು ಸಂಸದರು ಸರ್ಕಾರದ ಗಮನ ಸೆಳೆದಿದ್ದರು. ಈ ಎಲ್ಲಾ ಬೆಳವಣಿಗೆಗಳ ನಡುವೆ ಈಗ ಮತ್ತೆ ಟೋಲ್ ಸಂಗ್ರಹ ಆರಂಭವಾಗುತ್ತಿರುವುದು ಜನರಲ್ಲಿ ಕುತೂಹಲ ಮೂಡಿಸಿದೆ.

### ಡಿಕೆಶಿ ಮಾಸ್ಟರ್ ಪ್ಲಾನ್! ಜೆಡಿಎಸ್ ಶಾಸಕರನ್ನು ಸೆಳೆಯಲು ತಂತ್ರ

**ರಾಜ್ಯ ರಾಜಕೀಯದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯ ನಡುವೆಯೇ ದಳದ ಅಸಮಾಧಾನಿತ ಶಾಸಕರನ್ನು ಸೆಳೆಯಲು ಡಿಸಿಎಂ ಡಿ.ಕೆ. ಶಿವಕುಮಾರ್ ಮುಂದಾಗಿದ್ದಾರೆ. ಮೈತ್ರಿ ವಿಚಾರವಾಗಿ ಜೆಡಿಎಸ್ ಒಳಗೆ ಭಿನ್ನಾಭಿಪ್ರಾಯಗಳಿದ್ದು, ಈ ಅವಕಾಶವನ್ನು ಬಳಸಿಕೊಳ್ಳಲು ಕೈ ನಾಯಕರು ಗಂಭೀರ ಪ್ರಯತ್ನ ನಡೆಸುತ್ತಿದ್ದಾರೆ. ಈಗಾಗಲೇ ಕೆಲವು ಶಾಸಕರ ಜೊತೆ ಮಾತುಕತೆ ನಡೆಸಿರುವುದು ಕುತೂಹಲ ಮೂಡಿಸಿದ್ದು, ಡಿಕೆಶಿ ಅವರ ಈ ಆಪರೇಷನ್ ಯಶಸ್ವಿಯಾಗಲಿದೆಯೇ ಎಂಬ ಚರ್ಚೆ ಶುರುವಾಗಿದೆ. ರಾಜಕೀಯ ಚದುರಂಗದಾಟದ ಈ ಬೆಳವಣಿಗೆಗಳು ಮುಂದಿನ ದಿನಗಳಲ್ಲಿ ಮಹತ್ವದ ಬದಲಾವಣೆಗೆ ಸಾಕ್ಷಿಯಾಗಲಿವೆ.**

# ವೇದ ಮಂತ್ರ ಪಠಣಗಳೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟ ರಷ್ಯಾ ಜೋಡಿ!



**ರಷ್ಯಾ:** ರಷ್ಯಾದ ದಂಪತಿ ದಶಾಶ್ವಮೇಧ ಘಾಟ್‌ನಲ್ಲಿರುವ ನಲ್ವಾ ವೀರ್ ಬಾಬಾ ದೇವಸ್ಥಾನದಲ್ಲಿ ವೈದಿಕ ಆಚರಣೆಗಳು ಮತ್ತು ಹಿಂದು ಪದ್ಧತಿಗಳನ್ನು ಅನುಸರಿಸಿ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ. ರಷ್ಯಾದ ನಿವಾಸಿಗಳಾದ ಮರಿನ್ (36) ಮತ್ತು ಕಾನ್ಸ್ಟಂಟಿನ್ (48) ಮಂತ್ರಗಳ ಪಠಣ, ವೈದಿಕ ಆಚರಣೆಗಳು ಮತ್ತು ದೇವರನ್ನು ಸಾಕ್ಷಿಯಾಗಿಟ್ಟುಕೊಂಡು ಸಪ್ತಪದಿ ತುಳಿದರು. ಜೈಮಾಲಾ (ಮಾಲೆ), ಸಿಂಧೂರ್ದಾನ (ಸಿಂಧೂರ), ಫೆರಾಸ್ (ವೃತ್ತಗಳು) ಮತ್ತು ಆಶೀರ್ವಾದ ಸೇರಿದಂತೆ ಎಲ್ಲಾ ಸಾಂಪ್ರದಾಯಿಕ ಆಚರಣೆಗಳನ್ನು ಅನುಸರಿಸುವುದರೊಂದಿಗೆ ವಿವಾಹ ಮಹೋತ್ಸವವನ್ನ ನೆರವೇರಿಸಲಾಯಿತು. ಮಹಿಳೆಯರು ದೇವಾಲಯದ ಆವರಣದಲ್ಲಿ ಹಾಡುಗಳ ಮೂಲಕ ಮದುವೆಗೆ ಮೆರಗು ನೀಡಿದರು.ರಷ್ಯಾದ ವಧು ವರರು ಸಾಂಪ್ರದಾಯಿಕ ಭಾರತೀಯ ಉಡುಪುಗಳನ್ನು ಧರಿಸಿ ಗಮನ ಸೆಳೆದರು. ವಧು ಮರೀನ್ ತಿಳಿ ಹಳದಿ ಸೀರೆಯನ್ನು ಧರಿಸಿದ್ದರೆ, ವರ ಕಾನ್ಸ್ಟಂಟಿನ್ ಧೋತಿ ಮತ್ತು ಕುರ್ತಾ ಧರಿಸಿ ಮಿಂಚಿದರು. ವಧು ಮರೀನ್ ಮಾತನಾಡಿ, ಭಾರತೀಯ ನಾಗರಿಕತೆ, ಸಂಸ್ಕೃತಿ ಮತ್ತು ವೈವಿಧ್ಯತೆಯನ್ನು ತಾನು ಆಳವಾಗಿ ಪ್ರೀತಿಸುತ್ತೇನೆ ಎಂದು ಸಂತಸ ವ್ಯಕ್ತಪಡಿಸಿದರು.

ಇಲ್ಲಿನ ಸಂಪ್ರದಾಯಗಳು ತನಗೆ ಇಷ್ಟ ಎಂದ ಅವರು, ತಾನು ಹಿಂದು ಪದ್ಧತಿಗಳ ಪ್ರಕಾರ ಕಾಶಿಯಲ್ಲಿ ಮದುವೆಯಾಗಲು ನಿರ್ಧರಿಸಿದೆ ಎಂದರು. ಐದು ವರ್ಷಗಳ ಹಿಂದೆ ಶಿವ ಮತ್ತು ಪಾರ್ವತಿ ದೇವಿಯರಿಂದ ಪ್ರೇರಿತರಾಗಿ ಹಿಂದು ಪದ್ಧತಿಗಳ ಪ್ರಕಾರ ಕಾಶಿಯಲ್ಲಿ ಮದುವೆಯಾಗಲು ನಿರ್ಧರಿಸಿದ್ದ ಮತ್ತು ಅವರು ಈ ಪ್ರತಿಜ್ಞೆಯನ್ನು ಪೂರೈಸುತ್ತಿದ್ದಾರೆ ಎಂದು ಮರೀನ್ ನೆನಪಿಸಿಕೊಂಡರು. ವೇದ ಪಠಣಗಳ ನಡುವೆ ವಿವಾಹವನ್ನು ನೆರವೇರಿಸಲಾಯಿತು ಎಂದು ಪಂಡಿತ್ ಶಿವಕಾಂತ್ ಪಾಂಡೆ ಹೇಳಿದ್ದಾರೆ. ವಿವಾಹದ ನಂತರ ದೇವಾಲಯದ ಆವರಣವು ಹರ ಹರ ಮಹಾದೇವ ಮಂತ್ರಗಳೊಂದಿಗೆ ಪ್ರತಿಧ್ವನಿಸಿತು.

ಈ ಐತಿಹಾಸಿಕ ಮತ್ತು ಭಾವನಾತ್ಮಕ ಕ್ಷಣವನ್ನು ವೀಕ್ಷಿಸಲು ಹೆಚ್ಚಿನ ಸಂಖ್ಯೆಯ ಸ್ಥಳೀಯರು, ಭಕ್ತರು ಮತ್ತು ಪ್ರವಾಸಿಗರು ಹಾಜರಿದ್ದರು.

2032ರ ವೇಳೆಗೆ ಭಾರತ-ಯುಎಇ ವ್ಯಾಪಾರವನ್ನು 200 ಬಿಲಿಯನ್ ಡಾಲರ್‌ಗೆ ದ್ವಿಗುಣಗೊಳಿಸುವ ಗುರಿ

ಮಧ್ಯಪ್ರಾಚ್ಯದಲ್ಲಿನ ಅಸ್ಥಿರ ರಾಜಕೀಯ ಸನ್ನಿವೇಶದ ನಡುವೆ ಈ ಭೇಟಿ ಸಾಕಷ್ಟು ಪ್ರಾಮುಖ್ಯತೆಯನ್ನು ಪಡೆದಿದೆ. ಕಳೆದ ಹತ್ತು ವರ್ಷಗಳಲ್ಲಿ ಅಧ್ಯಕ್ಷ ಅಲ್ ನಹ್ಯಾನ್ ಭಾರತಕ್ಕೆ ನೀಡಿದ ಐದನೇ ಭೇಟಿ ಇದಾಗಿದೆ.

# ಭಾರತ,ಯುಎಇ ಸಹಭಾಗಿತ್ವಕ್ಕೆ ಒಪ್ಪಿಗೆ



**ನವದೆಹಲಿ:** ಭಾರತ ಮತ್ತು ಯುನೈಟೆಡ್‌ಅರಬ್‌ಎಮಿರೇಟ್ಸ್ ನಡುವಿನ ದ್ವಿಪಕ್ಷೀಯ ವ್ಯಾಪಾರವನ್ನು 2032ರ ಹೊತ್ತಿಗೆ 200 ಬಿಲಿಯನ್ ಡಾಲರ್‌ಗೆ ದ್ವಿಗುಣಗೊಳಿಸುವ ಮಹತ್ವಾಕಾಂಕ್ಷೆಯನ್ನು ಹೊಂದಿದ್ದು, ಉಭಯ ರಾಷ್ಟ್ರಗಳ ನಡುವಿನ ಪ್ರಮುಖ ಕ್ಷೇತ್ರಗಳ ಸಹಕಾರದ ಕುರಿತು ಪ್ರಧಾನಿ ನರೇಂದ್ರ ಮೋದಿ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಪರಿಶೀಲನೆ ನಡೆಸಿದರು.

ದೆಹಲಿ ವಿಮಾನ ನಿಲ್ದಾಣದಲ್ಲಿ ಯುಎಇ ಅಧ್ಯಕ್ಷರನ್ನು ಪ್ರಧಾನಿ ನರೇಂದ್ರ ಮೋದಿ ಆತ್ಮೀಯವಾಗಿ ಸ್ವಾಗತಿಸಿದರು. ಇರಾನ್-ಅಮೆರಿಕ ಸಂಬಂಧಗಳ ಬಿಕ್ಕಟ್ಟಿನ ನಡುವೆ ಸೌದಿ ಅರೇಬಿಯಾ ಮತ್ತು ಯುಎಇ ನಡುವಿನ ಬಿಕ್ಕಟ್ಟು, ಗಾಜಾ ಮತ್ತು ಮಧ್ಯಪ್ರಾಚ್ಯದಲ್ಲಿನ ಅಸ್ಥಿರ ರಾಜಕೀಯ ಸನ್ನಿವೇಶದ ನಡುವೆ ಈ ಭೇಟಿ ಸಾಕಷ್ಟು ಪ್ರಾಮುಖ್ಯತೆಯನ್ನು ಪಡೆದಿದೆ. ಕಳೆದ ಹತ್ತು ವರ್ಷಗಳಲ್ಲಿ ಅಧ್ಯಕ್ಷ ಅಲ್ ನಹ್ಯಾನ್ ಭಾರತಕ್ಕೆ ನೀಡಿದ ಐದನೇ ಭೇಟಿ ಇದಾಗಿದ್ದು, ಯುಎಇ ಅಧ್ಯಕ್ಷರಾಗಿ ಭಾರತಕ್ಕೆ ಅವರ ಮೂರನೇ ಅಧಿಕೃತ ಭೇಟಿ ಇದಾಗಿದೆ.

ಪ್ರಧಾನಿ ನರೇಂದ್ರ ಮತ್ತು ಅಧ್ಯಕ್ಷ ನಹ್ಯಾನ್1 ಉಭಯ ರಾಷ್ಟ್ರಗಳ ನಡುವಿನ ಈ ದ್ವಿಪಕ್ಷೀಯ ಸಂಬಂಧವನ್ನು ಪೂರ್ಣ ಪ್ರಮಾಣದಲ್ಲಿ ಪರಿಶೀಲನೆ ನಡೆಸಿದ್ದು, ಕಳೆದೊಂದು ದಶಕದಿಂದ ಬಲಗೊಂಡಿರುವ ಭಾರತ ಮತ್ತು ಯುಎಇ ನಡುವಿನ ಸಮಗ್ರ ಕಾರ್ಯತಂತ್ರ ಸಹಭಾಗಿತ್ವಕ್ಕೆ ಒಪ್ಪಿಗೆ ನೀಡಿದರು.

ಉಭಯ ನಾಯಕರು ಪರಸ್ಪರರ ಸಾರ್ವಭೌಮತ್ವ ಮತ್ತು ಪ್ರಾದೇಶಿಕ ಸಮಗ್ರತೆಗೆ ಗೌರವ ಮತ್ತು ಕಾರ್ಯತಂತ್ರದ ಸ್ವಾಯತ್ತತೆಯ ಮಹತ್ವವನ್ನು ತೋರಿಸಿದರು. ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯ ಪ್ರಮುಖ ಆಧಾರಸ್ತಂಭವಾಗಿ ಸ್ಥಿರ ಮತ್ತು ಬಲವಾದ ದ್ವಿಪಕ್ಷೀಯ ರಕ್ಷಣಾ ಮತ್ತು ಭದ್ರತಾ ಸಹಕಾರವನ್ನು ಒಪ್ಪಿಕೊಂಡರು.

ಇತ್ತೀಚೆಗೆ ಎರಡೂ ದೇಶಗಳ ಭೂಸೇನೆ, ನೌಕಾಪಡೆ ಮತ್ತು ವಾಯುಪಡೆಯ ಆಯಾ ಸೇವಾ ಮುಖ್ಯಸ್ಥರು ಮತ್ತು ಕಮಾಂಡರ್‌ಗಳ ವಿನಿಮಯ ಭೇಟಿ ಮತ್ತು ದ್ವಿಪಕ್ಷೀಯ ಮಿಲಿಟರಿ ವ್ಯಾಯಾಮಗಳ ಯಶಸ್ವಿ ನಡವಳಿಕೆಯನ್ನು ಸ್ವಾಗತಿಸಿದರು. ಕಾರ್ಯತಂತ್ರದ ರಕ್ಷಣಾ ಪಾಲುದಾರಿಕೆಯ ಮುಕ್ತಾಯದ ಕಡೆಗೆ ಉದ್ದೇಶ ಪತ್ರಕ್ಕೆ ಸಹಿ ಹಾಕುವುದನ್ನು ಅವರು ಸ್ವಾಗತಿಸಿದರು. ಈ ಭೇಟಿ ದ್ವಿಪಕ್ಷೀಯ ಸಂಬಂಧದ ಪೀಳಿಗೆಯ ನಿರಂತರತೆಯನ್ನು ಗುರುತಿಸುತ್ತವೆ ಎಂದರು.



ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ನಾವೀನ್ಯತೆ, ವಿಶೇಷವಾಗಿ ಕೃತಕ ಬುದ್ಧಿಮತ್ತೆ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಕ್ಷೇತ್ರಗಳಲ್ಲಿ ಸಹಯೋಗವನ್ನು ಬಲಪಡಿಸಲು ಇಬ್ಬರೂ ನಾಯಕರು ನಿರ್ಧರಿಸಿದರು. ಭಾರತದಲ್ಲಿ ಸೂಪರ್ ಕಂಪ್ಯೂಟಿಂಗ್ ಕ್ಲಸ್ಟರ್ ಸ್ಥಾಪನೆಗೆ ಸಹಕಾರ, ಭಾರತದಲ್ಲಿ ಡೇಟಾ ಕೇಂದ್ರಗಳ ಸ್ಥಾಪನೆಗೆ ಒಪ್ಪಿಗೆ ನೀಡಲಾಯಿತು.ಯುಎಇ ಮತ್ತು ಭಾರತದ ನಡುವೆ ಡಿಜಿಟಲ್ ರಾಯಭಾರ ಕಚೇರಿ ಸ್ಥಾಪಿಸುವ ಸಾಧ್ಯತೆ ಕುರಿತು ಎರಡು ದೇಶಗಳು ನಿರ್ದೇಶನ ನೀಡಿದವು. ಈ ವೇಳೆ ಅಧ್ಯಕ್ಷ ಶೇಖ್ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ 2026ರ ಫೆಬ್ರವರಿಯಲ್ಲಿ ಭಾರತದಲ್ಲಿ ಆಯೋಜಿಸಲಾಗುವ ಎಐ ಇಂಪ್ಯಾಕ್ಟ್ ಶೃಂಗಸಭೆಗೆ ಬೆಂಬಲ ವ್ಯಕ್ತಪಡಿಸಿದರು.

## ಡೇಟಾ ಕೇಂದ್ರಗಳ ಸ್ಥಾಪನೆಗೆ ಒಪ್ಪಿಗೆ

ಉಭಯ ರಾಷ್ಟ್ರಗಳ ಪಾಲುದಾರಿಕೆಯು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ಪೈಲಟ್ ತರಬೇತಿ ಶಾಲೆ, ನಿರ್ವಹಣೆ, ದುರಸ್ತಿ ಮತ್ತು ಕೂಲಂಕಷ ಪರೀಕ್ಷೆ ಸೌಲಭ್ಯ, ಗ್ರೀನ್‌ಫೀಲ್ಡ್ ಬಂದರು, ಸ್ಮಾರ್ಟ್ ನಗರ ಪಟ್ಟಣ, ರೈಲ್ವೆ ಸಂಪರ್ಕ ಮತ್ತು ಇಂಧನ ಮೂಲಸೌಕರ್ಯ ಪ್ರಮುಖ ಕಾರ್ಯತಂತ್ರದ ಮೂಲಸೌಕರ್ಯಗಳ ಅಭಿವೃದ್ಧಿಯನ್ನು ಹೊಂದಿದೆ.



## ಪ್ರಮುಖ ಒಪ್ಪಂದಗಳು

ಈ ಭೇಟಿಯಲ್ಲಿ 2024-25ನೇ ಹಣಕಾಸು ವರ್ಷದಲ್ಲಿ 100 ಶತಕೋಟಿ ಅಮೆರಿಕನ್ ಡಾಲರ್ ತಲುಪಿದ ದ್ವಿಪಕ್ಷೀಯ ವ್ಯಾಪಾರದ ತ್ವರಿತ ಬೆಳವಣಿಗೆಯನ್ನು ಗಮನಿಸಿದರು. 2032ರ ವೇಳೆಗೆ 200ಬಿಲಿಯನ್ ಡಾಲರ್ ಗುರಿಯನ್ನು ಸಾಧಿಸಲು ದ್ವಿಪಕ್ಷೀಯ ವ್ಯಾಪಾರವನ್ನು ದ್ವಿಗುಣಗೊಳಿಸಲು ನಿರ್ಧರಿಸಿದರು.ಎರಡೂ ಕಡೆಗಳಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ವಲಯದ ಉದ್ಯಮಗಳಿಗೆ ಬೆಂಬಲ, ಮಧ್ಯಪ್ರಾಚ್ಯ, ಪಶ್ಚಿಮ ಏಷ್ಯಾ, ಆಫ್ರಿಕಾ ಮತ್ತು ಯುರೇಷಿಯಾ ಪ್ರದೇಶದಾದ್ಯಂತ ಎಂಎಸ್‌ಎಂಇ ಉತ್ಪನ್ನಗಳನ್ನು ಉತ್ತೇಜಿಸಲು ಭಾರತ್ ಮಾರ್ಟ್, ವರ್ಚುವಲ್ ಟ್ರೇಡ್ ಕಾರಿಡಾರ್ ಮತ್ತು ಭಾರತ್-ಆಫ್ರಿಕಾ ಸೇತು ನಂತಹ ಪ್ರಮುಖ ಉಪಕ್ರಮಗಳನ್ನು ತ್ವರಿತವಾಗಿ ಅನುಷ್ಠಾನಕ್ಕೆ ಒಪ್ಪಿಗೆ ನೀಡಿದರು. ಗುಜರಾತ್‌ನ ಧೋಲೇರಾದಲ್ಲಿ ವಿಶೇಷ ಹೂಡಿಕೆ ಪ್ರದೇಶದ ಅಭಿವೃದ್ಧಿಗಾಗಿ ಸಂಭಾವ್ಯ ಯುಎಇ ಪಾಲುದಾರಿಕೆಯ ಕುರಿತು ಚರ್ಚೆ ಸಾಗಿದೆ.

## ಮೂಲಸೌಕರ್ಯ ನಿಧಿ ಯಶಸ್ಸು

ರಾಷ್ಟ್ರೀಯ ಹೂಡಿಕೆ ಮತ್ತು ಮೂಲಸೌಕರ್ಯ ನಿಧಿ ಯಶಸ್ಸಿನ ಬೆನ್ನಲ್ಲೇ ಈ ವರ್ಷದದಲ್ಲಿ (2026 ರಲ್ಲಿ) ಪ್ರಾರಂಭವಾಗಲಿರುವ ಎರಡನೇ ಮೂಲಸೌಕರ್ಯ ನಿಧಿಯಲ್ಲಿ ಭಾಗವಹಿಸುವಿಕೆಯನ್ನು ನಾಯಕರು ಆಹ್ವಾನಿಸಿದರು. ಗುಜರಾತ್ ಇಂಟರ್ನ್ಯಾಷನಲ್ ಫೈನಾನ್ಸ್ ಟೆಕ್ ನಗರದಲ್ಲಿ ದುಬೈ ಪೋರ್ಟ್ಸ್ ವರ್ಲ್ಡ್ ಮತ್ತು ಫಸ್ಟ್ ಅಬುಧಾಬಿ ಬ್ಯಾಂಕ್ ಶಾಖೆ ಸ್ವಾಗತ. ಗಲ್ಫ್ ಸಹಕಾರ ಮಂಡಳಿ ಮತ್ತು ಮಧ್ಯಪ್ರಾಚ್ಯ ಮತ್ತು ಉತ್ತರ ಆಫ್ರಿಕಾ ಮಾರುಕಟ್ಟೆಗಳಲ್ಲಿ ಪರಿಣತಿ ಮತ್ತು ಜಾಗತಿಕ ನೆಟ್‌ವರ್ಕ್‌ಗೆ ಸಂಪರ್ಕ ಸೇರಿದೆ.ಸಮಗ್ರ ಬಾಹ್ಯಾಕಾಶ ಪರಿಸರ ವ್ಯವಸ್ಥೆಯನ್ನು ಮತ್ತು ಬಲವಾದ ಕೈಗಾರಿಕಾ ನೆಲೆಯನ್ನು ಉತ್ಪಾದಿಸುವ ಗುರಿಯನ್ನು ಭಾರತ-ಯುಎಇ ಜಂಟಿ ಕಾರ್ಯಾಚರಣೆಗಳನ್ನು ಸಕ್ರಿಯಗೊಳಿಸುವುದು, ಜಾಗತಿಕ ವಾಣಿಜ್ಯ ಸೇವೆಗಳ ವಿಸ್ತರಣೆ, ಉನ್ನತ ಕೌಶಲ್ಯದ ಉದ್ಯೋಗ ಮತ್ತು ನವೋದ್ಯಮಗಳನ್ನು ಸೃಷ್ಟಿಸುವುದು, ಸುಸ್ಥಿರ ವ್ಯವಹಾರ ಮಾದರಿಗಳ ಮೂಲಕ ದ್ವಿಪಕ್ಷೀಯ ಹೂಡಿಕೆಯನ್ನು ಬಲಪಡಿಸುವ ಗುರಿಯನ್ನು ಹೊಂದಲಾಗಿದೆ.

# ಛತ್ತೀಸ್‌ಗಢ: ಮಾಜಿ ಸರ್‌ಪಂಚ್‌ಗೆ ಗುಂಡಿಕ್ಕಿ ಕೊಂದ ನಕ್ಸಲರು

**ರಾಯ್‌ಪುರ:** ಮಾಜಿ ಸರಪಂಚರೊಬ್ಬರನ್ನು ನಕ್ಸಲರು ಎಕೆ-47 ರೈಫಲ್‌ನಿಂದ ಗುಂಡು ಹಾರಿಸಿ ಹತ್ಯೆ ಮಾಡಿರುವ ಘಟನೆ ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ನಡೆದಿದೆ. ಪೊಲೀಸರ ಪ್ರಕಾರ, ಕಾಂಚಲ್ ಗ್ರಾಮದ ನಿವಾಸಿ ಭೀಮಾ ಮಡ್ಕಮ್ ಅವರನ್ನು ಕೌರ್ಗಟ್ಟಾ ಗ್ರಾಮದ ಹೊಲದಲ್ಲಿ ಗುಂಡಿಕ್ಕಿ ಕೊಲ್ಲಲಾಗಿದೆ. ದಾಂತೇವಾಡದ ಬಚೇಲಿಯಿಂದ ಹಿಂತಿರುಗಿದ್ದಾಗ ನಕ್ಸಲರು ಅವರ ಮೇಲೆ ಗುಂಡು ಹಾರಿಸಿದರು. ಈ ಹಿಂದೆಯೂ ನಕ್ಸಲರು ಭೀಮಾ ಮೇಲೆ ದಾಳಿ ನಡೆಸುವ ಪ್ರಯತ್ನ ಮಾಡಿದ್ದರು.ಕಳೆದ ಮೂರು ದಿನಗಳಲ್ಲಿ ಬಿಜಾಪುರದಲ್ಲಿ ನಡೆದ ಎರಡನೇ ನಕ್ಸಲ್ ಸಂಬಂಧಿತ ನಾಗರಿಕ ಸಾವು ಇದಾಗಿದ್ದು, ಇದು ಇಡೀ ಜಿಲ್ಲೆಯಲ್ಲಿ ಭೀತಿಯನ್ನು ಹುಟ್ಟುಹಾಕಿದೆ. ಘಟನೆ ಕುರಿತು ಮಾಹಿತಿ ಲಭ್ಯವಾದ ಕೂಡಲೇ, ಪಮೇದ್ ಪೊಲೀಸ್ ತಂಡಗಳು ಪ್ರದೇಶಕ್ಕೆ ಆಗಮಿಸಿ, ತನಿಖೆ ಆರಂಭಿಸಿದವು.

ಪರಿಸ್ಥಿತಿಯನ್ನು ನಿಯಂತ್ರಿಸಲು ಮತ್ತು ಸಾಕ್ಷ್ಯಗಳನ್ನು ಸಂಗ್ರಹಿಸಲು ಹೆಚ್ಚುವರಿ ಪೊಲೀಸ್ ಪಡೆಗಳನ್ನು ಸ್ಥಳಕ್ಕೆ ರವಾನಿಸಲಾಗಿದೆ ಎಂದು ಬಿಜಾಪುರದ ಸಹಾಯಕ ಪೊಲೀಸ್ ವರಿಷ್ಠಾಧಿಕಾರಿ (ಎಎಸ್ಪಿ) ಚಂದ್ರಕಾಂತ್ ಗೋವರ್ಣ ಮಾಹಿತಿ ನೀಡಿದರು.ಪ್ರಾಥಮಿಕ ತನಿಖೆ ಪೂರ್ಣಗೊಂಡ ನಂತರ ಈ ಕುರಿತು ವಿವರವಾದ ಮಾಹಿತಿಯನ್ನು ಬಿಡುಗಡೆ ಮಾಡಲಾಗುವುದು. ಸುತ್ತಮುತ್ತಲಿನ ಪರಿಸರದಲ್ಲಿ ಯಾವುದೇ ಅನುಮಾನಾಸ್ಪದ ಚಟುವಟಿಕೆ ಕಂಡುಬಂದರೆ ತಕ್ಷಣ ಪೊಲೀಸರಿಗೆ ವರದಿ ಮಾಡುವಂತೆ ನಾವು ಗ್ರಾಮಸ್ಥರಲ್ಲಿ ಮನವಿ ಮಾಡಿದ್ದೇವೆ. ಭದ್ರತಾ ಪಡೆಗಳು ಸುತ್ತಮುತ್ತಲಿನ ಅರಣ್ಯ ಪ್ರದೇಶಗಳಲ್ಲಿ ಶೋಧ ಕಾರ್ಯಾಚರಣೆ ಆರಂಭಿಸಿದ್ದಾರೆ ಎಂದು ತಿಳಿಸಿದರು.

# TMS ಕುರಿತು ಸುಪ್ರೀಂ ಕೋರ್ಟ್‌ನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ: ಡಿಸಿಗಳಿಗೆ ಸಿಎಂ ಮಮತಾ ಸೂಚನೆ

**ಕೋಲ್ಕತ್ತಾ(ಪಶ್ಚಿಮ ಬಂಗಾಳ):** ಜಿಲ್ಲಾಧಿಕಾರಿಗಳು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕುರಿತು ಸುಪ್ರೀಂನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಮತ್ತು ತಾರ್ಕಿಕ ವ್ಯತ್ಯಾಸಗಳ ಹೆಸರಿನಲ್ಲಿ ಜನರಿಗೆ ಕಿರುಕುಳ ನೀಡಬಾರದು ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ತಾಕೀತು ಮಾಡಿದ್ದಾರೆ. ಮಂಗಳವಾರ ಸಚಿವಾಲಯ ನಬನ್ನಾದಲ್ಲಿ ಮುಖ್ಯ ಕಾರ್ಯದರ್ಶಿ ನಂದಿನಿ ಚಕ್ರವರ್ತಿ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭೆಯಲ್ಲಿ ಸಿಎಂ ಈ ಸೂಚನೆ ಕೊಟ್ಟಿದ್ದಾರೆ.ಎಸ್‌ಐಆರ್‌ಗೆ ಸಂಬಂಧಿಸಿದ ಎಲ್ಲಾ ವಿಚಾರಣೆಗಳನ್ನು ಸುಪ್ರೀಂ ಕೋರ್ಟ್‌ನ ನಿರ್ದೇಶನಗಳಿಗೆ ಅನುಸಾರವಾಗಿ ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸಿಎಂ ಸ್ಪಷ್ಟಪಡಿಸಿದ್ದಾರೆ.

ತಾರ್ಕಿಕ ವ್ಯತ್ಯಾಸಗಳ ನೆಪದಲ್ಲಿ ಜನರು ಅನಾನುಕೂಲತೆಗೆ ಒಳಗಾಗದಂತೆ ನೋಡಿಕೊಳ್ಳಲು ಅವರು ಅಧಿಕಾರಿಗಳಿಗೆ ನಿರ್ದಿಷ್ಟವಾಗಿ ಸೂಚನೆ ನೀಡಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಸುಪ್ರೀಂ ಕೋರ್ಟ್ ಚುನಾವಣಾ ಆಯೋಗಕ್ಕೆ ತಾರ್ಕಿಕ ವ್ಯತ್ಯಾಸಗಳಿಗಾಗಿ ಪರಿಶೀಲಿಸಬೇಕಾದ ಮತದಾರರ ಪಟ್ಟಿಯನ್ನು ಪ್ರಕಟಿಸಲು, ಅವರು ಸಲ್ಲಿಸಿದ ದಾಖಲೆಗಳಿಗೆ ರಸೀದಿಗಳನ್ನು ನೀಡಲು ಮತ್ತು ಪರಿಶೀಲನೆ ಸಮಯದಲ್ಲಿ ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟರು (ಬಿಎಲ್‌ಎ) ಮತದಾರರೊಂದಿಗೆ ಹೋಗಲು ಅವಕಾಶ ನೀಡುವಂತೆ ನಿರ್ದೇಶನ ನೀಡಿತ್ತು. ತಾರ್ಕಿಕ ವ್ಯತ್ಯಾಸಗಳ ಕುರಿತು ಎಸ್‌ಐಆರ್ ವಿಚಾರವಾಗಿ ಜನರು ತೊಂದರೆ ಎದುರಿಸುತ್ತಿದ್ದಾರೆ ಮತ್ತು ಈ ಸಮಸ್ಯೆಯನ್ನು ಮಾನವೀಯ ದೃಷ್ಟಿಕೋನದಿಂದ ನೋಡಬೇಕೆಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಹೇಳಿದ್ದಾರೆ. ನಿಗದಿತ ದಿನಾಂಕಗಳಂದು ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಗೆ ಹಾಜರಾಗಲು ಸಾಧ್ಯವಾಗದ ಮತದಾರರಿಗೆ ಪರ್ಯಾಯ ವ್ಯವಸ್ಥೆಗಳನ್ನು ಮಾಡಬೇಕು. ಚುನಾವಣಾ ಆಯೋಗದ ಕೆಲಸ ಮುಂದುವರಿಯಬೇಕು, ಆದರೆ ರಾಜ್ಯದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಯಾವುದೇ ಸಂದರ್ಭದಲ್ಲೂ ಅಡ್ಡಿಯಾಗಬಾರದು ಎಂದು ಸೂಚಿಸಿದ್ದಾರೆ. ರಾಜ್ಯದ ಅಧಿಕಾರಿಗಳು ಭಯಪಡುವ ಅಗತ್ಯವಿಲ್ಲ, ಏಕೆಂದರೆ ಸರ್ಕಾರ ನಿಮ್ಮೊಂದಿಗೆ ದೃಢವಾಗಿ ನಿಂತಿದೆ ಎಂದು ಬ್ಯಾನರ್ಜಿ ಅಭಯ ನೀಡಿದರು. ಚುನಾವಣಾ ಆಯೋಗವು ಪಶ್ಚಿಮ ಬಂಗಾಳಕ್ಕೆ 11 ಹೆಚ್ಚುವರಿ ವೀಕ್ಷಕರನ್ನು ನಿಯೋಜಿಸಿದ್ದು, ರಾಜ್ಯದಲ್ಲಿ ಒಟ್ಟು ರೋಲ್ ವೀಕ್ಷಕರ ಸಂಖ್ಯೆ 20ಕ್ಕೆ ತಲುಪಿರುವ ಬೆನ್ನಲ್ಲೇ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರಿಂದ ಈ ನಿರ್ದೇಶನಗಳು ಬಂದಿವೆ. ಸುಪ್ರೀಂ ಕೋರ್ಟ್ ಮಾನ್ಯವೆಂದು ಘೋಷಿಸಿದ ದಾಖಲೆಗಳನ್ನು ಪರಿಶೀಲಿಸುವ ಸಮಯದಲ್ಲಿ ವಿನಾಯಿತಿ ಇಲ್ಲದೆ ಸ್ವೀಕರಿಸಬೇಕು ಎಂದು ಸಿಎಂ ಒತ್ತಿ ಹೇಳಿದರು.

ದಾಖಲೆಗಳನ್ನು ಸಲ್ಲಿಸಿದ ನಂತರ ರಸೀದಿಗಳನ್ನು ನೀಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.




## ಭಾರತೀಯತೆ ದೃಢೀಕರಿಸಲು ಅಜ್ಜನ ಸಮಾಧಿ ಮಣ್ಣು ಅಗೆದು ತಂದ ವ್ಯಕ್ತಿ

ಪಶ್ಚಿಮ ಬಂಗಾಳದಲ್ಲಿ ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ ಹಿನ್ನೆಲೆ ತಾನು ಭಾರತೀಯ, ಪೂರ್ವಜರು ಇಲ್ಲಿಯವರೇ ಎಂಬುದನ್ನು ಸಾಬೀತು ಮಾಡಲು ವ್ಯಕ್ತಿಯೊಬ್ಬ ತನ್ನ ಅಜ್ಜನ ಸಮಾಧಿಯ ಮಣ್ಣು ತಂದು ಡಿಎನ್‌ಎ ಪರೀಕ್ಷೆ ನಡೆಸಲು ಒತ್ತಾಯಿಸಿದ್ದರು. ಹರಿಶ್ಚಂದ್ರಪುರ ಬ್ಲಾಕ್ 1ರ ವಾರಿ ದೌಲತ್‌ಪುರ ಗ್ರಾಮದಲ್ಲಿ ವಾಸಿಸುತ್ತಿರುವ ಸಲೇಕ್ ಈ ರೀತಿ ಮಾಡಿದ ವ್ಯಕ್ತಿ. ಚುನಾವಣಾಧಿಕಾರಿಗಳಿಗೆ ಈಗಾಗಲೇ ಹಲವು ದಾಖಲೆಗಳನ್ನು ನೀಡಿದರೂ, ಪದೇ ಪದೇ ವಿಚಾರಣೆಗೆ ಕರೆದಿದ್ದರಿಂದ ಸಿಟ್ಟಾದ ಈತ ಏಕಾಏಕಿ ಅಜ್ಜನ ಸಮಾಧಿ ಅಗೆದು ಅದರ ಮಣ್ಣನ್ನು ತಂದು ಡಿಎನ್‌ಎ ಪರೀಕ್ಷೆ ಮಾಡಲು ಆಗ್ರಹಿಸಿದ್ದರು.


# ರಾತ್ರೋರಾತ್ರಿ 60 ಅಡಿ ಉದ್ದದ 15 ಟನ್ ತೂಕದ ಕಬ್ಬಿಣದ ಸೇತುವೆಯನ್ನೇ ಕದ್ದೊಯ್ದ ಖದೀಮರು!

**ಕೊರ್ಬಾ:** ಛತ್ತೀಸ್‌ಗಢದ ಕೊರ್ಬಾ ಜಿಲ್ಲೆಯಲ್ಲಿ ಆಘಾತಕಾರಿ ಕಳ್ಳತನವೊಂದು ಬೆಳಕಿಗೆ ಬಂದಿದೆ. ಧೋಧಿಪಾರಾದ ರಷ್ಯನ್ ಹಾಸ್ಟೆಲ್ ಬಳಿಯ ಕಾಲುವೆ ಮೇಲೆ ನಿರ್ಮಿಸಲಾದ ಕಬ್ಬಿಣದ ಸೇತುವೆಯನ್ನು ಕಳ್ಳರು ಕದ್ದೊಯ್ದಿದ್ದಾರೆ.

ದಶಕಗಳ ಹಿಂದೆ ಜಲಸಂಪನ್ಮೂಲ ಇಲಾಖೆ (ಡಬ್ಲ್ಯುಆರ್‌ಡಿ) ಕಾಲುವೆ ಮೇಲೆ ಈ ಸೇತುವೆ ನಿರ್ಮಾಣ ಮಾಡಲಾಗಿತ್ತು. ಇದು ಇಲ್ಲಿನ ಸ್ಥಳೀಯರ ದೈನಂದಿನ ಪ್ರಯಾಣಕ್ಕೆ ತೀವ್ರ ಅನುಕೂಲವನ್ನು ಮಾಡಿಕೊಟ್ಟಿತ್ತು. ಜನರಿಗೆ ಅತ್ಯಂತ ಅಗತ್ಯವಾಗಿದ್ದ ಈ ಕಬ್ಬಿಣದ ಸೇತುವೆಯನ್ನು ಕಳ್ಳರು ಮಂಗ ಮಾಯ ಮಾಡಿದ್ದಾರೆ.

ಬಹುಶಃ ಗ್ಯಾಸ್ ಕಟ್ಟರ್ ಬಳಸಿ ಸಂಪೂರ್ಣ ಕಬ್ಬಿಣದ ಸೇತುವೆಯನ್ನು ಕತ್ತರಿಸಿರುವ ಕಳ್ಳರು ಅದನ್ನು ರಾತ್ರೋರಾತ್ರಿ ಸಾಗಿಸಿದ್ದಾರೆ ಎನ್ನಲಾಗಿದೆ. ಪೊಲೀಸರ ಭಯ ಇಲ್ಲದೇ ಇಂತಹ ಕೃತ್ಯ ಎಸಗಿರುವುದರಿಂದ ಸ್ಥಳೀಯರು ಸೇತುವೆ ಇಲ್ಲದೇ ಸಂಕಷ್ಟ ಎದುರಿಸುತ್ತಿದ್ದಾರೆ. ಸೇತುವೆ ಕದ್ದಿದ್ದಲ್ಲದೇ ನೀರು ಸರಬರಾಜಿಗಾಗಿ ಪುರಸಭೆಯಿಂದ ಸ್ಥಾಪಿಸಲಾದ ಪೈಪ್‌ಲೈನ್‌ನಿಂದ ಕಬ್ಬಿಣದ ಕೋನಗಳನ್ನು ಸಹ ಕಳ್ಳತನ ಮಾಡಿಕೊಂಡು ಹೋಗಲಾಗಿದೆ. ಕಳ್ಳರು 10 ರಿಂದ 15 ಅಡಿ ಉದ್ದದ ಕಬ್ಬಿಣದ ಕೋನಗಳನ್ನು ಕತ್ತರಿಸಿ ತೆಗೆದುಕೊಂಡು ಹೋಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

**ಪೊಲೀಸರಿಗೆ ದೂರು ನೀಡಿದ ಕೌನ್ಸಿಲರ್:** ಘಟನೆಯ ನಂತರ ಸ್ಥಳೀಯ ಕೌನ್ಸಿಲರ್ ಲಕ್ಷ್ಮಣ್ ಶ್ರೀವಾಸ್ ಪೊಲೀಸರಿಗೆ ದೂರು ನೀಡಿದ್ದಾರೆ. ದೂರು ದಾಖಲಿಸಿಕೊಂಡಿರುವ ಪೊಲೀಸರು ಈಗ ಕಾಣೆಯಾದ ಸೇತುವೆಗಾಗಿ ಹುಡುಕಾಟ ಆರಂಭಿಸಿದ್ದಾರೆ. ಕೋರ್ಬಾದಲ್ಲಿ ಇಂತಹ ಕಳ್ಳತನವನ್ನು ನೋಡಿದ್ದು ಇದೇ ಮೊದಲು. ಈ ಘಟನೆಯನ್ನು ಪೊಲೀಸರಿಗೆ ವರದಿ ಮಾಡಿದಾಗ ಅವರು ಕೂಡ ಆಘಾತಕ್ಕೊಳಗಾಗಿದ್ದರು ಎಂದು ಅವರು ಹೇಳಿದ್ದಾರೆ. ಬಹುಶಃ



ಗ್ಯಾಸ್ ಕಟ್ಟರ್ ಬಳಸಿ ಸಂಪೂರ್ಣ ಕಬ್ಬಿಣದ ಸೇತುವೆಯನ್ನು ಕತ್ತರಿಸಿರುವ ಕಳ್ಳರು ಅದನ್ನು ರಾತ್ರೋರಾತ್ರಿ ಸಾಗಿಸಿದ್ದಾರೆ ಎನ್ನಲಾಗಿದೆ. ಪೊಲೀಸರ ಭಯ ಇಲ್ಲದೇ ಇಂತಹ ಕೃತ್ಯ ಎಸಗಿರುವುದರಿಂದ ಸ್ಥಳೀಯರು ಸೇತುವೆ ಇಲ್ಲದೇ ಸಂಕಷ್ಟ ಎದುರಿಸುತ್ತಿದ್ದಾರೆ. ಸೇತುವೆ ಕದ್ದಿದ್ದಲ್ಲದೇ ನೀರು ಸರಬರಾಜಿಗಾಗಿ ಪುರಸಭೆಯಿಂದ ಸ್ಥಾಪಿಸಲಾದ ಪೈಪ್‌ಲೈನ್‌ನಿಂದ ಕಬ್ಬಿಣದ ಕೋನಗಳನ್ನು ಸಹ ಕಳ್ಳತನ ಮಾಡಿಕೊಂಡು ಹೋಗಲಾಗಿದೆ. ಕಳ್ಳರು 10 ರಿಂದ 15 ಅಡಿ ಉದ್ದದ ಕಬ್ಬಿಣದ ಕೋನಗಳನ್ನು ಕತ್ತರಿಸಿ ತೆಗೆದುಕೊಂಡು ಹೋಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಪೊಲೀಸರಿಗೆ ದೂರು ನೀಡಿದ ಕೌನ್ಸಿಲರ್

ಘಟನೆಯ ನಂತರ ಸ್ಥಳೀಯ ಕೌನ್ಸಿಲರ್ ಲಕ್ಷ್ಮಣ್ ಶ್ರೀವಾಸ್ ಪೊಲೀಸರಿಗೆ ದೂರು ನೀಡಿದ್ದಾರೆ. ದೂರು ದಾಖಲಿಸಿಕೊಂಡಿರುವ ಪೊಲೀಸರು ಈಗ ಕಾಣೆಯಾದ ಸೇತುವೆಗಾಗಿ ಹುಡುಕಾಟ ಆರಂಭಿಸಿದ್ದಾರೆ. ಕೋರ್ಬಾದಲ್ಲಿ ಇಂತಹ ಕಳ್ಳತನವನ್ನು ನೋಡಿದ್ದು ಇದೇ ಮೊದಲು. ಈ ಘಟನೆಯನ್ನು ಪೊಲೀಸರಿಗೆ ವರದಿ ಮಾಡಿದಾಗ ಅವರು ಕೂಡ ಆಘಾತಕ್ಕೊಳಗಾಗಿದ್ದರು ಎಂದು ಅವರು ಹೇಳಿದ್ದಾರೆ.

ತ್ವರಿತಗತಿಯಲ್ಲಿ ತನಿಖೆಯನ್ನು ಪೂರ್ಣಗೊಳಿಸಲು ನಿವಾಸಿಗಳು ಪೊಲೀಸ್ ವರಿಷ್ಠಾಧಿಕಾರಿಗಳನ್ನು ಸಂಪರ್ಕಿಸಲು ನಿರ್ಧರಿಸಿದ್ದಾರೆ ಎಂದು ಕೌನ್ಸಿಲರ್ ಶ್ರೀವಾಸ್ ಹೇಳಿದ್ದಾರೆ. ಈ ವಿಷಯವು ಕಲೆಕ್ಟರ್ ಅವರಿಗೂ ತಿಳಿದಿದೆ. ಈ ಪ್ರಕರಣದಲ್ಲಿ ಸರಿಯಾದ ಕ್ರಮ ಕೈಗೊಳ್ಳಲಾಗುವುದು, ಅಪರಾಧಿಗಳನ್ನು ಬಂಧಿಸಿ ನ್ಯಾಯ ಕೊಡಿಸಲಿದ್ದಾರೆ ಎಂಬ ವಿಶ್ವಾಸ ಇದೆ ಎಂದು ಶ್ರೀವಾಸ್ ಭರವಸೆ ವ್ಯಕ್ತಪಡಿಸಿದ್ದಾರೆ.ಸೇತುವೆಯು ಸುಮಾರು 60 ಅಡಿ ಉದ್ದವಿದ್ದು, 10 ರಿಂದ 15 ಟನ್‌ಗಳಷ್ಟು ತೂಕವಿತ್ತು ಎಂದು ಕೌನ್ಸಿಲರ್ ಮಾಹಿತಿ ನೀಡಿದ್ದಾರೆ. ಅಕ್ರಮ ಮಾರುಕಟ್ಟೆಯಲ್ಲಿಯೂ ಸಹ ಇದರ ಮೌಲ್ಯ ಲಕ್ಷಗಳಲ್ಲಿದೆ ಎಂದು ಅಂದಾಜಿಸಲಾಗಿದೆ.

# ಮಿನಿ ನ್ಯೂಸ್

## ಅರೇ, ಮತ್ತೆ ಅದೇ ರಾಗ ಹಾಡಿದ ಟ್ರಂಪ್ ಭಾರತ-ಪಾಕಿಸ್ತಾನ ಯುದ್ಧ ತಪ್ಪಿಸಿದ್ದೇ ನಾನು!

**ನ್ಯೂಯಾರ್ಕ್:** ಆಪರೇಷನ್ ಸಿಂದೂರ್ ಬಳಿಕ ಭಾರತ ಮತ್ತು ಪಾಕಿಸ್ತಾನ ನಡುವೆ ಪರಮಾಣು ಯುದ್ಧವಾಗುವ ಭೀತಿ ಇತ್ತು. ಆದ್ರೆ ಅದನ್ನು ತಪ್ಪಿಸಿದ್ದೇ ನಾನು ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೆ ಹೇಳಿದ್ದಾರೆ.ಶ್ವೇತಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತ ಮತ್ತು ಪಾಕಿಸ್ತಾನ ನಡುವಿನ ಶಾಂತಿ ಒಪ್ಪಂದ 2025ರ ಪ್ರಮುಖ ಗೆಲುವುಗಳಲ್ಲಿ ಒಂದು. ತಮ್ಮ ಹಸ್ತಕ್ಷೇಪದಿಂದಾಗಿ ಎರಡು ರಾಷ್ಟ್ರಗಳ ನಡುವಿನ ಪರಮಾಣು ಯುದ್ಧ ತಪ್ಪಿದೆ ಎಂದು ಹೇಳಿದ್ದಾರೆ.2025ರಲ್ಲಿ ಎಂಟು ಯುದ್ಧಗಳನ್ನು ಕೊನೆಗೊಳಿಸಿರುವಲ್ಲಿ ಪ್ರಮುಖ ಪಾತ್ರ ವಹಿಸಿರುವ ನಾನು ನೊಬೆಲ್ ಪ್ರಶಸ್ತಿಗೆ ಅರ್ಹ ಎಂದು ಹೇಳಿರುವ ಅವರು, ಕಳೆದ ವರ್ಷ ಮೇ ತಿಂಗಳಲ್ಲಿ ಭಾರತ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ಬಳಿಕ ಭಾರತ ಮತ್ತು ಪಾಕಿಸ್ತಾನ ಪರಮಾಣು ಯುದ್ಧಕ್ಕೆ ಮುಂದಾಗಿತ್ತು. ತಾನು ಹಸ್ತಕ್ಷೇಪ ನಡೆಸಿ ಅದನ್ನು ತಪ್ಪಿಸಿದೆ ಎಂದು ಅವರು ತಿಳಿಸಿದರು. ತಾವು ಎರಡನೇ ಅವಧಿಯಲ್ಲಿ ಅಧಿಕಾರ ವಹಿಸಿಕೊಂಡ ಮೇಲೆ ಮೊದಲ 10 ತಿಂಗಳ ಅವಧಿಯಲ್ಲಿ ಎಂಟು ದೀರ್ಘಕಾಲೀನ ಸಂಘರ್ಷಗಳನ್ನು ಕೊನೆಗೊಳಿಸಿದ್ದೇನೆ. ಇದರಲ್ಲಿ ಪ್ರಮುಖವಾದದ್ದು ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯನ್ನು ನಿವಾರಿಸಿದ್ದಾಗಿದೆ.

## ಶಿಂಜೋ ಅಬೆ ಹತ್ಯೆ ಪ್ರಕರಣ: ಹಂತಕನಿಗೆ ಜೀವಾವಧಿ ಶಿಕ್ಷೆ ವಿಧಿಸಿದ ಜಪಾನ್ ನ್ಯಾಯಾಲಯ

**ಜಪಾನ್:** ಜಪಾನ್ ನ ಅತಿ ಹೆಚ್ಚು ಕಾಲ ಪ್ರಧಾನಿಯಾಗಿ ಸೇವೆ ಸಲ್ಲಿಸಿದ್ದ ಧೀಮಂತ ನಾಯಕ ಶಿಂಜೋ ಅಬೆ ಅವರ ಭೀಕರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ, ಅಲ್ಲಿನ ನ್ಯಾಯಾಲಯವು ಮಹತ್ವದ ತೀರ್ಪು ನೀಡಿದೆ. ಆರೋಪಿ ಟೆಟ್ಸುಯಾ ಯಮಗಾಮಿ (41)ಗೆ ನ್ಯಾಯಾಲಯವು ಜೀವಾವಧಿ ಶಿಕ್ಷೆ ವಿಧಿಸಿ ಬುಧವಾರ ಆದೇಶ ಹೊರಡಿಸಿದೆ. ಜುಲೈ 8, 2022 ರಂದು ಜಪಾನ್‌ನ ನಾರಾ ನಗರದಲ್ಲಿ ಚುನಾವಣಾ ಪ್ರಚಾರ ಭಾಷಣ ಮಾಡುತ್ತಿದ್ದಾಗ, ಟೆಟ್ಸುಯಾ ಯಮಗಾಮಿ ಎಂಬಾತ ಅಬೆ ಅವರ ಮೇಲೆ ಗುಂಡಿನ ದಾಳಿ ನಡೆಸಿದ್ದ. ದಾಳಿಯ ತೀವ್ರತೆಗೆ ರಕ್ತಸ್ರಾವವಾಗಿ ಕುಸಿದು ಬಿದ್ದ ಅಬೆ ಅವರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೆ ಕೊನೆಯುಸಿರೆಳೆದಿದ್ದರು. ಇದು ದಶಕಗಳ ಕಾಲ ಶಾಂತಿಯುತವಾಗಿದ್ದ ಜಪಾನ್ ದೇಶವನ್ನೇ ಬೆಚ್ಚಿಬೀಳಿಸಿದ ರಾಜಕೀಯ ಹತ್ಯೆಯಾಗಿತ್ತು.ವಿಚಾರಣೆಯ ವೇಳೆ ಹಂತಕ ಟೆಟ್ಸುಯಾ ತನ್ನ ಕೃತ್ಯವನ್ನು ಒಪ್ಪಿಕೊಂಡಿದ್ದಾನೆ.

## ಗಣರಾಜ್ಯೋತ್ಸವದ ಸಂಭ್ರಮಕ್ಕೆ ಉಗ್ರರ ಕರಿನೆರಳು: ಅಲರ್ಟ್

**ದೆಹಲಿ:** ಜ. 26 ಗಣರಾಜ್ಯೋತ್ಸವವನ್ನು ಆಚರಿಸಲು ದೇಶವೇ ಸಜ್ಜಾಗುತ್ತಿದ್ದು, ಈ ಸಮಯದಲ್ಲಿ ದಾಳಿ ನಡೆಸಲು ಭಯೋತ್ಪಾದಕರು ಸಂಚು ರೂಪಿಸಿದ್ದಾರೆ. ಪಾಕಿಸ್ತಾನ ಮತ್ತು ಪಂಜಾಬ್ ದರೋಡೆಕೋರರಿಂದ ಬೆಂಬಲಿತವಾದ ಭಯೋತ್ಪಾದಕರ ಗುಂಪು ದೇಶದ ವಿವಿಧ ಭಾಗಗಳಲ್ಲಿ ಸಂಘಟಿತ ಭಯೋತ್ಪಾದಕ ದಾಳಿ ನಡೆಸಲು ಸಂಚು ರೂಪಿಸಿರುವುದಾಗಿ ತಿಳಿಸಿರುವ ಗುಪ್ತಚರ ಮೂಲಗಳು ಹೇಳಿದೆ. ಈ ಹಿನ್ನೆಲೆಯಲ್ಲಿ ಇದೀಗ ರಾಷ್ಟ್ರ ರಾಜಧಾನಿಯಲ್ಲಿ ಹೈ ಅಲರ್ಟ್ ಘೋಷಿಸಲಾಗಿದೆ.ಜ. 26 ಗಣರಾಜ್ಯೋತ್ಸವದಂದು ಅಥವಾ ಅದಕ್ಕೂ ಮೊದಲು ಸಂಘಟಿತ ಭಯೋತ್ಪಾದಕ ದಾಳಿ ನಡೆಯಲಿದೆ ಎಂದು ಗುಪ್ತಚರ ಇಲಾಖೆ ಈ ದಾಳಿಗೆ 26-26 ಎಂದು ಹೆಸರಿಸಲಾಗಿದೆ ಎಂದು ಹೇಳಿದೆ. ಈ ಹಿನ್ನೆಲೆಯಲ್ಲಿ ಬುಧವಾರ ದೆಹಲಿಯಲ್ಲಿ ಭದ್ರತಾ ಪಡೆಗಳನ್ನು ಹೈ ಅಲರ್ಟ್‌ನಲ್ಲಿ ಇರಿಸಲಾಗಿದೆ.

ಅಯೋಧ್ಯೆಯ ರಾಮ ಮಂದಿರ, ಜಮ್ಮುವಿನ ರಘುನಾಥ ದೇವಸ್ಥಾನ ಹಾಗೂ ಇತರ ಪ್ರಮುಖ ದೇವಾಲಯಗಳ ಮೇಲೆ ಭಯೋತ್ಪಾದಕರು ದಾಳಿ ನಡೆಸಬಹುದು ಎಂದು ಭದ್ರತಾ ಪಡೆಯ ಮೂಲಗಳು ತಿಳಿಸಿವೆ.ಪಂಜಾಬ್ ಮೂಲದ ದರೋಡೆಕೋರರ ಸಹಾಯದಿಂದ ಪಾಕಿಸ್ತಾನದ ಮಿಲಿಟರಿ ಗುಪ್ತಚರ ಸಂಸ್ಥೆಯಾದ ಇಂಟರ್-ಸರ್ವೀಸಸ್ ಇಂಟೆಲಿಜೆನ್ಸ್, ಜೈಶ್-ಎ-ಮೊಹಮ್ಮದ್ ಗಣರಾಜ್ಯೋತ್ಸವದ ಸಂದರ್ಭದಲ್ಲಿ ದಾಳಿ ನಡೆಸಲು ಸಂಚು ರೂಪಿಸುತ್ತಿದೆ.ದೆಹಲಿ ಮತ್ತು ರಾಷ್ಟ್ರ ರಾಜಧಾನಿ ಪ್ರದೇಶದಾದ್ಯಂತ ವಿಶೇಷವಾಗಿ ಬಸ್ ಮತ್ತು ರೈಲು ನಿಲ್ದಾಣ ಪ್ರದೇಶಗಳಲ್ಲಿ ಮೋಸ್ಟ್ ವಾಂಟೆಡ್ ಭಯೋತ್ಪಾದಕರ ಪೋಸ್ಟರ್ ಗಳನ್ನು ಅಳವಡಿಸಿವೆ.

## ಉದ್ಧವ್ ಗೆ ಶಾಕ್ ಕೊಟ್ಟ ರಾಜ್ ಠಾಕ್ರೆ

**ಮುಂಬೈ:** ಮಹಾರಾಷ್ಟ್ರ ರಾಜಕೀಯ ಹೇಗೆ ಬೇಕಾದರೂ ತಿರುವು ಪಡೆಯುತ್ತದೆ ಎನ್ನುವುದಕ್ಕೆ ಮತ್ತೊಂದು ಸಾಕ್ಷಿ ಸಿಕ್ಕಿದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸಹೋದರ ಉದ್ಧವ್ ಠಾಕ್ರೆ ಜೊತೆ ಮೈತ್ರಿ ಮಾಡಿಕೊಂಡಿದ್ದ ರಾಜ್ ಠಾಕ್ರೆಯ ಮಹಾರಾಷ್ಟ್ರ ನವ ನಿರ್ಮಾಣ ಸೇನೆ ಈಗ ಶಿಂಧೆ ಬಣದ ಶಿವಸೇನೆಗೆ ಬೆಂಬಲ ಸೂಚಿಸಿದೆ. ಕಲ್ಯಾಣ್-ಡೊಂಬಿವಿಲಿ ಮುನ್ಸಿಪಲ್ ಕಾರ್ಪೊರೇಷನ್ ಮೇಯರ್ ಚುನಾವಣೆಗೆ ಎಂಎನ್‌ಎಸ್ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಗೆ ಬೆಂಬಲ ನೀಡಿದೆ.

ಕೊಂಕಣ ಭವನದಲ್ಲಿ ನಡೆದ ಉನ್ನತ ಮಟ್ಟದ ಸಭೆಯ ನಂತರ, ಸೇನಾ ಸಂಸದ ಮತ್ತು ಏಕನಾಥ್ ಶಿಂಧೆ ಅವರ ಪುತ್ರ ಶ್ರೀಕಾಂತ್, ರಾಜ್ ಠಾಕ್ರೆ ಅವರ ಪಕ್ಷದೊಂದಿಗಿನ ಮೈತ್ರಿಯನ್ನು ದೃಢಪಡಿಸಿದರು. ಇದು ಅವರ ಸಂಯೋಜಿತ ಬಲವನ್ನು 58 ಕ್ಕೆ ಏರಿಸಿದೆ, 62 ಸ್ಥಾನಗಳ

